

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 29 ಬುಧವಾರ 2023


ಸಂಪುಟ: 43 | ಸಂಚಿಕೆ: 38 | ಪುಟಗಳು: 12

ದೂರವಾಣಿ: 2496520, 2496521, 2496526, 2496527, 2496528, ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com, website: www.mysurumithra.com

₹4





ರಾಜ್ಯ ವಿಧಾನಸಭಾ ಚುನಾವಣೆಗೆ

ಇಂದು ಮುಹೂರ್ತ ಫಿಕ್ಸ್?

- ಏ.10ರೊಳಗೆ ಅಧಿಸೂಚನೆ ಪ್ರಕಟ ಸಾಧ್ಯತೆ
- ಒಂದು ಇಲ್ಲವೇ ಎರಡು ಹಂತದಲ್ಲಿ ಮತದಾನ
- ಹಾಲಿ ಸರ್ಕಾರದ ಅಧಿಕಾರಾವಧಿ ಮೇ 23ಕ್ಕೆ ಅಂತ್ಯ

ಬೆಂಗಳೂರು, ಮಾ.28(ಕೆಎಂಶಿ)– ಬಹು ನಿರೀಕ್ಷಿತ ರಾಜ್ಯ ವಿಧಾನಸಭಾ ಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ನಾಳೆ (ಮಾ.29)ಮುಹೂರ್ತ ಘೋಷಣೆ ಮಾಡುವ ಸಾಧ್ಯತೆಗಳಿವೆ.

ಸರ್ಕಾರದ ಉನ್ನತ ಮೂಲಗಳ ಪ್ರಕಾರ ಆಯೋಗ ನಾಳೆ ವೇಳಾಪಟ್ಟಿ ಪ್ರಕಟಿಸಿ, ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಿಗೂ ಮೇ ಮೊದಲ ಭಾಗದಲ್ಲಿ ಚುನಾವಣೆ ನಡೆಸಲಿದೆ. ಪ್ರಸಕ್ತ ವಿಧಾನಸಭೆಯ ಅವಧಿ ಮೇ 23 ಕ್ಕೆ ಅಂತ್ಯಗೊಳ್ಳಲಿದ್ದು, ಅದಕ್ಕೂ ಮುನ್ನವೇ ಹೊಸ ವಿಧಾನಸಭೆ ಅಸ್ತಿತ್ವಕ್ಕೆ ಬರಬೇಕಿದೆ ಹಾಗೂ ಸರ್ಕಾರ ರಚನೆ ಪ್ರಕ್ರಿಯೆಗೆ ಚಾಲನೆ ದೊರೆಯಬೇಕು. ಹೀಗಾಗಿ ನಾಳೆ ಆಯೋಗ ವೇಳಾಪಟ್ಟಿ ಪ್ರಕಟಿಸಲಿದೆ ಎನ್ನಲಾಗಿದೆ. ವೇಳಾಪಟ್ಟಿ ಪ್ರಕಟಗೊಂಡ ಬೆನ್ನಲ್ಲೇ ರಾಜ್ಯಾದ್ಯಂತ ಚುನಾವಣಾ ಮಾದರಿ ನೀತಿಸಂಹಿತೆ ಜಾರಿಗೆ



ಬರಲಿದ್ದು, ಆಡಳಿತಯಂತ್ರ ಬಹುತೇಕ ಸ್ತಬ್ಧಗೊಳ್ಳಲಿದೆ. ವೇಳಾಪಟ್ಟಿ ಪ್ರಕಟಗೊಂಡರೂ ಏಪ್ರಿಲ್ 10ರ ಒಳಗಾಗಿ ಚುನಾವಣಾ ಅಧಿಸೂಚನೆ ಹೊರಬೀಳಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಮೇ ಮೊದಲ ಭಾಗದಲ್ಲಿ ಮತದಾನ ನಡೆದರೂ ಒಂದು ಇಲ್ಲವೇ ಎರಡು ಹಂತಗಳಲ್ಲಿ ಮತದಾನಕ್ಕೆ ಅವಕಾಶ ನೀಡುವ ಬಗ್ಗೆ ಆಯೋಗ ನಾಳೆ ತೀರ್ಮಾನ ಕೈಗೊಳ್ಳಲಿದೆ.


ಒಂದು ವೇಳೆ ಎರಡು ಹಂತದಲ್ಲಿ ಚುನಾವಣೆ ನಡೆದರೆ, ಚಾಮರಾಜನಗರದಿಂದ ಬೀದರ್‌ವರೆಗೆ ನೇರವಾಗಿ ವಿಭಜಿಸಿ ಎಡ, ಬಲ ಭಾಗ ಮಾಡಿ ಮತದಾನಕ್ಕೆ ಒಂದೊಂದು ಹಂತಕ್ಕೂ ಒಂದೊಂದು ದಿನಾಂಕ ನಿಗದಿಪಡಿಸುವ ಸಾಧ್ಯತೆ ಇದೆ. ಎರಡು ಹಂತದಲ್ಲಿ ● 9ನೇ ಪುಟಕ್ಕೆ

ಆಧಾರ್–ಪಾನ್ ಜೋಡಣೆ ಗಡುವು

ಜೂ.30ರವರೆಗೆ ವಿಸ್ತರಣೆ



ಮೈಸೂರು, ಮಾ.28(ಆರ್‌ಕೆ)–ಪಾನ್ ಮತ್ತು ಆಧಾರ್ ಕಾರ್ಡ್ ಜೋಡಣೆಗೆ ಜೂನ್ 30ರವರೆಗೆ ಅವಕಾಶ ಕಲ್ಪಿಸಲಾಗಿದೆ. ಕೇಂದ್ರ ಸರ್ಕಾರದ ಹಣಕಾಸು ಸಚಿವಾಲಯ, ಇಂದು ಮಧ್ಯಾಹ್ನ ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದೆ. ಆಧಾರ್–ಪಾನ್ ಕಾರ್ಡ್ ಜೋಡಣೆಗೆ ಮಾರ್ಚ್ 31 ಕಡೇ ದಿನವಾಗಿತ್ತು. ಇದರಿಂದ ಜನರು, ಇಂದು ಮೈಸೂರು ನಗರದಾದ್ಯಂತ ಎಲ್ಲಾ ಸೈಬರ್ ಕೆಫೆ, ಕಂಪ್ಯೂಟರ್ ಸೆಂಟರ್, ಬ್ರೌಸಿಂಗ್ ಸೆಂಟರ್‌ಗಳಲ್ಲಿ ಪಾನ್–ಆಧಾರ್ ಲಿಂಕ್ ಮಾಡಿಸಲು ಮುಗಿ ಬೀಳುತ್ತಿದ್ದರು. ಒಮ್ಮೆಲೇ ಎಲ್ಲರೂ ಇನ್‌ಕಂ ಟ್ಯಾಕ್ಸ್ ಇಲಾಖೆ ವೆಬ್‌ಸೈಟ್ ಬಳಸುತ್ತಿದ್ದರಿಂದ ಸರ್ವರ್ ಡೌನ್ ಆಗಿ ರೋಸಿ ಹೋಗಿ ಬಹಳಷ್ಟು ಮಂದಿ ನಿರಾಸೆಯಿಂದ ಮರಳಿದರು. ಕೆಲವೆಡೆ ಬ್ರೌಸಿಂಗ್ ಸೆಂಟರ್‌ಗಳ ಮುಂದೆ ಕಾದು ನಿಂತಿದ್ದ ಜನರು, ವೆಬ್‌ಸೈಟ್ ಓಪನ್ ● 9ನೇ ಪುಟಕ್ಕೆ



ನನ್ನ ಕೊನೆ ಚುನಾವಣೆಯಲ್ಲಿ ಹುಟ್ಟೂರು ಒಳಗೊಂಡ ವರುಣಾದಲ್ಲೇ ನಿಲ್ತೇನೆ...


- ಸಿದ್ದರಾಮಯ್ಯ ಸಮರ್ಥನೆ
- ಕೋಲಾರದಿಂದಲೂ ಸ್ಪರ್ಧೆ?



ಹೆಚ್.ಡಿ.ಕೋಟೆ, ಮಾ. 28– ಇದು ನನ್ನ ಕೊನೆಯ ಚುನಾವಣೆಯಾಗಿದ್ದು, ನನ್ನ ಹುಟ್ಟೂರನ್ನು ಒಳಗೊಂಡಿರುವ ವರುಣಾ ಕ್ಷೇತ್ರದಿಂದಲೇ ಸ್ಪರ್ಧಿಸಲು ನಾನು ಇಚ್ಛಿಸಿದ್ದೇನೆ ಎಂದು ವಿಧಾನಸಭೆ ವಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು. ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊನೆಯ ಚುನಾವಣೆಯಲ್ಲಿ ವರುಣಾ ಕ್ಷೇತ್ರದಿಂದಲೇ ಸ್ಪರ್ಧಿಸುವಂತೆ ಆ ಕ್ಷೇತ್ರದ ಶಾಸಕರೂ ಆಗಿರುವ ನನ್ನ ಪುತ್ರ ಡಾ. ಯತೀಂದ್ರ ಕರೆದಿದ್ದರು. ಕ್ಷೇತ್ರದ ಜನರ ಒತ್ತಡವೂ ಇತ್ತು ಅಲ್ಲದೇ ನನಗೂ ಕೂಡ ಅದೇ ಅಭಿಪ್ರಾಯ ಇದ್ದ ಕಾರಣ ಅಲ್ಲಿಂದ ಸ್ಪರ್ಧಿಸುತ್ತಿದ್ದೇನೆ. ಕೋಲಾರದ ಜನರೂ ಕೂಡ ಒತ್ತಾಯ ಮಾಡುತ್ತಿರುವುದರಿಂದ ಅಲ್ಲಿಂದಲೂ ಸ್ಪರ್ಧಿಸಲು ಅವಕಾಶ ಕೊಡಿ ಎಂದು ಹೈಕಮಾಂಡ್ ಅನ್ನು ಕೇಳಿದ್ದೇನೆ. ಅವರು ಅದರ ಬಗ್ಗೆ ಕೈಗೊಳ್ಳುವ ತೀರ್ಮಾನದ ಮೇಲೆ ನಾನು ಕೋಲಾರದಿಂದಲೂ ಸ್ಪರ್ಧಿಸುವುದು ● 9ನೇ ಪುಟಕ್ಕೆ



ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಪರಮಪೂಜ್ಯ ಶ್ರೀ ಪುಟ್ಟಸ್ವಾಮಿರವರು

ಶ್ರೀ ಶನೇಶ್ವರಸ್ವಾಮಿ ಗುಡ್ಡಪ್ಪನವರು, ಶ್ರೀಕ್ಷೇತ್ರ ಮಾಕನಹುಂಡಿ

ದಿನಾಂಕ: 20–03–2023ನೇ ಸೋಮವಾರ ನನ್ನ ಪತಿಯವರಾದ ಪರಮಪೂಜ್ಯ ಶ್ರೀ ಪುಟ್ಟಸ್ವಾಮಿರವರು ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಕಾರ್ಯವನ್ನು ದಿ: 30–03–2023ನೇ ಗುರುವಾರ ಮಧ್ಯಾಹ್ನ 1–00 ಗಂಟೆಗೆ ಮಾಕನಹುಂಡಿ ಗ್ರಾಮ, ವರುಣಾ ಹೋಬಳಿ, ಮೈಸೂರು ತಾಲ್ಲೂಕು ಇಲ್ಲಿ ಏರ್ಪಡಿಸಲಾಗಿದೆ.

ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ವೈಯುಕ್ತಿಕ ಆಹ್ವಾನವೆಂದು ಪರಿಗಣಿಸಿ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಭೋಜನ ಮಧ್ಯಾಹ್ನ 2 ಗಂಟೆಗೆ


ಹರಿಕಥೆ: ರಾತ್ರಿ 8.00 ಗಂಟೆಗೆ, ಬದನವಾಳು ಶ್ರೀ ಶಿವಕುಮಾರಶಾಸ್ತ್ರಿ ಹಾಗೂ ತಂಡದವರಿಂದ

ಇಂತಿ ದುಃಖತಪ್ತರು : ಶ್ರೀಮತಿ ಲೀಲಾವತಿ ಮತ್ತು ಮಕ್ಕಳು ಸಹೋದರರು, ಸಹೋದರಿಯರು, ಅಳಿಯಂದಿರು, ಕುಟುಂಬವರ್ಗದವರು, ಮಾಕನಹುಂಡಿ ಗ್ರಾಮಸ್ಥರು ಹಾಗೂ ಬಂಧುಮಿತ್ರರು

Promotional Feature

ಶ್ರೀಯುತ ಸಿದ್ದರಾಮಯ್ಯನವರು ಸಾಮಾಜಿಕ ನ್ಯಾಯದಡಿ ಟಿಕೆಟ್ ಕೊಡ್ತಾರೆ

ಗೆದ್ದರೆ ಕೆ.ಆರ್.ಕ್ಷೇತ್ರದ ಜನರ ಆಶೋತ್ತರಗಳ ಖಂಡಿತ ಈಡೇರಿಸುತ್ತೇನೆ...



“ ಮೈಸೂರು ಕೃಷ್ಣರಾಜ ಕ್ಷೇತ್ರದ ಕಾಂಗ್ರೆಸ್ ಯುವ ಮುಖಂಡ ಎಂ.ಪ್ರದೀಪ್ ಕುಮಾರ್ ವಿಧಾನಸಭಾ ಸಾರ್ವತ್ರಿಕ ಚುನಾವಣೆಯ ಪ್ರಬಲ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ. ಮಂಗಳಾ ಹಾಗೂ ದಿ.ಮುದ್ದುಮಾದಪ್ಪನವರ ಪುತ್ರ ಪ್ರದೀಪ್, ಎಂಬಿಎ ಪದವೀಧರ. ಸುಮಾರು 20 ವರ್ಷಗಳಿಂದ ರಾಜಕೀಯ ಹಾಗೂ ಸಾಮಾಜಿಕ ಸೇವಾ ಕ್ಷೇತ್ರದಲ್ಲಿ ಸಕ್ರಿಯರಾಗಿರುವ ಇವರು ಮೈಸೂರು ನಗರಪಾಲಿಕೆ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ. 'ದಾರಿದೀಪ' ಚಾರಿಟೆಬಲ್ ಟ್ರಸ್ಟ್ ಮೂಲಕ ಉಚಿತ ಆರೋಗ್ಯ ಶಿಬಿರ ಸೇರಿದಂತೆ ಸಾಕಷ್ಟು ಸಾಮಾಜಿಕ ಸೇವಾ ಕಾರ್ಯಗಳ ಮೂಲಕ ಜನರ ಮನಸ್ಸಿನಲ್ಲಿ ಸ್ಥಾನ ಗಿಟ್ಟಿಸಿದ್ದಾರೆ. ರಾಜಕೀಯ ಶಕ್ತಿ ದೊರೆತರೆ ಜನ ಸೇವೆ ವಿಸ್ತರಿಸಿಕೊಳ್ಳಬಹುದೆಂಬ ಆಶಯದೊಂದಿಗೆ ಕೃಷ್ಣರಾಜ(ಕೆ.ಆರ್) ವಿಧಾನಸಭಾ ಕ್ಷೇತ್ರದಿಂದ ಕಣಕ್ಕಿಳಿಯುವ ಆಕಾಂಕ್ಷೆಯಿಂದ ಪಕ್ಷಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಇವರೊಂದಿಗೆ ಅನೇಕ ಮುಖಂಡರೂ ಅರ್ಜಿ ಸಲ್ಲಿಸಿ ಟಿಕೆಟ್ ಬಯಸಿದ್ದಾರೆ. ವೀರಶೈವ ಲಿಂಗಾಯತ ಸಮುದಾಯದ ಪ್ರದೀಪ್ ಕುಮಾರ್‌ಗೆ ಅವಕಾಶ ನೀಡಬಹುದೆಂಬ ಮಾತು ಕೇಳಿಬಂದಿದೆ. ಆದರೆ ಕಾಂಗ್ರೆಸ್ ಬಿಡುಗಡೆ ಮಾಡುವ ಅಭ್ಯರ್ಥಿಗಳ ಪಟ್ಟಿಯಲ್ಲಿ ಸ್ಪಷ್ಟತೆ ಸಿಗಬೇಕಿದೆ. ಈ ಪರಿಸ್ಥಿತಿಯಲ್ಲಿ ಪ್ರಬಲ ಟಿಕೆಟ್ ಆಕಾಂಕ್ಷಿ ಎಂ.ಪ್ರದೀಪ್ ಕುಮಾರ್ 'ಮೈಸೂರು ಮಿತ್ರ'ದೊಂದಿಗೆ ಮನಬಿಚ್ಚಿ ಮಾತನಾಡಿದ್ದಾರೆ.

***ಮೈಸೂರು ಮಿತ್ರ:* ಕಾಂಗ್ರೆಸ್ ಎರಡನೇ ಪಟ್ಟಿಯಲ್ಲಿ ಕೃಷ್ಣರಾಜ ಕ್ಷೇತ್ರದ ಅಭ್ಯರ್ಥಿ ಘೋಷಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ನೀವೂ ಕೂಡ ಪ್ರಬಲ ಆಕಾಂಕ್ಷಿಯಾಗಿದ್ದೀರಿ. ಟಿಕೆಟ್ ಸಿಗುವ ವಿಶ್ವಾಸವಿದೆಯೇ?**

ಪ್ರದೀಪ್ ಕುಮಾರ್: ಹೌದು, ನನಗೆ ಕೆ.ಆರ್.ಕ್ಷೇತ್ರದೊಂದಿಗೆ ಎರಡು ದಶಕಗಳಿಂದ ಉತ್ತಮ ಒಡನಾಟವಿದೆ. ನಗರಪಾಲಿಕೆ ಸದಸ್ಯನಾಗಿಯೂ ಕೆಲಸ ಮಾಡಿದ್ದೇನೆ. ಕ್ಷೇತ್ರ ವ್ಯಾಪ್ತಿಯ ಎಲ್ಲಾ ಬಡಾವಣೆಗಳ ಜನರಿಗೂ ಚಿರಪರಿಚಿತನಾಗಿದ್ದೇನೆ. ಮುಖ್ಯವಾಗಿ ಜನರ ನಾಡಿಮಿಡಿತವನ್ನು ಚೆನ್ನಾಗಿ ಅರಿತಿದ್ದೇನೆ. ದಾರಿದೀಪ ಟ್ರಸ್ಟ್ ವತಿಯಿಂದ ಎಲ್ಲಾ ವಾರ್ಡ್‌ಗಳಲ್ಲೂ ಸಾಧ್ಯವಾದಷ್ಟು ಸೇವೆ ಮಾಡಿದ್ದೇನೆ. ಉಚಿತ ಆರೋಗ್ಯ ಶಿಬಿರ ಸೇರಿದಂತೆ ಅವಶ್ಯಕ ಕಾರ್ಯಕ್ರಮಗಳನ್ನು ಮಾಡಿದ್ದೇನೆ. ಮತ್ತೊಂದೆಡೆ ಮೈಸೂರು, ಕೊಡಗು, ಮಂಡ್ಯ ಜಿಲ್ಲೆಗಳಲ್ಲಿ ಲಿಂಗಾಯತ ಸಮುದಾಯದವರಿಗೆ ಟಿಕೆಟ್ ನೀಡಿರದ ಕಾರಣ ಕಾಂಗ್ರೆಸ್ ವರಿಷ್ಠರು ಹಾಗೂ ಸಿದ್ದರಾಮಯ್ಯನವರು ಸಾಮಾಜಿಕ ನ್ಯಾಯದಡಿ ನನಗೆ ಖಂಡಿತವಾಗಿ ಅವಕಾಶ ಮಾಡಿಕೊಡುತ್ತಾರೆ ಎಂಬ ಅಚಲ ವಿಶ್ವಾಸವಿದೆ. ಜನ ಮತ ನೀಡಲು ಸಿದ್ಧರಿದ್ದಾರೆ.

***ಮಿತ್ರ:* ಟಿಕೆಟ್ ದೊರೆತು ಜನಾಶೀರ್ವಾದದಿಂದ ಶಾಸಕರಾದರೆ ಏನೆಲ್ಲಾ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಚಿಂತನೆ ಇದೆ?**

ಪ್ರದೀಪ್: ನಾನೊಬ್ಬ ಯುವಕನಾಗಿ ಜನ ಜೀವನವನ್ನು ಹತ್ತಿರದಿಂದ ಕಂಡಿದ್ದೇನೆ. ಕ್ರೀಡಾಭ್ಯಾಸದಿಂದ ಆರೋಗ್ಯ ವೃದ್ಧಿಸುವ ಜೊತೆಗೆ ಶಿಸ್ತುಬದ್ಧ ಜೀವನ ಸಾಧ್ಯವಿದೆ. ಅಲ್ಲದೆ ಪೊಲೀಸ್ ಇಲಾಖೆ, ಸೈನ್ಯಕ್ಕೆ ಸೇರ ಬಯಸುವ ಯುವ ಸಮುದಾಯಕ್ಕೆ ಕ್ರೀಡೆ ಅತ್ಯಂತ ಮುಖ್ಯ. ನಾನು ರಾಜಕೀಯ ಜೀವನದಲ್ಲಿ ನೋಡಿದಂತೆ ಬಹುತೇಕ ಬಡವರು ವೈದ್ಯಕೀಯ ವೆಚ್ಚ ಹಾಗೂ ಮಕ್ಕಳ ಶಿಕ್ಷಣಕ್ಕಾಗಿ ರಾಜಕಾರಣಿಗಳ ಬಳಿ ಸಹಾಯ ಕೇಳುತ್ತಾರೆ. ಹಾಗಾಗಿ ಪ್ರತಿ ಎರಡು ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸುಸಜ್ಜಿತ ಕ್ರೀಡಾ ಸಂಕೀರ್ಣ ಹಾಗೂ ಸುಸಜ್ಜಿತ ಸರ್ಕಾರಿ ಶಾಲೆ ನಿರ್ಮಿಸಬೇಕೆಂಬ ಚಿಂತನೆ ಇದೆ. ಈ ಮೂಲಕ ಬಡವರು ಸಾಲ ಮಾಡದೆ ತಮ್ಮ ಸಂಪಾದನೆಯಲ್ಲಿ ಸ್ವಾಭಿಮಾನದಿಂದ ಜೀವನ ನಡೆಸಲು ಸಾಧ್ಯವಿದೆ ಎನ್ನುವುದು ನನ್ನ ಭಾವನೆ. ಜೊತೆಗೆ ಕಸ ಸಂಸ್ಕರಣಾ ಘಟಕದ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ. ಅಲ್ಲದೆ ನಾನು ಕ್ಷೇತ್ರ ಪ್ರವಾಸದಲ್ಲಿ ಪಟ್ಟಿ ಮಾಡಿರುವ ಸಾರ್ವಜನಿಕ ಸಮಸ್ಯೆಗಳ ಪರಿಹಾರ ಹಾಗೂ ನಿತ್ಯ ನಿರ್ವಹಣೆ ಅಚ್ಚುಕಟ್ಟಾಗಿ ನಡೆಸಬೇಕೆಂಬ ಆಶಯ ಹೊಂದಿದ್ದೇನೆ. ಅದನ್ನು ಖಂಡಿತವಾಗಿ ಸಾಕಾರಗೊಳಿಸುತ್ತೇನೆ.

***ಮಿತ್ರ:* ಪ್ರಬಲ ಅಭ್ಯರ್ಥಿಗಳ ನಡುವೆ ನಿಮ್ಮನ್ನೇ ಜನ ಏಕೆ ಆಯ್ಕೆ ಮಾಡಬೇಕು. ಆ ನಿಟ್ಟಿನಲ್ಲಿ ನಿಮ್ಮಲ್ಲಿರುವ ವಿಭಿನ್ನತೆ ಏನಿದೆ ಹೇಳಬಹುದೇ?.**

ಪ್ರದೀಪ್: ಕೆಲ ನಾಯಕರು ಇದು ಕೊನೆ ಚುನಾವಣೆ ಎಂದು ಹೇಳಿಕೊಂಡು ಜನರ ಬೆಂಬಲ ಕೇಳುತ್ತಿದ್ದಾರೆ. ಕೊನೆ ಚುನಾವಣೆ ಎಂದರೆ ಗೆದ್ದರೂ ಅವರಿಂದ ಅಭಿವೃದ್ಧಿ ನಿರೀಕ್ಷೆ ಕಷ್ಟ ಎನ್ನುವುದು ಜನರಿಗೆ ತಿಳಿದಿದೆ. ನಾನಿನ್ನೂ 25 ವರ್ಷಗಳ ಕಾಲ ಜನರ ನಡುವೆ ಇದ್ದು ರಾಜಕೀಯ ಜೀವನದಲ್ಲಿ ಮುಂದುವರೆಯುವ ಅವಕಾಶವಿದೆ. ಸುದೀರ್ಘ ರಾಜಕೀಯ ಪಯಣದಲ್ಲಿ ಜನರ ಆಶೀರ್ವಾದಬೇಕು. ಯುವಕನಾಗಿರುವುದರಿಂದ ನಮ್ಮ ಆಶೋತ್ತರಗಳಿಗೆ ತಕ್ಕಂತೆ ಕೆಲಸ ಮಾಡುತ್ತಾರೆ ಎಂಬ ಭಾವನೆ ಜನರಲ್ಲಿದೆ. ಅಭ್ಯರ್ಥಿಗಳ ನಡುವಿನ ವ್ಯತ್ಯಾಸ ಹಾಗೂ ಭಿನ್ನತೆ ಜನರಿಗೆ ಚೆನ್ನಾಗಿ ತಿಳಿದಿದೆ. ನಾನು ಹೇಳಿಕೊಳ್ಳುವ ಅಗತ್ಯವಿಲ್ಲ.

***ಮಿತ್ರ:* ಎಲ್ಲರೂ ಅಷ್ಟೇ ಗೆಲ್ಲುವವರೆಗೆ ಜನ ಸೇವೆ ಮಾತನಾಡುತ್ತಾರೆ, ನಂತರ ಕುಟುಂಬ ಹಾಗೂ ಸಂಬಂಧಿಕರ ಅಭಿವೃದ್ಧಿಗೆ ಸೀಮಿತವಾಗುತ್ತಾರೆ ಎಂಬ ಜನರ ಭಾವನೆಗೆ ನಿಮ್ಮ ಪ್ರತಿಕ್ರಿಯೆ ಏನು?.**

ಪ್ರದೀಪ್: ಕೆಲ ರಾಜಕಾರಣಿಗಳನ್ನು ಕಂಡು ಜನರಲ್ಲಿ ಈ ಭಾವನೆ ಮೂಡಿರುವ ಬಗ್ಗೆ ನಾನು ಆಕ್ಷೇಪಿಸುವುದಿಲ್ಲ.



ಆದರೆ ವೈಯಕ್ತಿಕವಾಗಿ ಹೇಳುವುದಾದರೆ ಮತದಾರರು ಹಾಗೂ ಜನಪ್ರತಿನಿಧಿಗಳ ನಡುವಿನ ಸಂಬಂಧವೇ ಅತೀ ದೊಡ್ಡ ಸಂಬಂಧ ಸಂಬಂಧಿಕರು, ಜಾತಿಯವರು ಅಲ್ಲದಿದ್ದರೂ ಆಶೀರ್ವದಿಸುತ್ತಾರೆ. ಕ್ಷೇತ್ರದ ಎರಡೂವರೆ ಲಕ್ಷ ಜನರಿಗೂ ಚುನಾವಣೆಯಲ್ಲಿ ಸ್ಪರ್ಧಿಸಿ, ಶಾಸಕರಾಗುವ ಅವಕಾಶವಿದೆ. ಆದರೂ ಅವರು ಓರ್ವ ಅಭ್ಯರ್ಥಿಗೆ ಮತ ನೀಡಿ ತಮ್ಮ ಪ್ರತಿನಿಧಿಯಾಗಿ ವಿಧಾನಸಭೆಗೆ ಆಯ್ಕೆ ಮಾಡಿ ಕಳುಹಿಸುತ್ತಾರೆ. ಹಾಗಾಗಿ ಎಲ್ಲಾ ಸಂಬಂಧಗಳಿಗಿಂತಲೂ ಜನಪ್ರತಿನಿಧಿಗಳು ಹಾಗೂ ಜನರ ನಡುವಿನ ಸಂಬಂಧ ಅತ್ಯಂತ ಪವಿತ್ರವಾದುದು. ಹಾಗಾಗಿ ಕೊನೆ ಉಸಿರಿರುವವರೆಗೂ ಆ ಸಂಬಂಧವನ್ನು ಗಟ್ಟಿಯಾಗಿ ಉಳಿಸಿಕೊಳ್ಳುತ್ತೇನೆ ಈ ನಿಟ್ಟಿನಲ್ಲಿ ಅವರ ಆಶೋತ್ತರಗಳಿಗೆ ಅನುಗುಣವಾಗಿ ಸೇವಕನಾಗಿ ಕೆಲಸ ಮಾಡುತ್ತೇನೆ.

***ಮಿತ್ರ:* ಸಾರ್ವಜನಿಕ ಕೆಲಸ ಮಾಡುವುದು ಜನಪ್ರತಿನಿಧಿಯ ಜವಾಬ್ದಾರಿ. ಇದಕ್ಕೆ ಹೊರತಾಗಿ ನಿಮ್ಮಿಂದ ಏನನ್ನು ಬಯಸಬಹುದು?**

ಪ್ರದೀಪ್: ಖಂಡಿತ, ಸಾರ್ವಜನಿಕ ಸೇವೆ ಮಾಡುವುದು ಪ್ರತಿಯೊಬ್ಬ ಜನಪ್ರತಿನಿಧಿಯ ಕರ್ತವ್ಯ. ಜೊತೆಗೆ 12ನೇ ಶತಮಾನದ ಬಸವಣ್ಣನವರು ಸಾರಿದ ಸಾಮಾಜಿಕ ನ್ಯಾಯ ಹಾಗೂ ಮಾನವೀಯತೆ ನೆಲೆಗಟ್ಟಿನಲ್ಲಿ ಕೆಲಸ ಮಾಡಬೇಕು. ಕ್ಷೇತ್ರ ಸರ್ವಜನಾಂಗದ ಶಾಂತಿಯ ತೋಟವಾಗಿ ಎಲ್ಲರೂ ನೆಮ್ಮದಿಯಿಂದಿರಬೇಕು. ಕಾಂಗ್ರೆಸ್ ಪಕ್ಷದ ಸಿದ್ಧಾಂತವೂ ಇದೇ ಆಗಿದೆ. ನಾಯಕರಾದ ಸಿದ್ದರಾಮಯ್ಯನವರೂ ಇದೇ ಮಾರ್ಗದಲ್ಲಿ ನಡೆದು ಬಂದಿದ್ದಾರೆ. ನಾನೂ ಕೂಡ ಈ ಹಾದಿಯಲ್ಲೇ ಸಾರ್ವಜನಿಕ ಸೇವೆ ಮಾಡಬೇಕೆಂಬ ಆಸೆಯಿದೆ.

***ಮಿತ್ರ:* ಚುನಾವಣೆಯಲ್ಲಿ ಸ್ಪರ್ಧಿಸುವ ಪ್ರತಿಯೊಬ್ಬರೂ ಗೆಲುವಿನ ವಿಶ್ವಾಸ ಹೊಂದಿರುತ್ತಾರೆ. ಆದರೆ ಪ್ರಾಯೋಗಿಕ ಅಂಶಗಳ ಆಧಾರದಲ್ಲಿ ಪ್ರತಿಕ್ರಿಯಿಸುವಿರಾ?.**


ಪ್ರದೀಪ: ನೀವು ಹೇಳುವುದನ್ನು ಒಪ್ಪುತ್ತೇನೆ. ಪ್ರತಿಯೊಬ್ಬ ಅಭ್ಯರ್ಥಿಗೂ ಗೆಲ್ಲುವ ವಿಶ್ವಾಸವಿರುತ್ತದೆ. ಆದರೆ ಎಐಸಿಸಿ ಹಾಗೂ ಕೆಪಿಸಿಸಿ ಸಮೀಕ್ಷೆ ಹಾಗೂ ಗುಪ್ತದಳದ ವರದಿ ನನ್ನ ಪರವಾಗಿದೆ ಎಂದು ತಿಳಿದುಬಂದಿದೆ. ಜನರ ನಡುವೆ ಇದ್ದು ಕೆಲಸ ಮಾಡುವ ವ್ಯಕ್ತಿತ್ವ, ನಿರಂತರ ಜನ ಸಂಪರ್ಕ. ಹಾಲಿ ಶಾಸಕರು ತಮ್ಮದೇ ಸರ್ಕಾರವಿದ್ದರೂ ಸದನದಲ್ಲಿ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಮಾತನಾಡದಿರುವುದು. ಜನರ ಅಭಿಪ್ರಾಯ, ಹೀಗೆ ಹಲವು ಅಂಶಗಳನ್ನು ಆಧರಿಸಿ ಈ ರೀತಿಯ ವರದಿ ನೀಡಲಾಗಿದೆ ಎನ್ನಲಾಗಿದೆ. ಜೊತೆಗೆ ಈವರೆಗೆ ವೀರಶೈವ ಲಿಂಗಾಯತ ಸಮುದಾಯ ಬಿಜೆಪಿಯನ್ನು ಬೆಂಬಲಿಸಿತ್ತು. ಆದರೆ ಸಮುದಾಯದ ಯುವಕನಿಗೆ ಟಿಕೆಟ್ ನೀಡಿದರೆ ಕಾಂಗ್ರೆಸ್ ಬೆಂಬಲಿಸುವುದಾಗಿ ಅಧಿಕೃತವಾಗಿ ಕೆಪಿಸಿಸಿಗೆ ಲಿಖಿತ ಭರವಸೆ ನೀಡಿದ್ದಾರೆ. ಒಟ್ಟಾರೆ ಪಕ್ಷ ಟಿಕೆಟ್ ನೀಡಿದರೆ ಜನರ ಆಶೀರ್ವಾದದಿಂದ ಗೆಲ್ಲುತ್ತೇನೆಂಬ ವಿಶ್ವಾಸ ಗಟ್ಟಿಯಾಗಿದೆ.

ಶಿಕಾರಿಪುರದಲ್ಲಿ ಯಡಿಯೂರಪ್ಪ ನಿವಾಸದ ಮೇಲೆ ಕಲ್ಲು ತೂರಾಟ ಪ್ರಕರಣ: ಸ್ವಪಕ್ಷೀಯರಿಂದಲೇ ರಾಜಕೀಯವಾಗಿ ಬಿಎಸ್‌ವೈ ಮುಗಿಸುವ ಹುನ್ನಾರ

- ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ವಿಪಕ್ಷ ನಾಯಕ ಸಿದ್ದರಾಮಯ್ಯ ತಿರುಗೇಟು
- ಮೀಸಲಾತಿ ಗೊಂದಲ ಮೂಡಿಸಿದವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ; ಪಾಪ, ಯಾವುದೇ ಅಧಿಕಾರ ಇಲ್ಲದ ಯಡಿಯೂರಪ್ಪ ಮನೆ ಮೇಲೆ ಕಲ್ಲು ತೂರಾಟ







ಬೆಂಗಳೂರು,ಮಾ.28(ಕೆಎಂಶಿ)–ಯಡಿಯೂರಪ್ಪ ಅವರನ್ನು ರಾಜಕೀಯವಾಗಿ ಮುಗಿಸುವ ಬಿಜೆಪಿಯ ಆಂತರಿಕ ಕುತಂತ್ರದ ಭಾಗವಾಗಿ ಅವರ ಮನೆ ಮೇಲೆ ದಾಳಿ ನಡೆಸಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ವಿಧಾನಸಭೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ತಿರುಗೇಟು ನೀಡಿದ್ದಾರೆ.

ಉಭಯ ನಾಯಕರು ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿ, ಮೀಸಲಾತಿ ವಿಚಾರದಲ್ಲಿ ಗೊಂದಲ ಮೂಡಿಸಿರುವವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ. ಜನ ತಮಗೆ ಅನ್ಯಾಯ ಆದಾಗ ಅಧಿಕಾರದಲ್ಲಿರುವವರ ಮೇಲೆ ಆಕ್ರೋಶ ವ್ಯಕ್ತಪಡಿಸುವುದು ಸಹಜ. ಅಧಿಕಾರದಲ್ಲಿರುವ ಮುಖ್ಯಮಂತ್ರಿಗಳು, ಸಚಿವರ ಮನೆ ಮೇಲೆ ದಾಳಿ ಆಗದೆ ಯಾವುದೇ ಅಧಿಕಾರ ಇಲ್ಲದ ಯಡಿಯೂರಪ್ಪ ಅವರ ಮನೆ ಮೇಲೆ ದಾಳಿ ಆಗಿದೆ ಎಂದರೆ ಇದು ಬಿಜೆಪಿಯ ಕುತಂತ್ರಕ್ಕೆ ಸಾಕ್ಷಿಯಲ್ಲದೆ ಮತ್ತೇನೂ ಎಂದು ಶಿವಕುಮಾರ್ ಅವರು ಪ್ರಶ್ನಿಸಿದರು.

ಬಿ.ಎಸ್.ಯಡಿಯೂರಪ್ಪ ಅವರ ಮನೆ ಮೇಲೆ ನಡೆದ ದಾಳಿ ಹಿಂದೆ ಕಾಂಗ್ರೆಸ್ ಕೈವಾಡವಿದೆ ಎಂದು ಬಿಂಬಿಸಿ ರಾಜಕೀಯ ಮಾಡಲು ಬಿಜೆಪಿ ಹೊರಟಿದೆ ಎಂದು ದೂರಿದರು.

ಬಿಜೆಪಿಯಲ್ಲಿ ಯಡಿಯೂರಪ್ಪ ಅವರನ್ನು ಮೂಲೆಗುಂಪು ಮಾಡಲಾಗಿತ್ತು. ಈಗ ಗೃಹ ಸಚಿವ ಅಮಿತ್ ಶಾ ಅವರು ಯಡಿಯೂರಪ್ಪ ಅವರ ಮನೆಗೆ ಹೋಗಿ ಅವರ ಜತೆ ಉತ್ತಮ ಸಂಬಂಧ ಹೊಂದಿರುವಂತೆ ತೋರಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ. ಯಡಿಯೂರಪ್ಪ ಅವರನ್ನು ಮೂಲೆಗುಂಪು ಮಾಡಲಾಗಿದೆ ಎಂಬುದನ್ನು ಅವರು ಒಪ್ಪಿಕೊಂಡಿದ್ದಾರೆ. ಆಂತರಿಕವಾಗಿ ಅವರನ್ನು ನಿಯಂತ್ರಿಸಲು ಸಾಕಷ್ಟು ಒತ್ತಡ ಹೇರಲಾಗುತ್ತಿದೆ. ನಾನು ಈಗ ಆ ವಿಚಾರದ ಬಗ್ಗೆ ಚರ್ಚೆ ಮಾಡುವುದಿಲ್ಲ ಎಂದು ವ್ಯಾಖ್ಯಾನಿಸಿದರು.

ಮೀಸಲಾತಿ ವಿಚಾರ ಕೇವಲ ರಾಜ್ಯದಲ್ಲಿ ಮಾತ್ರವಲ್ಲ ಇಡೀ ದೇಶದಲ್ಲೇ ಗೊಂದಲ ಮೂಡಿಸಿದೆ. ಬೇರೆ ರಾಜ್ಯಗಳಲ್ಲಿ ಈಗಾಗಲೇ ಇಂತಹ ಗೊಂದಲದ ಮೀಸಲಾತಿ ತಂದಾಗ ಅದರ ವಿರುದ್ಧ ಸುಪ್ರೀಂಕೋರ್ಟ್ ತೀರ್ಪು ಕೊಟ್ಟಿದೆ. ಆದರೂ ಸರ್ಕಾರ ಜನರಿಗೆ ವಂಚಿಸಲು ಇಬ್ಬರು ಸಚಿವರೇ ಕೂತು ಸುಳ್ಳು ಮೀಸಲಾತಿ ಹೆಚ್ಚಳಕ್ಕೆ ಮುಂದಾಗಿದ್ದಾರೆ. ಯಾವ ವರದಿ ಆಧಾರದ ಮೇಲೆ ಸರ್ಕಾರ ಈ ತೀರ್ಮಾನ ಮಾಡಿದೆ. ಹಿಂದುಳಿದ ವರ್ಗಗಳ ಆಯೋಗ ಕಳೆದ ಡಿಸೆಂಬರ್‌ನಲ್ಲಿ ನೀಡಿದ ಮಧ್ಯಂತರ ವರದಿಯಲ್ಲಿ ಮೀಸಲಾತಿ ಹೆಚ್ಚಳ ಮಾಡಿ ಎಂದು ತಿಳಿಸಿದೆಯೇ. ಮಧ್ಯಂತರ ವರದಿ ಮೇಲೆ ಮೀಸಲಾತಿ ಹೆಚ್ಚಳ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ಮೀಸಲಾತಿ ಹೆಚ್ಚಳವಾಗಲೀ ಅಥವಾ ಒಳ ಮೀಸಲಾತಿ ಆಗಲಿ, ಸರಿಯಾದ ಅಧ್ಯಯನ ವರದಿ ಆಧರಿಸಿ, ಸಂವಿಧಾನದಲ್ಲಿ ತಿದ್ದುಪಡಿ ತಂದು ಜಾರಿಗೆ ತರಬೇಕೇ ಹೊರತು ಕೇವಲ ಚುನಾವಣೆ ಗಿಮಿಕ್ ಮಾಡಲು ಏಕಾಏಕಿ ಆದೇಶ ನೀಡಿದರೆ ಜಾರಿಗೆ ಬರುವುದಿಲ್ಲ. ಅಲ್ಪಸಂಖ್ಯಾತರ ಮೀಸಲಾತಿ ಕಸಿದು ನಮಗೆ ನೀಡಿ ಎಂದು ಒಕ್ಕಲಿಗ ಹಾಗೂ ಲಿಂಗಾಯತ ಸ್ವಾಮೀಜಿಗಳು ಕೇಳಿದ್ದರೇ? ಒಕ್ಕಲಿಗರು ಹಾಗೂ ಲಿಂಗಾಯತರು ತಮ್ಮ ಜನಸಂಖ್ಯೆ ಆಧಾರದ ಮೇಲೆ ಕ್ರಮವಾಗಿ 12% ಹಾಗೂ 15% ಹೆಚ್ಚಳಕ್ಕೆ ಬೇಡಿಕೆ ಇಡಲಾಗಿತ್ತು. ಮುಸಲ್ಮಾನರಿಂದ ಕಸಿದು 2% ಮೀಸಲಾತಿಗೆ ಬೇಡಿಕೆ ಇಟ್ಟಿರಲಿಲ್ಲ. ಈಗಾಗಲೇ ಮೀಸಲಾತಿ 56% ಆಗಿದ್ದು, ಒಕ್ಕಲಿಗರು, ಲಿಂಗಾಯತರು ಮೀಸಲಾತಿ ಸೇರಿಸಿ ವಿಸ್ತರಣೆ ಮಾಡಲಿ ಎಂದು ಹೇಳಿದರು.

ಅಲ್ಪಸಂಖ್ಯಾತರ ಮೀಸಲಾತಿ ಕಸಿದಿರುವ ಬಗ್ಗೆ ಜೆಡಿಎಸ್ ನಾಯಕರಾದ ಸಿ.ಎಂ.ಇಬ್ರಾಹಿಂ ಅವರು ಇದುವರೆಗೆ ಏನೂ ಮಾತನಾಡಿಲ್ಲ. ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರ ಮೀಸಲಾತಿ ಬದಲಾವಣೆ ಮಾಡಬಾರದು ಎಂದು ಆಗ್ರಹಿಸುತ್ತದೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಅಲ್ಪಸಂಖ್ಯಾತರು, ಒಕ್ಕಲಿಗರು, ಲಿಂಗಾಯತರ ಹಿತ ಕಾಯುವ ತೀರ್ಮಾನ ಮಾಡಲಾಗುವುದು ಎಂದರು.

ಮಾರ್ಚ್ 30ರ ನಂತರ ನಮ್ಮ ಪಕ್ಷದ ಅಭ್ಯರ್ಥಿಗಳ ಎರಡನೇ ಪಟ್ಟಿ ಬಿಡುಗಡೆ ಮಾಡಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಮೊದಲ ಪಟ್ಟಿಯಲ್ಲಿ ಯಾವುದಾದರೂ ಗೊಂದಲ ಕಾಣುತ್ತಿದೆಯೆ, ಪಕ್ಷದ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಯಾವುದೇ ಗೊಂದಲ ಇಲ್ಲ ಎಂದು ತಿಳಿಸಿದರು.

ವಿದ್ಯಾರಣ್ಯಪುರಂ ಎಕ್ಸೆಲ್ ಪ್ಲಾಂಟ್ ತ್ಯಾಜ್ಯ ತೆರವಿಗೆ

58 ಕೋಟಿ ಯೋಜನೆಗೆ ಶೀಘ್ರ ಅನುಮೋದನೆ

ಇಂದು ಮುಖ್ಯ ಕಾರ್ಯದರ್ಶಿಯೊಂದಿಗೆ ಸಭೆ, ಶೀಘ್ರ ಟೆಂಡರ್; ಸಂಸದ ಪ್ರತಾಪ್ ಸಿಂಹ





ಮೈಸೂರು, ಮಾ.28(ಆರ್‌ಕೆ)– ಮೈಸೂರಿನ ವಿದ್ಯಾರಣ್ಯಪುರಂನ ಎಕ್ಸೆಲ್ ಪ್ಲಾಂಟ್‌ನಲ್ಲಿ ಸಂಗ್ರಹವಾಗಿರುವ 7 ಲಕ್ಷ ಟನ್ ಘನ ತ್ಯಾಜ್ಯ ವಿಲೇವಾರಿ ಸಂಬಂಧ ನಾಳೆ (ಮಾ.29) ರಾಜ್ಯ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮರೊಂದಿಗೆ ಚರ್ಚಿಸುವುದಾಗಿ ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ಕಳೆದ 30 ವರ್ಷಗಳಿಂದ ರಾಶಿ ರಾಶಿ ಬಿದ್ದಿರುವ ಈ ತ್ಯಾಜ್ಯ ವಿಲೇವಾರಿಗಾಗಿ 58 ಕೋಟಿ ರೂ. ಯೋಜನೆಯ ಡಿಪಿಆರ್‌ನೊಂದಿಗೆ ಪಾಲಿಕೆಯಿಂದ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಈ ಸಂಬಂಧ ಬುಧವಾರ ಮುಖ್ಯ ಕಾರ್ಯದರ್ಶಿಗಳೊಂದಿಗೆ ಚರ್ಚಿಸಿ ಅನುಮೋದನೆ ಪಡೆಯಲಾಗುವುದು ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಅಲ್ಲಿನ ತ್ಯಾಜ್ಯ ತೆರವುಗೊಳಿಸಬೇಕೆಂದು ಸುತ್ತಮುತ್ತಲಿನ ನಿವಾಸಿಗಳು ಹಲವು ವರ್ಷಗಳಿಂದ ಒತ್ತಾಯಿಸುತ್ತಿದ್ದರು. ಅದಕ್ಕಾಗಿ ಮೈಸೂರು ಮಹಾನಗರ ಪಾಲಿಕೆಯು ಸರ್ಕಾರಕ್ಕೆ 58 ಕೋಟಿ ರೂ.ಗಳ ಪ್ರಸ್ತಾವನೆ ಸಲ್ಲಿಸಿತ್ತು. ಈ ಕುರಿತು ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಡಾ. ಎಂ.ಎನ್.ಅಜಯ್ ನಾಗಭೂಷಣ್‌ರೊಂದಿಗೂ ಚರ್ಚಿಸಿದ್ದೇನೆ. ನಾಳೆ ಮುಖ್ಯ ಕಾರ್ಯದರ್ಶಿಯೊಂದಿಗೆ ಸಭೆ ನಡೆಸಿ, ಅನುಮೋದನೆ ಪಡೆದ ನಂತರ ಅತೀ ಶೀಘ್ರ ಟೆಂಡರ್ ಕರೆಯಲಾಗುವುದು ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮೈಸೂರು ನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸೀವೇಜ್ ಫಾರಂಗೆ ತಂದು ಸುರಿಯಲಾಗುತ್ತಿದೆ. ಅದರಿಂದಾಗಿ ವಿದ್ಯಾರಣ್ಯಪುರಂ, ಜೆ.ಪಿ.ನಗರ, ಕನಕಗಿರಿ, ಗುಂಡೂರಾವ್ ನಗರ, ವಿಶ್ವೇಶ್ವರನಗರ ಸೇರಿದಂತೆ ಸುತ್ತಲಿನ ಬಡಾವಣೆಗಳ ನಿವಾಸಿಗಳಿಗೆ ದುರ್ವಾಸನೆಯಿಂದಾಗಿ ತೀವ್ರ ತೊಂದರೆಯಾಗುತ್ತಿತ್ತು. ಇದೀಗ ಬೆಟ್ಟದಾಕಾರದಲ್ಲಿರುವ ಈ ಘನ ತ್ಯಾಜ್ಯ ತೆರವಿಗೆ ಕಾಲ ಸಮೀಪಿಸುತ್ತಿದೆ ಎಂದು ತಿಳಿಸಿದರು.

ಮೈಸೂರು ನಗರದಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ವಿಲೇವಾರಿ ಮಾಡಲು ಕೆಸರೆ ಮತ್ತು ರಾಯನಕೆರೆ ಬಳಿ ತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪಿಸಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿವೆ. ಈ ಎರಡು ಘಟಕಗಳು ಕಾರ್ಯಾರಂಭಗೊಂಡಲ್ಲಿ ಸೀವೇಜ್ ಫಾರಂನಲ್ಲಿ ಹೆಚ್ಚಿನ ಪ್ರಮಾಣದ ಕಸ ಸಂಗ್ರಹವಾಗುವುದಿಲ್ಲ ಎಂದು ಪ್ರತಾಪ್ ಸಿಂಹ ತಿಳಿಸಿದರು.



ಮೈಸೂರು ವಿಶ್ವವಿದ್ಯಾನಿಲಯದ ನೂತನ ಕುಲಪತಿ ಪ್ರೊ.ಲೋಕನಾಥ್ ಅವರನ್ನು ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಮುಖಂಡ ಕೆ.ಹರೀಶ್‌ಗೌಡ ಅಭಿನಂದಿಸಿದರು. ಈ ವೇಳೆ ವಿಶ್ವಮಾನವ ವೇದಿಕೆ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಒಂಟಿಕೊಪ್ಪಲ್ ಗುರುರಾಜ್, ವಿವಿಯ ಹಲವು ಬೋಧಕ–ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.



ಮೈವಿವಿ ನೂತನ ಕುಲಪತಿ ಪ್ರೊ.ಲೋಕನಾಥ್ ಅವರನ್ನು ಮೈಸೂರು ವಿವಿ ಒಕ್ಕಲಿಗರ ಹಿತರಕ್ಷಣಾ ವೇದಿಕೆ ವತಿಯಿಂದ ಸನ್ಮಾನಿಸಲಾಯಿತು. ವೇದಿಕೆ ಗೌರವಾಧ್ಯಕ್ಷ ಮಾದೇವ, ಅಧ್ಯಕ್ಷ ಡಾ.ಕೆ.ಟಿ.ಸಂದೀಪ್, ಕಾರ್ಯದರ್ಶಿ ಶಶಿ, ಉಪಾಧ್ಯಕ್ಷರಾದ ಪ್ರದೀಪ್, ಎಚ್.ಕೆ.ಧರ್ಮಪಾಲ್‌ಗೌಡ, ಹೇಮಂತ್‌ಕುಮಾರ್, ಮನೋಜ್‌ಗೌಡ ಚಿತ್ರದಲ್ಲಿದ್ದಾರೆ.

ಸ್ವಯಂವರ ಪಾರ್ವತಿ ಹೋಮ

ಮೈಸೂರು, ಮಾ.28– ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಮಾ.31ರಂದು ಶುಕ್ರವಾರ ಬೆಳಗ್ಗೆ 7.30ಕ್ಕೆ ಅವಿವಾಹಿತ ವಧುವರರಿಗೆ ಶೀಘ್ರ ವಿವಾಹಕ್ಕಾಗಿ ಮತ್ತು ಜಾತಕದಲ್ಲಿನ ದೋಷ ಪರಿಹಾರಕ್ಕೆ ಸ್ವಯಂವರ ಪಾರ್ವತಿ ಹೋಮವನ್ನು ಏರ್ಪಡಿಸಲಾಗಿದೆ. ಹೆಚ್ಚಿನ ವಿವರಗಳಿಗೆ ವೈ ಕುಮಾರ್ ಜಾತಕ ವಿಮರ್ಶಕರನ್ನು ಮೊ.ಸಂಖ್ಯೆ 9845183392, 9845183399 ಸಂಪರ್ಕಿಸಬಹುದು.

ಬ್ಯಾಂಕಿನ ನಗದು ವ್ಯವಹಾರಗಳ ಬಗ್ಗೆ ಎಚ್ಚರ: ಡಿಸಿ



ಮೈಸೂರು, ಮಾ.28– 2023ರ ವಿಧಾನಸಭಾ ಸಾರ್ವತ್ರಿಕ ಚುನಾವಣಾ ವೆಚ್ಚದ ನಿರ್ವಹಣೆ, ಚುನಾವಣಾ ವೆಚ್ಚಗಳ ನಿಯಂತ್ರಣದ ಸಂಬಂಧ ಬ್ಯಾಂಕ್‌ಗಳಲ್ಲಿ ನಡೆಯುವ ಅನುಮಾನಾಸ್ಪದ ಪ್ರಕರಣಗಳಲ್ಲಿ ನಗದು ವ್ಯವಹಾರಗಳ ಬಗ್ಗೆ ನಿಗಾ ವಹಿಸುವಂತೆ ಚುನಾವಣಾ ಆಯೋಗವು ಸೂಚಿಸಿರುತ್ತದೆ. ಒಂದೇ ದಿನದಲ್ಲಿ 1 ಲಕ್ಷ ರೂಗಳಿಗಿಂತಲೂ ಹೆಚ್ಚಿನ ನಗದು ಮೊತ್ತವನ್ನು ಹಿಂತೆಗೆಯುವಂತಹ ಅನುಮಾನಾಸ್ಪದ ಪ್ರಕರಣಗಳು ಕಂಡು ಬಂದರೆ ಅಂತಹ ಪ್ರಕರಣಗಳ ಬಗ್ಗೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲು ಹಾಗೂ ದಿನವೊಂದರಲ್ಲಿ 10 ಲಕ್ಷ ರೂಗಳಿಗೂ ಮೇಲ್ಪಟ್ಟ ಠೇವಣಿ ಇಡಲಾದ ಅಥವಾ ಹಿಂಪಡೆಯಲಾದ ವ್ಯವಹಾರಗಳ ವಿವರಗಳನ್ನು ಆದಾಯ ತೆರಿಗೆ ಇಲಾಖೆಯ ಗಮನಕ್ಕೆ ತರಬೇಕಾಗಿರುತ್ತದೆ. ಜಿಲ್ಲೆಯ ಎಲ್ಲಾ ಬ್ಯಾಂಕ್‌ಗಳಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು, ಕ್ರಮ ಕೈಗೊಂಡ ಮಾಹಿತಿಯನ್ನು ಕಚೇರಿ ಹಾಗೂ ಆದಾಯ ತೆರಿಗೆ ಇಲಾಖೆಗೆ ತಪ್ಪದೇ ಕಾಲ ಕಾಲಕ್ಕೆ ವರದಿ ಮಾಡಬೇಕೆಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಕೆ.ವಿ ರಾಜೇಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ

ಉಪನೋಂದಣಾಧಿಕಾರಿಗೆ 4 ವರ್ಷ ಜೈಲು ಶಿಕ್ಷೆ, 2 ಲಕ್ಷ ರೂ. ದಂಡ

ಮೈಸೂರು,ಮಾ.28(ಆರ್‌ಕೆ)–ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣದ ಆರೋಪಿಯಾದ ಮೈಸೂರು ನಗರದ ಉಪ ನೋಂದಣಾಧಿಕಾರಿ (ಪೂರ್ವ) ಗಿರೀಶ್ ಅವರಿಗೆ 4 ವರ್ಷ ಜೈಲು ಶಿಕ್ಷೆ ಹಾಗೂ 2 ಲಕ್ಷ ರೂ. ದಂಡ ವಿಧಿಸಿ ಮೈಸೂರಿನ ಲೋಕಾಯುಕ್ತ ವಿಶೇಷ ನ್ಯಾಯಾಧೀಶರು ಇಂದು ತೀರ್ಪು ನೀಡಿದ್ದಾರೆ.

ಮೈಸೂರಿನ ಪೂರ್ವ ಉಪ ನೋಂದಣಾಧಿಕಾರಿಯಾಗಿದ್ದ ಎಂ.ಗಿರೀಶ್ ವಿರುದ್ಧ 2014ರಲ್ಲಿ ಗುರು ಮಂಟೇಸ್ವಾಮಿ ಎಂಬುವರು ನೀಡಿದ ದೂರಿನ ಮೇರೆಗೆ ದಾಳಿ ನಡೆಸಿದ್ದ ಅಂದಿನ ಲೋಕಾಯುಕ್ತ ಎಸ್ಪಿ ಜಗದೀಶ್ ಪ್ರಸಾದ್, ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988 ರೆ/ವಿ 20 ರೀತ್ಯಾ ಪ್ರಕರಣ ದಾಖಲಿಸಿಕೊಂಡು ದಾಳಿ ನಡೆಸಿ ಆಸ್ತಿ, ದಾಖಲೆ ಪತ್ರಗಳನ್ನು ವಶಪಡಿಸಿಕೊಂಡಿದ್ದರು.

ಇನ್ಸ್‌ಪೆಕ್ಟರ್‌ಗಳಾಗಿದ್ದ ನಟರಾಜು, ಗೋಪಾಲಕೃಷ್ಣ, ಪರಶುರಾಮ್, ಬಾಲಕೃಷ್ಣ ಅವರು ಪ್ರಕರಣದ ತನಿಖೆ ನಡೆಸಿ ಆರೋಪಿಯು ತನ್ನ ಆದಾಯಕ್ಕಿಂತ ಶೇ.58.72 ರಷ್ಟು ಹೆಚ್ಚಿನ ಆಸ್ತಿ ಹೊಂದಿದ್ದಾರೆಂದು ದೃಢಪಟ್ಟ ಹಿನ್ನೆಲೆಯಲ್ಲಿ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯವು, 13 ಮಂದಿ ನೀಡಿದ ಸಾಕ್ಷ್ಯವನ್ನು ಪರಿಗಣಿಸಿ ಆರೋಪಿ ಗಿರೀಶ್‌ಗೆ 4 ವರ್ಷ ಜೈಲು ಶಿಕ್ಷೆ ಹಾಗೂ 2 ಲಕ್ಷ ರೂ. ದಂಡ ವಿಧಿಸಿದೆ. ದಂಡ ಕಟ್ಟಲು ತಪ್ಪಿದಲ್ಲಿ 1 ವರ್ಷ ಸಾದಾ ಶಿಕ್ಷೆ ವಿಧಿಸಿ 3ನೇ ಸತ್ರ ನ್ಯಾಯಾಲಯದ ಲೋಕಾಯುಕ್ತ ವಿಶೇಷ ನ್ಯಾಯಾಧೀಶರಾದ ಕೆ.ಭಾಗ್ಯ ಅವರು ಇಂದು ತೀರ್ಪು ನೀಡಿದ್ದಾರೆ.

ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ವಿಶೇಷ ಲೋಕಾಯುಕ್ತ ಅಭಿಯೋಜಕಿ ಕಲಿಯಂಡ ಮುತ್ತಮ್ಮ ಪೂಣಚ್ಚ ಅವರು ವಾದ ಮಂಡಿಸಿದ್ದರು ಎಂದು ಕರ್ನಾಟಕ ಲೋಕಾಯುಕ್ತ ಎಸ್ಪಿ ಎಸ್.ಸುರೇಶ್ ಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿ ಕಾರ್ಯಾಗಾರ

ಮೈಸೂರು,ಮಾ.28–ಗುಫಿಕ್ ಬಯೋಸೈನ್ಸ್ ಲಿಮಿಟೆಡ್, ಕ್ಯೂಟಿಸ್ ಅಕಾಡೆಮಿ ಮತ್ತು ಜೆಎಸ್‌ಎಸ್ ಆಸ್ಪತ್ರೆ ಮೈಸೂರು ಸಹಯೋಗದಲ್ಲಿ ಬೊಟುಲಿನಮ್ ಟಾಕ್ಸಿನ್ ಮತ್ತು ಡರ್ಮಲ್ ಫಿಲ್ಲರ್‌ಗಳ ಕುರಿತು 2 ದಿನಗಳ ಮೆಗಾ ಕಾರ್ಯಾಗಾರ ಆಯೋಜಿಸಲಾಗಿತ್ತು. ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನಲ್ಲಿ ನಡೆದ ಈ ಕಾರ್ಯಾಗಾರದಲ್ಲಿ 20ಕ್ಕೂ ಹೆಚ್ಚು ವೈದ್ಯರು ಒಂದೇ ವೇದಿಕೆಯಲ್ಲಿ ಒಗ್ಗೂಡಿ ಆಸ್ಟ್ರೇಲಿಯಾದ ಅಂತರರಾಷ್ಟ್ರೀಯ ಅಧ್ಯಾಪಕರಿಂದ ತರಬೇತಿ ಪಡೆದರು. ಅಂತಾರಾಷ್ಟ್ರೀಯ ಖ್ಯಾತಿಯ ಕ್ಲಿನಿಕಲ್ ತಜ್ಞರು ಪ್ಯಾನ್–ಇಂಡಿಯಾದಿಂದ ಎಲ್ಲಾ ವೈದ್ಯರು ಮತ್ತು ಪ್ರತಿನಿಧಿಗಳಿಗೆ ಸಂಬಂಧಿಸಿದ ಕ್ಲಿನಿಕಲ್ ಮುಖದ ಅಂಗ ರಚನಾಶಾಸ್ತ್ರವನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ತಜ್ಞರು ಚುಚ್ಚುಮದ್ದಿನ ಹೆಚ್‌ಎ ಫಿಲ್ಲರ್‌ಗಳು ಮತ್ತು ಬೊಟುಲಿನಮ್ ಟಾಕ್ಸಿನ್ ಟೈಪ್ ಎ ಇಂಜೆಕ್ಷನ್‌ಗಳ ಬಳಕೆಗೆ ಸುರಕ್ಷಿತ ಮತ್ತು ಪುನರುತ್ಪಾದಕ ತಂತ್ರಗಳಿಗೆ ಒತ್ತು ನೀಡಲಾಯಿತು ಎಂದು ರಸಿಕ್ ಕುಲಕರ್ಣಿ ತಿಳಿಸಿದ್ದಾರೆ.

ಪಿಹೆಚ್.ಡಿ ಪದವಿ



ಮೈಸೂರು, ಮಾ.28 –ಮೈಸೂರು ವಿವಿಯ ಡಾ. ವ್ಯಂಕಟೇಶ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ನಿರ್ವಹಣೆ ವಿಜ್ಞಾನ ವಿಷಯದಲ್ಲಿ ಜಿ.ಶ್ರೀಕುಮಾರ್ ಅವರು ಆಂಗ್ಲ ಭಾಷೆಯಲ್ಲಿ ಸಾದರಪಡಿಸಿದ ಪ್ರಬಂಧವನ್ನು ಮೈಸೂರು ವಿವಿ ಪಿಹೆಚ್.ಡಿ. ಪದವಿಗೆ ಅಂಗೀಕರಿಸಿದೆ.

ಚಾಮುಂಡೇಶ್ವರಿಯಲ್ಲಿ ಕಾಂಗ್ರೆಸ್ ಒಮ್ಮತದ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ

ಸಿದ್ದರಾಮಯ್ಯ ನಿರ್ಧಾರ ಬಹಿರಂಗಪಡಿಸಿದ ಜಿಪಂ ಮಾಜಿ ಅಧ್ಯಕ್ಷ ಮರೀಗೌಡ



ಜಯಪುರ, ಮಾ.28– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್‌ನ ಒಮ್ಮತ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿರ್ಣಯಿಸಿದ್ದಾರೆ ಎಂದು ಮೈಸೂರು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಮರೀಗೌಡ ಬಹಿರಂಗಪಡಿಸಿದ್ದಾರೆ.

ಅವರು ಪಕ್ಷದ 13 ಮಂದಿ ಟಿಕೆಟ್ ಆಕಾಂಕ್ಷಿಗಳೊಂದಿಗೆ ಚಾಮುಂಡಿಬೆಟ್ಟದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ ವಿತರಣೆಗೆ ಚಾಲನೆ ನೀಡಿದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಮುಂಡೇಶ್ವರಿ ಕ್ಷೇತ್ರಕ್ಕೆ ಒಮ್ಮತದ ಅಭ್ಯರ್ಥಿಯಾಗಿ ಮಾವಿನಹಳ್ಳಿ ಸಿದ್ದೇಗೌಡರನ್ನು ಸೂಚಿಸಿದ್ದು, ಪ್ರತಿಯೊಬ್ಬ ಆಕಾಂಕ್ಷಿಗಳು ಹಾಗೂ ಕಾರ್ಯಕರ್ತರು ಪಕ್ಷದ ಪರವಾಗಿ ಕೆಲಸ ಮಾಡಿ ಕಾಂಗ್ರೆಸ್ ಗೆಲ್ಲಿಸುವಂತೆ ಸೂಚಿಸಿದ್ದಾರೆ. ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ, ಇಲ್ಲಿಂದಲೇ ಪ್ರಚಾರ ಆರಂಭಿಸಿದ್ದೇವೆ ಎಂದು ಕೆ.ಮರೀಗೌಡರು ಇದೇ ವೇಳೆ ತಿಳಿಸಿದರು.

ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಸಹುಂಡಿ, ಆಲನಹಳ್ಳಿ, ಚಾಮುಂಡಿಬೆಟ್ಟ, ಶ್ರೀರಾಂಪುರ, ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ 45,46,47,58ನೇ ವಾರ್ಡ್‌ಗಳ ರಾಮಕೃಷ್ಣನಗರ, ದಟ್ಟಗಳ್ಳಿ, ಶಾರದಾದೇವಿನಗರ, ರಾಜರಾಜೇಶ್ವರಿನಗರ, ಟಿ.ಕೆ ಲೇಔಟ್‌ಗಳಲ್ಲಿ ಮನೆಮನೆಗೆ ತೆರಳಿ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಿದರು. ಕಾಂಗ್ರೆಸ್ ಸಂಭಾವ್ಯ ಅಭ್ಯರ್ಥಿ ಮಾವಿನಹಳ್ಳಿ ಎಸ್.ಸಿದ್ದೇಗೌಡ, ಕೂರ್ಗಳ್ಳಿ ಮಹದೇವು, ನರಸೇಗೌಡ, ರಾಕೇಶ್ ಪಾಪಣ್ಣ, ಬೀರಿಹುಂಡಿ ಬಸವಣ್ಣ, ಯರಗನಹಳ್ಳಿ ಮಾದೇಗೌಡ, ಅರುಣ್‌ಕುಮಾರ್, ಮೆಲ್ಲಹಳ್ಳಿ ಮಹದೇವಸ್ವಾಮಿ, ಲೇಖಾ ವೆಂಕಟೇಶ್, ಜೆ.ಸತೀಶ್‌ಕುಮಾರ್, ಜೆ.ಜೆ. ಆನಂದ್, ಕೃಷ್ಣಕುಮಾರ್ ಸಾಗರ್, ಆನಂದ್ ಕುಮಾರ್, ಬಸವರಾಜು, ರವೀಂದ್ರಕುಮಾರ್ ಇದ್ದರು.



ಮೈಸೂರು ಪಾಲಿಕೆಯಿಂದ 20 ಲಕ್ಷ ರೂ. ಅನುದಾನದಲ್ಲಿ ವಾರ್ಡ್ ನಂ.3ರ ಮಹದೇಶ್ವರ ಬಡಾವಣೆಯ ರೈಲ್ವೇ ಲೇಔಟ್ ಹಾಗೂ ವಾಣಿವಿಲಾಸ ಬಡಾವಣೆ ನಡುವಿನ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು. ಈ ವೇಳೆ ಪಾಲಿಕೆ ಸದಸ್ಯ ಕೆ.ವಿ.ಶ್ರೀಧರ, ವಾಣಿವಿಲಾಸ ಸಂಘದ ಅಧ್ಯಕ್ಷ ರವಿ, ಶ್ರೀನಿವಾಸ್, ಮೂರ್ತಿ, ಮಂಗಳಾಬಾಯಿ, ರೇಣುಕಾ, ರಮೇಶ್ ಇತರರು ಉಪಸ್ಥಿತರಿದ್ದರು.




ಚಾಮುಂಡೇಶ್ವರಿ ಕ್ಷೇತ್ರ ವ್ಯಾಪ್ತಿಯ ವಾರ್ಡ್ ನಂ.58ರ ರಾಮಕೃಷ್ಣನಗರದಲ್ಲಿ ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್, ಬಿಪಿಎಲ್ ಕಾರ್ಡ್‌ದಾರರಿಗೆ ಮಾಸಿಕ 10 ಕೆಜಿ ಅಕ್ಕಿ, ಪ್ರತಿ ತಿಂಗಳು ನಿರುದ್ಯೋಗಿ ಪದವೀಧರರಿಗೆ 3000 ರೂ., ಡಿಪ್ಲೊಮಾ ಪದವೀಧರರಿಗೆ 1500 ರೂ. ಮತ್ತು ಪ್ರತಿ ಮನೆಗೆ 2,000 ರೂ. ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆ ಘೋಷಣೆ ಕಾರ್ಡ್‌ಗಳನ್ನು ಪಕ್ಷದ ಮುಖಂಡ ಎಚ್.ಸಿ. ಕೃಷ್ಣಕುಮಾರ್ ಸಾಗರ್ ವಿತರಿಸಿದರು. ಈ ಸಂದರ್ಭದಲ್ಲಿ ವಾರ್ಡ್ ಅಧ್ಯಕ್ಷ ರಾಜೇಂದ್ರ ಪ್ರಸಾದ್, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಮೇರಿ, ಚಾಮುಂಡೇಶ್ವರಿ ಬ್ಲಾಕ್‌ನ ಸಾಮಾಜಿಕ ಜಾಲತಾಣದ ಅಧ್ಯಕ್ಷ ಶಂಕರ್, ಮಹಿಳಾ ಸಂಘದ ಅಧ್ಯಕ್ಷೆ ನಾಗಮ್ಮ, ಕಮಲ, ಶರವಣೆ, ದಿವ್ಯ, ರೇಖಾ, ಪುಟ್ಟತಾಯಮ್ಮ, ಬೃಂದಾ ರಮೇಶ್ ಇನ್ನಿತರರು ಉಪಸ್ಥಿತರಿದ್ದರು.

ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮೈಸೂರು, ಮಾ.28– 2022–23ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಬಿ.ಇಡಿ. ಎಂ.ಇಡಿ, ಹಾಗೂ ವೃತ್ತಿಪರ ಕೋರ್ಸ್‌ಗಳ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಗೆ ಸ್ಟೇಟ್ ಹಾಸ್ಟೆಲ್ ಪೋರ್ಟಲ್‌ನಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಇಲಾಖೆಯ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದ್ದು, ಮಾ.31ರವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ sw.kar.nic.in ಅಥವಾ ಬಾಬು ಜಗಜೀವನರಾಂ ಭವನದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯ ದೂ.ಸಂ.0821–2520910 ಅನ್ನು ಸಂಪರ್ಕಿಸಲು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.3.2023 ಬುಧವಾರ, ಮಳೆ ನಕ್ಷತ್ರ: ಉತ್ತರಭಾದ್ರ, 18.03.2023ರಿಂದ 30.03.2023
ಶ್ರೀ ಶುಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ,
ತಿಥಿ: ಅಷ್ಟಮಿ, ನಕ್ಷತ್ರ: ಆರಿದ್ರಾ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ




ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಜಿ.ಎಸ್.ಎಸ್. ಯೋಗದ ಮಾತು, ಪ್ರಸ್ತುತಿ–ಯೋಗಶಿಕ್ಷಕ ಡಿ.ಶ್ರೀಹರಿ, 6.40 ಅರಿವಿನ ಶಿಖರ, ಗಾಯನ–ಕೆ.ಪಿ.ರೇವತಿ, ಹಂಸಿನಿ ಎಸ್.ಕುಮಾ, ವ್ಯಾಖ್ಯಾನ–ಡಾ.ಎನ್.ಎಸ್.ತಾರಾನಾಥ್, 9.00 ವೃತ್ತಿ ಮಾರ್ಗದರ್ಶನ–ಸಾಫ್ಟ್‌ವೇರ್ ಪ್ರಾಡಕ್ಟ್ ಡೆವೆಲಪ್‌ಮೆಂಟ್ ಮತ್ತು ಇಂಡಸ್ಟ್ರೀ ರೆಡಿ ಪ್ರಾಡಕ್ಟ್ಸ್ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಪ್ರೊ.ಆರ್.ಸುದರ್ಶನ್ ಅವರೊಂದಿಗೆ ಮಾತುಕತೆ, 10.00 ಹಿಂದೂಸ್ಥಾನಿ ಸಂಗೀತ, ಪದ್ಮಾ ತಲ್ವಾಲ್ಕರ್–ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ, 12.45 ಕನ್ನಡಿಯಲ್ಲಿ ಕಂಡಂತೆ ಮಾಲಿಕೆಯಲ್ಲಿ ಪ್ರಹಸನ "ಸ್ಕೂಲ್‌ನಲ್ಲಿ ಪುಟ್ಟನಿಗೆ ಸೆಕ್ಯುರಿಟಿ ರಿಂಗ್", ರಚನೆ–ಇ.ಆರ್.ರಾಮಚಂದ್ರನ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 1.20 ಭಾವಗೀತೆ–ಮೇಧಿನಿ ಎನ್.ದತ್, 3.00 ಲಯ ಸಂಭ್ರಮ, ಪ್ರಸ್ತುತಿ–ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ, 6.50 ಕೃಷಿರಂಗ–ಕಿಸಾನ್‌ವಾಣಿ, ಕುರಿ ಸಾಕಾಣಿಕೆ ಹಾಗೂ ವಿವಿಧ ತರಕಾರಿ ಬೇಸಾಯದ ಅನುಭವಗಳನ್ನು ಹಂಚಿಕೊಳ್ಳುತ್ತಾರೆ ಎಸ್.ಮಂಜು, 9.30 ಹಿಂದೂಸ್ಥಾನಿ ಸಂಗೀತ–ಪಂಡಿತ್ ಜಸ್‌ರಾಜ್–ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು

- **ತ್ರಯೀನ್ಯಾಸ್ ಶ್ರೀ ವಿದ್ಯಾ ಫೌಂಡೇಷನ್** : 14ನೇ ವರ್ಷದ ವಸಂತ ನವರಾತ್ರಿ ಮಹೋತ್ಸವ, ಬೆಳಗ್ಗೆ 8.30 ರಿಂದ ಮಹಾಭಿಷೇಕ, ಸಪ್ತಶತಿ ಪಾರಾಯಣ, ಲಲಿತೋಪಾಖ್ಯಾನ ಪಾರಾಯಣ, ಶ್ರೀಚಕ್ರಾರ್ಚನೆ, ಸಂಜೆ 5.30ಕ್ಕೆ ಶ್ರೀ ವಿದ್ಯಾ ಷೋಡಶ ದುರ್ಗಾ ಹೋಮ, ಸ್ಥಳ: ತ್ರಯೀನ್ಯಾಸ್, ಜಯಲಕ್ಷ್ಮೀಪುರಂ.
- **ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್, ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘ** : ವಿಶ್ವ ಮಹಿಳಾ ದಿನಾಚರಣೆ, ಅಧ್ಯಕ್ಷತೆ: ನೇಗಿಲಯೋಗಿ ಮಹಿಳೆಯರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷೆ ಜೆ. ಶೋಭ ರಮೇಶ್, ಉದ್ಘಾಟನೆ : ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕರಾದ ಕೆ.ಸಿ. ದಿವ್ಯಾಶ್ರೀ, ಮುಖ್ಯ ಅತಿಥಿಗಳು: ಪಾಲಿಕೆ ಸಹಾಯಕ ಆಯುಕ್ತೆ ಚಂದ್ರಮ್ಮ, ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ ಉಪನಿರ್ದೇಶಕಿ ಐ.ಎಂ. ಸವಿತಾ, ಪ್ರಾಧ್ಯಾಪಕಿ ಡಾ.ಹೆಚ್.ಪಿ.ಗೀತಾ, ಸ್ಥಳ: ನೇಗಿಲಯೋಗಿ ಮರುಳೇಶ್ವರ ಸೇವಾ ಭವನ, ಜಯನಗರ, ಕೆ.ಜಿ. ಕೊಪ್ಪಲು, ಬೆಳಗ್ಗೆ 10ಕ್ಕೆ.
- **ಕನ್ನಡ ವಿಕಾಸ ಶೈಕ್ಷಣಿಕ ಸಾಮಾಜಿಕ ಸಾಂಸ್ಕೃತಿಕ ಸಂಸ್ಥೆ** : ಪ.ಮಲ್ಲೇಶ್–ಒಡನಾಟದ ಆತ್ಮೀಯ ನುಡಿಗಳು, ಉಪಸ್ಥಿತರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧ್ಯಕ್ಷತೆ : ಶಾಸಕ ಯತೀಂದ್ರ ಸಿದ್ದರಾಮಯ್ಯ, ಪ್ರಾಸ್ತಾವಿಕ ನುಡಿ: ಸವಿತಾ ಮಲ್ಲೇಶ್, ವಿಷಯ ಮಂಡನೆ: ಪ್ರೊ. ಹೆಚ್.ಜಿ.ಕೃಷ್ಣಪ್ಪ, ಮುಖ್ಯ ಅತಿಥಿಗಳು: ಅಂಕಣಕಾರ ಡಿ.ಉಮಾಪತಿ, ಪತ್ರಕರ್ತ ದಿನೇಶ್ ಅಮೀನ್‌ಮಟ್ಟು, ಉಪಸ್ಥಿತರು: ಮಾಜಿ ಸಚಿವ ಹೆಚ್.ಸಿ. ಮಹದೇವಪ್ಪ, ವಿಧಾನಪರಿಷತ್ ಸದಸ್ಯರಾದ ಎ.ಹೆಚ್. ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಪ್ರಾಧ್ಯಾಪಕ ಪ್ರೊ. ಮುಜಾಫರ್ ಅಸ್ಸಾದಿ, ಸ.ರ.ಸುದರ್ಶನ, ಅಂಕಣಕಾರರಾದ ಪದ್ಮಾ ಶ್ರೀರಾಮ್, ನಾ. ದಿವಾಕರ್, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ, ಬೆಳಗ್ಗೆ 10.30ಕ್ಕೆ.
- **ಪ್ರಾಚ್ಯವಿದ್ಯಾ ಸಂಶೋಧನಾಲಯ, ಇಂದಿರಾ ಗಾಂಧಿ ರಾಷ್ಟ್ರೀಯ ಕಲಾ ಕೇಂದ್ರ:** ನಿವೃತ್ತ ವಿದ್ವಾಂಸ ಡಾ.ಎಸ್.ಜಗನ್ನಾಥ್ ಅವರಿಂದ ಗ್ರಂಥ ಸಂಪಾದನಾಶಾಸ್ತ್ರದ ಪರಿಚಯ ಕುರಿತು ಉಪನ್ಯಾಸ, ಉದ್ಘಾಟನೆ: ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ ಬೆಟ್ಟಕೋಟೆ, ಉಪಸ್ಥಿತರು: ಪ್ರಾವಿಸಂ ನಿರ್ದೇಶಕ ಡಾ.ಮಧುಸೂದನಾಚಾರ್ಯ, ಆರ್.ಸ್ವಪ್ನಾ, ಸ್ಥಳ: ಸೆಮಿನಾರ್ ಹಾಲ್, ವಿಜ್ಞಾನ ಭವನ, ಮಾನಸಗಂಗೋತ್ರಿ, ಮಧ್ಯಾಹ್ನ 3ಕ್ಕೆ
- **ಗಣಪತಿ ಸೇವಾ ಮಂಡಳಿ ಟ್ರಸ್ಟ್** : ನಾಲ್ಕನೇ ರಾಮೋತ್ಸವ, ಸಂಜೆ 6 ರಿಂದ ಶ್ರೀಮತಿ ಗಾಯತ್ರಿ ಸತ್ಯನಾರಾಯಣ್ ಅವರ ಶಿಷ್ಯ ವೃಂದದವರಿಂದ ಭಜನೆ, ಸಂಜೆ 6.30 ರಿಂದ ಕು. ಶ್ರೇಯಾ ಕೆ. ಭಟ್ ಅವರಿಂದ ಭಕ್ತಿಗೀತೆಗಳು, ಸ್ಥಳ: ರಜತ್ ಸಭಾ ಮಂಟಪ, ಗಣಪತಿ ದೇವಸ್ಥಾನ, 'ಐ' ಬ್ಲಾಕ್, ರಾಮಕೃಷ್ಣನಗರ.
- **ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟೆಬಲ್ ವಿಶ್ವಸ್ಥ ಮಂಡಳಿ** : ಶ್ರೀ ರಾಮೋತ್ಸವದ ಅಂಗವಾಗಿ ಸಂಗೀತ ಕಛೇರಿ, ಸಾಂಸ್ಕೃತಿಕ ಕಾರ್ಯಕ್ರಮಗಳು, ಶಾರದಾ ಕಲಾ ಕೇಂದ್ರದವರಿಂದ ಸಮೂಹ ಗಾಯನ, ಸ್ಥಳ: ಭಾರತೀ ಸ್ತ್ರೀ ಸಮಾಜ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಚಾರಿಟಬಲ್ ವಿಶ್ವಸ್ಥ ಮಂಡಳಿ ಆವರಣ, ಯಾದವಗಿರಿ, ಸಂಜೆ 6 ಗಂಟೆಗೆ.
- **ಶ್ರೀರಾಮ ಸೇನಾ ಮಂಡಳಿ ಚಾರಿಟೆಬಲ್ ಟ್ರಸ್ಟ್, ಮೈಸೂರು ಉತ್ತರ** : 29ನೇ ಶ್ರೀ ರಾಮನವಮಿ ಸಂಗೀತೋತ್ಸವ–2023, ವಿದ್ವಾನ್ ಹೆಚ್.ಎನ್. ಭಾಸ್ಕರ್ ಅವರಿಂದ ಪಿಟೀಲು ವಾದನ, ವಿದ್ವಾನ್ ಹೆಚ್.ಎಸ್. ಸುಧೀಂದ್ರ–ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜನ್–ಘಟ, ಸ್ಥಳ: ಶ್ರೀ ಪ್ರಸನ್ನ ಪಾರ್ವತಿ ಕಲ್ಯಾಣ ಮಂಟಪ, ವಿ.ವಿ. ಮೊಹಲ್ಲಾ, ಸಂಜೆ 6.15ರಿಂದ.
- **ಶ್ರೀ ಕಾಶೀಮಠದ ಶ್ರೀರಾಮಮಂದಿರ** : ವಿದ್ವಾನ್ ವೀಣಾ ಎಸ್. ಪಂಡಿತ್ ಅವರಿಂದ ಭಜನಾ ಕಾರ್ಯಕ್ರಮ, ಸ್ಥಳ: ಶ್ರೀರಾಮಮಂದಿರ, ಶ್ರೀರಾಮಪೇಟೆ, ಸಂಜೆ 6.15 ರಿಂದ.

ಯಾವ ಪಕ್ಷ, ಮುಖಂಡರೊಂದಿಗೆ ಹೊಂದಾಣಿಕೆ ಮಾಡಿಕೊಳ್ಳಬೇಡಿ

- ರಾಜ್ಯ ಬಿಜೆಪಿ ಮುಖಂಡರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಎಚ್ಚರಿಕೆ
- ನಾವು ಹೇಳಿದಂತೆ ನೀವು ಕೇಳಿ; 130 ಸ್ಥಾನ ಗಳಿಸಿ ಮತ್ತೆ ಅಧಿಕಾರಕ್ಕೆ ಬರ್ತೇವೆ



ಬೆಂಗಳೂರು, ಮಾ. 28 (ಕೆಎಂಶಿ)– ಚುನಾವಣಾ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ಪ್ರತಿಪಕ್ಷಗಳ ಮುಖಂಡರೊಂದಿಗೆ ರಾಜಕೀಯ ಹೊಂದಾಣಿಕೆ ಮಾಡಿಕೊಳ್ಳಬೇಡಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಜ್ಯ ಬಿಜೆಪಿ ನಾಯಕರಿಗೆ ತಾಕೀತು ಮಾಡಿದ್ದಾರೆ. ಪ್ರತಿಪಕ್ಷಗಳ ನಾಯಕರು, ಮುಖಂಡರೊಂದಿಗೆ ವೈಯಕ್ತಿಕ ಸ್ನೇಹ ತಪ್ಪಲ್ಲ. ಆದರೆ, ತಮ್ಮ ಗೆಲುವಿಗಾಗಿ ಪಕ್ಷವನ್ನು ಬಲಿ ಕೊಡ ಬೇಡಿ ಎಂದು ಎಚ್ಚರಿಕೆ ನೀಡಿದ್ದಾರೆ. ರಾಜ್ಯ ವಿಧಾನಸಭೆ ಚುನಾವಣೆಯನ್ನು ನಾನೇ ಎದುರಿಸುತ್ತೇನೆ. ನೀವು ಸಂಘಟನೆ ಮಾಡಿ. ಉಳಿದ ಕೆಲಸ ನನಗೆ ಬಿಡಿ ಎಂದು ಕಿವಿ ಮಾತು ಹೇಳಿದ್ದಾರೆ. ಕಳೆದ 26ರಂದು ರಾಜ್ಯಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಕೋರ್ ಕಮಿಟಿಯ ಸದಸ್ಯರು ಹಾಗೂ ಇತರ ಮುಖಂಡರ ಜತೆ ಚುನಾವಣೆ ತಯಾರಿ ಸಂಬಂಧದ ಚರ್ಚೆ ಸಂದರ್ಭದಲ್ಲಿ ಕೆಲವು ಎಚ್ಚರಿಕೆ ಹಾಗೂ ಕಿವಿಮಾತು ಹೇಳಿದ್ದಾರೆ. ಕರ್ನಾಟಕದ ರಾಜಕೀಯ ನಿಮಗಿಂತ ನನಗೆ ಚೆನ್ನಾಗಿ ತಿಳಿದಿದೆ. ಮತ್ತೆ ಪಕ್ಷವನ್ನು ಅಧಿಕಾರಕ್ಕೆ ತಂದೇ ತರುತ್ತೇನೆ. ನೀವು ಹೆದರದೆ, ಕಾರ್ಯಕರ್ತರನ್ನು ಹುರಿದುಂಬಿಸಿ ಚುನಾವಣೆ ಎದುರಿಸಿ.

ಇಂದೇ ನಿಮ್ಮ ಡೈರಿಯಲ್ಲಿ ಬರೆದುಕೊಳ್ಳಿ, ಪಕ್ಷ 130 ಸ್ಥಾನ ಗಳಿಸಿ ಅಧಿಕಾರಕ್ಕೆ ಬರಲಿದೆ. ನಾನು ಈ ಮಾತು ಹೇಳಿದರೆ ನಿಮಗೆ ನಗು ಬರಬಹುದು. ನಾವು ಚುನಾವಣೆ ನಡೆಸುವ ಚಾಣಾಕ್ಷತೆ, ತಂತ್ರಗಾರಿಕೆ ಚೆನ್ನಾಗಿ ಅರಿತಿದ್ದು, ಅದನ್ನು ನಾವು ಮುನ್ನಡೆ ಸುತ್ತೇವೆ. ಇಂದಿನಿಂದಲೇ ಸೂಚನೆ ಕೊಟ್ಟಂತೆ ಕೆಲಸ ಮಾಡುವುದನ್ನು ರೂಢಿಸಿಕೊಳ್ಳಿ ಎಂದು ನಿರ್ದೇಶನ ನೀಡಿದ್ದಾರೆ. ಪ್ರತಿಪಕ್ಷಗಳ ಅಬ್ಬರ ನೋಡಿ ದಿಗಿಲುಗೊಳ್ಳಬೇಡಿ. ಯಾವುದೇ ಆಡಳಿತಾರೂಢ ಪಕ್ಷಕ್ಕೆ ಸ್ವಲ್ಪ ಜನ ವಿರೋಧ ಸಹಜ. ಅದನ್ನು ಮೀರಿ ಚುನಾವಣೆ ಎದುರಿಸುವುದು ನನಗೆ ಗೊತ್ತು. ಯಾವುದೇ ಕ್ಷಣದಲ್ಲಿ ಕರ್ನಾಟಕ ವಿಧಾನ ಸಭೆಗೆ ಚುನಾವಣಾ ವೇಳಾಪಟ್ಟಿ ಪ್ರಕಟಗೊಳ್ಳಲಿದೆ. ವೇಳಾಪಟ್ಟಿ ಹೊರಬೀಳುತ್ತಿದ್ದಂತೆ ಅಭ್ಯರ್ಥಿಗಳ ಪಟ್ಟಿ ಹೊರಬೀಳಲಿದೆ. ಪಟ್ಟಿ ನೋಡುತ್ತಿದ್ದಂತೆ ನಿಮಗೆ ನಾವು ಅಧಿಕಾರಕ್ಕೆ ಬಂದೇ ಬರುತ್ತೇವೆ ಎಂಬ ವಿಶ್ವಾಸ ಮೂಡಲಿದೆ

ಚುನಾವಣೆ ಎದುರಿಸುವವರೇ ಒಂದು ಹೆಜ್ಜೆ ಹಿಂದಿಟ್ಟರೆ, ವಿರೋಧಿಗಳು ನಮ್ಮ ಮೇಲೆ ಗದಾಪ್ರಹಾರ ಮಾಡಲಿದ್ದಾರೆ. ನಾವಿರುವಾಗ ನೀವು ಹೆದರುವ ಅಗತ್ಯ ವಿಲ್ಲ. ನಾವು ಹೇಳಿದಷ್ಟು ಕೆಲಸ ಮಾಡಿ, ಚುನಾವಣಾ ಹೊಂದಾಣಿಕೆ, ಒಳ ಒಪ್ಪಂದಕ್ಕೆ ಅವಕಾಶ ನೀಡಬೇಡಿ ಎಂದು ಪದೇ ಪದೆ ಎಚ್ಚರಿಸಿದ್ದಾರೆ, ಹಿಂದಿನ ಚುನಾವಣೆಗಳಲ್ಲಿ ಪಕ್ಷದ ಕೆಲವು ನಾಯಕರು ವಿರೋಧಿ ನಾಯಕರೊಂದಿಗೆ ತೆರೆಮರೆಯ ಒಪ್ಪಂದ ಮಾಡಿಕೊಂಡು, ತಾವು ಗೆದ್ದು, ಬೇರೆ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿ ಸೋಲಿಸುತ್ತಿದ್ದರು. ಇಂತಹ ನಡವಳಿಕೆ ಬಗ್ಗೆ ಬಿಜೆಪಿ ನಾಯಕರು ಮತ್ತು ಸಂಘ ಪರಿವಾರದವರು ವರಿಷ್ಠರ ಗಮನಕ್ಕೆ ತಂದಿದ್ದರು. ಇದನ್ನು ಗಮನದಲ್ಲಿಟ್ಟುಕೊಂಡೇ ಶಾ ನಡೆಸಿದ ಸಭೆಯಲ್ಲಿ ಎಚ್ಚರಿಕೆ ನೀಡಿರುವುದಲ್ಲದೆ, ನಾಯಕರನ್ನು ಚುನಾವಣೆಗೆ ಹುರಿದುಂಬಿಸಿದ್ದಾರೆ.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಶ್ರೀ. ಕುಳ್ಳಾಜಿ ಗೋಪಾಲಕೃಷ್ಣ ರಾವ್ ರವರ ಮಗ ಶ್ರೀ. ಕೆ. ಜಿ. ಅಶೋಕ್ ರಾವ್, ರವರು ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತಿನ ಮಾಲೀಕರಾಗಿದ್ದು, ಸದರಿ ಸ್ವತ್ತುಗಳನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ, ಬ್ಯಾಂಕ್ / ಹಣಕಾಸು ಸಂಸ್ಥೆ ಒಳಗೊಂಡಂತೆ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿಯ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ:

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಇಲವಾಲ ಹೋಬಳಿ, ಕೆ. ಹೆಮ್ಮನಹಳ್ಳಿ ಗ್ರಾಮದಲ್ಲಿರುವ, ವ್ಯವಸಾಯೇತರ ವಸತಿ ಉದ್ದೇಶಕ್ಕೆ ಭೂಪರಿವರ್ತನೆಗೊಂಡಿರುವ ಒಟ್ಟು ವಿಸ್ತೀರ್ಣ 03 ಎಕರೆ 03 ಗುಂಟೆ, ಜಮೀನುಗಳ ಸರ್ವೆ ನಂಬರ್, ವಿಸ್ತೀರ್ಣ ಮತ್ತು ಚಕ್ಕುಬಂದಿಯ ವಿವರ ಈ ಕೆಳಕಂಡಂತಿದೆ.

ಸರ್ವೆ ನಂ.	ವಿಸ್ತೀರ್ಣ		ಚಕ್ಕುಬಂದಿ			
	ಎ	ಗು	ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
56/1ಬಿ	02	29	ರಸ್ತೆ ಮತ್ತು ನಾಲೆ	ಸರ್ವೆ ನಂ. 56/2,3 & 5 ರ ಜಮೀನು	ಸರ್ವೆ ನಂ. 56/1ಎ ರ ಜಮೀನು	ಸರ್ವೆ ನಂ. 56/7 ರ ಜಮೀನು
56/7	00	14	ರಸ್ತೆ ಮತ್ತು ನಾಲೆ	ಸರ್ವೆ ನಂ. 56/5 ರ ಜಮೀನು	ಸರ್ವೆ ನಂ. 56/1ಬಿ ರ ಜಮೀನು	ಸರ್ವೆ ನಂ. 56/9 ರ ಜಮೀನು
ಒಟ್ಟು	03	03				

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು, ಎಸ್‌ಎಲ್‌ಡಿ ಲಾ ಫರ್ಮ್, ನಂ.1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಸಮೀಪ, ಮೈಸೂರು. ಮೊ:9844640641, Email: sldlawfirm2021@gmail.com

ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ

ಕಾನೀನಿನಿ, ಹಾರಂಗಿ ಪುನರ್ವಸತಿ ವಿಭಾಗ, ಕುಶಾಲನಗರ

ಸಂ:ಕಾಅ/ಹಾಪುವಿ/ಪಿಜಿಸಿ/ಟೆಂಡರ್ ಅಧಿಸೂಚನೆ ಸಂ: 37/2022–23/ ದಿ: 28.03.2023

ಸಂಕ್ಷಿಪ್ತ ಟೆಂಡರ್ ಪ್ರಕಟಣೆ

(ಅಲ್ಪಾವಧಿ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಮಾತ್ರ)

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ಇವರ ಪರವಾಗಿ ಕರ್ನಾಟಕ ಸರ್ಕಾರದ ಲೋಕೋಪಯೋಗಿ ಇಲಾಖೆಯಲ್ಲಿ/ ಜಲಸಂಪನ್ಮೂಲ ಇಲಾಖೆಯಲ್ಲಿ/ ಕೇಂದ್ರ ಲೋಕೋಪಯೋಗಿ ಇಲಾಖೆಯಲ್ಲಿ/ ಇತರ ಸರ್ಕಾರದ ಅಧೀನ ಸಂಸ್ಥೆಗಳಲ್ಲಿ ಸೂಕ್ತ ದರ್ಜೆಯಲ್ಲಿ ನೊಂದಾಯಿಸಿ ನಂತರ ಕಾವೇರಿ ನೀರಾವರಿ ನಿಗಮದಲ್ಲಿ ಹೆಸರು ದಾಖಲಿಸಿ ನೋಂದಾವಣೆ ಚಾಲ್ತಿಯಲ್ಲಿರುವ ಅರ್ಹ ಗುತ್ತಿಗೆದಾರರಿಂದ ಐಟಂವಾರು ದರದ (ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಮಾತ್ರ) ಟೆಂಡರ್‌ಗಳನ್ನು ಕರೆಯಲಾಗಿದೆ. ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್‌ನ ವೆಬ್ ಸೈಟ್ ವಿಳಾಸ http://eproc.karnataka.gov.in ಆಗಿರುತ್ತದೆ.

2022–23ನೇ ಸಾಲಿನಲ್ಲಿ ಈ ವಿಭಾಗ ವ್ಯಾಪ್ತಿಯಲ್ಲಿ ಬರುವ ಪಿರಿಯಾಪಟ್ಟಣ, ಮತ್ತು ಸೋಮವಾರಪೇಟೆ ತಾಲ್ಲೂಕು ಅಚ್ಚುಕಟ್ಟು ವ್ಯಾಪ್ತಿಗೆ ಸಂಬಂಧಿಸಿದಂತೆ 2023 ರ ಖಾರೀಫ್ ಬೆಳೆಗಳಿಗೆ ನೀರು ಹರಿಸುವ ಸಲುವಾಗಿ ನಾಲೆಗಳ ದುರಸ್ಥಿ ಕಾಮಗಾರಿಗಳ ಒಟ್ಟು 14 ಕಾಮಗಾರಿಗಳಿಗೆ ಅಲ್ಪಾವಧಿ ಟೆಂಡರ್ ಕರೆಯಲಾಗಿದ್ದು, ಕಾಮಗಾರಿಗಳ ಅಂದಾಜು ಮೊತ್ತ ರೂ 5.00 ಲಕ್ಷಗಳಿಂದ 20.00 ಲಕ್ಷಗಳದ್ದು, ಈ ಕಾಮಗಾರಿಗಳಿಗೆ ನಿಗಧಿತ ದರ್ಜೆ ಗುತ್ತಿಗೆದಾರರಿಂದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಮಾತ್ರ ಟೆಂಡರ್ ಕರೆಯಲಾಗಿದೆ.

ಟೆಂಡರ್ ಪ್ರಕ್ರಿಯೆಗಳ ದಿನಾಂಕಗಳು: ಟೆಂಡರ್‌ಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ಅಥವಾ ಸ್ಪಷ್ಟೀಕರಣ ಪಡೆಯಲು ಕೊನೆಯ ದಿನಾಂಕ: 31-03-2023. (ಸಂಜೆ 4.00 ಗಂಟೆಯ ವರೆಗೆ), ಭರ್ತಿ ಮಾಡಿದ ಟೆಂಡರ್‌ನ್ನು ಮತ್ತು ಇ.ಎಂ.ಡಿ ಯನ್ನು ಸಲ್ಲಿಸಲು ಕೊನೆಯ ದಿನಾಂಕ: 05-04-2023 (ಸಂಜೆ 4.00 ಗಂಟೆಯ ವರೆಗೆ), ಟೆಂಡರ್‌ಗಳ ಆರ್ಥಿಕ ಬಿಡ್ಡನ್ನು ತೆರೆಯುವ ದಿನಾಂಕ: 06-04-2023 (ಸಂಜೆ 4.05 ಗಂಟೆಯ ನಂತರ). ಕಾಮಗಾರಿಗೆ ಸಂಬಂಧಿಸಿದ ಎಲ್ಲಾ ವಿವರಗಳು, ಸೂಚನೆಗಳು, ಅರ್ಹತೆ ಮತ್ತು ನಿಬಂಧನೆಗಳನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್‌ನಲ್ಲಿ ಪಡೆಯಬಹುದಾಗಿರುತ್ತದೆ. ಗುತ್ತಿಗೆದಾರರು ಎಲ್ಲಾ ಸೂಚನೆಗಳು ಮತ್ತು ನಿಯಮಗಳಿಗೆ ಅರ್ಹತೆ ಹೊಂದಿರಬೇಕು ಹಾಗೂ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರುತ್ತಾರೆ. ಗುತ್ತಿಗೆದಾರರು ಹೆಚ್ಚಿನ ಮಾಹಿತಿಯನ್ನು ಕಛೇರಿ ವೇಳೆಯಲ್ಲಿ ಕೆಳಸಹಿದಾರರನ್ನು ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ.

ಸಹಿ/– ಕಾರ್ಯಪಾಲಕ ಇಂಜಿನಿಯರ್,
ಹಾರಂಗಿ ಪುನರ್ವಸತಿ ವಿಭಾಗ, ಕುಶಾಲನಗರ.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ ಶ್ರೀ. ಕೆ.ವಿ. ಲಕ್ಷ್ಮಿ ನಾರಾಯಣ ರವರ ಮಗ [1] ಶ್ರೀ. ಕಟ್ಟೆನಿ ಆನಂದ್ ಮತ್ತು ಶ್ರೀ ಕಾಶಿವಿಶ್ವೇಶ್ವರ ರಾವ್ ರವರ ಮಗ [2] ಶ್ರೀ. ಕಂಠಮಣಿ ಪಾರ್ಥ ಸಾರಧಿ, ರವರು ಕ್ರಮವಾಗಿ ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತಿನ ಮಾಲೀಕರಾಗಿದ್ದು, ಉಭಯತ್ರರರು ಸದರಿ ಸ್ವತ್ತುಗಳನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ, ಬ್ಯಾಂಕ್ / ಹಣಕಾಸು ಸಂಸ್ಥೆ ಒಳಗೊಂಡಂತೆ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ 07 (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿಯ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ಕಸಬಾ ಹೋಬಳಿ, ಹುಣಸನಾಳು ಗ್ರಾಮದಲ್ಲಿರುವ ವಾಣಿಜ್ಯ (ಕೃಷಿ ಉತ್ಪನ್ನ ಶೇಖರಣಾ ಕೊಠಡಿ) ಉದ್ದೇಶಕ್ಕಾಗಿ ಭೂ–ಪರಿವರ್ತನೆಯಾಗಿರುವ ಜಮೀನಿನ ಒಟ್ಟು ವಿಸ್ತೀರ್ಣ 12 ಎಕರೆ 38 ಗುಂಟೆ, ಸರ್ವೆ ನಂಬರ್, ವಿಸ್ತೀರ್ಣ ಮತ್ತು ಚಕ್ಕುಬಂದಿಯ ವಿವರ ಈ ಕೆಳಕಂಡಂತಿದೆ:

ಸರ್ವೆ ನಂ,	ವಿಸ್ತೀರ್ಣ		ಚಕ್ಕುಬಂದಿ			
	ಎ	ಗು	ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ
214/1	01	29	ಸರ್ವೆ ನಂ. 215	ಸಿಂಧುವಳ್ಳಿಪುರದ ಸರ್ವೆ ನಂ. 108	ಸಿಂಧುವಳ್ಳಿಪುರದ ಸರ್ವೆ ನಂ. 101	ರಸ್ತೆ
215/1	01	00	ಸರ್ವೆ ನಂ. 216	ಸರ್ವೆ ನಂ. 215/4	ಸರ್ವೆ ನಂ. 215/3	ಸರ್ವೆ ನಂ. 215/2
215/2	01	19 ½	ಸರ್ವೆ ನಂ. 215/5	ಸರ್ವೆ ನಂ. 214	ಸರ್ವೆ ನಂ. 215/4,1	ರಸ್ತೆ
215/4	00	19 ½	ಸರ್ವೆ ನಂ. 215/1	ಸರ್ವೆ ನಂ. 214	ಸರ್ವೆ ನಂ. 215/3	ಸರ್ವೆ ನಂ. 215/2
215/5	01	22 ½	ಸರ್ವೆ ನಂ. 216	ಸರ್ವೆ ನಂ. 215/2	ಸರ್ವೆ ನಂ. 215/1	ರಸ್ತೆ
216/3	00	12	ಸರ್ವೆ ನಂ. 216/1	ಸರ್ವೆ ನಂ. 215	ಸರ್ವೆ ನಂ. 216/2	ರಸ್ತೆ
216/5	00	13	ಸರ್ವೆ ನಂ. 216/2	ಸರ್ವೆ ನಂ. 215	ಸಿಂಧುವಳ್ಳಿಪುರದ ಸರ್ವೆ ನಂ. 100	ಸರ್ವೆ ನಂ. 216/3
ಒಟ್ಟು	06	35 ½	ಮಾಲೀಕರು: ಶ್ರೀ. ಕಟ್ಟೆನಿ ಆನಂದ್			
216/1	01	16	ಸರ್ವೆ ನಂ. 216/4	ಸರ್ವೆ ನಂ. 216/3	ಸರ್ವೆ ನಂ. 216/6	ರಸ್ತೆ
216/4	01	28	ಸರ್ವೆ ನಂ. 219	ಸರ್ವೆ ನಂ. 216/1	ಸರ್ವೆ ನಂ. 216/2	ರಸ್ತೆ
216/6	01	16	ಸರ್ವೆ ನಂ. 216/7	ಸರ್ವೆ ನಂ. 216/5	ಸರ್ವೆ ನಂ. 216/2	ಸರ್ವೆ ನಂ. 216/1
216/7	01	22 ½	ಸರ್ವೆ ನಂ. 219	ಸರ್ವೆ ನಂ. 216/6	ಸರ್ವೆ ನಂ. 216/2	ಸರ್ವೆ ನಂ. 216/4
ಒಟ್ಟು	06	02 ½	ಮಾಲೀಕರು: ಕಂಠಮಣಿ ಪಾರ್ಥ ಸಾರಧಿ			

ಸಹಿ/– **ಶ್ರೀಲತಾ ದೀಕ್ಷಿತ್**, ವಕೀಲರು, ಎಸ್‌ಎಲ್‌ಡಿ ಲಾ ಫರ್ಮ್, ನಂ. 1458/ಎ, ನಾರಾಯಣಶಾಸ್ತ್ರಿ ರಸ್ತೆ, ಸಪ್ನ ಬುಕ್ ಹೌಸ್ ಸಮೀಪ, ಮೈಸೂರು. ಮೊ: 9844640641, Email: sldlawfirm2021@gmail.com

ಮೈಸೂರು ಮಹಾನಗರ ಪಾಲಿಕೆ, ಮೈಸೂರು

ಕಾರ್ಯಪಾಲಕ ಅಭಿಯಂತರರು (ಸಿವಿಲ್) ರವರ ಕಛೇರಿ, ಸಯ್ಯಾಜಿ ರಾವ್ ರಸ್ತೆ, ಮೈಸೂರು ಮಹಾನಗರ ಪಾಲಿಕೆ, ಮೈಸೂರು–570024
Email:eewmccmys@gmail.com

ಟೆಂಡರ್ ಪ್ರಕಟಣೆ

ಟೆಂಡರ್ ಪ್ರಕಟಣೆ ಸಂಖ್ಯೆ : ಹೆಚ್1/ಪವಿ/114/2021–2022 ದಿನಾಂಕ: 28–03–2023

ಕ್ರ.ಸಂ.	ಕಾಮಗಾರಿಯ ಹೆಸರು	ಅಂದಾಜು ಮೊತ್ತ ಲಕ್ಷಗಳಲ್ಲಿ
1	ಮೈಸೂರು ಮಹಾನಗರ ಪಾಲಿಕೆಯ ವಲಯ ಕಛೇರಿ 3ಕ್ಕೆ ಅವಶ್ಯಕವಿರುವ 14 ಕ್ಯು.ಮೀ.ಸಾಮರ್ಥ್ಯದ ಟ್ರಕ್ ಮೌಂಟೆಡ್ ಕಾಂಪ್ಯಾಕ್ಟರ್ ವಾಹನವನ್ನು ಖರೀದಿಸುವುದು.	49.5
2	ಮೈಸೂರು ಮಹಾನಗರ ಪಾಲಿಕೆಯ ವಲಯ ಕಛೇರಿ 2 ಮತ್ತು 4ಕ್ಕೆ ಅವಶ್ಯಕವಿರುವ 2 ಸಂಖ್ಯೆಯ 5 ಕ್ಯು.ಮೀ. ಸಾಮರ್ಥ್ಯದ ಟಿಪ್ಪರ್ ವಾಹನಗಳನ್ನು ಖರೀದಿಸುವುದು.	40.16
3	ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಮಳೆ ನೀರು ಚರಂಡಿಯ ಹೂಳೆತ್ತಲು ಅವಶ್ಯಕವಿರುವ 6.5 ಕ್ಯು.ಮೀ. ಸಾಮರ್ಥ್ಯದ ಟಿಪ್ಪರ್ ಖರೀದಿಸುವುದು	26.9
4	ಮೈಸೂರು ಮಹಾನಗರ ಪಾಲಿಕೆಯ ವಲಯ ಕಛೇರಿ 05ರ ಶೂನ್ಯ ತ್ಯಾಜ್ಯ ಘಟಕಕ್ಕೆ ಅವಶ್ಯಕವಿರುವ ಶ್ರೆಡ್ಡರ್ ಖರೀದಿಸುವುದು.	11.5
5	ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ 5ಕ್ಕೆ ಅವಶ್ಯಕವಿರುವ 14 ಕ್ಯು.ಮೀ.ಸಾಮರ್ಥ್ಯದ ಟ್ರಕ್ ಮೌಂಟೆಡ್ ಕಾಂಪ್ಯಾಕ್ಟರ್ ವಾಹನವನ್ನು ಖರೀದಿಸುವುದು.	49.5
6	ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಎಸ್.ಡಬ್ಲ್ಯೂ.ಎಂ. ಪೂರ್ವ ವಿಭಾಗಕ್ಕೆ ಅವಶ್ಯಕವಿರುವ 6.5 ಕ್ಯು.ಮೀ ಸಾಮರ್ಥ್ಯದ ಟಿಪ್ಪರ್ ಖರೀದಿಸುವುದು.	26.9
7	ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ 5 ಮತ್ತು 7ಕ್ಕೆ ಅವಶ್ಯಕವಿರುವ 2 ಸಂಖ್ಯೆಯ 5 ಕ್ಯು.ಮೀ, ಸಾಮರ್ಥ್ಯದ ಟಿಪ್ಪರ್ ಖರೀದಿಸುವುದು.	40.16
8	ಮೈಸೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಎಸ್.ಡಬ್ಲ್ಯೂ.ಎಂ ಪಶ್ಚಿಮ ವಿಭಾಗಕ್ಕೆ ಅವಶ್ಯಕವಿರುವ 6.5 ಕ್ಯು.ಮೀ ಸಾಮರ್ಥ್ಯದ ಟಿಪ್ಪರ್ ಖರೀದಿಸುವುದು	26.9
9	ಮೈಸೂರು ಮಹಾನಗರ ಪಾಲಿಕೆಯ ವಲಯ ಕಚೇರಿ 8ಕ್ಕೆ ಅವಶ್ಯಕವಿರುವ 14 ಕ್ಯು.ಮೀ. ಸಾಮರ್ಥ್ಯದ ಟ್ರಕ್ ಮೌಂಟೆಡ್ ಕಾಂಪ್ಯಾಕ್ಟರ್ ವಾಹನವನ್ನು ಖರೀದಿಸುವುದು.	49.5
10	ಮೈಸೂರು ಮಹಾನಗರ ಪಾಲಿಕೆಯ ವಲಯ ಕಛೇರಿ 8 ಮತ್ತು 9ಕ್ಕೆ ಅವಶ್ಯಕವಿರುವ 2 ಸಂಖ್ಯೆಯ 5 ಕ್ಯು.ಮೀ. ಸಾಮರ್ಥ್ಯದ ಟಿಪ್ಪರ್ ವಾಹನಗಳನ್ನು ಖರೀದಿಸುವುದು.	40.16

ಇ–ಪ್ರಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ಷೆಡ್ಯೂಲ್ ದಿನಾಂಕಗಳು ಈ ಕೆಳಕಂಡಂತಿವೆ

1	ಇ–ಪೋರ್ಟ್‌ಲ್‌ನಲ್ಲಿ ಟೆಂಡರ್ ದಾಖಲೆಗಳು ಚಾಲ್ತಿಗೆ ಬರುವ ದಿನಾಂಕ	ದಿನಾಂಕ 29–03–2023	ಸಮಯ: 17–00–00
2	ಟೆಂಡರ್ ಸಲ್ಲಿಸುವ ಕೊನೆ ದಿನಾಂಕ ಮತ್ತು ಕಾಲ	ದಿನಾಂಕ: 13–04–2023	ಸಮಯ: 17–15–00
3	ಟೆಂಡರ್ ಅನ್ನು ತೆರೆಯುವ ದಿನಾಂಕ ಮತ್ತು ಕಾಲ	ದಿನಾಂಕ: 14–04–2023	ಸಮಯ: 17–30–00

ಸಹಿ/– ಕಾರ್ಯಪಾಲಕ ಅಭಿಯಂತರರು (ಪಶ್ಚಿಮ), ಮೈಸೂರು ಮಹಾನಗರ ಪಾಲಿಕೆ, ಮೈಸೂರು

ನಕ್ಕರೆ ಅದೇ ಸ್ವರ್ಗ

ಗಿರಾಕಿ : (ಬಟ್ಟೆ ಅಂಗಡಿಯಲ್ಲಿ) ನಿಮ್ಮತ್ರ ಸೊಳ್ಳೆ ಪರದೆ ಇದೆಯೇ?
ಅಂಗಡಿಯಾತ : ಹೌದು ಇದೆ. ಯಾವ ಸೈಜಿನದು ಬೇಕು?
ಗಿರಾಕಿ : ಇಂಥಾ ಸೈಜಿನದು ಅಂತ ಹೇಳೋಕಾಗಲ್ಲ. ನಮ್ಮ ಮನೆಗೆ ಎಲ್ಲಾ ಸೈಜಿನ ಸೊಳ್ಳೆಗಳೂ ಬರ್ತಾ ಇರ್ತವೆ!

ಮೈಸೂರು ಮಿತ್ರ

ಬುಧವಾರ, 29 ಮಾರ್ಚ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಜೀವನ ಎಂಬುದು ನಮ್ಮ ಆತ್ಮ ಪರೀಕ್ಷೆಯ ಸಾಧನ ಮಾತ್ರ.

– ಲಾರ್ಡ್ ಬ್ರಾನೀಸ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಾಲು ಕುಡಿದು ಹಾಗಲ ಕಾಯಿ ತಿಂದಂತೆ

ನಿಮ್ಮ ಪತ್ರಗಳು

ಶೌಚಾಲಯ ದುರಸ್ಥಿಗೊಳಿಸಲು ಮನವಿ

ಮಾನ್ಯರೆ,

ಮೈಸೂರು ನಗರದ ವಾರ್ಡ್ ನಂಬರ್ 23ರ ಚಾಮರಾಜ ವಿಧಾನಸಭಾ ಕ್ಷೇತ್ರದ ನಾರಾಯಣಶಾಸ್ತ್ರಿ ರಸ್ತೆಯ ಮಹಾರಾಣಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪುರುಷ ವಿಭಾಗದ ಶೌಚಾಲಯದ ಶೋಚನೀಯ ದುಸ್ಥಿತಿಯನ್ನು ನೋಡಿ ತುಂಬಾ ಗಾಬರಿಯಾಯಿತು. ಇದು ಶೌಚಾಲಯವೇ ಅಥವಾ ಇಲಿ ಹೆಗ್ಗಣಗಳ ವಾಸಸ್ಥಾನವೇ ಎಂದು ಗೊಂದಲವಾಗಿ ಒಂದು ಕ್ಷಣ ದಿಗ್ಭ್ರಮೆಯಾಯಿತು. ಅಲ್ಲಲ್ಲಿ ದೊಡ್ಡ ದೊಡ್ಡ ಗುಂಡಿಗಳು ಬಿದ್ದಿದ್ದು, ಶೌಚದ ನೀರು ಹೊರ ಹೋಗದೆ ಅಲ್ಲೇ ನಿಂತು, ದುರ್ವಾಸನೆಯು ಮೂಗಿಗೆ ಬಡಿಯುತ್ತಿದೆ. ಪ್ರತಿದಿನವೂ ಈ ಶೌಚಾಲಯವನ್ನು ಹೇಗೆ ಉಪಯೋಗಿಸುತ್ತಿದ್ದಾರೆ



ಎಂಬುದು ಯಕ್ಷಪ್ರಶ್ನೆಯಾಗಿದೆ. ವಿದ್ಯಾರ್ಥಿಗಳು ಪಾಠ ಪ್ರವಚನಗಳನ್ನು ಈ ದುರ್ವಾಸನೆ ನಡುವೆ ಹೇಗೆ ಕೇಳುತ್ತಾರೆ. ಒಟ್ಟಿನಲ್ಲಿ ಈ ಶೌಚಾಲಯವು ಬಳಕೆಗೆ ಯೋಗ್ಯವಲ್ಲದ್ದಾಗಿದೆ. ಸರ್ಕಾರಕ್ಕೆ ತನ್ನದೇ ಶಾಲಾ, ಕಾಲೇಜುಗಳೆಂದರೆ ಯಾಕಿಷ್ಟು ತಾತ್ಸಾರ ಮನೋಭಾವನೆ. ಇಂತಹ ಅನೇಕ ಶಾಲಾ, ಕಾಲೇಜುಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿ ನಲುಗುತ್ತಿವೆ. ದಯವಿಟ್ಟು ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನ ಹರಿಸಲಿ.

– ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಪೊಲೀಸ್ ಮತ್ತು ಪಾಲಿಕೆಯ ಗಮನಕ್ಕೆ!

ಮಾನ್ಯರೆ,

ಕೃಷ್ಣರಾಜ ವಿಧಾನ ಸಭಾ ಕ್ಷೇತ್ರದ ಸ್ವಯಂ ಘೋಷಿತ ಅಭ್ಯರ್ಥಿಯೊಬ್ಬರು ತಮ್ಮ ಚುನಾವಣಾ ಪ್ರಚಾರದ ಭಿತ್ತಿಪತ್ರವನ್ನು ಕ್ಷೇತ್ರದ ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಅಂಟಿಸಿ ಗೋಡೆಗಳನ್ನೆಲ್ಲಾ ವಿರೂಪಗೊಳಿಸಿದ್ದಾರೆ. ಸಾರ್ವಜನಿಕ ಸ್ಥಳಗಳ ವಿರೂಪ ತಡೆ ಕಾಯ್ದೆಯನ್ವಯ ಇದು ಶಿಕ್ಷಾರ್ಹ ಅಪರಾಧ. ಪಾಲಿಕೆ ಆಯುಕ್ತರು ಪೊಲೀಸ್ ಆಯುಕ್ತರ ಜೊತೆ ಕೈಜೋಡಿಸಿ ಇಂತಹ ವಿರೂಪಕರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕಾಗಿದೆ.

–ಪಿ.ಜೆ.ರಾಘವೇಂದ್ರ ನ್ಯಾಯವಾದಿ ಮೈಸೂರು

ನೀರಿನ ಜೊತೆ ಗಾಳಿಗೂ ತೆರಿಗೆಯೇ!?

ಮಾನ್ಯರೆ,



ಮೂರ್ನಾಲ್ಕು ವರ್ಷಗಳ ಹಿಂದೆ ನಗರ ಪಾಲಿಕೆ ನಗರದ ವಿವಿಧ ಬಡಾವಣೆಗಳಲ್ಲಿ ಸಮರ್ಪಕ ನೀರು ಸರಬರಾಜಿಗೆಂದು ಕೊಳವೆಗಳನ್ನು ಬದಲಿಸಿ, ಎರಡು ವರುಷಗಳ ನಂತರ ಹೊಸ ನೀರಿನ ಮೀಟರ್ ಅನ್ನು ಅಳವಡಿಸಿತ್ತು. ಕಾರಣ ನೀರು ಸರಬರಾಜಿನಲ್ಲಿ ಸುಧಾರಣೆ ತರುವ ಉದ್ದೇಶ ಎಂದು ಹೇಳಿಕೊಳ್ಳಲಾಗಿತ್ತು. ನೀರಿನ ಒತ್ತಡ, ಪೂರೈಕೆಯೇನೋ ಜಾಸ್ತಿಯಾಯಿತು. ಜೊತೆಗೆ ನೀರಿನ ಬಿಲ್ಲು ಕೂಡ. ಈ ಬಗ್ಗೆ ಜಲಮಂಡಳಿಯಲ್ಲಿ ವಿಚಾರಿಸಿದಾಗ ಹೊಸ ಮೀಟರ್‌ನಲ್ಲಿ ಸೂಕ್ಷ್ಮವಾಗಿ ಬಳಕೆ ದಾಖಲಾಗುತ್ತದೆ ಎಂದಿದ್ದರು. ವಾಸ್ತವವಾಗಿ ಇಲ್ಲಿ ಆಗುತ್ತಿರುವುದೇ ಬೇರೆ. ವಿಜಯನಗರ ರೈಲ್ವೆ ಬಡಾವಣೆ ಮತ್ತು ಬಹುತೇಕ ಪ್ರದೇಶಗಳಲ್ಲಿ ಬೆಳಗ್ಗೆ ಆರು ಗಂಟೆಗೆ ನೀರು ಬಿಡಲಾಗುತ್ತದೆ. ಆದರೆ ಇದಕ್ಕೆ ಅರ್ಧಗಂಟೆ ಮುಂಚೆಯೇ ಕೊಳಾಯಿಯಲ್ಲಿ ರಭಸದಿಂದ ಬರುವ ಗಾಳಿಯ ಶಬ್ದ ಕೇಳಿ ಬರುತ್ತದೆ. ನೀರಿನ ಮೀಟರ್ ಪರಿಶೀಲಿಸಿದರೆ, ಮೀಟರ್‌ನ ಮುಳ್ಳು ಕೂಡಾ ರಭಸದಿಂದ ತಿರುಗಿ, ನೀರು ಬರದಿದ್ದರೂ ಮೀಟರ್ ಚಾಲನೆಯಾಗಿ ಹೆಚ್ಚಿನ ಮಾಪನ ತೋರಿಸುತ್ತಿದೆ. ನೀರು ಬಿಡುವ ಮತ್ತು ಸರಬರಾಜು ಮುಗಿಸಿದ ನಂತರದಲ್ಲಿ ಬರುವ ಗಾಳಿ ಒತ್ತಡದಿಂದ ಈ ಉಪಟಳ ಹೆಚ್ಚಾಗಿಯೇ ಇದೆ. ಬಹುಶಃ ಇದಕ್ಕೆ ತಾಂತ್ರಿಕ ಕಾರಣವೇನಾದರೂ ಇದ್ದಲ್ಲಿ ಪಾಲಿಕೆ ಅಥವಾ ಜಲಮಂಡಳಿ ಸರಿಪಡಿಸಲಿ. ಇಲ್ಲದೇ ಹೋದಲ್ಲಿ ಹಲವಾರು ರೀತಿಯಲ್ಲಿ ಸರ್ಕಾರ ಅಮಾಯಕ ಜನರನ್ನು ಹೊಸ ಹೊಸ ತೆರಿಗೆಗಳ ಪ್ರಯೋಗಗಳ ಮೂಲಕ ಸದೆಬಡಿಯುವ ಜೊತೆಗೆ ಇದೂ ಒಂದು ಸುಲಿಗೆಯ ಅವತಾರ ಎಂದು ಅಂದುಕೊಳ್ಳಬೇಕಷ್ಟೆ. ನಾಗರಿಕರಾದ ನಮ್ಮ ಪ್ರಶ್ನೆ ಇಷ್ಟೇ. ನೀರಿಗೆ ಕರ ಓಕೆ, ಅದರ ಜೊತೆಗೆ ಬರುವ ಗಾಳಿಗೆ ದರ ಯಾಕೆ? ಎಂದು. ಬಹುಶಃ ಜಲಮಂಡಳಿ ಅಧಿಕಾರಿಗಳು ಇದಕ್ಕೆ ಉತ್ತರಿಸಿಯಾರೆ?

–ವಿಜಯ್ ಹೆಮ್ಮಿಗೆ, ಮೈಸೂರು

ಬಾಲ್ಯ ವಿವಾಹ ತಡೆ ಅಗತ್ಯ

ಮಾನ್ಯರೆ,



ನಗರ ಮತ್ತು ಗ್ರಾಮೀಣ ಪ್ರದೇಶ ಅನ್ನೋ ಬೇಧವಿಲ್ಲದೆ ಬಾಲ್ಯ ವಿವಾಹಗಳು ಹೆಚ್ಚುತ್ತಿವೆ. ಆಟ ಆಡುವ ವಯಸ್ಸಿನಲ್ಲಿ ಕಾಡೋ ಪಾಪ ಅನ್ನುವಂತೆ ಜೀವನದಲ್ಲಿ ಒಮ್ಮೆ ಸಿಗುವ ಮಧುರ ಬಾಲ್ಯವನ್ನು ಕಳೆದುಕೊಂಡು ಅತೀ ಚಿಕ್ಕ ವಯಸ್ಸಿನಲ್ಲಿಯೇ ತಮ್ಮ ವಯಸ್ಸಿಗೂ ಮೀರಿದ ಆಲೋಚನೆ ಮಾಡಿ ಬೇಗ ವೃದ್ಧರಂತೆ ಕಾಣುವ ಮಂದಿಯನ್ನು ನೋಡಿದರೆ ಅಯ್ಯೋ ಪಾಪ ಅನ್ನಿಸುತ್ತದೆ.

ಹನ್ನೆರಡರಿಂದ ಹದಿನೇಳರ ಒಳಗೆ ಮದುವೆ ಮಾಡಿ ತಮ್ಮ ಜವಾಬ್ದಾರಿಯನ್ನು ಕಳೆದುಕೊಳ್ಳೋಣ ಎಂದುಕೊಳ್ಳುವ ಬೇಜವಾಬ್ದಾರಿ ಪೋಷಕರು, ತಮ್ಮ ಮಿತಿ ಮೀರಿದ ಹಾವಭಾವದ ಹದಿಹರೆಯದ ಹುಡುಗ, ಹುಡುಗಿಯರ ನಡಾವಳಿ ಇದಕ್ಕೆ ಎರಡೂ ಪ್ರಮುಖ ಕಾರಣ ಎನ್ನಬಹುದು.

ಓದನ್ನು ಪೂರ್ಣಗೊಳಿಸಿ ಆನಂತರ ಭದ್ರತೆಯ ದೃಷ್ಟಿಯಿಂದ ಜೀವನ ನೋಡುವವರ ಸಂಖ್ಯೆ ಬಹಳ ಕಡಿಮೆ ಪ್ರಮಾಣದಲ್ಲಿದೆ. ಕೆಲ ಹಾರ್ಮೋನ್‌ಗಳ ವೈಪರೀತ್ಯಗಳ ನಡುವೆ ಬಾಲ್ಯ ವಿವಾಹ ಪದ್ಧತಿ ಆಚರಣೆಯಲ್ಲಿದೆ ಎನ್ನಬಹುದು. ಈ ಹಿಂದೆ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿದ್ದರೆ ಇದು ಈಗ ನಗರ ಪ್ರದೇಶಕ್ಕೂ ಕಾಲಿಟ್ಟಿದೆ. ನಂತರ ಈಗ ಎಲ್ಲಾ ಕಡೆ ಸಾಮಾನ್ಯವಾಗಿ ಕಂಡುಬರುತ್ತಿದೆ.

ಗರ್ಭಕೋಶದ ಪರಿಪಕ್ವ ಬೆಳವಣಿಗೆ, ದೈಹಿಕ ಹಾಗೂ ಮಾನಸಿಕ ಆರೋಗ್ಯ, ಮನೆಯ–ಮನಸಿನ ಪರಿಸ್ಥಿತಿ, ಹೊಂದಾಣಿಕೆಯ ಸಾಮರ್ಥ್ಯ ಇವೆಲ್ಲವೂ ಗಣನೆಗೆ ಬರುತ್ತವೆಯಲ್ಲವೇ? ಈ ವಿಷಯವಾಗಿ ನಮ್ಮ ಜನಕ್ಕೆ ಎಲ್ಲಿಯವರೆಗೆ ಬುದ್ಧಿ ವಿವೇಚನೆ ಬರುವುದಿಲ್ಲವೋ ಅಲ್ಲಿಯವರೆಗೂ ಇದು ಸಾಮಾನ್ಯ. ಯಾವ ಇಲಾಖೆಗಳಿಂದಲೂ ತಡೆಯಲು ಸಾಧ್ಯವೆ ಇಲ್ಲವೇ?

–ಎ.ಎಸ್.ಗೋವಿಂದೇಗೌಡ, ಅರೇನಹಳ್ಳಿ, ಪಿ.ಪಟ್ಟಣ ತಾ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸಂಸ್ಕೃತಿ ಚಿಂತನಾ


ವಾರಾಣಸೀ ವೈಭವ

ಭಾರತ ದೇಶದ ಸಾಂಸ್ಕೃತಿಕ ಇತಿಹಾಸದಲ್ಲಿ ವಾರಾಣಸಿ ಉನ್ನತ ಸ್ಥಾನವನ್ನು ಅಲಂಕರಿಸಿದೆ. ದೇಶದ ಅತ್ಯಂತ ಪ್ರಾಚೀನ ನಗರಗಳಲ್ಲಿ ಇದೂ ಒಂದು. ಪ್ರತಿಯೊಬ್ಬ ನಿಷ್ಠಾವಂತ ಹಿಂದೂ ಜೀವನದಲ್ಲಿ ಒಮ್ಮೆಯಾದರೂ ಕಾಶೀಯಾತ್ರೆಯನ್ನು ಮಾಡಬೇಕು, ವಿಶ್ವನಾಥನ ದರ್ಶನ–ಸ್ಪರ್ಶಗಳನ್ನು ಮಾಡಬೇಕು, ಗಂಗಾಸ್ನಾನ ಪವಿತ್ರತಮ ಎಂದು ಭಾವಿಸುತ್ತಾನೆ. ತುಂಬಾ ಹಿಂದೆ ಜನರು ಕಾಶೀಯಾತ್ರೆಯನ್ನು ಮಾಡಲು ಹೋಗಿ ಅಲ್ಲಿ ಮರಣ ಸಂಭವಿಸಿದರೂ ಚಿಂತೆಯಿಲ್ಲ, ಅಲ್ಲಿ ಸತ್ತ ಮನುಷ್ಯರಿಗೆ ಮುಕ್ತಿ ದೊರಕುತ್ತದೆ ಎಂದು ನಂಬಿದ್ದರು. ಸಂಸ್ಕೃತದಲ್ಲಿ ಕಾಶೀ ಮರಣಾನ್ಮುಕ್ತಿಃ ಎಂಬ ಉಕ್ತಿಯೂ ಇದೆ.

ಅನೇಕ ವರ್ಷಗಳ ಹಿಂದೆ, ಎಂದರೆ 1964 ರಲ್ಲಿ ನಾನು ವಿದ್ಯಾರ್ಥಿಯಾಗಿದ್ದಾಗ ವಾರಾಣಸೀ ನಗರವನ್ನು ಕಾಣುವ ಸುಯೋಗ ಒದಗಿ ಬಂದಿತ್ತು. ಅಖಿಲ ಭಾರತ ಸಂಸ್ಕೃತ ಸ್ಪರ್ಧೆಗಳಲ್ಲಿ ಭಾಗವಹಿಸಲು ಅಲ್ಲಿಗೆ ನಾನು ಹೋಗಿದ್ದೆ. ವಾರಾಣಸಿಯ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಿದ್ದರು. ಆಗ ಪ್ರಥಮ ಬಹುಮಾನವನ್ನು ಗಳಿಸಿದುದರ ಜೊತೆಗೆ ವಿಶ್ವನಾಥನ ಮತ್ತು ಅನ್ನಪೂರ್ಣೇಶ್ವರಿಯ ದರ್ಶನ ಮತ್ತು ಗಂಗಾಸ್ನಾನ ಇತ್ಯಾದಿಗಳನ್ನು ಮಾಡಿದ ನೆನಪು ಇನ್ನೂ ಮಾಸಿಲ್ಲ. ಆಗ ಗಂಗೆ ಕಲುಷಿತಗೊಂಡಿರಲಿಲ್ಲ. ನಿಶ್ಚಿಂತೆಯಿಂದ ಮೀಯಬಹುದಾಗಿತ್ತು. ಆಮೇಲೆ ಜಲಮಾಲಿನ್ಯ ಅತೀ ಹೆಚ್ಚಾದುದು ಎಲ್ಲರಿಗೂ ತಿಳಿದ ವಿಷಯ.

ಕಾಶೀ, ವಾರಾಣಸೀ ಎಂದು ಪ್ರಸಿದ್ಧವಾಗಿರುವ ಈ ನಗರ ವಿದ್ಯಾಸ್ಥಾನವೆಂದೂ ಪ್ರಖ್ಯಾತವಾಗಿದೆ. ವೇದ, ವೇದಾಂಗ, ವೇದಾಂತ, ವ್ಯಾಕರಣ, ನ್ಯಾಯ, ಮೀಮಾಂಸಾ ಇತ್ಯಾದಿ ಶಾಸ್ತ್ರಗಳ ಪಂಡಿತ ಪ್ರಕಾಂಡರು ಇಲ್ಲಿದ್ದರು. ಆ ಕಾಲದಲ್ಲಿ ಗೋಪೀನಾಥ ಕವಿರಾಜರು, ರಾಜೇಶ್ವರಶಾಸ್ತ್ರಿ ದ್ರವಿಡರು, ಬಟುಕನಾಥಶಾಸ್ತ್ರಿ ಖಿಸ್ತೆ ಮುಂತಾದವರನ್ನು ಕಾಣುವ ಭಾಗ್ಯ ನನ್ನದಾಗಿತ್ತು. ಆದರೆ ನಗರದ ಬೀದಿಗಳ ಇಕ್ಕಟ್ಟು, ಅವ್ಯವಸ್ಥೆ, ತಾಂಬೂಲವನ್ನು ಜಗಿದು ಎಲ್ಲೆಂದರಲ್ಲಿ ಉಗುಳುವ ಜನರ ಸ್ವಭಾವ ಇತ್ಯಾದಿಗಳಿಂದ ಮನಸ್ಸಿಗೆ ಬೇಸರವೂ ಉಂಟಾಗಿತ್ತು.

ಈಚೆಗೆ ಭಾರತದ ಪ್ರಧಾನಮಂತ್ರಿಗಳ ಆಸಕ್ತಿ ಮತ್ತು ಪ್ರಯತ್ನಗಳ ಪರಿಣಾಮವಾಗಿ ಗಂಗೆ ಶುದ್ಧವಾಗಿದೆ, ವಿಶ್ವನಾಥ ಮಂದಿರದ ಪರಿಸರ ಅದ್ಭುತವಾಗಿ ನಿರ್ಮಾಣಗೊಂಡಿದೆ, ಪ್ರತಿದಿನವೂ ಗಂಗಾ ನದಿಯ ದಡದಲ್ಲಿ ಗಂಗಾರತಿ ನಡೆಯುತ್ತಿದೆ ಎಂಬ ವಾರ್ತೆಗಳನ್ನು ಕೇಳಿ ಮತ್ತೊಮ್ಮೆ ಆ ದಿವ್ಯ ಕ್ಷೇತ್ರದ ದರ್ಶನವನ್ನು ಮಾಡಬೇಕೆಂಬ ಹಂಬಲ ಹೃದಯದಲ್ಲಿ ಮೂಡಿತ್ತು. ನನ್ನ ಪತ್ನಿ ಕಾಶಿಯನ್ನು ನೋಡೇ ಇರಲಿಲ್ಲ. ಯಾವಾಗಾದರೂ ಹೋಗೋಣ ಎಂದು ಒತ್ತಾಯ ಆಗುತ್ತಿತ್ತು. ಅದೆಲ್ಲ ಪೂರ್ಣವಾಗುವ ಸದವಕಾಶ ಈ ತಿಂಗಳು ಒದಗಿ ಬಂದಿತು. ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾನಿಲಯದವರು ಈ ವರ್ಷ ಮಾರ್ಚ್ 23 ಮತ್ತು 24 ರಂದು ಸ್ಪರ್ಧೆಗಳನ್ನು ವಾರಾಣಸಿಯಲ್ಲಿ ನಡೆಸಲು ನಿರ್ಧರಿಸಿದರು. 22 ರಂದು ಉದ್ಘಾಟನೆ, 25ರಂದು ಬಹುಮಾನ ವಿತರಣೆ. ಯಾವ ಸ್ಪರ್ಧೆಗಳಲ್ಲಿ ಹಿಂದೆ ನಾನು ಸ್ಪರ್ಧಾಳುವಾಗಿ ಹೋಗಿದ್ದೆನೋ, ಆ ಸ್ಪರ್ಧೆಗೆ ನಿರ್ಣಾಯಕರಲ್ಲಿ ಒಬ್ಬನಾಗಿ ಬರಬೇಕೆಂದು ನನಗೆ ಆಹ್ವಾನ ಬಂದಿತು. ಈಗ ಬೆಂಗಳೂರಿನಿಂದ



ವಾರಾಣಸಿಗೆ ನೇರ ವಿಮಾನಯಾನವೂ ಇದೆ. ಶ್ರಮ ವಿಲ್ಲದೆ ಹೋಗಿ ಬರುವ ಸೌಕರ್ಯವಿದೆ. ಆಹ್ವಾನಕ್ಕೆ ಒಪ್ಪಿಗೆಯನ್ನು ಸೂಚಿಸಿ ಪ್ರಯಾಣದ ವ್ಯವಸ್ಥೆ ಮಾಡಿಕೊಂಡೆನು.

ಈ ತಿಂಗಳ 21ನೆಯ ತಾರೀಖು ಬೆಂಗಳೂರಿಗೆ ಹೋಗಿ ಸಪತ್ನೀಕನಾದ ನಾನು ಸಂಜೆಯ ವಿಮಾನವನ್ನು ಏರಿದೆ. ಕೇವಲ ಎರಡೂವರೆ ಗಂಟೆಯ ಪ್ರಯಾಣ. ವಾರಾಣಸಿಯ ವಿಮಾನ ನಿಲ್ದಾಣದಲ್ಲಿ ಇಳಿದಾಗ ನಮ್ಮನ್ನು ನಿಗದಿಯಾಗಿದ್ದ ಹೋಟೆಲ್‌ಗೆ ತಲುಪಿಸಲು ಕಾರ್ ಕಳುಹಿಸಿದ್ದರು. ಸುಮಾರು ಮೂವತ್ತು ಕಿಲೋಮೀಟರ್ ದೂರ. ಪ್ಲಾಜಾ ಇನ್ ಎಂಬ ಹೋಟೆಲ್‌ಗೆ ಹೋಗಿ ರೂಮನ್ನು ಪಡೆದುಕೊಂಡೆವು. ನಿರ್ಣಾಯಕರಾಗಿ ಬೇರೆ ಬೇರೆ ಊರುಗಳಿಂದ ಬಂದಿದ್ದ ವಿದ್ವಾಂಸರೂ ಅಲ್ಲಿ ನೆಲೆಯೂರಿದ್ದರು. ಅವರೆಲ್ಲರ ಪರಿಚಯ, ಕುಶಲ ಪ್ರಶ್ನೆಗಳಾದುವು. ಕನ್ನಡಿಗರೇ ಆದ ಪ್ರೊ. ಸಚ್ಚಿದಾನಂದ ಉಡುಪರೂ ಅವರಲ್ಲೊಬ್ಬರಾಗಿದ್ದುದು ನನ್ನ ಸಂತೋಷವನ್ನು ಇಮ್ಮಡಿಗೊಳಿಸಿತು.

ಮರುದಿನ 22.3.2023 ಚೈತ್ರ ಶುದ್ಧ ಪ್ರತಿಪತ್. ಅಂದು ಚಾಂದ್ರಮಾನ ಪಂಚಾಂಗವನ್ನು ಅನುಸರಿಸುವವರಿಗೆ ಯುಗಾದಿ. ಬೆಳಗಿನ ಉಪಹಾರವನ್ನು ಸೇವಿಸಿದ ಮೇಲೆ ವ್ಯವಸ್ಥಾಪಕರು ಕಳುಹಿಸಿದ ಕಾರುಗಳನ್ನೇರಿ ವಿಶ್ವನಾಥ ಮಂದಿರಕ್ಕೆ ಹೋದೆವು. ಉದ್ಘಾಟನಾ ಸಮಾರಂಭವನ್ನು ಅಲ್ಲೇ ಏರ್ಪಡಿಸಿದ್ದರು. ಅಲ್ಲಿ ವಿಶ್ವನಾಥನ ದರ್ಶನಕ್ಕಾಗಿ ಕಾದು ನಿಂತಿದ್ದ ಸಾವಿರಗಟ್ಟಲೆ ಜನರ ಸಾಲುಗಳನ್ನು ನೋಡಿ ನಮಗೆ ಗಾಬರಿಯಾಯಿತು. ಎಷ್ಟು ಘಂಟೆ ಸಾಲಿನಲ್ಲಿ ನಿಂತಿರುವುದು? ನನಗೆ ಕಾಲಿನಲ್ಲಿ ಶಕ್ತಿಯಿಲ್ಲ. ಸುದೈವದಿಂದ ನಮಗೆ ಪಾಸುಗಳನ್ನು ಕೊಟ್ಟರು. ಸ್ಥಳೀಯರ ನೆರವಿನಿಂದ ನೇರವಾಗಿ ದೇವರ ದರ್ಶನಕ್ಕೆ ಹೋಗಲು ಸಾಧ್ಯವಾಯಿತು. ವಿಶ್ವನಾಥ ಲಿಂಗದ ದರ್ಶನ, ಹಸ್ತದಿಂದ ಸ್ಪರ್ಶನ ಲಭ್ಯವಾಯಿತು. ಅನ್ನಪೂರ್ಣೇಶ್ವರಿಯ ದರ್ಶನ ನನಗೆ ದಕ್ಕಿತು. ನನ್ನ ಪತ್ನಿಗೆ ದಕ್ಕಲಿಲ್ಲ. ಬಾಗಿಲನ್ನು ಹಾಕಿಬಿಟ್ಟರು. ಆಮೇಲೆ ಅನ್ನಪೂರ್ಣೇಶ್ವರಿ ಪ್ರಸಾದ ರೂಪವಾದ, ಶುಚಿರುಚಿಯಾದ ಭೋಜನ ಸಿಕ್ಕಿತು. ಆಮೇಲೆ ಉದ್ಘಾಟನಾ ಸಮಾರಂಭ. ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾನಿಲಯದ ಕುಲಪತಿಗಳಾಗಿರುವ, ಕನ್ನಡಿಗ ಡಾ. ಶ್ರೀನಿವಾಸ ವರಖೇಡಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭ ಅದ್ಭುತವಾಗಿತ್ತು. ಸಂಸ್ಕೃತದ ಘನವಿದ್ವಾಂಸರ ವಾಗ್ವೈಖರಿ ನಮ್ಮನ್ನು ಮುಗ್ಧರನ್ನಾಗಿ ಮಾಡಿತು. ಮುಂದಿನ ಮೂರು ದಿನಗಳ ಕಾರ್ಯಕ್ರಮದ ರೂಪರೇಖೆಗಳು ದೊರಕಿದುವು.

ಕಾರ್ಯಕ್ರಮ ಮುಗಿದ ಮೇಲೆ ಮತ್ತೆ ಶ್ರೀ ವಿಶ್ವನಾಥನ ದರ್ಶನಕ್ಕೆ ಹೋದೆವು. ಒಳಕ್ಕೆ ಹೋಗಲು ಎಷ್ಟೋ ನಿರ್ಬಂಧಗಳು. ಮೊಬೈಲ್ ಒಳಗೆ ಒಯ್ಯುವಂತಿಲ್ಲ. ಪೆನ್ ಕೂಡ ವರ್ಜ್ಯ. ಈ ನಿಯಮಗಳನ್ನು ಏಕೆ ಮಾಡಿದ್ದಾರೋ ತಿಳಿಯದು. ಅಂತೂ ಇಂತೂ ಇನ್ನೊಂದು ಬಾರಿ ದೇವರ ದರ್ಶನ ಪಡೆದೆವು. ದರ್ಶನ ಪಡೆಯುತ್ತಿದ್ದ ಭಕ್ತರ ಮುಖದಲ್ಲಿ ಧನ್ಯತೆ ಕಾಣಿಸುತ್ತಿದೆ. ಆ ಮೇಲೆ ಅನ್ನಪೂರ್ಣೇಶ್ವರಿಯ ದರ್ಶನವೂ ನಿರ್ವಿಘ್ನವಾಗಿ ಆಯಿತು. ಇನ್ನೂ ಎಷ್ಟೋ ದೇವಾಲಯಗಳು. ಪುಣ್ಯ ಸಂಚಯಕ್ಕೆ ಎಷ್ಟೋ ಸ್ಥಾನಗಳು. ವಾರಾಣಸಿ ಎಂದರೆ ದೇವಾಲಯಗಳ ನಗರ (City of temples) ಅಲ್ಲವೆ?

ಮರುದಿನ ಗುರುವಾರ (23.3.2022) ಸ್ಪರ್ಧೆಗಳ ಆರಂಭ. ಎಷ್ಟೊಂದು ಸ್ಪರ್ಧೆಗಳು! ಎಷ್ಟೊಂದು ಸ್ಪರ್ಧಿಗಳು ! ಭಾರತ ದೇಶದ ನಾನಾ ರಾಜ್ಯಗಳಿಂದ ವಿದ್ಯಾರ್ಥಿಗಳು ಸ್ಪರ್ಧೆಗಾಗಿ ಬಂದಿದ್ದರು. ಕರ್ನಾಟಕದಿಂದ ಹೆಚ್ಚಿನ ಸಂಖ್ಯೆಯ ಸ್ಪರ್ಧಿಗಳು ಬಂದಿದ್ದರು ಎಂಬುದು ನಮಗೆ ಹೆಮ್ಮೆಯ ವಿಷಯ. ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯ ಸಮೃದ್ಧವಾಗಿ ಬಹುಮಾನಗಳನ್ನು ಕೊಡುತ್ತದೆ. ನಾನು ಅಕ್ಷರ ಶ್ಲೋಕೀ ಸ್ಪರ್ಧೆಯಲ್ಲಿ ನಿರ್ಣಾಯಕನಾಗಿದ್ದೆ. ನನ್ನ ಜೊತೆಗೆ ಇನ್ನಿಬ್ಬರು ವಿದ್ವಾಂಸರೂ ಅಲ್ಲಿ ನಿರ್ಣಾಯಕರಾಗಿದ್ದರು. ವಿದ್ಯಾರ್ಥಿಗಳು ನಿರ್ದಿಷ್ಟ ಗ್ರಂಥಗಳ ಶ್ಲೋಕಗಳನ್ನೂ, ಪದ್ಯಗಳನ್ನೂ ಕಂಠಸ್ಥ ಮಾಡಿಕೊಂಡಿದ್ದು ಬೇಕಾದ ಅಕ್ಷರದಿಂದ ಆರಂಭಗೊಳ್ಳುವ ಪದ್ಯಗಳನ್ನು ಹೇಳುತ್ತಿದ್ದರು. ಸ್ಮರಣಶಕ್ತಿ ಗಟ್ಟಿಯಾಗಿದ್ದ ವಿದ್ಯಾರ್ಥಿಗಳು ಕೊನೆಯವರೆಗೂ ಉಳಿದು ಬಹುಮಾನಕ್ಕೆ ಭಾಜನರಾದರು. ಶಲಾಕಾ ಪರೀಕ್ಷೆಯಲ್ಲಿ ಗ್ರಂಥದೊಳಕ್ಕೆ ಸೂಜಿ ತೂರಿಸಿದಾಗ ಬಂದ ಶ್ಲೋಕವನ್ನು ನೆನಪಿನಿಂದ ಹೇಳಿ ಸಂಸ್ಕೃತದಲ್ಲೇ ವ್ಯಾಖ್ಯಾನಿಸಬೇಕು. ಸ್ಪರ್ಧಿಗಳಲ್ಲಿ ಕೆಲವರು ವಯಸ್ಸಿನಲ್ಲಿ ಚಿಕ್ಕವರಾದರೂ ಅವರ ವ್ಯಾಖ್ಯಾನ ಚಾತುರ್ಯ ಪ್ರಶಂಸನೀಯವಾಗಿತ್ತು. ಅವರ ಪ್ರಾವೀಣ್ಯವನ್ನು ಕಂಡು ನಾನು ಬೆರಗಿನಿಂದ ತುಂಬಿ ಹೋಗಿದೆ. ಅಷ್ಟಾಧ್ಯಾಯಿಯ ನಾಲ್ಕು ಸಾವಿರ ಸೂತ್ರಗಳನ್ನು ಕಂಠಸ್ಥ ಮಾಡಿಕೊಂಡಿರುವ ವಿದ್ಯಾರ್ಥಿಗಳನ್ನೂ ನಾನು ಕಂಡೆ. ಎಂಟು ವರ್ಷದ ಮಕ್ಕಳು ಸಂಪೂರ್ಣ ಭಗವದ್ಗೀತೆಯನ್ನು ನೆನಪಿನಿಂದಲೇ ಹೇಳಬಲ್ಲರು. ಇವರನ್ನೆಲ್ಲ ನೋಡಿ 'ಸಂಸ್ಕೃತ ವಿದ್ಯೆಗೆ ಅಳಿವಿಲ್ಲ, ಇವರು ಶಾಸ್ತ್ರಗಳನ್ನು ಸಂರಕ್ಷಿಸುತ್ತಾರೆ. ಕಾವ್ಯಗಳನ್ನು ರಚಿಸುತ್ತಾರೆ' – ಎಂಬ ವಿಶ್ವಾಸ ನನ್ನಲ್ಲಿ ಮೂಡಿತು.

ಸ್ಪರ್ಧೆಗಳು ಅಂದು ಮುಗಿದ ಮೇಲೆ ನಾವು ಕಾಶೀ ಹಿಂದೂ ವಿಶ್ವವಿದ್ಯಾಲಯದ (Banaras Hindu University) ಪರಿಸರದ ಒಳಗೇ ಇರುವ 'ನಯಾ ವಿಶ್ವನಾಥ' ದೇವಾಲಯಕ್ಕೆ ಹೋಗಿ ದರ್ಶನ ಪಡೆದೆವು. ಅನಂತರ ಅನತಿ ದೂರದಲ್ಲಿರುವ ತುಲಸೀ ಮಾನಸ ಮಂದಿರಕ್ಕೆ ಹೋಗಿ ಶ್ರೀರಾಮನ ದರ್ಶನವನ್ನು ಪಡೆದು ಪವಿತ್ರರಾದೆವು. ಅಮೃತಶಿಲೆಯ ವಿಗ್ರಹಗಳು ಇಲ್ಲಿ ಭವ್ಯವೂ ಸುಂದರವೂ ಆಗಿವೆ. ತುಳಸೀದಾಸರ ಪದ್ಯಗಳನ್ನು ಇಲ್ಲಿ ಗೋಡೆಯಲ್ಲಿ ಕೆತ್ತಿದ್ದಾರೆ. ಉತ್ತರ ಭಾರತದಲ್ಲಿ ವಾಲ್ಮೀಕಿ ರಾಮಾಯಣಕ್ಕೆ ಎಷ್ಟು ಗೌರವ ಸಲ್ಲುವುದೋ ಅಷ್ಟೇ ಗೌರವ ತುಳಸೀದಾಸರ ರಾಮಚರಿತ ಮಾನಸಕ್ಕೂ ಸಲ್ಲುತ್ತದೆ. ಅಲ್ಲಿ ಜನರು ಭಾವುಕರಾಗಿ ಹನುಮಾನ್ ಚಾಲೀಸಾ ಹಾಡುವುದನ್ನು ಕೇಳಿದರೆ ಮೈನವಿರೇಳುತ್ತದೆ.

ಮರುದಿನ ಇನ್ನೂ ಕೆಲವು ಸ್ಪರ್ಧೆಗಳು ನಡೆದುವು. ವಿದ್ಯಾರ್ಥಿಗಳ ಪ್ರತಿಭಾಸುವರ್ಣವನ್ನು ಪಂಡಿತರು ಒರೆಗಲ್ಲಿನಲ್ಲಿ ತಿಕ್ಕುತ್ತಿದ್ದರು. ಶನಿವಾರ (25.3.2023) ಬೆಳಗ್ಗೆ ಸ್ವಲ್ಪ ಅವಕಾಶವಿದ್ದುದರಿಂದ ನಾವು ಕಾಶಿಯ ಅಂಚಿನಲ್ಲೇ ಇರುವ ಸಾರನಾಥವನ್ನು ನೋಡಿಕೊಂಡು ಬರಲು ನಿಶ್ಚಯಿಸಿದೆವು. ನಿರ್ಣಾಯಕರಾಗಿ ಕೇರಳ ರಾಜ್ಯದಿಂದ ಬಂದಿದ್ದ ಪ್ರೊ. ಕೇಶವನ್ ನಮ್ಮ ಜೊತೆಯಲ್ಲಿ ಬಂದರು. ಸಾರನಾಥ ಬೌದ್ಧರಿಗೆ ಪವಿತ್ರ ಕ್ಷೇತ್ರ. ಭಗವಾನ್ ಬುದ್ಧನು ತನ್ನ ಪ್ರಥಮ ಉಪದೇಶವನ್ನು ಇಲ್ಲೇ ಮಾಡಿದನಂತೆ. ಸಾಮ್ರಾಟ್ ಅಶೋಕನು ಕಟ್ಟಿಸಿದ ಸ್ತೂಪವೂ ಇಲ್ಲಿದೆ. ನಾನಾ ದೇಶಗಳ ಬೌದ್ಧರು ಇಲ್ಲಿಗೆ ಬಂದು ಹೋಗುತ್ತಾರೆ.

ಅಪರಾಹ್ನದಲ್ಲಿ ಬಹುಮಾನ ವಿತರಣಾ ಸಮಾರಂಭ ನಡೆಯಿತು. ಐದು ಜನ ಕುಲಪತಿಗಳು ಅಂದು ವೇದಿಕೆಯಲ್ಲಿದ್ದರು. ಅವರಿಂದ ಪಾರಿತೋಷಕಗಳನ್ನು ಪಡೆದ ವಿದ್ಯಾರ್ಥಿಗಳು ಧನ್ಯರೆಂಬುದರಲ್ಲಿ ಸಂಶಯವಿಲ್ಲ.

ಗಂಗಾತಟದಲ್ಲಿ ದಶಾಶ್ವಮೇಧ ಘಾಟ್ ಮುಂತಾದ ಸ್ಥಳಗಳಲ್ಲಿ ನಡೆಯುವ ಗಂಗಾರತಿ ದರ್ಶನೀಯ. ಅದನ್ನು ಕಾಣಲು ಎಲ್ಲಾ ವಿದ್ಯಾರ್ಥಿಗಳಿಗೂ, ನಿರ್ಣಾಯಕರಿಗೂ, ಅತಿಥಿಗಳಿಗೂ ನೌಕೆಗಳಲ್ಲಿ ಅವಕಾಶವನ್ನು ಕಲ್ಪಿಸಿದ್ದರು. ಗಂಗಾರತಿಯ ನೋಟ ಎಂದೂ ಮರೆಯಲಾಗದ ಅನುಭವ. ಜನರು ಭಕ್ತಿಯ ಉತ್ಕಂಡತೆಯಿಂದ ಹರಹರ ಮಹಾದೇವ ಎಂದು ಘೋಷಣೆ ಮಾಡುತ್ತಿರುತ್ತಾರೆ. ದೀಪಗಳ ಮಾಲೆ ಕಣ್ಣನ್ನು ಕೋರೈಸುತ್ತದೆ. ಗಂಗೆಯ ಮೇಲೆ ತೇಲುವ ಹಲವು ದೋಣಿಗಳು ಮನಸ್ಸನ್ನು ಯಾವುದೋ ಲೋಕಕ್ಕೆ ಕೊಂಡೊಯ್ಯುತ್ತವೆ.

**ವಾರಾಣಸೀ ನಿವಿಶತೇ ನ ವಸುಂಧರಾಯಾಂ
ತತ್ರ ಸ್ಥಿತಿರ್ಮಖಭುಜಾಂ ಭವನೇ ನಿವಾಸಃ।
ತತ್ತೀರ್ಥಮುಕ್ತವಪುಷಾಮತ ಏವ ಮುಕ್ತಿಃ
ಸ್ವರ್ಗಾತ್ ಪರಂ ಪದಮುದೇತು ಮುದೇ ತು ಕೀದೃಕ್॥**


ವಾರಾಣಸಿಯು ಭೂಲೋಕದ ಒಂದು ಭಾಗವಲ್ಲ. ಅಲ್ಲಿರುವುದೆಂದರೆ ದೇವತೆಗಳ ಮನೆಯಲ್ಲಿ ವಾಸಿಸಿದಂತೆ. ಅಲ್ಲಿ ಶರೀರವನ್ನು ತ್ಯಜಿಸಿದವರಿಗೆ ಸಿಕ್ಕುವುದು ಮುಕ್ತಿ. ಏಕೆಂದರೆ ಸ್ವರ್ಗಕ್ಕಿಂತ ಮೇಲಿನ ಆನಂದಧಾಮ ಯಾವುದಿದೆ? ಎಂದು ಶ್ರೀ ಹರ್ಷನು ನೈಷಧದಲ್ಲಿ ಹೇಳುವುದು ಸರಿಯಾಗಿದೆ. ಅನೇಕ ವರ್ಷಗಳಿಂದ ಕರ್ನಾಟಕದ ವಿದ್ಯಾರ್ಥಿಗಳೇ ಅಗ್ರಪಂಕ್ತಿಯಲ್ಲಿದ್ದಾರೆ. ಈ ಬಾರಿ ಹದಿನಾಲ್ಕು ಸುವರ್ಣ ಪದಕಗಳನ್ನು ಕರ್ನಾಟಕದ ವಿದ್ಯಾರ್ಥಿಗಳೇ ಗಳಿಸಿದುದರಿಂದ ವಿಜಯ ವೈಜಯಂತಿ ಕರ್ನಾಟಕಕ್ಕೇ ಒಲಿಯಿತೆಂದು ತಿಳಿಸಲು ಹರ್ಷವಾಗುತ್ತಿದೆ.

ಗಾಂಧಿ ಕುಟುಂಬಕ್ಕೆ ದೇಶದಲ್ಲಿ ಪ್ರತ್ಯೇಕ ಕಾನೂನಿದೆ ಎಂದು ಕಾಂಗ್ರೆಸ್ ನಂಬಿದೆ

ರಾಹುಲ್ ವಿರುದ್ಧ ಸ್ಮೃತಿ ಇರಾನಿ ವಾಗ್ದಾಳಿ

ಬೆಂಗಳೂರು, ಮಾ.28– ಗಾಂಧಿ ಕುಟುಂಬಕ್ಕೆ ದೇಶದಲ್ಲಿ ಕಾನೂನು ವಿಭಿನ್ನವಾಗಿದೆ ಎಂದು ಕಾಂಗ್ರೆಸ್ ಪಕ್ಷದ ಜನರು ನಂಬಿದಂತಿದೆ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಸ್ಮೃತಿ ಇರಾನಿ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಭಾರತ ಜನತಾ ಯುವ ಮೋರ್ಚಾ ವತಿಯಿಂದ ಯುವ ಸಂವಾದದ ಅಂಗವಾಗಿ ಪಿಇಎಸ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಪ್ರಥಮ ಬಾರಿ ಮತ ಚಲಾಯಿಸುತ್ತಿರುವ ಯುವ ಜನತೆಯೊಂದಿಗಿನ ಸಂವಾದದಲ್ಲಿ ಅವರು ಮಾತನಾಡಿದರು.



ರಾಹುಲ್ ಗಾಂಧಿ



ಸ್ಮೃತಿ ಇರಾನಿ

ರಾಹುಲ್ ಗಾಂಧಿ ಅವರನ್ನು ಲೋಕಸಭೆಯಿಂದ ಅನರ್ಹಗೊಳಿಸುವುದು ರಾಜಕೀಯ ವಾತಾವರಣದ ಮೇಲೆ ಹೇಗೆ ಪರಿಣಾಮ ಬೀರುತ್ತದೆ ಎಂದು ಕೇಳಿದ ವಿದ್ಯಾರ್ಥಿಗೆ ಪ್ರತಿಕ್ರಿಯಿಸಿದ ಅವರು, ಗಾಂಧಿ ಕುಟುಂಬವು ತಮಗೆ ಪ್ರತ್ಯೇಕ ಕಾನೂನಿದೆ ಎಂದು ನಂಬುತ್ತದೆ ಎಂದು ಹೇಳಿದರು.

ನೀವು ರಾಹುಲ್ ಗಾಂಧಿ ಎಂಬ ಕಾರಣಕ್ಕೆ ನೀವು ಇಡೀ ಸಮುದಾಯದ ವಿರುದ್ಧ ಜನಾಂಗೀಯ ನಿಂದನೆಯನ್ನು ಮಾಡಬಹುದು ಮತ್ತು ಕಾನೂನಿನ ಮೂಲಕ ಜವಾಬ್ದಾರರಾಗಿರಬಾರದು ಎಂದು ಪ್ರಜಾಪ್ರಭುತ್ವದಲ್ಲಿ ನಾವು ಹೇಳಬೇಕೇ. ಗಾಂಧಿ ಕುಟುಂಬದೊಂದಿಗೆ ವ್ಯವಹರಿಸುವ ಕಾನೂನು ಪ್ರತ್ಯೇಕವಾಗಿರಬೇಕು ಎಂದು ಅವರ ಪಕ್ಷದವರು ದಾಖಲೆಯಲ್ಲಿ ಹೇಳಿದ್ದಾರೆ ಎಂದು ವ್ಯಂಗ್ಯವಾಡಿದರು.

ಸರ್ಕಾರ ರಾಹುಲ್ ಗಾಂಧಿಯವರನ್ನು ಸಂಸದ ಸ್ಥಾನದಿಂದ ಅನರ್ಹಗೊಳಿಸಿಲ್ಲ. ಕೋರ್ಟ್ ತೀರ್ಪನ್ನು ಆಧರಿಸಿ ಸಭಾಪತಿಗಳು ಈ ನಿರ್ಣಯ ಕೈಗೊಂಡಿದ್ದಾರೆ. ಹಿಂದುಳಿದ ವರ್ಗವನ್ನು ದೂಷಿಸಿದ ಕಾರಣಕ್ಕಾಗಿ ಕೋರ್ಟ್‌ನಿಂದ ಈ ತೀರ್ಪು ಬಂದಿದೆ. ರಾಹುಲ್ ಕೇವಲ ಒಬ್ಬ ವ್ಯಕ್ತಿಯನ್ನು ಟೀಕಿಸಿಲ್ಲ, ಬದಲಾಗಿ ಒಂದಿಡೀ ಸಮುದಾಯವನ್ನು ಹೀಗಳೆದಿದ್ದಾರೆ. ನ್ಯಾಯಾಲಯ ತೀರ್ಪು ನೀಡಿದ ಬಳಿಕ ಅದರನ್ವಯವಾಗಿ ಸಭಾಪತಿಗಳು ಸಂವಿಧಾನಬದ್ಧವಾಗಿ ಕ್ರಮ ವಹಿಸಿದ್ದಾರೆ ಎಂದರು. ಗಾಂಧಿ ಅವರು ಕಾನೂನಿಗಿಂತ ಮೇಲಿನವರು ಎಂದು ಭಾವಿಸುತ್ತಾರೆ ಮತ್ತು ನ್ಯಾಯಾಲಯವು ಅವರನ್ನು ತಪ್ಪಿತಸ್ಥರನ್ನಾಗಿ ಮಾಡಲು ಸಾಧ್ಯವಿಲ್ಲ ಎಂದು ತಿಳಿದಿದ್ದಾರೆ ಅವರು ಹೇಳಿದರು.

ರಾಹುಲ್ ಗಾಂಧಿ ಕಾನೂನಿಗಿಂತ ಮೇಲಿದ್ದಾರೆ ಮತ್ತು ಈ ದೇಶದ ಯಾವುದೇ ನ್ಯಾಯಾಲಯವು ಅವರನ್ನು ಹೊಣೆಗಾರರನ್ನಾಗಿ ಮಾಡುವುದಿಲ್ಲ ಎಂದು ಅವರು ನಂಬಿದ್ದಾರೆ ಎಂದು ಸ್ಮೃತಿ ಇರಾನಿ ಲೇವಡಿ ಮಾಡಿದರು.

ಬಡ ಕಲಾವಿದರ ಮೇಲೆ ದುಡ್ಡೆಸೆದ ಡಿಕೆಶಿ: ಕಟೀಲ್ ವಾಗ್ದಾಳಿ



ಬೆಂಗಳೂರು: ಕಾಂಗ್ರೆಸ್ ರಥಯಾತ್ರೆಗೆ ಕರೆಸಿದ್ದ ಬಡ ಕಲಾವಿದರ ಮೇಲೆ ದುಡ್ಡೆಸೆದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ದುರಹಂಕಾರ ತೋರಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತ ವಿಡಿಯೋವೊಂದನ್ನು ತಮ್ಮ ಟ್ವೀಟರ್ ಖಾತೆಯಲ್ಲಿ ಹಂಚಿಕೊಂಡಿರುವ ನಳಿನ್‌ಕುಮಾರ್ ಕಟೀಲ್, ಕೋಟೆ ಕಟ್ಟಿ ಮೆರೆದೋರೆಲ್ಲ ಏನಾದರು? ಎಂದು ಪ್ರಶ್ನಿಸಿದ್ದು, ದುಡ್ಡಿನಿಂದಲೇ ಎಲ್ಲರನ್ನೂ ಕೊಳ್ಳುತ್ತೇನೆಂಬ ದುರಹಂಕಾರ ಒಳ್ಳೆಯದಲ್ಲ ಎಂದಿದ್ದಾರೆ. ಕಾಂಗ್ರೆಸ್ ಯಾತ್ರೆಗೆ ಕರೆಸಿದ್ದ ಬಡ ಕಲಾವಿದರ ಮೇಲೆ ದುಡ್ಡೆಸೆದು ದುರಹಂಕಾರ ತೋರಿಸಿದ್ದೀರಲ್ಲ, ರಾಜ್ಯದ ಜನತೆ ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದು ಡಿಕೆ ಶಿವಕುಮಾರ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೆಕ್ಸಿಕೋ ವಲಸಿಗರ ಕೇಂದ್ರದಲ್ಲಿ ಭಾರೀ ಬೆಂಕಿ ದುರಂತ: 37 ಸಾವು, 100ಕ್ಕೂ ಹೆಚ್ಚು ಮಂದಿಗೆ ಗಾಯ

ಮೆಕ್ಸಿಕೋ: ಅಮೆರಿಕಾ ಮತ್ತು ಮೆಕ್ಸಿಕನ್ ಗಡಿಯಲ್ಲಿರುವ ಸಿಯುಡಾಡ್ ಜುವಾರೆಜ್‌ನ ವಲಸಿಗರ ಕೇಂದ್ರದಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದ್ದು ಇದರಲ್ಲಿ ಕನಿಷ್ಠ 37 ಮಂದಿ ಸಾವನ್ನಪ್ಪಿದ್ದು ಸುಮಾರು 100 ಮಂದಿ ಗಾಯಗೊಂಡರು.

ಮೆಕ್ಸಿಕೊ ಮತ್ತು ಅಮೆರಿಕಾವನ್ನು ಸಂಪರ್ಕಿಸುವ ಸ್ಟಾಂಟನ್–ಲೆರ್ಡ್ರೆ ಸೇತುವೆಯ ಬಳಿ ಇರುವ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಫಾರ್ ಮೈಗ್ರೇಷನ್ (INM) ಕಚೇರಿಯಲ್ಲಿ ಬೆಂಕಿ ಕಾಣಿಸಿಕೊಂಡು ಈ ದುರಂತ ಸಂಭವಿಸಿದೆ.

ಕಳೆದ ತಡರಾತ್ರಿ ಸುಮಾರು 71 ವಲಸಿಗರನ್ನು ಕೇಂದ್ರಕ್ಕೆ ಕರೆತಂದ ಸ್ವಲ್ಪ ಸಮಯದ ಬಳಿಕ ಈ ಘಟನೆ ಸಂಭವಿಸಿದೆ. ಬೆಂಕಿಗೆ ಕಾರಣ ಅಥವಾ ಮೃತರ ರಾಷ್ಟ್ರೀಯತೆ ಇನ್ನೂ ತಿಳಿದುಬಂದಿಲ್ಲ.

ಎಲ್ ಪಾಸೊ ಟೆಕ್ಸಾಸ್‌ನಿಂದ ರಿಯೊ ಗ್ರಾಂಡೆ ನದಿಗೆ ಅಡ್ಡಲಾಗಿರುವ ಮೆಕ್ಸಿಕನ್ ನಗರವಾದ ಸಿಯುಡಾಡ್ ಜುರೆಜ್ ಇತ್ತೀಚಿನ ವಾರಗಳಲ್ಲಿ ಜನರ ಒಳಹರಿವನ್ನು ಕಂಡಿದೆ ಎಂದು ಬಿಬಿಸಿ ವರದಿ ಮಾಡಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಎನ್.ಆರ್.ಕ್ಷೇತ್ರದಿಂದ ಪಕ್ಷೇತರರಾಗಿ ಸ್ಪರ್ಧಿಸುವಂತೆ ಅಯೂಬ್ ಖಾನ್‌ಗೆ ಅಭಿಮಾನಿಗಳ ಆಗ್ರಹ

ಉದಯಗಿರಿಯ ಅವರ ನಿವಾಸದ ಮುಂದೆ ಜಮಾಯಿಸಿ ಘೋಷಣೆ ಕೂಗಿ, ಒತ್ತಡ



ಮೈಸೂರು, ಮಾ.28(ಎಂಕೆ)-ನರಸಿಂಹರಾಜ ವಿಧಾನ ಸಭಾ ಕ್ಷೇತ್ರದಿಂದ ಮಾಜಿ ಮೇಯರ್ ಅಯೂಬ್ ಖಾನ್ ಪಕ್ಷೇತರ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸುವಂತೆ ಸಾವಿರಾರು ಅಭಿಮಾನಿಗಳು ಪಟ್ಟು ಹಿಡಿದ ಘಟನೆ ಮಂಗಳವಾರ ನಡೆಯಿತು.

ಉದಯಗಿರಿಯಲ್ಲಿರುವ ಅಯೂಬ್ ಖಾನ್ ಮನೆ ಎದುರು ಜಮಾಯಿಸಿದ ಅಭಿಮಾನಿಗಳು, ಎನ್‌ಆರ್ ಕ್ಷೇತ್ರದ ಅಭಿವೃದ್ಧಿಗಾಗಿ ಅಯೂಬ್ ಖಾನ್ ಶಾಸಕರಾಗುವುದು ಅನಿವಾರ್ಯ. ಕ್ಷೇತ್ರದ ಮತದಾರರು ಬದಲಾವಣೆ ಬಯಸಿದ್ದು, ಕಾಂಗ್ರೆಸ್ ಟಿಕೆಟ್ ನೀಡದಿದ್ದರೂ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಬೇಕು ಎಂದು ಒತ್ತಾಯಿಸಿದರು.

ಅಭಿವೃದ್ಧಿ ಕಾರ್ಯಕ್ರಮಗಳ ಮೂಲಕ ಕ್ಷೇತ್ರದಲ್ಲಿ ಜನ ಪ್ರಿಯರಾಗಿರುವ ಅಯೂಬ್ ಖಾನ್ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ, ಕಾಂಗ್ರೆಸ್ ಟಿಕೆಟ್ ನೀಡಿಲ್ಲ. ಈ ಕ್ಷೇತ್ರಕ್ಕೆ ಅಯೂಬ್ ಖಾನ್ ಶಾಸಕರಾದರೆ ಮಾದರಿ ಕ್ಷೇತ್ರವಾಗುವುದರಲ್ಲಿ ಅನುಮಾನವಿಲ್ಲ. ಸಾಕಷ್ಟು ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ. ಆದ್ದರಿಂದ ಅವರು ಚುನಾವಣೆಗೆ ಸ್ಪರ್ಧಿಸಲೇಬೇಕು ಎಂದರಲ್ಲದೆ ಎನ್‌ಆರ್ ಕ್ಷೇತ್ರಕ್ಕೆ ಅಯೂಬ್ ಖಾನ್ ಅನಿವಾರ್ಯ ಎಂಬ ಘೋಷಣೆ ಕೂಗಿದರು.

ಯುವಕರು, ಮಹಿಳೆಯರು, ವಯೋವೃದ್ಧರು ಸೇರಿದಂತೆ ಸಾವಿರಕ್ಕೂ ಹೆಚ್ಚು ಮಂದಿ 'ಸಾಮಾಜಿಕ ಅನಿಷ್ಟಗಳಿಂದ ಎನ್‌ಆರ್ ಕ್ಷೇತ್ರ ಉಳಿಸಿ', 'ಅಯೂಬ್ ಖಾನ್ ಫಾರ್ ಡೆವಲಪ್‌ಮೆಂಟ್' ಎಂಬ ಘೋಷಣಾ ಫಲಕಗಳನ್ನು ಪ್ರದರ್ಶಿಸಿದರು. ಎನ್‌ಆರ್ ಕ್ಷೇತ್ರದಲ್ಲಿ ಅಯೂಬ್ ಖಾನ್ ಸ್ಪರ್ಧಿಸಲೇಬೇಕು. ಇಲ್ಲವಾದರೆ ಮನೆ ಮುಂದೆ ಪ್ರತಿದಿನ ಜಮಾಯಿಸುತ್ತೇವೆ ಎಂದು ಅಭಿಮಾನ ಮೆರೆದರು.

2 ದಿನ ಸಮಯಾವಕಾಶ ಕೊಡಿ; ಅಯೂಬ್ ಖಾನ್ ಮನವಿ

ಅಭಿಮಾನಿಗಳ ಬಳಿಗೆ ಆಗಮಿಸಿದ ಮಾಜಿ ಮೇಯರ್ ಅಯೂಬ್ ಖಾನ್, ಈಗಾಗಲೇ ಕಾಂಗ್ರೆಸ್‌ನಿಂದ ಎನ್‌ಆರ್ ಕ್ಷೇತ್ರದ ಅಭ್ಯರ್ಥಿ ಘೋಷಣೆ ಮಾಡಲಾಗಿದೆ. ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಬೇಕೇ ಎಂಬುದನ್ನು ಮುಸ್ಲಿಂ ಸಮುದಾಯದ ಧಾರ್ಮಿಕ ಗುರುಗಳು, ರಾಜಕೀಯ ಮಾರ್ಗದರ್ಶಕರು, ಆತ್ಮೀಯರೊಂದಿಗೆ ಚರ್ಚಿಸಿ ತಿಳಿಸಲಾಗುವುದು. ಅದಕ್ಕಾಗಿ 2 ದಿನ ಸಮಯಾವಕಾಶ ನೀಡಿ ಎಂದು ಅಭಿಮಾನಿಗಳನ್ನು ಸಮಾಧಾನಪಡಿಸಿದರು.

ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಕಳೆದ 25-30 ವರ್ಷ ಕಾಂಗ್ರೆಸ್‌ನಲ್ಲಿದ್ದು, ಉಪ ಮೇಯರ್, ಮೇಯರ್ ಸ್ಥಾನದಲ್ಲಿ ಕೆಲಸ ಮಾಡಿದ್ದೇನೆ. ಹಾಲಿ ನಗರ ಪಾಲಿಕೆ ವಿಪಕ್ಷ ನಾಯಕನಾಗಿಯೂ ಕೆಲಸ ಮಾಡುತ್ತಿದ್ದೇನೆ. ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಟಿಕೆಟ್ ನೀಡುವಂತೆ ಅರ್ಜಿ ಸಲ್ಲಿಸಿದ್ದೆ. ಆದರೆ, ಪಕ್ಷದ ವರಿಷ್ಠರು ಹಾಲಿ ಶಾಸಕರಿಗೆ ಟಿಕೆಟ್ ಘೋಷಣೆ ಮಾಡಿದ್ದಾರೆ. ಇದರ ನಡುವೆ ಕಳೆದ 3 ದಿನಗಳಿಂದ ಅಭಿಮಾನಿಗಳು ಮನೆ ಬಳಿ ಬಂದು ಚುನಾವಣೆಗೆ ಸ್ಪರ್ಧಿಸಲೇಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಈ ಕುರಿತು ನನ್ನ ರಾಜಕೀಯ ಗುರುಗಳಾದ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ, ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಬೇಕೋ ಬೇಡವೋ ಎಂಬುದನ್ನು ನಿರ್ಧರಿಸಲಾಗುವುದು ಎಂದರು.

ಜೆಡಿಎಸ್‌ನಿಂದ ಆಹ್ವಾನ: ಎನ್‌ಆರ್ ಕ್ಷೇತ್ರದಿಂದ ಟಿಕೆಟ್ ನೀಡುವುದಾಗಿ ಜೆಡಿಎಸ್‌ನಿಂದ ಆಹ್ವಾನ ಬಂದಿದೆ. ಅಲ್ಲದೆ ಹಲವರು ಪಕ್ಷೇತರರಾಗಿ ಸ್ಪರ್ಧಿಸಿ ಎನ್ನುತ್ತಿದ್ದು, ಸದ್ಯದಲ್ಲಿಯೇ ಒಂದು ನಿರ್ಧಾರಕ್ಕೆ ಬರಲಾಗುವುದು ಎಂದು ತಿಳಿಸಿದರು.



ಮೈಸೂರು ವಿಶ್ವವಿದ್ಯಾನಿಲಯದ ನೂತನ ಕುಲಪತಿ ಲೋಕನಾಥ್ ಅವರನ್ನು ಕರ್ನಾಟಕ ರಾಜ್ಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಜೆ.ಗೋವಿಂದರಾಜು ಅಭಿನಂದಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ರೇವಣ್ಣ, ವಿಭಾಗೀಯ ಮಟ್ಟದ ಉಪಾಧ್ಯಕ್ಷ ಹೇಮಂತ್‌ಕುಮಾರ್, ಪದಾಧಿಕಾರಿಗಳಾದ ಶ್ರೀಪತಿ, ಸತೀಶ್, ರೇವಣ್ಣ, ಪ್ರದೀಪ್, ಶ್ರೀನಿವಾಸ್, ರಮೇಶ್ ಉಪಸ್ಥಿತರಿದ್ದರು.

ಮುಂಬೈ-ಬೆಂಗಳೂರು 'ಉದ್ಯಾನ್ ಎಕ್ಸ್‌ಪ್ರೆಸ್' ಮೈಸೂರಿಗೆ ವಿಸ್ತರಿಸಲು ರೈಲ್ವೆ ಸಚಿವರಿಗೆ ಸಂಸದ ಪ್ರತಾಪ್ ಸಿಂಹ ಮನವಿ

ಮೈಸೂರು, ಮಾ.28(ಎಸ್‌ಬಿಡಿ)- ಮುಂಬೈ-ಬೆಂಗಳೂರು ನಡುವಿನ 'ಉದ್ಯಾನ್ ಎಕ್ಸ್‌ಪ್ರೆಸ್' ರೈಲು ಸಂಚಾರವನ್ನು ಮೈಸೂರಿಗೆ ವಿಸ್ತರಿಸುವಂತೆ ಮೈಸೂರು-ಕೊಡಗು ಸಂಸದ ಪ್ರತಾಪ್ ಸಿಂಹ, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಸಚಿವರಿಗೆ ಮನವಿ ನೀಡಿದ ಪ್ರತಾಪ್ ಸಿಂಹ, ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್(ಸಿಎಸ್‌ಟಿ)- ಬೆಂಗಳೂರಿನ ಕೆಎಸ್‌ಆರ್ ಸಿಟಿ ಜಂಕ್ಷನ್ ನಡುವೆ 'ಉದ್ಯಾನ್ ಎಕ್ಸ್‌ಪ್ರೆಸ್' ಸಂಚರಿಸುತ್ತಿದ್ದು, ಈ ಮಾರ್ಗವನ್ನು ಮೈಸೂರಿಗೆ ವಿಸ್ತರಿಸಬೇಕು. ಪ್ರತಿದಿನ ಬೆಂಗಳೂರು ಸಿಟಿ ಜಂಕ್ಷನ್‌ನಿಂದ ಮುಂಬೈ ಸಿಎಸ್‌ಟಿಗೆ ಚಲಿಸುವ ಈ ಎಕ್ಸ್‌ಪ್ರೆಸ್(ರೈಲು ನಂ.11301/02) ಮೈಸೂರಿನಿಂದ ಆರಂಭವಾದರೆ ತುಂಬಾ ಅನುಕೂಲವಾಗಲಿದೆ ಎಂಬುದು ಈ ಮಾರ್ಗದಲ್ಲಿ ಸಂಚರಿಸುವ ಸಾಮಾನ್ಯ ಪ್ರಯಾಣಿಕರ ಪ್ರಬಲ ಆಗ್ರಹವಾಗಿದೆ ಎಂದು ಮನದಟ್ಟು ಮಾಡಿದರು.



ಮುಂಬೈ-ಬೆಂಗಳೂರು ನಡುವಿನ 'ಉದ್ಯಾನ್ ಎಕ್ಸ್‌ಪ್ರೆಸ್' ರೈಲು ಸಂಚಾರವನ್ನು ಮೈಸೂರಿಗೆ ವಿಸ್ತರಿಸುವಂತೆ ಸಂಸದ ಪ್ರತಾಪ್ ಸಿಂಹ, ಕೇಂದ್ರದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಸಲ್ಲಿಸಿದರು.

> "ಉದ್ಯಾನ್ ಎಕ್ಸ್‌ಪ್ರೆಸ್ ರೈಲು ಬೆಂಗಳೂರಿನಲ್ಲಿ 12 ಗಂಟೆಗೂ ಹೆಚ್ಚು ಕಾಲ ಇರುತ್ತದೆ ಎಂದು ಸ್ಥಳೀಯ ರೈಲ್ವೆ ಅಧಿಕಾರಿಗಳಿಂದ ತಿಳಿದಿದ್ದೇನೆ. ಹಾಗಾಗಿ ಮೈಸೂರಿಗೆ ವಿಸ್ತರಿಸುವ ಸಾಧ್ಯತೆಯನ್ನು ಗಂಭೀರವಾಗಿ ಪರಿಶೀಲಿಸಬೇಕು. ಮೈಸೂರಿನಿಂದ ಮುಂಬೈಗೆ ದೈನಂದಿನ ನೇರ ರೈಲು ಸಂಪರ್ಕಬೇಕೆಂಬ ಪ್ರಯಾಣಿಕರ ಬಹುಕಾಲದ ಬೇಡಿಕೆಯನ್ನು ಈಡೇರಿಸುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು.
> -ಪ್ರತಾಪ್ ಸಿಂಹ, ಸಂಸದ

ಉದ್ಯಾನ್ ಎಕ್ಸ್‌ಪ್ರೆಸ್ ಮೈಸೂರಿಗೆ ವಿಸ್ತರಣೆಯಿಂದ ಸಾಕಷ್ಟು ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಕನಿಷ್ಠ ವೆಚ್ಚದಲ್ಲಿ ಅತ್ಯಂತ ಸುರಕ್ಷಿತ ಹಾಗೂ ವೇಗವಾಗಿ ಪ್ರಯಾಣ ಜನರಿಗೆ ಲಭ್ಯವಾಗಲಿದೆ. ಜೊತೆಗೆ ಉಭಯ ನಗರಗಳ ಆರ್ಥಿಕ ಪ್ರಗತಿಗೂ ನೆರವಾಗಲಿದೆ. ಮುಂಬೈ ಭಾರತದ ಆರ್ಥಿಕ ರಾಜಧಾನಿಯಾಗಿರುವುದರಿಂದ ಪ್ರಮುಖವಾಗಿ ಮೈಸೂರು ವಿಭಾಗದ ಆರ್ಥಿಕ ಬೆಳವಣಿಗೆಗೆ ಸಾಕಷ್ಟು ಸಹಕಾರಿಯಾಗಲಿದೆ. ಇದರಿಂದ ಮೈಸೂರು ಮಾತ್ರವಲ್ಲದೆ ಕೊಡಗು, ಚಾಮರಾಜನಗರ, ಮಂಡ್ಯ ಮತ್ತು ಹಾಸನ ಸೇರಿದಂತೆ ನೆರೆಹೊರೆಯ ಜಿಲ್ಲೆಗಳ ಜನರಿಗೂ ಪ್ರಯೋಜನಗಳಿವೆ. ಒಟ್ಟಾರೆ ಮೈಸೂರು ಮತ್ತು ಮುಂಬೈ ನಡುವೆ ದೈನಂದಿನ ರೈಲು ಸಂಪರ್ಕ ವರದಾನವಾಗಲಿದೆ ಎಂದು ತಿಳಿಸಿದ್ದಾರೆ.

ಮೈಸೂರು-ಬೆಂಗಳೂರು ಎಕ್ಸ್‌ಪ್ರೆಸ್ ವೇ ನಿರ್ಮಾಣದೊಂದಿಗೆ ಮೈಸೂರು ನಗರ ಬೃಹತ್ ಬೆಳವಣಿಗೆಗೆ ಸಜ್ಜಾಗಿದೆ. ಇದರೊಂದಿಗೆ ಭಾರತದ ಮೊದಲ ಚಿಪ್ ತಯಾರಿಕಾ ಘಟಕ ಸೇರಿದಂತೆ ಇಂಟರ್ ನ್ಯಾಷನಲ್ ಸೆಮಿಕಂಡಕ್ಟರ್ ಕನ್ಸೋರ್ಟಿಯಂ, ಸಿಲ್ಕ್ ಕ್ಲಸ್ಟರ್, ಸ್ಟಾರ್ಟ್ ಅಪ್ ಹಬ್ ಮತ್ತು ಸೈಬರ್ ಸೆಕ್ಯುರಿಟಿ ಎಕೋಸಿಸ್ಟಮ್ ಇನ್ನಿತರ ಮಹತ್ವದ ಯೋಜನೆಗಳೊಂದಿಗೆ ಮೈಸೂರು ಅದ್ಭುತ ಬೆಳವಣಿಗೆಯತ್ತ ಹೆಜ್ಜೆ ಇಟ್ಟಿದೆ. ಈ ಸಂದರ್ಭದಲ್ಲಿ ಮಹಾರಾಷ್ಟ್ರ, ಗುಜರಾತ್ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆ ಕೌಶಲ್ಯವುಳ್ಳ ಹಾಗೂ ಕೌಶಲ್ಯರಹಿತ ಕಾರ್ಮಿಕರು ಪ್ರಯಾಣಿಸಲು ಅನುಕೂಲವಾಗುತ್ತದೆ ಎಂದು ಹೇಳಿದ್ದಾರೆ.

ಈ ರೈಲು ಬೆಂಗಳೂರಿನಲ್ಲಿ 12 ಗಂಟೆಗೂ ಹೆಚ್ಚು ಕಾಲ ಇರುತ್ತದೆ ಎಂದು ಸ್ಥಳೀಯ ರೈಲ್ವೆ ಅಧಿಕಾರಿಗಳಿಂದ ತಿಳಿದಿದ್ದೇನೆ. ಹಾಗಾಗಿ ಮೈಸೂರಿಗೆ ವಿಸ್ತರಿಸುವ ಸಾಧ್ಯತೆಯನ್ನು ಗಂಭೀರವಾಗಿ ಪರಿಶೀಲಿಸಬೇಕು. ಮೈಸೂರಿಂದ ಮುಂಬೈಗೆ ದೈನಂದಿನ ನೇರ ರೈಲು ಸಂಪರ್ಕಬೇಕೆಂಬ ಪ್ರಯಾಣಿಕರ ಬಹುಕಾಲದ ಬೇಡಿಕೆಯನ್ನು ಈಡೇರಿಸುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ಸಂಸದ ಪ್ರತಾಪ್ ಸಿಂಹ ಮನವಿ ಮಾಡಿದ್ದಾರೆ. ಮೈಸೂರು ಮತ್ತು ಮುಂಬೈ ನಡುವೆ ವೇಗದ ಮತ್ತು ತಡೆರಹಿತ ರೈಲು ಸೇವೆ ಆರಂಭಿಸಿದ ನಂತರ ಕೊಡಗಿನಿಂದ ಕಾಫಿ ಮತ್ತು ಮಸಾಲೆ ಪದಾರ್ಥಗಳ ಜೊತೆಗೆ, ಟ್ರಕ್ ಟೈರ್‌ಗಳು, ತ್ವರಿತ ಆಹಾರ, ಅಗರ್ ಬತ್ತಿಗಳು, ಕರಕುಶಲ ವಸ್ತುಗಳು, ಮೋಟಾರ್ ಸೈಕಲ್, ಕೈಗಾರಿಕಾ ಗೇರ್‌ಗಳು ಇನ್ನಿತರ ಉತ್ಪನ್ನಗಳ ಸಾಗಾಣಿಕೆ ಮತ್ತಷ್ಟು ತ್ವರಿತಗೊಳ್ಳಲಿದೆ ಎಂದು ಕೇಂದ್ರದ ರೈಲ್ವೆ ಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಬೆಂಗಳೂರು-ಮೈಸೂರು ಡಬಲ್ ಲೈನ್ ಬ್ರಾಡ್‌ಗೇಜ್ ರೈಲು ಮಾರ್ಗದಲ್ಲಿ ರೈಲುಗಳ ಸಂಚಾರ ಹೆಚ್ಚಳಕ್ಕೆ ಸಂಸದ ಸಿಂಹ ಮನವಿ

ಮೈಸೂರು,ಮಾ.28(ಪಿಎಂ)- ಸಂಪೂರ್ಣ ವಿದ್ಯುದೀಕರಣಗೊಂಡ ಡಬಲ್ ಲೈನ್ ಬ್ರಾಡ್‌ಗೇಜ್ ಬೆಂಗಳೂರು-ಮೈಸೂರು ರೈಲು ಮಾರ್ಗದಲ್ಲಿ ಸದರಿ ಮಾರ್ಗದ ಸಾಮರ್ಥ್ಯಕ್ಕೆ ಅನುಗುಣವಾಗಿ ರೈಲುಗಳ ಸಂಖ್ಯೆ ಹೆಚ್ಚಳ ಮಾಡುವ ಮೂಲಕ ಸಮೂಹ ಕ್ಷಿಪ್ರ ಸಾರಿಗೆ ವ್ಯವಸ್ಥೆ ಜಾರಿಗೊಳಿಸುವ ಸಂಬಂಧ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಸಂಸದ ಪ್ರತಾಪ್ ಸಿಂಹ ಮನವಿ ಸಲ್ಲಿಸಿದ್ದಾರೆ.

ಸಚಿವರನ್ನು ಭೇಟಿ ಮಾಡಿ ಅವರೊಂದಿಗೆ ಈ ಸಂಬಂಧ ಚರ್ಚಿಸಿದ ಸಂಸದರು, ಬಳಿಕ ಮನವಿ ಸಲ್ಲಿಸಿದರು. 140 ಕಿ.ಮೀ. ಉದ್ದದ ಬೆಂಗಳೂರು-ಮೈಸೂರು ಡಬಲ್ ಲೈನ್ ಯೋಜನೆ ಪೂರ್ಣಗೊಳಿಸುವ ವೇಳೆಗೆ ವೆಚ್ಚ ಅಂದಾಜಿಗಿಂತ ದುಪ್ಪಟ್ಟಾಗಿದೆ. ಈ ಮಾರ್ಗದ ಸಾಮರ್ಥ್ಯಕ್ಕೆ ಅನುಗುಣವಾಗಿ ರೈಲುಗಳ ಸಂಚಾರಕ್ಕೆ ಕ್ರಮ ವಹಿಸಿಲ್ಲ. ಸದರಿ ಮಾರ್ಗದಲ್ಲಿ 24 ಗಂಟೆ ಅವಧಿಯಲ್ಲಿ ಇನ್ನು ಹೆಚ್ಚಿನ ರೈಲುಗಳ ಸಂಚಾರಕ್ಕೆ ಅವಕಾಶವಿದೆ. ಆದರೆ ಪ್ರಸ್ತುತ ಶೇ.65ರಿಂದ 70ರಷ್ಟು ಮಾತ್ರ ಸಂಚಾರವಿದ್ದು, ಇದನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಂಡರೆ, ಡಬಲ್ ಲೈನ್ ನಿರ್ಮಾಣಕ್ಕೆ ಭರಿಸಿರುವ ಹೆಚ್ಚಿನ ವೆಚ್ಚವನ್ನು ಸರಿದೂಗಿಸಲು ಸಾಧ್ಯವಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.



ಸದರಿ ಮಾರ್ಗದಲ್ಲಿ 35 ರೈಲುಗಳು ಈಗ ಸಂಚಾರ ಮಾಡುತ್ತಿದ್ದು, ಇನ್ನು 20 ರೈಲುಗಳ ಸಂಚಾರಕ್ಕೆ ಅವಕಾಶವಿದೆ. ಇದಾದಲ್ಲಿ ಆದಾಯವೂ ಹೆಚ್ಚುವಾಗಲಿದೆ ಹಾಗಾಗಿ ಸಾಧ್ಯತೆ ಇರುವೆಡೆ ಮೆಮು ರೈಲು ಸಂಚಾರಕ್ಕೆ ಅವಕಾಶ ಕಲ್ಪಿಸಬೇಕಿದೆ. ಇದರಿಂದ ರಸ್ತೆಯ ಸಂಚಾರ ದಟ್ಟಣೆ ತಗ್ಗಲಿದೆ. ಬೆಂಗಳೂರು-ಮೈಸೂರು ವಲಯದಲ್ಲಿ ಬೃಹತ್ ಕ್ಷಿಪ್ರ ಸಾರಿಗೆ ವ್ಯವಸ್ಥೆ ಪರಿಚಯಿಸುವ ಅಭಿಮತವನ್ನು ನಗರ ಯೋಜನೆ ತಜ್ಞರು ನನ್ನೊಂದಿಗೆ ವ್ಯಕ್ತಪಡಿಸಿದ್ದಾರೆ. ಈ ನಿಟ್ಟಿನಲ್ಲಿ ಡಬಲ್ ಲೈನ್ ಸಾಮರ್ಥ್ಯದ ಪೂರ್ಣ ಬಳಕೆ ಸೂಕ್ತವಾಗಿದೆ. ಬೆಳೆಯುತ್ತಿರುವ ನಗರಗಳಲ್ಲಿ ಕಡಿಮೆ ವೆಚ್ಚದ ಸಮೂಹ ಕ್ಷಿಪ್ರ ಸಾರಿಗೆ ವ್ಯವಸ್ಥೆಯು ನಾಗರಿಕರಿಗೆ ಅನುಕೂಲ ಮಾಡಿಕೊಡಲಿದೆ.

ಈ ಹಿನ್ನೆಲೆಯಲ್ಲಿ ರೈಲ್ವೆ ಸಚಿವಾಲಯವು ಬೆಂಗಳೂರು ಮತ್ತು ಮೈಸೂರು ನಡುವೆ ವೇಗವಾಗಿ ಚಲಿಸುವ ರೈಲುಗಳನ್ನು ಪರಿಚಯಿಸುವ ಮೂಲಕ ಅಸ್ತಿತ್ವದಲ್ಲಿರುವ ಕಾರಿಡಾರ್‌ನಲ್ಲಿ ಸಾಮೂಹಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ ಅಳವಡಿಸುವ ಸಾಧ್ಯತೆ ಕಾರ್ಯಗತಗೊಳಿಸಬೇಕಿದೆ. ಇದರಿಂದ ಎರಡು ನಗರಗಳಲ್ಲಿ ವಾಸಿಸುವ ನಾಗರಿಕರು ಸುರಕ್ಷಿತ, ವೇಗದ ಮತ್ತು ಕೈಗೆಟುಕುವ ದರದಲ್ಲಿ ಸಾರಿಗೆ ಸೌಲಭ್ಯ ಪಡೆಯಲಿದ್ದಾರೆ. ಆ ಮೂಲಕ ರಸ್ತೆಯ ಮೇಲಿನ ಖಾಸಗಿ ವಾಹನಗಳ ಸಂಚಾರ ತಗ್ಗಿಸಲಿದೆ. ಅಲ್ಲದೆ, ಅಪಘಾತಗಳಿಗೂ ಕಡಿವಾಣ ಹಾಕಬಹುದು. ಅಲ್ಲದೆ, ಪೆಟ್ರೋಲ್ ಮತ್ತು ಡೀಸೆಲ್ ಬಳಕೆ ಪ್ರಮಾಣವೂ ಕಡಿಮೆ ಯಾಗಲಿದೆ. ಪ್ರಸ್ತುತ ಮೂರು ಜೋಡಿ ಸೇವೆಗಳ ಜೊತೆಗೆ ಹೆಚ್ಚುವರಿ 4 ಮೆಮು ಸೇವೆಗಳನ್ನು ಪರಿಚಯಿಸಲು ಸಾಕಷ್ಟು ಅವಕಾಶವಿದ್ದು, ಈ ಬಗ್ಗೆ ಪರಿಶೀಲಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕೋರಿದ್ದಾರೆ.

ಬ್ಯಾಟರಿ ಸೆಟ್ ಒದಗಿಸಲು ಕೋರಿಕೆ: ಚಂದಾದಾರರಿಗೆ ಅಡೆತಡೆಯಿಲ್ಲದ ಸೇವೆ ನೀಡಲು ಕೊಡಗು ಜಿಲ್ಲೆ ಐದು ತಾಲೂಕುಗಳಲ್ಲಿ ಬಿಎಸ್‌ಎನ್‌ಎಲ್ ಸೈಟ್‌ಗಳಿಗೆ ವಿವಿಧ ಗಾತ್ರದ ಬ್ಯಾಟರಿ ಸೆಟ್‌ಗಳ ಅವಶ್ಯಕತೆ ಪೂರ್ಣಗೊಳಿಸಬೇಕೆಂದೂ ಸಚಿವರಲ್ಲಿ ಸಂಸದರು ಪ್ರತ್ಯೇಕ ಮನವಿ ಸಲ್ಲಿಸಿದ್ದಾರೆ. ಅಶ್ವಿನಿ ವೈಷ್ಣವ್ ಸಂವಹನ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನದ ಕೇಂದ್ರ ಸಚಿವರೂ ಆಗಿರುವ ಹಿನ್ನೆಲೆಯಲ್ಲಿ ಅವರಲ್ಲಿ ಈ ಮನವಿ ಸಲ್ಲಿಸಿದ್ದಾರೆ.

ಮೈಸೂರು-ಮಂಗಳೂರು ದೈನಂದಿನ ರೈಲಿಗೆ ಮನವಿ: ಮೈಸೂರು ಮಾರ್ಗವಾಗಿ ಬೆಂಗಳೂರು ಕೆಎಸ್‌ಆರ್ ಸಿಟಿ ಜಂಕ್ಷನ್-ಮಂಗಳೂರು ಕೇಂದ್ರ ನಿಲ್ದಾಣಕ್ಕೆ ದೈನಂದಿನ ರೈಲು ಸೌಲಭ್ಯ ಕಲ್ಪಿಸುವಂತೆ ಸಂಸದ ಪ್ರತಾಪ್ ಸಿಂಹ ಒತ್ತಾಯಿಸಿದ್ದಾರೆ. ಕುಣಿಗಲ್ ಮೂಲಕ ಬೆಂಗಳೂರು-ಹಾಸನ ರೈಲು ಸಂಚಾರಕ್ಕೆ ಮುನ್ನ ಮೈಸೂರು-ಮಂಗಳೂರು ನಡುವಿನ ರೈಲು ಸಂಚಾರ ಸಮರ್ಪಕವಾಗಿತ್ತು. ಪ್ರಸ್ತುತ ಮೈಸೂರು ಮೂಲಕ ಬೆಂಗಳೂರು-ಮಂಗಳೂರು ಮಾರ್ಗ ವಾರದಲ್ಲಿ 3 ದಿನ ಮಾತ್ರ ರೈಲು ಸಂಚರಿಸುತ್ತಿದೆ. ಬೆಂಗಳೂರು ಭಾಗಕ್ಕೆ ಸೀಮಿತವಾಗಿರುವ ರಮಣೀಯ ಮಾರ್ಗದಲ್ಲಿ ವಿಸ್ಟಾ ಡೋಮ್ ಕೋಚ್‌ಗಳ ಸೌಲಭ್ಯದಿಂದ ಮೈಸೂರಿನ ಜನ ವಂಚಿತರಾಗಿದ್ದಾರೆ. ಬೆಂಗಳೂರು-ಮಂಗಳೂರು ನಡುವೆ ದೈನಂದಿನ ರೈಲು ಸಂಚಾರ ಪುನಾರಂಭಿಸಿದರೆ ಹೋಟೆಲ್ ಹಾಗೂ ಆತಿಥ್ಯ ಉದ್ಯಮಕ್ಕೆ ಚೇತರಿಕೆ ದೊರೆಯುತ್ತದೆ ಎಂದು ಸಂಸದರು ಕೋರಿದ್ದಾರೆ.

ನಾನು ಸರ್ಕಾರಿ ಬಂಗಲೆ ಖಾಲಿ ಮಾಡುತ್ತೇನೆ



ನವದೆಹಲಿ: ರಾಹುಲ್ ಗಾಂಧಿ ಸರ್ಕಾರಿ ನಿವಾಸ ಖಾಲಿ ಮಾಡುವುದಾಗಿ ತಿಳಿಸಿದ್ದಾರೆ. ಈ ಸಂಬಂಧ ಲೋಕಸಭಾ ಕಾರ್ಯದರ್ಶಿಗೆ ಪತ್ರ ಬರೆದಿರುವ ಅವರು, ನಿಮ್ಮ ನೋಟಿಸ್‌ಗೆ ಬದ್ಧನಾಗಿದ್ದು, ಸರ್ಕಾರಿ ಬಂಗಲೆ ಖಾಲಿ ಮಾಡುತ್ತೇನೆ ಎಂದು ಹೇಳಿದ್ದಾರೆ. ಕಳೆದ ನಾಲ್ಕು ಅವಧಿಗಳಲ್ಲಿ ಲೋಕಸಭೆಯ ಚುನಾಯಿತ ಸದಸ್ಯನಾಗಿ, ನಾನು ಇಲ್ಲಿ ಅನೇಕ ಖುಷಿ ಕ್ಷಣಗಳನ್ನು ಕಳೆದಿದ್ದೇನೆ. ಜನರ ಆದೇಶಕ್ಕೆ ಋಣಿಯಾಗಿದ್ದೇನೆ ಎಂದು ರಾಹುಲ್ ಗಾಂಧಿ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ. ನನ್ನ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ, ಖಂಡಿತ ವಾಗಿಯೂ ನಿಮ್ಮ ನೋಟಿಸ್‌ಗೆ ಬದ್ಧನಾಗಿರುತ್ತೇನೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. 2005ರಿಂದ ಅವರಿಗೆ ಬಂಗಲೆ ನೀಡಲಾಗಿತ್ತು. ರಾಹುಲ್ ಗಾಂಧಿ ತುಘಲಕ್ ಲೇನ್‌ನಲ್ಲಿರುವ ಸಂಖ್ಯೆ 12ರ ಸರ್ಕಾರಿ ಬಂಗಲೆಯಲ್ಲಿ ವಾಸವಾಗಿದ್ದರು. ಈಗ ಸಂಸದ ಸ್ಥಾನದಿಂದ ಅನರ್ಹರಾದ ಕಾರಣ ಆ ನಿವಾಸವನ್ನು ಬಿಡಬೇಕಾದ ಪರಿಸ್ಥಿತಿ ರಾಹುಲ್ ಗಾಂಧಿಗೆ ಬಂದಿದೆ. ಮೋದಿ ಉಪನಾಮ ಹೇಳಿಕೆಗೆ ಸಂಬಂಧಿಸಿದಂತೆ ಮಾನ ನಷ್ಟ ಪ್ರಕರಣದಲ್ಲಿ ರಾಹುಲ್ ಗಾಂಧಿ ಅವರಿಗೆ ಗುಜರಾತ್ ನ್ಯಾಯಾಲಯ ದೋಷಿ ಎಂದು ಅಭಿಪ್ರಾಯಪಟ್ಟು ಎರಡು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ. ಇದಾಗಿ ಮರು ದಿನವೇ ರಾಹುಲ್ ಗಾಂಧಿ ವಯನಾಡು ಸಂಸದ ಸ್ಥಾನದಿಂದ ಅನರ್ಹ ರಾಗಿದ್ದರು. ಅನರ್ಹರಾಗಿ 2 ದಿನಗಳ ನಂತರ ಲೋಕಸಭಾ ಕಾರ್ಯದರ್ಶಿ ಮನೆ ಖಾಲಿ ಮಾಡುವಂತೆ ನೋಟೀಸ್ ನೀಡಿ ದ್ದಾರೆ. ಏತನ್ಮಧ್ಯೆ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮಂಗಳವಾರ ತಮ್ಮ ಅಧಿಕೃತ ಬಂಗಲೆಯನ್ನು ಖಾಲಿ ಮಾಡುವಂತೆ ರಾಹುಲ್ ಗಾಂಧಿ ಅವರಿಗೆ ಸೂಚಿಸಿರುವ ಬಗ್ಗೆ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.



ಜಾತ್ಯಾತೀತ ಜನತಾದಳ(ಜೆಡಿಎಸ್)ದ ರಾಜ್ಯ ವಕ್ತಾರರನ್ನಾಗಿ ಜೆಡಿಎಸ್ ಮುಖಂಡರೂ ಆದ ವಕೀಲ ಎನ್.ಆರ್.ರವಿಚಂದ್ರೇಗೌಡ ಅವರನ್ನು ನೇಮಿಸಲಾಗಿದ್ದು, ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ಅವರಿಂದ ಆದೇಶ ಪ್ರತಿಯನ್ನು ಸ್ವೀಕರಿಸಿದರು. ಇದೇ ವೇಳೆ ಪಕ್ಷ ಸಂಘಟನೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಪಕ್ಷ ಬಲವರ್ಧನೆಗೆ ಶ್ರಮಿಸುವಂತೆ ಇಬ್ರಾಹಿಂ ಹೇಳಿದರು.

ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾಗಿ ವೆಂಕಟಪ್ಪ ಅವಿರೋಧ ಆಯ್ಕೆ



ಮೈಸೂರು,ಮಾ.28-ಮೈಸೂರು ಸಿದ್ಧಾರ್ಥನಗರದ ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್‌ನ ಕಾರ್ಯಕಾರಿ ಸಮಿತಿಗೆ ಎರಡು ವರ್ಷಗಳ ಅವಧಿಗೆ ಕಳೆದ ಭಾನುವಾರ ನಡೆದ ಚುನಾವಣೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಕ್ಲಬ್ ಅಧ್ಯಕ್ಷರಾಗಿ ಸಿ.ವೆಂಕಟಪ್ಪ ಅವಿರೋಧವಾಗಿ ಆಯ್ಕೆಯಾದರೆ, ಉಪಾಧ್ಯಕ್ಷರಾಗಿ ಹೆಚ್.ಎಸ್.ಪುಟ್ಟಸ್ವಾಮಿ, ಗೌರವ ಕಾರ್ಯದರ್ಶಿಯಾಗಿ ಅಶೋಕ್ ಸುಬ್ಬೇಗೌಡ, ಜಂಟಿ ಕಾರ್ಯದರ್ಶಿಯಾಗಿ ಡಾ.ಎ.ಎಸ್.ರಾಜೇಗೌಡ, ಖಜಾಂಚಿಯಾಗಿ ಆರ್.ಸಿದ್ದೇಗೌಡ ಆಯ್ಕೆಯಾಗಿದ್ದಾರೆ. ಉಳಿದಂತೆ ಸದಸ್ಯರಾಗಿ ಡಾ.ಪ್ರಕಾಶ್, ಸಿ.ಮನೋಹರ್, ಕೆಂಪೇಗೌಡ, ಡಾ.ಎಸ್.ಸಿ.ಸುರೇಶ್, ಎಸ್.ನಾಗರಾಜು (ಸಕ್ಕರೆ), ಆರ್.ಈರಣ್ಣ, ಟಿ.ಎಲ್.ಗುರುಲಿಂಗೇಗೌಡ ಮತ್ತು ಎಂ.ಪಿ.ಲೋಕೇಶ್ ಆಯ್ಕೆಯಾಗಿದ್ದಾರೆ ಎಂದು ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್‌ನ ಪತ್ರಿಕಾ ಪ್ರಕಟಣೆ ತಿಳಿಸಿದೆ.

ಪಿಎಫ್ ಠೇವಣಿ ಮೇಲಿನ ಬಡ್ಡಿ ಶೇಕಡ 8.15ಕ್ಕೆ ಹೆಚ್ಚಳ

ನವದೆಹಲಿ: ನೌಕರರ ಭವಿಷ್ಯ ನಿಧಿ ಸಂಘಟನೆಯು (ಇಪಿಎಫ್‌ಒ) 2022-23ನೇ ಹಣಕಾಸು ವರ್ಷಕ್ಕೆ ನೌಕರರ ಪಿ.ಎಫ್. ಠೇವಣಿಗಳಿಗೆ ಬಡ್ಡಿಯನ್ನು ಶೇಕಡ 8.15ಕ್ಕೆ ಹೆಚ್ಚಿಸಿದೆ.

ಹಿಂದಿನ ಹಣಕಾಸು ವರ್ಷದಲ್ಲಿ (2021-22) ಬಡ್ಡಿಯನ್ನು ಶೇ.8.1ಕ್ಕೆ ನಿಗದಿ ಮಾಡಲಾಗಿತ್ತು. ಇದು ನಾಲ್ಕು ದಶಕಗಳ ಕನಿಷ್ಠ ಪ್ರಮಾಣವಾಗಿತ್ತು. 2020-21ರಲ್ಲಿ ಶೇ 8.5ರಷ್ಟು ಬಡ್ಡಿ ನೀಡಲಾಗಿತ್ತು. ಕೇಂದ್ರ ಕಾರ್ಮಿಕ ಸಚಿವ ಭೂಪೇಂದ್ರ ಯಾದವ್ ನೇತೃತ್ವದ ಇಪಿಎಫ್‌ಒ ಧರ್ಮದರ್ಶಿಗಳ ಮಂಡಳಿಯು 2022-23ನೇ ಸಾಲಿಗೆ ಶೇ 8.15ರಷ್ಟು ಬಡ್ಡಿ ನೀಡುವಂತೆ ಶಿಫಾರಸು ಮಾಡಿದೆ ಎಂದು ಕಾರ್ಮಿಕ ಸಚಿವಾಲಯದ ಪ್ರಕಟಣೆ ತಿಳಿಸಿದೆ.

ಜ್ಞಾನವಾಪಿ ಮಸೀದಿ ಪ್ರಕರಣ: ಏ.21ರಂದು ಸುಪ್ರೀಂ ವಿಚಾರಣೆ

ನವದೆಹಲಿ: ಜ್ಞಾನವಾಪಿ ಮಸೀದಿ ಸಂಕೀರ್ಣದ ವಿವಾದಕ್ಕೆ ಸಂಬಂಧಿಸಿದ ಎಲ್ಲ ಅರ್ಜಿಗಳನ್ನು ಕ್ರೋಢೀಕರಿಸುವಂತೆ ಹಿಂದೂ ಕಡೆಯ ಅರ್ಜಿದಾರರ ಮನವಿಯನ್ನು ಏ.21ರಂದು ವಿಚಾರಣೆಗೆ ಪಟ್ಟಿ ಮಾಡಲು ಸುಪ್ರೀಂಕೋರ್ಟ್ ಮಂಗಳವಾರ ಸಮ್ಮತಿಸಿದೆ.



ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ನ್ಯಾಯಮೂರ್ತಿಗಳಾದ ಪಿ.ಎಸ್.ನರಸಿಂಹ ಮತ್ತು ಜೆ.ಬಿ.ಪಾರ್ದಿವಾಲ ಅವರಿದ್ದ ಪೀಠ ಈ ಕುರಿತು ಒಪ್ಪಿಗೆ ಸೂಚಿಸಿತು. ವಕೀಲ ವಿಷ್ಣು ಶಂಕರ್ ಜೈನ್ ಅವರು ಈ ಸಂಬಂಧ ಅರ್ಜಿ ಸಲ್ಲಿಸಿದ್ದಾರೆ.

ಸಿದ್ದಲಿಂಗಪುರದಲ್ಲಿ ನೂರಾರು ಮಂದಿ ಕಾಂಗ್ರೆಸ್ ಸೇರ್ಪಡೆ




ಮೈಸೂರು: ಸಿದ್ದಲಿಂಗಪುರ ಗ್ರಾಮದಲ್ಲಿ ಜೆಡಿಎಸ್ ತೊರೆದು ಸ್ಥಳೀಯ ಮುಖಂಡರಾದ ನಿಂಗೇಗೌಡ ಮತ್ತು ವಿನಯ್‌ಕುಮಾರ್ ನೇತೃತ್ವದಲ್ಲಿ ನೂರಾರು ಮಂದಿ ಮಾವಿನಹಳ್ಳಿ ಸಿದ್ದೇಗೌಡರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರಿದರು.

ಮಂಗಳವಾರ ಚಾಮುಂಡೇಶ್ವರಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಭಾರತ್ ನಗರ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ, ಸಿದ್ದಲಿಂಗಪುರ, ನಾಗನಹಳ್ಳಿ ಗ್ರಾಮ ಪಂಚಾಯಿತಿ, ಬೋಗಾದಿ ಪಟ್ಟಣ ಪಂಚಾಯಿತಿ, ಹೂಟಗಳ್ಳಿ ನಗರಸಭೆ, ಹಿನಕಲ್, ಬೆಳವಾಡಿ ಮತ್ತು ಕೂರ್ಗಳ್ಳಿ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಾವಿನಹಳ್ಳಿ ಸಿದ್ದೇಗೌಡ ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಕಾರ್ಡ್ ವಿತರಿಸಿ ಮಾತನಾಡಿದರು. ಕಾಂಗ್ರೆಸ್ ಪಕ್ಷವು 2023ರ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ಅಧಿಕಾರಕ್ಕೆ ಬಂದ ತಕ್ಷಣವೇ ಘೋಷಿತ ಗ್ಯಾರಂಟಿ ಯೋಜನೆಯನ್ನು ಮನೆ ಮನೆಗೆ ತಲುಪಿಸುವುದು ಪಕ್ಷದ ಗುರಿಯಾಗಿದೆ. ಮತದಾರರು ಚಾಮುಂಡೇಶ್ವರಿ ಕ್ಷೇತದಲ್ಲಿ ಕಾಂಗ್ರೆಸ್ ಗೆಲ್ಲಿಸಿ ಸಿದ್ದರಾಮಯ್ಯನವರ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು. ಈ ವೇಳೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಮರೀ ಗೌಡ, ಕಾಂಗ್ರೆಸ್ ಮುಖಂಡರಾದ ಯರಗನಹಳ್ಳಿ ಮಾದೇಗೌಡ, ಹಿನಕಲ್ ಕೆಂಪನಾಯಕ, ಬೀರಿಹುಂಡಿ ಬಸವಣ್ಣ ಇನ್ನಿತರರಿದ್ದರು.

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಪ್ರಜಾಧ್ವನಿ ಯಾತ್ರೆ ಯಶಸ್ವಿ

ಕನಕಪುರ ಬಂಡೆಗೆ 'ಬಂಡೆ'ಗಳ ಹಾರ



ಕಲಾತಂಡಗಳ ಮೇಲೆ ಹಣದ ಕಂತೆ ಎಸೆದ ಡಿಕೆಶಿ

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಜಾಧ್ವನಿ ಯಾತ್ರೆ ನಡೆಸಿದ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಮಂಡ್ಯ ತಾಲೂಕಿನ ಬೇವಿನಹಳ್ಳಿ ಬಳಿ ಯಾತ್ರೆ ಸಾಗುವಾಗ ತಮ್ಮ ಸ್ವಾಗತಕ್ಕೆ ಬಂದಿದ್ದ ಜಾನಪದ ಕಲಾತಂಡಗಳ ಮೇಲೆ ಹಣದ ಕಂತೆ ಎಸೆದು ವಿವಾದಕ್ಕೀಡಾಗಿದ್ದಾರೆ.

ನಗರದ ಗೌರಿಶಂಕರ ಕಲ್ಯಾಣ ಮಂಟಪದ ಬಳಿ ಆರಂಭವಾದ ಪ್ರಜಾಧ್ವನಿ ಯಾತ್ರೆಯಲ್ಲಿ ಡಿ.ಕೆ.ಶಿವಕುಮಾರ್ ಸ್ವಾಗತಿಸಲು ಬಂದಿದ್ದ ಪೂಜಾ ಹಾಗೂ ಜಾನಪದ ಕಲಾತಂಡಗಳು ಬೇವಿನಹಳ್ಳಿ ಗ್ರಾಮದವರೆಗೂ ಬೈಕ್ ರ್‍ಯಾಲಿ, ಬಸ್ ಯಾತ್ರೆಯಲ್ಲಿ ಸಾಗಿದರು. ಬೇವಿನಹಳ್ಳಿ ಗ್ರಾಮದ ಬಸ್ ನಿಲ್ದಾಣದ ಬಳಿ ಜಾನಪದ ಕಲಾತಂಡಗಳು ದೇವರನ್ನು ಎತ್ತಿಕೊಂಡು ಕುಣಿಯುತ್ತಾ ಸಾಗುತ್ತಿದ್ದರು. ಇದನ್ನು ಕಂಡ ಡಿಕೆಶಿ, ಕಲಾವಿದರ ತಂಡದ ಮೇಲೆ 500 ರೂ. ಮುಖಬೆಲೆಯ ನೋಟಿನ ಕಂತೆ ಎಸೆದರು. ಬಸ್ ಮೇಲೆ ನಿಂತು ಕಲಾವಿದರ ತಂಡದ ಮೇಲೆ ನೋಟಿನ ಕಂತೆ ಎರಚಿದ್ದು ಕಲಾವಿದರು ಹಾಗೂ ಸ್ಥಳೀಯ ಜನರ ಆಕ್ರೋಶಕ್ಕೆ ಕಾರಣವಾಯಿತು. ಮತ್ತೊಂದೆಡೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ವಿರುದ್ಧ ಸ್ಥಳೀಯ ಕಾಂಗ್ರೆಸ್ಸಿಗರು ಕಲಾವಿದರ ಮೇಲೆ ಡಿಕೆಶಿ ದರ್ಪ ತೋರಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಮಂಡ್ಯ, ಮಾ.28– ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಂಡ್ಯ ಹಾಗೂ ಶ್ರೀರಂಗಪಟ್ಟಣ ತಾಲೂಕಿನಲ್ಲಿ ಕಾಂಗ್ರೆಸ್‌ನ ಪ್ರಜಾಧ್ವನಿ ಯಾತ್ರೆ ಮಂಗಳವಾರ ಯಶಸ್ವಿಯಾಗಿ ನಡೆಯಿತು.

ಬೆಳಗ್ಗೆ 11 ಗಂಟೆಗೆ ನಗರದ ಗೌರಿಶಂಕರ ಕಲ್ಯಾಣ ಮಂಟಪದ ಬಳಿ ಆರಂಭವಾಗಬೇಕಿದ್ದ ಯಾತ್ರೆ 2 ಗಂಟೆಗೆ ಆರಂಭವಾಯಿತು. ತೆರೆದ ಬಸ್‌ನಲ್ಲಿ ರೋಡ್ ಶೋ ಮೂಲಕ ಸಾಗಿದ ಡಿ.ಕೆ.ಶಿವಕುಮಾರ್‌ಗೆ ನಗರದ ಜೈಲು ವೃತ್ತದಲ್ಲಿ ಬೃಹತ್ ಹೂವಿನ ಹಾರ ಹಾಕಿ ಕಾಂಗ್ರೆಸ್ ಕಾರ್ಯಕರ್ತರು ಅಭಿನಂದಿಸಿದರು. ಬಳಿಕ ಕ್ಯಾತುಂಗೆರೆ ಬಡಾವಣೆ ಬಳಿಗೆ ಆಗಮಿಸಿದ ಶಿವಕುಮಾರ್‌ಗೆ ಬೃಹತ್ ದ್ರಾಕ್ಷಿ ಹಾರ ಹಾಕಿ, ಜನಪದ ಕಲಾತಂಡಗಳೊಂದಿಗೆ ಕಾರ್ಯಕರ್ತರು ಅದ್ಧೂರಿಯಾಗಿ ಸ್ವಾಗತಿಸಿದರು. ಡಿಕೆಶಿ ಜೊತೆಗೆ ಶ್ರೀರಂಗಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಮೇಶ್ ಬಂಡಿಸಿದ್ದೇಗೌಡ ಹಾಜರಿದ್ದರು. ನೂರಾರು ಬೈಕ್ ರ್‍ಯಾಲಿ ಮೂಲಕ ಡಿಕೆಶಿ ಬನ್ನೂರು ರಸ್ತೆಯಲ್ಲಿ ಸಾಗಿದರು.

ಕ್ಯಾತುಂಗೆರೆ, ಬೇವಿನಹಳ್ಳಿ, ಕೊತ್ತತ್ತಿ ಮೂಲಕ ಶ್ರೀರಂಗಪಟ್ಟಣದತ್ತ ಸಾಗಿದ ಡಿಕೆಶಿಗೆ ಕೊತ್ತತ್ತಿ ಬಳಿ ಹೂವಿನ ಬೃಹತ್ ಹಾರ ಹಾಕಲಾಯಿತು. ನಂತರ ಪೀಹಳ್ಳಿ, ಕೊಡಿಯಾಲ, ಅರಕೆರೆ ಗ್ರಾಮಕ್ಕೆ ಬಂದ ಡಿಕೆಶಿಗೆ ರಮೇಶ್ ಬಂಡಿಸಿದ್ದೇಗೌಡ ತವರು ಗ್ರಾಮದಲ್ಲಿ ಅದ್ಧೂರಿ ಸ್ವಾಗತ ದೊರೆಯಿತು. ಬಳಿಕ ಮಂಡ್ಯಕೊಪ್ಪಲು, ಮಹದೇವಪುರ, ದೊಡ್ಡಪಾಳ್ಯ ಮೂಲಕ ಶ್ರೀರಂಗಪಟ್ಟಣ ತಲುಪಿದರು. ಬಳಿಕ ಬಾಬುರಾಯನಕೊಪ್ಪಲು ಬಳಿಗೆ ಬಂದ ಡಿಕೆಶಿಗೆ ಮೈಸೂರಿನ ವಿಶೇಷ ಕಲಾವಿದರ ತಂಡ ನಿರ್ಮಿಸಿದ್ದ ಬೃಹತ್ ಬಂಡೆ ಹಾರ ಹಾಕಲಾಯಿತು. ಹತ್ತಿಯಲ್ಲಿ ಮಾಡಿದ್ದ ಬೃಹತ್ ಬಂಡೆ ಹಾರ ವಿಶೇಷವಾಗಿತ್ತು.

ಮೇಲುಕೋಟೆಯಲ್ಲಿ ರೈತಸಂಘ ಬೆಂಬಲಿಸುವ ಬಗ್ಗೆ ನಿರ್ಧಾರವಾಗಿಲ್ಲ: ಮಂಡ್ಯ ತಾಲೂಕಿನ ಬೇವಿನಹಳ್ಳಿಯಲ್ಲಿ ಯಾತ್ರೆ ಸಾಗುವ ಮಾರ್ಗ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಲುಕೋಟೆ ಕ್ಷೇತ್ರದಲ್ಲಿ ರೈತ ಸಂಘದ ಅಭ್ಯರ್ಥಿ ದರ್ಶನ್ ಪುಟ್ಟಣ್ಣಯ್ಯ ಅವರನ್ನು ಬೆಂಬಲಿಸುವ ಬಗ್ಗೆ ಇನ್ನೂ ಅಂತಿಮ ನಿರ್ಧಾರಕ್ಕೆ ಬಂದಿಲ್ಲ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು.

ದರ್ಶನ್ ಪುಟ್ಟಣ್ಣಯ್ಯ ನಮ್ಮನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಆದರೆ ಮೇಲುಕೋಟೆ ಕ್ಷೇತ್ರದಲ್ಲಿ ನಮ್ಮ ಕಾರ್ಯಕರ್ತರು ಹಾಗೂ ಪಕ್ಷದ ಅಸ್ತಿತ್ವವೇ ನಮಗೆ ಮುಖ್ಯವಾಗಿದ್ದು, ಅವರೊಂದಿಗೆ ಚರ್ಚಿಸಿ ಮುಂದಿನ ತೀರ್ಮಾನ ಕೈಗೊಳ್ಳುವುದಾಗಿ ಹೇಳಿದರು. ರಾಹುಲ್‌ಗಾಂಧಿ ಬಗ್ಗೆ ಸಿ.ಟಿ.ರವಿ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಸಿ.ಟಿ.ರವಿಗೆ ಕಾಂಗ್ರೆಸ್ ಇತಿಹಾಸದ ಬಗ್ಗೆ ಏನು ಗೊತ್ತು? ಅವರನ್ನು ಮೆಂಟಲ್ ಆಸ್ಪತ್ರೆಗೆ ಸೇರಿಸಬೇಕೆಂದ ಅವರು, ಬಿಜೆಪಿ ನಾಯಕರು ರಾಮಮಂದಿರ ನಿರ್ಮಿಸಲು ಹೊರಟಿದ್ದಾರೆ. ಮೊದಲು ರಾಮನಗರ, ಚನ್ನಪಟ್ಟಣ, ಕನಕಪುರದಲ್ಲಿ ಬಿಜೆಪಿ ಪಕ್ಷದ ಕಚೇರಿ ತೆರೆಯಲಿ ಎಂದು ವ್ಯಂಗ್ಯವಾಡಿದರು.

ರಾಜೀವ್‌ಗಾಂಧಿ ವಿವಿಗೆ ಕೆಂಗಲ್ ಹನುಮಂತಯ್ಯ ವಿವಿ ಎಂಬ ಹೆಸರಿಡಬೇಕೆಂಬ ಬಿಜೆಪಿ ಪ್ರಸ್ತಾವನೆಗೆ ಆಕ್ಷೇಪ ವ್ಯಕ್ತಪಡಿಸಿದ ಅವರು, ರಾಜೀವ್‌ಗಾಂಧಿ ಹೆಸರನ್ನಾದರೂ ಬದಲಾವಣೆ ಮಾಡಲಿ ಅಥವಾ ಅವರ ಹೆಸರನ್ನೇ ವಿವಿಗೆ ಇಡಲಿ. ಮೇ 15ರ ಬಳಿಕ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುತ್ತದೆ ಎಂದರು.

ಬಿ.ಎಸ್.ಯಡಿಯೂರಪ್ಪ ನಿವಾಸದ ಮೇಲೆ ಕಲ್ಲು ತೂರಾಟದ ಬಗ್ಗೆ ಪ್ರತಿಕ್ರಿಯಿಸಿ, ಇದೆಲ್ಲಾ ಬಿಜೆಪಿಯವರ ಒಳ ಜಗಳವಾಗಿದೆ. ಬೊಮ್ಮಾಯಿ, ಈಶ್ವರಪ್ಪ, ಯಡಿಯೂರಪ್ಪ ನಡುವೆ ಆಂತರಿಕ ಗುದ್ದಾಟವಿದ್ದು, ಇದಕ್ಕೂ ನಮಗೂ ಯಾವುದೇ ಸಂಬಂಧವಿಲ್ಲ ಎಂದರು.

ಮಂಡ್ಯದಲ್ಲಿ ಹೊಸ ಇತಿಹಾಸ ಸೃಷ್ಟಿ: ಡಿ.ಕೆ.ಶಿವಕುಮಾರ್

ಶ್ರೀರಂಗಪಟ್ಟಣ, ಮಾ.28– ಮುಂಬರುವ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯ ಏಳೂ ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಲಿದ್ದು, ಪಕ್ಷ ಹೊಸ ಇತಿಹಾಸ ಸೃಷ್ಟಿಸಲಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದರು. ಪಟ್ಟಣದಲ್ಲಿ ನಡೆದ ಪ್ರಜಾಧ್ವನಿ ಯಾತ್ರೆಯಲ್ಲಿ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಜಿಲ್ಲೆಯ ಮತದಾರರು 7 ಕ್ಷೇತ್ರಗಳಲ್ಲೂ ಜೆಡಿಎಸ್ ಶಾಸಕರನ್ನು ಗೆಲ್ಲಿಸಿದರು. ಆದರೆ ಜಿಲ್ಲೆಯಲ್ಲಿ ಯಾವ ಬದಲಾವಣೆಯಾಗಿದೆ ಎಂದು ನೀವು ಯೋಚಿಸಬೇಕು. ಹೀಗಾಗಿ ಈ ಬಾರಿ ನಮಗೊಂದು ಅವಕಾಶ ಮಾಡಿಕೊಡುವಂತೆ ಅವರು ಮನವಿ ಮಾಡಿದರು.

ಜನರನ್ನು ಆರ್ಥಿಕವಾಗಿ ಸದೃಢ ಮಾಡಲು 4 ಗ್ಯಾರಂಟಿ ಯೋಜನೆ ಘೋಷಿಸಿದ್ದೇವೆ. ಆ ಪೈಕಿ ಪ್ರತಿ ಮನೆಗೆ 200 ಯುನಿಟ್ ವಿದ್ಯುತ್ ಉಚಿತ ನೀಡಲಾಗುವುದು. ಆ ಮೂಲಕ ಹಳ್ಳಿ ಜನರು ಯಾರೂ ಕೂಡ ಇನ್ನು ಮುಂದೆ ವಿದ್ಯುತ್ ಬಿಲ್ ಕಟ್ಟುವಂತಿಲ್ಲ. ಇನ್ನು ಬೆಲೆ ಏರಿಕೆಯಿಂದ ಮಹಿಳೆಯರು ಮನೆ ವೆಚ್ಚ ಸರಿದೂಗಿಸಲು ಪರದಾಡುತ್ತಿದ್ದಾರೆ. ಇದಕ್ಕಾಗಿ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬಲು ಪ್ರತಿ ಮನೆಯೊಡತಿಗೆ 2 ಸಾವಿರ ಪ್ರೋತ್ಸಾಹ ಧನ ನೀಡಲಾಗುವುದು. ಇನ್ನು ಅನ್ನಭಾಗ್ಯ ಯೋಜನೆ ಮೂಲಕ ಪ್ರತಿ ಬಡ ಕುಟುಂಬದ ಸದಸ್ಯರಿಗೆ ತಲಾ 10 ಕೆಜಿ ಅಕ್ಕಿ ಉಚಿತವಾಗಿ ನೀಡಲಾಗುವುದು. ಇನ್ನು ಪದವೀಧರ ನಿರುದ್ಯೋಗ ಯುವಕರಿಗೆ ಧೈರ್ಯ ತುಂಬಲು ಪ್ರತಿ ತಿಂಗಳು 3 ಸಾವಿರ ಹಾಗೂ ಡಿಪ್ಲೊಮಾ ಮಾಡಿರುವವರಿಗೆ 1,500 ರೂ. ನಿರುದ್ಯೋಗ ಭತ್ಯೆ ನೀಡಲಾಗುವುದು. ಈ ಕುರಿತ ಗ್ಯಾರಂಟಿ ಕಾರ್ಡ್‌ಗಳನ್ನು ಪ್ರತಿ ಮನೆಗೆ ತಲುಪಿಸಬೇಕು ಎಂದರು.

ನಾನು ನಿಮ್ಮ ಮನೆ ಮಗ. ನಾವು ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಲು ಜೆಡಿಎಸ್‌ಗೆ ಬೆಂಬಲ ನೀಡಿ ಅಧಿಕಾರ ಕೊಟ್ಟೆವು. ಆದರೆ ಅವರು ಅಧಿಕಾರ ಉಳಿಸಿಕೊಳ್ಳಲಿಲ್ಲ. ಲೋಕಸಭೆ ಚುನಾವಣೆಯಲ್ಲಿ ನಾನು ನಿಖಿಲ್ ಕುಮಾರಸ್ವಾಮಿ ಪರ ಪ್ರಚಾರ ಮಾಡಿದೆ. ನೀವು ಜೆಡಿಎಸ್‌ಗೆ ಅವಕಾಶ ಕೊಟ್ಟಂತೆ ನನಗೂ ಒಂದು ಅವಕಾಶ ನೀಡಿ. ಇಲ್ಲಿ ಯಾರೇ ನಿಂತರು ನಾನು, ಸಿದ್ದರಾಮಯ್ಯ ಅವರು ಅಭ್ಯರ್ಥಿ ಎಂದು ಪಕ್ಷಕ್ಕೆ ಮತಹಾಕಿ. ಇಲ್ಲಿರುವ ನೀವುಗಳು ಜೆಡಿಎಸ್ ಮತದಾರರನ್ನು ಸೆಳೆದು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವಂತೆ ಹೇಳಬೇಕು. ಯಾವುದೇ ಕಾರಣಕ್ಕೂ ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ. ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಎಂದರೆ ಅದು ಕಾಂಗ್ರೆಸ್ ಪಕ್ಷ ಮಾತ್ರ. ಹೀಗಾಗಿ ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವಾದ ಮಾಡಿ ಎಂದು ಮನವಿ ಮಾಡಿದರು.

ಬಂಡೆ ಹಾರಕ್ಕೆ ಮನಸೋತ ಡಿಕೆಶಿ: ತಾಲೂಕಿನ ಬಾಬುರಾಯನಕೊಪ್ಪಲು ಬಳಿಗೆ ಬಂದ ಡಿಕೆಶಿಗೆ ಮೈಸೂರಿನ ವಿಶೇಷ ಕಲಾವಿದರ ತಂಡ ನಿರ್ಮಿಸಿದ್ದ ಬೃಹತ್ ಬಂಡೆ ಹಾರ ಹಾಕಲಾಯಿತು. ಬಂಡೆ ಹಾರಕ್ಕೆ ಮನಸೋತ ಡಿ.ಕೆ.ಶಿವಕುಮಾರ್, ಇಡೀ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಕನಕಪುರ ಬಂಡೆ ಎಂದೇ ಖ್ಯಾತಿ ಹೊಂದಿರುವ ನನಗೆ ಬಂಡೆ ಹಾರ ಹಾಕುವ ಮೂಲಕ ನನ್ನ ಹುಮ್ಮಸ್ಸನ್ನು ಮತ್ತಷ್ಟು ಹೆಚ್ಚಿಸಿದ್ದೀರಿ. ಬಂಡೆ ಕೆತ್ತಿದರೆ ಶಿಲೆ ಆಗುವುದು, ಕೆತ್ತಿದರೆ ಚಪ್ಪಡಿಯೂ ಆಗುವುದು. ಚಪ್ಪಡಿ ಮೂಲಕ ವಿಧಾನ ಸೌಧದ ಮೆಟ್ಟಿಲುಗಳಾಗಿ ವಿಧಾನಸೌಧದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಬಲ ನೀಡಬೇಕು ಎಂದರು.

ಯಾತ್ರೆಯಲ್ಲಿ ಮಾಜಿ ಸಚಿವರಾದ ಎನ್.ಚಲುವರಾಯಸ್ವಾಮಿ, ಪಿ.ಎಂ. ನರೇಂದ್ರಸ್ವಾಮಿ, ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ಮಧು ಜಿ.ಮಾದೇಗೌಡ, ಮಾಜಿ ಶಾಸಕರಾದ ವಿಜಯಲಕ್ಷ್ಮಿ ಬಂಡಿಸಿದ್ದೇಗೌಡ, ರಮೇಶ್‌ಬಾಬು ಬಂಡಿಸಿದ್ದೇಗೌಡ, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಸಾವಿರಾರು ಮಂದಿ ಕಾರ್ಯಕರ್ತರು ಭಾಗವಹಿಸಿದ್ದರು.

ಶೃಂಗೇರಿ ಶಾಸಕ ರಾಜೇಗೌಡರಿಗೆ ಸೇರಿದ 1595 ಕುಕ್ಕರ್ ವಶ



ಮಂಡ್ಯ, ಮಾ.28– ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡರು ಮತದಾರರಿಗೆ ಹಂಚಲು ಸಾಗಿಸುತ್ತಿದ್ದರು ಎನ್ನಲಾದ 35 ಲಕ್ಷ ರೂ. ಮೌಲ್ಯದ 1,595 ಕುಕ್ಕರ್‌ಗಳನ್ನು ಬೆಂಗಳೂರು–ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ನಾಗಮಂಗಲ ತಾಲೂಕಿನ ಕದಬಹಳ್ಳಿ ಚೆಕ್‌ಪೋಸ್ಟ್‌ನಲ್ಲಿ ಬಿಂಡಿಗನವಿಲೆ ಪೊಲೀಸರು ಜಪ್ತಿ ಮಾಡಿದ್ದಾರೆ.

ಕಂಟೈನರ್ (ಕೆ.ಎ51, ಎ.ಜಿ4365)ನಲ್ಲಿ ಕುಕ್ಕರ್ ಸಾಗಿಸುವಾಗ ಕದಬಹಳ್ಳಿ ಚೆಕ್‌ಪೋಸ್ಟ್‌ನಲ್ಲಿ ಪೊಲೀಸರು ತಪಾಸಣೆ ನಡೆಸಿದಾಗ ಕುಕ್ಕರ್‌ಗಳು ಪತ್ತೆಯಾದವು. ತಕ್ಷಣವೇ ಲಾರಿ ಹಾಗೂ ಕುಕ್ಕರ್‌ಗಳನ್ನು ಜಪ್ತಿ ಮಾಡಿ ಪೊಲೀಸರು ಪ್ರಕರಣ ದಾಖಲು ಮಾಡಿದ್ದಾರೆ.

ಬಾಳೆಹೊನ್ನೂರಿನ ಕೃಷ್ಣ ಹಾರ್ಡ್‌ವೇರ್ ಅಂಗಡಿಯಿಂದ ಖರೀದಿಸಿ ನಾಗಮಂಗಲ ಮೂಲಕ ಚಿಕ್ಕಮಗಳೂರಿನ ಶೃಂಗೇರಿಗೆ ಸಾಗಿಸುವಾಗ ಕುಕ್ಕರ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಕುಕ್ಕರ್‌ಗಳು ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಕ್ಷೇತ್ರದ ಕಾಂಗ್ರೆಸ್ ಶಾಸಕ ರಾಜೇಗೌಡ ಅವರಿಗೆ ಸೇರಿದ್ದು ಎನ್ನಲಾಗಿದೆ.

ಈ ಸಂಬಂಧ ಬಿಂಡಿಗನವಿಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಶಾಸಕರು ಹಾಗೂ ಅಂಗಡಿ ಮಾಲೀಕರ ಮೇಲೆ ಪ್ರಕರಣ ದಾಖಲಿಸಿದ್ದಾರೆ.

6 ಮಂದಿ ವಿರುದ್ಧ ಪ್ರಕರಣ ದಾಖಲು

ಮದ್ದೂರು, ಮಾ.28– ತಾಲೂಕಿನ ಬೆಸಗರಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಸೊಳ್ಳೇಪುರದಲ್ಲಿ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪುಟ್ಟಗೌರಮ್ಮ ಎಂಬುವರು ನೀಡಿದ ದೂರಿನನ್ವಯ ವಳಗೆರೆಹಳ್ಳಿ ಗ್ರಾಪಂ ಮಾಜಿ ಉಪಾಧ್ಯಕ್ಷ, ಹಾಲಿ ಸದಸ್ಯ ಎಸ್.ಕೆ. ಗಿರೀಶ್ ಸೇರಿದಂತೆ 6 ಮಂದಿ ವಿರುದ್ಧ ಪ್ರಕರಣ ದಾಖಲಾಗಿದೆ.

ಕಳೆದ 2 ದಿನಗಳ ಹಿಂದೆ ಪುಟ್ಟಗೌರಮ್ಮ ಅವರ ಮನೆ ಬಳಿ ಧಾವಿಸಿದ ಗಿರೀಶ್ ಹಾಗೂ ಸಹಚರರು ಅವಾಚ್ಯ ಶಬ್ದಗಳಿಂದ ನಿಂದಿಸಿ, ಹಲ್ಲೆ ನಡೆಸಿ, ಕೊಲೆ ಯತ್ನಕ್ಕೆ ಮುಂದಾದ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು ಈ ಹಿನ್ನೆಲೆಯಲ್ಲಿ ಮಾ.28ರಂದು ಆರೋಪಿ ಗಿರೀಶ್‌ನನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದು, ಈತನ ಸಹಚರರಾದ ಎಸ್.ವಿ.ದಿನೇಶ್, ಎಸ್.ವಿ.ಸಂತೋಷ್, ವೆಂಕಟೇಗೌಡ, ಎಸ್.ಕೆ.ವೆಂಕಟೇಶ, ಕಲಾವತಿ, ಎಸ್.ಪಿ.ಶಿಲ್ಪ ಅವರ ಮೇಲೆ ಪ್ರಕರಣ ದಾಖಲಾಗಿದ್ದು, ಇವರ ಬಂಧನಕ್ಕೆ ಕ್ರಮವಹಿಸಲಾಗಿದೆ.

ಪಾನ್–ಆಧಾರ್ ಲಿಂಕ್ ಸಾವಿರ ವಸೂಲಿಗೆ ಸಾರ್ವಜನಿಕರ ಆಕ್ರೋಶ



ಮೈಸೂರು, ಮಾ.28(ಎಸ್‌ಪಿಎನ್)–ಪಾನ್‌ಕಾರ್ಡ್‌ಗೆ, ಆಧಾರ್ ಲಿಂಕ್ ಮಾಡಿಸಲು ಸಾವಿರ ರೂ. ದಂಡ ವಿಧಿಸುವ ಕೇಂದ್ರ ಹಣಕಾಸು ಇಲಾಖೆ ನಿರ್ಧಾರಕ್ಕೆ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.

ಪಾನ್‌ಕಾರ್ಡ್‌ಗೆ ಆಧಾರ್ ಲಿಂಕ್ ಮಾಡಿಸುವಂತೆ ಯಾವುದೇ ಪತ್ರಿಕೆಗಳಲ್ಲಾಗಲಿ, ದೃಶ್ಯ ಮಾಧ್ಯಮಗಳ ಲ್ಲಾಗಲಿ ಕೇಂದ್ರ ಹಣಕಾಸು ಇಲಾಖೆ ಅಧಿಕಾರಿಗಳು ಸರಿಯಾದ ಮಾಹಿತಿ ನೀಡಿಲ್ಲ. ಇದರಿಂದ ಜನ ಸಾಮಾನ್ಯರು ಮತ್ತು ಗ್ರಾಮೀಣ ಪ್ರದೇಶದ ಜನರು ಸಣ್ಣಪುಟ್ಟ ಬ್ಯಾಂಕ್ ಲೋನ್ ಪಡೆಯಲು ಪಾನ್‌ಕಾರ್ಡ್ ಮಾಡಿಸಿಕೊಂಡಿರುತ್ತಾರೆ.

ತೆರಿಗೆ ವಿನಾಯಿತಿಯೊಳಗೆ ಇರುವವರು ಪ್ರತಿ ವರ್ಷ ತೆರಿಗೆ ಕಟ್ಟುವ ಗೋಜಿಗೆ ಹೋಗುವುದಿಲ್ಲ. ಅಂತಹವರು ಪಾನ್‌ಕಾರ್ಡ್‌ಗೆ ಆಧಾರ್ ಜೋಡಣೆ ಮಾಡಿಸುವ ಗೋಜಿಗೆ ಹೋಗುವುದಿಲ್ಲ. ಈ ಪಾನ್‌ಕಾರ್ಡ್‌ಗಳು ಮಾರ್ಚ್ 2023ರ ಅಂತ್ಯದೊಳಗೆ ನಿಷ್ಕ್ರಿಯಗೊಳ್ಳಲಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳು ಸಂದೇಶ ಕಳುಹಿಸುತ್ತಿದ್ದಾರೆ. 2017 ರ ಕೇಂದ್ರ ಸರ್ಕಾರದ ಅಧಿಸೂಚನೆಯ ಪ್ರಕಾರ, ನಿಷ್ಕ್ರೀಯಗೊಂಡ ಕಾರ್ಡ್ ಮೂಲಕ ಐಟಿ ರಿಟರ್ನ್ಸ್ ಸಲ್ಲಿಸುವುದಕ್ಕೆ ಸಾಧ್ಯವಾಗುವುದಿಲ್ಲ ಎಂಬುದು ಜನ ಸಾಮಾನ್ಯರ ಆತಂಕಕ್ಕೆ ಕಾರಣವಾಗಿದೆ.

ಆದರೆ, ಆಧಾರ್ ಲಿಂಕ್ ಮಾಡಿಸಲು ಗ್ರಾಮೀಣ ಪ್ರದೇಶದಲ್ಲಿ ಇಂಟರ್‌ನೆಟ್ ಸೆಂಟರ್‌ಗಳಲ್ಲಿ ಸಾವಿರ ರೂ. ದಂಡದ ಜೊತೆಗೆ ದುಪ್ಪಟ್ಟು ಹಣ ತೆಗೆದುಕೊಳ್ಳುತ್ತಿದ್ದಾರೆ ಎಂಬ ಆರೋಪವೂ ಇದೆ. ಇದೊಂದು ರೀತಿ ಹಗಲು ದರೋಡೆ ಎಂದು ಕರ್ನಾಟಕ ಸೇನಾ ಪಡೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ 'ಮೈಸೂರು ಮಿತ್ರ'ನ ಮೂಲಕ ಕೇಂದ್ರ ಸರ್ಕಾರದ ನಡೆಯನ್ನು ಪ್ರಶ್ನಿಸಿದರು. ಆಧಾರ್ ಲಿಂಕ್ ಮಾಡಲು 2022ರ ಮಾರ್ಚ್ 31ರವರೆಗೆ ಉಚಿತವಾಗಿತ್ತು. 2022ರ ಏಪ್ರಿಲ್ 1ರಿಂದ 500 ಪಾವತಿಸಿ ಆಧಾರ್ ಲಿಂಕ್ ಮಾಡಬೇಕಾಗಿತ್ತು. 2022ರ ಜೂನ್‌ನಿಂದ 2023ರ ಮಾ. 31ರವರೆಗೆ ಲಿಂಕ್ ಮಾಡಬೇಕಾದರೆ ಸಾವಿರ ರೂ., ಪಾವತಿಸಬೇಕು. ಆ ನಂತರ ಬರುವ ಅರ್ಜಿಗಳಿಗೆ 10 ಸಾವಿರ ದಂಡ ಹಾಕಲಾಗುವುದು ಎಂದು ಕೇಂದ್ರ ಸರ್ಕಾರ ಆದೇಶಿಸಿತ್ತು. ಇದೀಗ ಪಾನ್‌ಗೆ ಆಧಾರ್ ಲಿಂಕ್ ಮಾಡುವ ಕೊನೆಯ ದಿನಾಂಕವನ್ನು ಜೂ.30ರವರೆಗೆ ವಿಸ್ತರಿಸಿ ಕೇಂದ್ರ ಹಣಕಾಸು ಇಲಾಖೆ ಮಂಗಳವಾರ ಆದೇಶಿಸಿದೆ ಎಂದರು.

'ನಮ್ಮ ಓಟು ನಮ್ಮ ಪವರ್' ಮತದಾನ ಜಾಗೃತಿ





ಮೈಸೂರು,ಮಾ.28(ಎಂಕೆ)– ಕಡ್ಡಾಯ ಮತದಾನದ ಅರಿವು ಮೂಡಿಸಲು ಅಂಗಡಿ, ಮಳಿಗೆಗಳ ಎದುರು 'ನಮ್ಮ ಓಟು ನಮ್ಮ ಪವರ್' ಮತದಾನ ಜಾಗೃತಿ ಪೋಸ್ಟರ್(ಭಿತ್ತಿಪತ್ರ) ಪ್ರದರ್ಶಿಸುವಂತೆ ಕರೆ ನೀಡಲಾಯಿತು.

ನಗರಪಾಲಿಕೆ ಜಂಬೂಚಾವು ರಾಜೇಂದ್ರ ಸಭಾಂಗಣದಲ್ಲಿ ವಿವಿಧ ಕಾಲೇಜುಗಳು, ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ ಜಿಲ್ಲಾಡಳಿತ, ನಗರಪಾಲಿಕೆ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಆಯೋಜಿಸಿದ್ದ 'ಮತದಾನ ಜಾಗೃತಿ ಪೋಸ್ಟರ್' ಬಿಡುಗಡೆ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಹಸಿರು ನ್ಯಾಯಪೀಠದ ನ್ಯಾಯಾಧೀಶರಾದ ಸುಭಾಷ್ ಬಿ.ಅಡಿ ಪೋಸ್ಟರ್ ಬಿಡುಗಡೆ ಮಾಡಿ, ಕಡ್ಡಾಯ ಮತದಾನದ ಅರಿವು ಮೂಡಿಸಲು ಅಂಗಡಿ, ಮಳಿಗೆಗಳ ಎದುರು ಮತದಾನ ಜಾಗೃತಿ ಪೋಸ್ಟರ್ ಪ್ರದರ್ಶಿಸುವಂತೆ ಕರೆ ನೀಡಿದರು. ಪ್ರತಿಯೊಬ್ಬ ಮತದಾರರು ತಪ್ಪದೆ ಮತದಾನ ಮಾಡುವ ಮೂಲಕ ತಮ್ಮ ಹಕ್ಕು ಚಲಾಯಿಸಬೇಕು. ದೇಶದ ಅಭಿವೃದ್ಧಿ ದೃಷ್ಟಿಯಿಂದ ಉತ್ತಮ ಜನಪ್ರತಿನಿಧಿಗಳ ಆಯ್ಕೆ ಮುಖ್ಯವಾಗಿದ್ದು, ಆಯ್ಕೆಯ ಜವಾಬ್ದಾರಿ ಮತದಾರರದ್ದಾಗಿದೆ. ಆದ್ದರಿಂದ ಪ್ರತಿಯೊಬ್ಬ ಮತದಾರರು ಹಣದ ಆಮಿಷಕ್ಕೆ ಒಳಗಾಗದೆ ಮತದಾನ ಮಾಡಬೇಕು ಎಂದು ಹೇಳಿದರು.

ಜಿಪಂ ಸಿಇಓ ಕೆ.ಎಂ.ಗಾಯತ್ರಿ, ನಗರ ಪಾಲಿಕೆ ಆಯುಕ್ತ ಲಕ್ಷ್ಮಿಕಾಂತ್ ರೆಡ್ಡಿ, ಮುಡಾ ಆಯುಕ್ತ ದಿನೇಶ್‌ಕುಮಾರ್, ಪಾಲಿಕೆ ಆರೋಗ್ಯಾಧಿಕಾರಿ ನಾಗರಾಜ್, ನೋಡಲ್ ಅಧಿಕಾರಿ ರಂಜಿತ್‌ಕುಮಾರ್ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶಾಸಕ ಮಾಡಾಳ್ ವಿರೂಪಾಕ್ಷಪ್ಪ 5 ದಿನ ಪೊಲೀಸ್ ವಶಕ್ಕೆ



ಬೆಂಗಳೂರು, ಮಾ.28– ಭ್ರಷ್ಟಾಚಾರ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಅವರನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ 5 ದಿನಗಳ ಕಾಲ ಲೋಕಾಯುಕ್ತ ಪೊಲೀಸ್ ಕಸ್ಟಡಿಗೆ ನೀಡಿ ಮಂಗಳವಾರ ಆದೇಶ ಹೊರಡಿಸಿದೆ.

ಜಾಮೀನು ರದ್ದಾದ ನಂತರ ನಿನ್ನೆ ಸಂಜೆ ಚನ್ನಗಿರಿ ಶಾಸಕ ಮಾಡಾಳ್ ವಿರೂಪಾ ಕ್ಷಪ್ಪ ಅವರನ್ನು ಬಂಧಿಸಿದ್ದ ಲೋಕಾಯುಕ್ತ ಪೊಲೀಸರು, ಇಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಮುಂದೆ ಹಾಜರು ಪಡಿಸಿದರು. ಆರೋಪಿ ಶಾಸಕರ ವಿಚಾರಣೆ ನಡೆಸಿದ ಕೋರ್ಟ್, ಹೆಚ್ಚಿನ ವಿಚಾ ರಣೆಗಾಗಿ ಮಾಡಾಳ್ ವಿರೂಪಾಕ್ಷಪ್ಪ ಅವ ರನ್ನು ಏ.1ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿದೆ. ಮಾಡಾಳ್ ಅವರ ಪುತ್ರ ಕೆಎಎಸ್ ಅಧಿಕಾರಿ ಪ್ರಶಾಂತ್ ಮಾಡಾಳ್ ಅವರು ತಂದೆಯ ಪರವಾಗಿ ಲಂಚ ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದರು. ಬಳಿಕ ಶಾಸಕ ಕಚೇರಿ ಮತ್ತು ಮನೆಯಲ್ಲಿ 8 ಕೋಟಿ ರೂಪಾಯಿ ಹೆಚ್ಚು ನಗದು ಪತ್ತೆಯಾಗಿತ್ತು.

ಕುರಾನ್ ಪಠಣ ವಿರೋಧಿಸಿ ಪ್ರತಿಭಟನೆ; ಹಿಂದೂ ಕಾರ್ಯಕರ್ತರ ಮೇಲೆ ಲಾಠಿ ಚಾರ್ಜ್



ಹಾಸನ, ಮಾ.28– ಹಾಸನ ಜಿಲ್ಲೆಯ ಬೇಲೂರಿನಲ್ಲಿ ಕುರಾನ್ ಪಠಣ ವಿರೋಧಿಸಿ ಬಜರಂಗದಳ ಹಾಗೂ ವಿಶ್ವ ಹಿಂದೂ ಪರಿಷತ್ ಕಾರ್ಯಕರ್ತರು ಪ್ರತಿಭಟನೆ ನಡೆಸುತ್ತಿದ್ದ ವೇಳೆ ಎರಡು ಸಮುದಾಯಗಳ ನಡುವೆ ಗಲಾಟೆ ನಡೆದಿದ್ದು, ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಲಾಠಿ ಚಾರ್ಜ್ ಮಾಡಿದ್ದಾರೆ.

ಬೇಲೂರು ಚನ್ನಕೇಶವ ರಥೋತ್ಸವದ ವೇಳೆ ಕುರಾನ್ ಪಠಣ ರದ್ದುಗೊಳಿಸುವಂತೆ ಆಗ್ರಹಿಸಿ ಬಜರಂಗದಳ ಹಾಗೂ ವಿಶ್ವ ವಿದೂ ಪರಿಷತ್ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದ್ದರು. ರಸ್ತೆ ತಡೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಬೈಕ್‌ನಲ್ಲಿ ಬಂದ ಮುಸ್ಲಿಂ ಸಮುದಾಯದ ಯುವಕ ಕುರಾನ್ ಜಿಂದಾಬಾದ್ ಘೋಷಣೆ ಕೂಗಿದ್ದಾನೆ.

ಇದರಿಂದ ರೊಚ್ಚಿಗೆದ್ದ ಬಜರಂಗದಳ ಕಾರ್ಯಕರ್ತರು ಯುವಕನನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಈ ವೇಳೆ ಪ್ರತಿಭಟನಾಕಾರರು ಹಾಗೂ ಯುವಕನ ನಡುವೆ ವಾಗ್ವಾದ ನಡೆದಿದೆ. ಬಜರಂಗದಳ ಕಾರ್ಯಕರ್ತರು ಯುವಕನನ್ನು ಅಟ್ಟಾಡಿಸಿದ್ದಾರೆ. ಪರಿಸ್ಥಿತಿ ನಿಯಂತ್ರಿಸಲು ಪೊಲಿಸರು ಲಘು ಲಾಠಿ ಪ್ರಹಾರ ನಡೆಸಿದ್ದಾರೆ. ಅಲ್ಲದೆ ಯುವಕನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಆದರೂ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ.

ಹಿಂದೂ ಧಾರ್ಮಿಕ ಜಾತ್ರೆಯಲ್ಲಿ ಕುರಾನ್ ಪಠಿಸಬಾರದು ಎಂದು ಆಗ್ರಹಿಸಿ ಹಿಂದೂ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ತಹಸೀಲ್ದಾರ್‌ಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಈ ಬಗ್ಗೆ ಅಧಿಕಾರಿಗಳು ಏಪ್ರಿಲ್ 3 ರೊಳಗೆ ಆದೇಶ ಹೊರಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಕಳೆದ ವರ್ಷ, ಹಿಂದೂ ಕಾರ್ಯಕರ್ತರ ವಿರೋಧದ ನಡುವೆ, ಚನ್ನಕೇಶವ ಜಾತ್ರೆಯಲ್ಲಿ ಕುರಾನ್ ಪಠಣವನ್ನು ನಡೆಸಲಾಯಿತು. ಆದಾಗ್ಯೂ, ಹಿಂದೂ ದೇವರ ಮುಂದೆ ಕುರಾನ್ ಪಠಣವನ್ನು 1932 ರಲ್ಲಿ ಬಲವಂತವಾಗಿ ಸೇರಿಸಲಾಯಿತು ಎಂದು ಹಿಂದೂ ಕಾರ್ಯಕರ್ತರು ಪ್ರತಿಪಾದಿಸುತ್ತಿದ್ದಾರೆ.

ಬಿಜೆಪಿ ಶಾಸಕರಿಗೆ ಫೋನ್ ಕಾಲ್ ಮಾಡುತ್ತಿರುವ ಡಿಕೆಶಿ

ಹೊಸ ಬಾಂಬ್ ಸಿಡಿಸಿದ ಸಿಎಂ ಬೊಮ್ಮಾಯಿ



ಬೆಳಗಾವಿ, ಮಾ.28–ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಬೆಳಗಾವಿಯಲ್ಲಿ ಸ್ಫೋಟಕ ಮಾಹಿತಿ ಬಿಚ್ಚಿಟ್ಟಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ಸೂಕ್ತ ಅಭ್ಯರ್ಥಿಗಳಿಲ್ಲದ ಕಾರಣ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರು ನಮ್ಮ ಶಾಸಕರಿಗೆ ಫೋನ್ ಕಾಲ್ ಮಾಡಿ ತಮ್ಮ ಪಕ್ಷಕ್ಕೆ ಆಹ್ವಾನಿಸುತ್ತಿದ್ದಾರೆ. ಟಿಕೆಟ್ ನೀಡುತ್ತೇವೆ ಎಂದು 2–3 ದಿನಗಳಿಂದ ಕರೆ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ. ಅಲ್ಲದೆ, ಅವರಿಗೆ ಸರಿಯಾದ ಕ್ಯಾಂಡಿಡೇಟ್ ಇಲ್ಲದಿರುವುದರಿಂದ ಹತಾಶರಾಗಿದ್ದಾರೆ, ಕಾಂಗ್ರೆಸ್ ಪಕ್ಷದ ವಸ್ತುಸ್ಥಿತಿ ದಿವಾಳಿಯಾಗಿದೆ ಎಂದರು.

ಏಪ್ರಿಲ್ ಮೊದಲ ವಾರ ಬಿಜೆಪಿ ಪಟ್ಟಿ ಬಿಡುಗಡೆ: ಇನ್ನು, ಕರ್ನಾಟಕ ಸಾರ್ವತ್ರಿಕ ಚುನಾವಣೆಗೆ ದಿನಾಂಕ ಶೀಘ್ರದಲ್ಲೇ ಘೋಷಣೆಯಾಗಲಿದೆ. ಈಗಾಗಲೇ ಚುನಾವಣೆಗೆ ಇಳಿಯುವ ಅಭ್ಯರ್ಥಿಗಳ ಮೊದಲ ಹಂತದ ಪಟ್ಟಿಯನ್ನು ಕಾಂಗ್ರೆಸ್ ಬಿಡುಗಡೆ ಮಾಡಿದೆ. ಜೆಡಿಎಸ್, ಆಮ್ ಆದ್ಮಿ ಸೇರಿದಂತೆ ವಿವಿಧ ಪಕ್ಷಗಳೂ ಬಿಡುಗಡೆ ಮಾಡಿವೆ. ಆದರೆ ಬಿಜೆಪಿ ಮಾತ್ರ ಇದುವರೆಗೆ ಪಟ್ಟಿ ಬಿಡುಗಡೆ ಮಾಡಿಲ್ಲ. ಈ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ ಬೊಮ್ಮಾಯಿ, ಏಪ್ರಿಲ್ ಮೊದಲ ವಾರದಲ್ಲಿ ಬಿಜೆಪಿ ಪಟ್ಟಿ ಬಿಡುಗಡೆಯಾಗಬಹುದು. ಅಲ್ಲದೆ, ಈ ಬಾರಿ ಬಿಜೆಪಿಗೆ ಪ್ರಬಲ ಪೈಪೋಟಿ ಇದೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಗೆಲ್ಲುವಂತಹ ಪಕ್ಷಕ್ಕೆ ಎಲ್ಲಾ ಕಡೆ ಫೈಟ್ ಇದ್ದೇ ಇರುತ್ತದೆ ಎಂದರು.

ರಾಜ್ಯ ಬಿಜೆಪಿಯಿಂದ ಯಾರಿಗೆ ಟಿಕೆಟ್ ಸಿಗಲಿದೆ ಎಂಬ ಕುತೂಹಲ ಮೂಡಿಸಿದೆ. ಪಕ್ಷದ ಯುವ ನಾಯಕರು ಉತ್ಸಾಹದಲ್ಲಿದ್ದು, ಹಿರಿಯರಿಗೆ ತಲೆಬಿಸಿ ಆರಂಭವಾಗಿದೆ. ನಿನ್ನೆಯಷ್ಟೇ ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಚುನಾವಣಾ ಪ್ರಚಾರ ಸಮಿತಿ ಹಾಗೂ ಕೋರ್ ಕಮಿಟಿ ಸಭೆ ನಡೆದಿದೆ. ಸಭೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಆಯ್ಕೆ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದ್ದು, ಮಾರ್ಚ್ 31 ರಂದು ಕೋರ್ ಕಮಿಟಿ ಸದಸ್ಯರೊಂದಿಗೆ ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಈ ಸಭೆಯಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ಧರ್ಮೇಂದ್ರ ಪ್ರಧಾನ್, ಸಿಎಂ ಬಸವರಾಜ ಬೊಮ್ಮಾಯಿ, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಮತ್ತಿತರರು ಪಾಲ್ಗೊಂಡಿದ್ದರು.

ಒಪಿಎಸ್ ಅರ್ಜಿ ತಿರಸ್ಕರಿಸಿದ ಮದ್ರಾಸ್ ಹೈಕೋರ್ಟ್; ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿಯಾಗಿ ಪಳನಿಸ್ವಾಮಿ ನೇಮಕ



ಚೆನ್ನೈ: ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಚುನಾವಣೆಗೆ ತಡೆ ನೀಡಲು ಮದ್ರಾಸ್ ಹೈಕೋರ್ಟ್ ಮಂಗಳವಾರ ನಿರಾಕರಿಸಿದ ಬೆನ್ನಲ್ಲೇ ತಮಿಳುನಾಡು ಮಾಜಿ ಮುಖ್ಯಮಂತ್ರಿ ಎಡಪ್ಪಾಡಿ ಕೆ ಪಳನಿಸ್ವಾಮಿ(ಇಪಿಎಸ್) ಅವರನ್ನು ಎಐಎಡಿಎಂಕೆ ನೂತನ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಪ್ರತಿಸ್ಪರ್ಧಿ ಓ ಪನ್ನೀರಸೆಲ್ವಂ (ಒಪಿಎಸ್)ನೇತೃತ್ವದ ಬಣ ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಚುನಾವಣೆಗೆ ತಡೆ ನೀಡುವಂತೆ ಕೋರಿ ಸಲ್ಲಿಸಿದ್ದ ಎಲ್ಲಾ ಅರ್ಜಿಗಳನ್ನು ಮದ್ರಾಸ್ ಹೈಕೋರ್ಟ್ ವಜಾಗೊಳಿಸಿದೆ.

ಮದ್ರಾಸ್ ಹೈಕೋರ್ಟ್ ತೀರ್ಪಿನ ನಂತರ ಸಮಯ ವ್ಯರ್ಥ ಮಾಡದೆ ಎಐಎಡಿಎಂಕೆ ಚುನಾವಣಾ ಆಯುಕ್ತರಾದ ನಾಥಮ್ ಆರ್ ವಿಶ್ವನಾಥನ್ ಮತ್ತು ಪೊಲ್ಲಾಚಿ ವಿ ಜಯರಾಮನ್ ಅವರು ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿ 68 ವರ್ಷದ ಪಳನಿಸ್ವಾಮಿ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದಾಗಿ ಘೋಷಿಸಿದ್ದಾರೆ. ಪಕ್ಷದ ಪದಾಧಿಕಾರಿಗಳು ಅವರಿಗೆ ಶಾಲು ಹೊದಿಸಿ, ಹೂಗುಚ್ಛ ನೀಡಿ ಅಭಿನಂದಿಸಿದರು.

ಪಕ್ಷದ ಸಂಸ್ಥಾಪಕ ಎಂಜಿ ರಾಮಚಂದ್ರನ್(ಎಂಜಿಆರ್) ಮತ್ತು ದಿವಂಗತ ಪಕ್ಷದ ವರಿಷ್ಠೆ ಜೆ ಜಯಲಲಿತಾ ಅವರು ಹೊಂದಿದ್ದ ಪಕ್ಷದ ಸರ್ವಶಕ್ತ ಹುದ್ದೆಯಾಗಿರುವ ಪ್ರಧಾನ ಕಾರ್ಯ ದರ್ಶಿ ಹುದ್ದೆಗೆ ತಮ್ಮನ್ನು ಆಯ್ಕೆ ಮಾಡಿ ದ್ದಕ್ಕಾಗಿ ಪಕ್ಷದ ಕಾರ್ಯಕರ್ತರಿಗೆ ಹೃದಯ ಪೂರ್ವಕವಾಗಿ ಧನ್ಯವಾದ ಅರ್ಪಿಸುವುದಾಗಿ ಪಳನಿಸ್ವಾಮಿ ಹೇಳಿದ್ದಾರೆ. ಎಐಎಡಿಎಂಕೆ ಪಕ್ಷದ ಆಂತರಿಕ ಚುನಾವಣಾ ಫಲಿತಾಂಶದ ಬಗ್ಗೆ ಭಾರತೀಯ ಚುನಾವಣಾ ಆಯೋಗಕ್ಕೆ ಮಾಹಿತಿ ನೀಡುವ ಸಾಧ್ಯತೆಯಿದೆ.

ಕ್ಷಮೆ ಕೇಳದಿದ್ದರೆ ರಾಹುಲ್ ಗಾಂಧಿ ವಿರುದ್ಧ ದೂರು: ಸಾವರ್ಕರ್ ಮೊಮ್ಮಗ ಎಚ್ಚರಿಕೆ

ನವದೆಹಲಿ, ಮಾ.28– ವಿ.ಡಿ.ಸಾವರ್ಕರ್ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೀಡಿದ ಹೇಳಿಕೆ ಬಗ್ಗೆ ದೂರು ದಾಖಲಿಸುವುದಾಗಿ, ಸಾವರ್ಕರ್ ಮೊಮ್ಮಗ ರಂಜಿತ್ ಸಾವರ್ಕರ್ ಹೇಳಿದ್ದಾರೆ.

ಅಲ್ಲದೇ ರಾಹುಲ್ ಗಾಂಧಿಯವರಿಗೆ ಕ್ಷಮಾಪಣೆ ಕೇಳಲು ಹೇಳಿ ಎಂದು ಎನ್‌ಸಿಪಿ ಮುಖಂಡ ಶರದ್ ಪವಾರ್ ಅವರನ್ನು ಒತ್ತಾಯಿಸಿದ್ದಾರೆ.

ಸುದ್ದಿಸಂಸ್ಥೆಯೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಉದ್ಧವ್ ಠಾಕ್ರೆ ಅವರನ್ನು ಒತ್ತಾಯಿಸಿದ್ದಾರೆ.

ಉದ್ಧವ್ ಠಾಕ್ರೆ ಹಾಗೂ ಸಂಜಯ್ ರಾವತ್ ಅವರು ವೈಯಕ್ತಿಕವಾಗಿ ಸಾವರ್ಕರ್ ಅವರ ಬಗ್ಗೆ ಗೌರವ ಇಟ್ಟುಕೊಂಡಿದ್ದಾರೆ. ಸಾವರ್ಕರ್ ಬಗ್ಗೆ ರಾಹುಲ್ ಗಾಂಧಿ ನೀಡಿದ ಹೇಳಿಕೆಗೆ ಅವರು ಕ್ಷಮೆ ಯಾಚಿಸಬೇಕು ಎಂದು ಅವರು ರಾಹುಲ್ ಗಾಂಧಿಗೆ ಹೇಳಬೇಕು. ಯಾರು ನಮ್ಮ ದೇವರನ್ನು ಅವಮಾನಿಸುತ್ತಾರೋ ಅವರ ಜತೆ ನಾವು ಇರಬಾರದು. ಒಂದು ವೇಳೆ ಸಾವರ್ಕರ್ ಅವರ ಬಗ್ಗೆ ಗೌರವ ಇರುವುದೇ ಆದರೆ ಈ ಬಗ್ಗೆ ಕ್ರಮ ತೆಗೆದುಕೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಉದ್ಧವ್ ಠಾಕ್ರೆ ಮುಖ್ಯಮಂತ್ರಿಯಾಗಿದ್ದಾಗ, ಕಾಂಗ್ರೆಸ್ ಮುಖವಾಣಿ ಸಾವರ್ಕರ್ ಬಗ್ಗೆ ಕೊಳಕು ಪದಗಳನ್ನು ಬಳಕೆ ಮಾಡಿತ್ತು. ಈ ಬಗ್ಗೆ ಕ್ರಮ ತೆಗೆದುಕೊಳ್ಳಬೇಕು ಎಂದು ನಾನು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೆ. ಆದರೆ ಯಾವ ಕ್ರಮವನ್ನೂ ತೆಗೆದುಕೊಂಡಿರಲಿಲ್ಲ. ರಾಹುಲ್ ಗಾಂಧಿ ಈ ಹಿಂದೆ ನೀಡಿದ ಹೇಳಿಕೆಗೆ ಬಗ್ಗೆ ದೂರು ದಾಖಲಿಸಿದ್ದೇನೆ. ಈಗ ನೀಡಿರುವ ಹೇಳಿಕೆ ಬಗ್ಗೆ ಕ್ಷಮೆ ಯಾಚಿಸದಿದ್ದರೆ ಎಫ್‌ಐಆರ್ ದಾಖಲು ಮಾಡುತ್ತೇನೆ ಎಂದು ರಂಜಿತ್ ಹೇಳಿದ್ದಾರೆ. ನನ್ನ ಹೆಸರು ಸಾವರ್ಕರ್ ಅಲ್ಲ, ಗಾಂಧಿ. ಗಾಂಧಿ ಎಂದಿಗೂ ಕ್ಷಮೆ ಕೇಳುವುದಿಲ್ಲ ಎಂದು ರಾಹುಲ್ ಗಾಂಧಿ ಹೇಳಿದ್ದರು.

ಹುಣಸೂರು, ಹೆಚ್.ಡಿ.ಕೋಟೆ ತಾಲೂಕು 49 ಕೆರೆಗಳಿಗೆ ನೀರು ತುಂಬಿಸುವ 85 ಕೋಟಿ ಯೋಜನೆಗೆ ಅನುಮೋದನೆ

ಲಕ್ಷ್ಮಣತೀರ್ಥದಿಂದ ನೀರೆತ್ತಿ ಕೆರೆಗಳಿಗೆ ಹರಿಸುವ ಮಹತ್ವದ ನಿರ್ಧಾರ



ಮೈಸೂರು, ಮಾ.28(ಎಸ್‌ಬಿಡಿ)– ಹುಣಸೂರು ಹಾಗೂ ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ 49 ಕೆರೆಗಳಿಗೆ ನೀರು ತುಂಬಿಸುವ 85 ಕೋಟಿ ರೂ. ವೆಚ್ಚದ ಯೋಜನೆ ಕಾಮಗಾರಿಗೆ ಅನುಮೋದನೆ ದೊರೆತಿದೆ. ಹುಣಸೂರು ತಾಲೂಕಿನ ಕೆಲವು ಪ್ರದೇಶಗಳು ಬರಪೀಡಿತವಾಗಿದ್ದು, ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಕೊರತೆ ಇದೆ. ಈ ಭಾಗದಲ್ಲಿ ಅಂತರ್ಜಲ ಮಟ್ಟ ಕೂಡ ಕುಸಿದಿದ್ದು, ಹಲವಾರು ಕೊಳವೆ ಬಾವಿ ಕೊರೆಸಿದ್ದರೂ ಸಹ ಅಗತ್ಯ ನೀರು ದೊರಕುತ್ತಿಲ್ಲ. ಆದ್ದರಿಂದ ಲಕ್ಷ್ಮಣತೀರ್ಥ ನದಿಯಿಂದ ನೀರೆತ್ತಿ ಹುಣಸೂರು ತಾಲೂಕಿನ 47 ಮತ್ತು ಹೆಚ್.ಡಿ.ಕೋಟೆ ವ್ಯಾಪ್ತಿಯ 2 ಸೇರಿ ಒಟ್ಟು 49 ಕೆರೆಕಟ್ಟೆಗಳಿಗೆ ನೀರು ತುಂಬಿಸಲು ಜನಪ್ರತಿನಿಧಿಗಳು ಕೋರಿದ್ದರು.


ಈ ಹಿನ್ನೆಲೆಯಲ್ಲಿ ಬರಪೀಡಿತ ಪ್ರದೇಶಗಳ ಪರಿಸರ ಸಮತೋಲನ ಕಾಪಾಡಿಕೊಂಡು ಜನಸಾಮಾನ್ಯರ ಜೀವನಮಟ್ಟ ಸುಧಾರಿಸಲು ಹಾಗೂ ಜನ ಜಾನುವಾರುಗಳಿಗೆ ಕುಡಿಯುವ ನೀರು ಸೌಲಭ್ಯ ಕಲ್ಪಿಸಲು ಕೆರೆ ತುಂಬಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳುವುದು ಅವಶ್ಯಕವಾಗಿರುವುದರಿಂದ ಹುಣಸೂರು ತಾಲೂಕಿನ ಮರದೂರು ಗ್ರಾಮದ ಬಳಿ ಲಕ್ಷ್ಮಣತೀರ್ಥ ನದಿಯಿಂದ ಮಳೆಗಾಲದ ಸಮಯದಲ್ಲಿ ಸುಮಾರು 3 ತಿಂಗಳು 5.32 ಕಿ.ಮೀ ಉದ್ದ ಏರು ಕೊಳವೆ ಮೂಲಕ 31 ಕ್ಯೂಸೆಕ್ಸ್ (0.235 ಟಿಎಂಸಿ) ನೀರೆತ್ತಿ ದೊಡ್ಡೇಗೌಡನ ಕೊಪ್ಪಲು ಗ್ರಾಮದ ಬಳಿ ವಿತರಣಾ ತೊಟ್ಟಿಯನ್ನು ನಿರ್ಮಿಸಿ ಎಡ ಭಾಗದಲ್ಲಿ 1.50 ಕಿ.ಮೀ ಹಾಗೂ ಬಲ ಭಾಗದಲ್ಲಿ 14.70 ಕಿ.ಮೀ ಉದ್ದದ ಗುರುತ್ವಾಕರ್ಷಣೆಯ ಪೈಪ್‌ಲೇನ್ ಮುಖಾಂತರ ಹುಣಸೂರು ಹಾಗೂ ಹೆಚ್.ಡಿ.ಕೋಟೆ ತಾಲೂಕಿನ ಒಟ್ಟು 49 ಕೆರೆಕಟ್ಟೆಗಳಿಗೆ ನೀರು ತುಂಬಿಸಲು ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ವರದಿ ಸಲ್ಲಿಸಿದ್ದರು. ಈ 85 ಕೋಟಿ ರೂ. ಮೊತ್ತದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ದೊರೆತ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆ ಅಭಿಪ್ರಾಯ ಹಾಗೂ ಸಚಿವ ಸಂಪುಟ ಸಭೆಯ ನಿರ್ಣಯದನ್ವಯ ಜಲ ಸಂಪನ್ಮೂಲ ಇಲಾಖೆ ವಿಶೇಷ ಕರ್ತವ್ಯಾಧಿಕಾರಿ ಮನೋಹರ ವೈ. ರೊಟ್ಟೆ ಆದೇಶ ಹೊರಡಿಸಿದ್ದಾರೆ.



ಹುಣಸೂರು ತಾಲೂಕು ಮರದೂರು ಗ್ರಾಮದ ಬಳಿ ಲಕ್ಷ್ಮಣತೀರ್ಥ ನದಿಯಿಂದ ಬತ್ತಿ ಹೋಗಿರುವ 49 ಕೆರೆಗಳಿಗೆ ನೀರು ತುಂಬಿಸುವ 85 ಕೋಟಿ ರೂ. ಡಿಪಿಆರ್ ಅನ್ನು ಜಲ ಸಂಪನ್ಮೂಲ ಇಲಾಖೆ ವತಿಯಿಂದ ತಯಾರಿಸಿ, ಅಂದಾಜು ಪರಿಶೀಲನಾ ಸಮಿತಿ ಹಾಗೂ 79ನೇ ಮಂಡಳಿ ಸಭೆಯಿಂದ ಅನುಮೋದನೆ ಪಡೆಯಲಾಗಿತ್ತು. ನಂತರ ಪ್ರಸ್ತಾವನೆಯನ್ನು ಕ್ಯಾಬಿನೆಟ್ ಸಭೆಯಲ್ಲಿ ಮಂಡಿಸಿ ಅನುಮೋದನೆ ನೀಡುವಂತೆ ಮುಖ್ಯಮಂತ್ರಿಗಳನ್ನು ಹಲವು ಬಾರಿ ಭೇಟಿ ಮಾಡಿ ಮನವಿ ಮಾಡಿದ್ದೆ. ಸದ್ಯ ಈ ಯೋಜನೆ ಕಾಮಗಾರಿಗೆ ಅನುಮೋದನೆ ದೊರೆತಿದ್ದು, ಹುಣಸೂರು ತಾಲೂಕು ಜನರ ಪರವಾಗಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಹಾಗೂ ಸಹಕರಿಸಿದ ಉಸ್ತುವಾರಿ ಸಚಿವರಾದ ಎಸ್.ಟಿ.ಸೋಮಶೇಖರ್ ಅವರಿಗೆ ಧನ್ಯವಾದಗಳು.

–ಸಂಸದ ಪ್ರತಾಪ್ ಸಿಂಹ

ಬಿಎಸ್‌ವೈ ಮನೆ ಮೇಲೆ ದಾಳಿ: ಕಾಂಗ್ರೆಸ್ ನಾಯಕರ ವ್ಯವಸ್ಥಿತ ಕುತಂತ್ರ ಎಂದ ಬೊಮ್ಮಾಯಿ



ಕಲಬುರಗಿ, ಮಾ.28–'ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರ ನಿವಾಸದ ಮೇಲಿನ ದಾಳಿಯ ಹಿಂದೆ ಕಾಂಗ್ರೆಸ್ ನಾಯಕರ ಕುತಂತ್ರ ಇದೆ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ಕಾಂಗ್ರೆಸ್ ಎಲ್ಲ ಕಡೆ ಕುತಂತ್ರ ಮಾಡಿದೆ. ಪೊಲೀಸರಿಗೆ ಸಿಕ್ಕಿರುವ ಕ್ಯಾಮೆರಾದಲ್ಲಿ ಕಾಂಗ್ರೆಸ್ ನಾಯಕರು ಇದ್ದಾರೆ. ಈ ಬಗ್ಗೆ ಡಿ.ಕೆ ಶಿವಕುಮಾರ ಮತ್ತೇನು ಹೇಳುತ್ತಾರೆ' ಎಂದು ಪ್ರಶ್ನಿಸಿದರು. ಆ ಜನಾಂಗಕ್ಕೆ (ಬಂಜಾರ ಸಮುದಾಯ) ಏನೂ ಗೊತ್ತಿಲ್ಲ. ಕಾಂಗ್ರೆಸ್ ನಾಯಕರು ಹಿಂದಿನ ದಿನ ಅವರನ್ನು ತಪ್ಪು ದಾರಿಗೆ ಎಳೆದು, ಎಸ್‌ಸಿ ಪಟ್ಟಿಯಿಂದ ತೆಗೆಯುತ್ತಾರೆ ಎಂದು ಸುಳ್ಳು ಹೇಳಿ ಪ್ರಚೋದನೆ ಮಾಡಿದ್ದಾರೆ. ರಾತ್ರಿಯೇ ಕಾಂಗ್ರೆಸ್ ಸಭೆ ನಡೆಸಿ, ಯೋಜನೆ ಹಾಕಿಕೊಂಡು ವ್ಯವಸ್ಥಿತವಾಗಿ ಮಾಡಿರುವುದು. ಸಾಕ್ಷಿ ಸಮೇತವಾಗಿ ಹೇಳುತ್ತಿದ್ದೇನೆ. ಸುಳ್ಳು ಹೇಳುವುದನ್ನು ಡಿ.ಕೆ.ಶಿವಕುಮಾರ ಅವರು ಬಿಡಬೇಕು ಎಂದರು.

ಹಳೆಯ ಮೈಸೂರು ಭಾಗದಲ್ಲಿ ಜೆಡಿಎಸ್ ಜತೆ ಹೊಂದಾಣಿಕೆ ಇಲ್ಲ. ರಾಜಕೀಯ ಲಾಭಕ್ಕಾಗಿ ಜವಳಿ ಪಾರ್ಕ್ ತಂದಿಲ್ಲ. ಒಂದೂವರೆ ವರ್ಷದಿಂದ ಈ ಬಗ್ಗೆ ಮಾತನಾಡುತ್ತಿದ್ದು, ಹೊಸ ಜವಳಿ ನೀತಿಯಡಿ ಪಾರ್ಕ್ ಬಂದಿದೆ. ಕಾಂಗ್ರೆಸ್‌ನವರಿಗೆ ಹೊಟ್ಟೆ ಕಿಚ್ಚು ಆಗಿದೆ. ಅವರಿಂದ ಮಾಡಲು ಆಗದನ್ನು ನಾವು ಮಾಡಿ ಸಾಧಿಸಿ ತೋರಿಸಿದ್ದಕ್ಕೆ ಎಂದು ವ್ಯಂಗ್ಯವಾಡಿದರು.

ಎಸ್‌ಡಿಪಿಐ ದೇಶದ್ರೋಹಿ ಸಂಘಟನೆ; ಅದು ನನ್ನನ್ನು ಹೊಗಳಲು ಸಾಧ್ಯವೇ?

ಸಿಎಂ ಬೊಮ್ಮಾಯಿ ಪ್ರಶ್ನೆ

ಬೆಳಗಾವಿ, ಮಾ.28– 'ಎಸ್‌ಡಿಪಿಐ ದೇಶದ್ರೋಹಿ ಸಂಘಟನೆ. ದೇಶದ ವಿರುದ್ಧ ಕೆಲಸ ಮಾಡುವ ಅವರು, ಭಾರತದ ಅಲ್ಪಸಂಖ್ಯಾತರ ವಿರೋಧಿಗಳು. ಅವರು ನನ್ನನ್ನು ಹೊಗಳಲು ಸಾಧ್ಯವೇ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದರು. '2ಬಿ' ಅಡಿ ಮುಸ್ಲಿಂ ಸಮುದಾಯಕ್ಕಿದ್ದ ಮೀಸಲಾತಿ ರದ್ದುಪಡಿಸಿದ ವಿಚಾರವಾಗಿ ಎಸ್‌ಡಿಪಿಐನವರು ತಮ್ಮ ವಿರುದ್ಧ ನೀಡಿದ ಅವಹೇಳನಕಾರಿ ಹೇಳಿಕೆಗೆ, ಇಲ್ಲಿ ಮಂಗಳವಾರ ಸುದ್ದಿಗಾರರಿಗೆ ಹೀಗೆ ಪ್ರತಿಕ್ರಿಯಿಸಿದರು.

ಎಂದಿಗೂ ನಮ್ಮ ಚಿಂತನೆ ಮತ್ತು ವಿಚಾರಗಳಿಗೆ ವಿರುದ್ಧವಾಗಿರುವ ಎಸ್‌ಡಿಪಿಐನವರಿಗೆ ನಾನು ಸೊಪ್ಪು ಹಾಕುವುದಿಲ್ಲ. ಅವರು ನೀಡಿದ ಹೇಳಿಕೆಗಳನ್ನು ಗಮನಿಸಿ, ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಏಪ್ರಿಲ್ ಮೊದಲ ವಾರ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಬಹುತೇಕ ಪ್ರಕಟಗೊಳ್ಳಲಿದೆ ಎಂದು ಇದೇ ವೇಳೆ ಹೇಳಿದರು.

ಅಥಣಿ ಕ್ಷೇತ್ರದಲ್ಲಿ ಬಿಜೆಪಿ ಟಿಕೆಟ್‌ಗಾಗಿ ಗೊಂದಲ ಉಂಟಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಸಿ.ಎಂ, ಗೆಲ್ಲುವಂತಹ ಪಕ್ಷದ ಟಿಕೆಟ್ ಪಡೆಯಲು ಎಲ್ಲ ಕಡೆಯೂ ಪೈಪೋಟಿ ಇರುತ್ತದೆ. ಕಾಂಗ್ರೆಸ್ ಬಳಿ ಸ್ಪರ್ಧೆಗೆ ಉತ್ತಮ ಅಭ್ಯರ್ಥಿಗಳೇ ಇಲ್ಲ. ಇದರಿಂದ ಹತಾಶರಾಗಿರುವ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕಳೆದ ಎರಡ್ಮೂರು ದಿನಗಳಿಂದ ನಮ್ಮ ಶಾಸಕರಿಗೆ ಕರೆ ಮಾಡುತ್ತಿದ್ದಾರೆ. ತಮ್ಮ ಪಕ್ಷದ ಟಿಕೆಟ್ ನೀಡುವುದಾಗಿ ಭರವಸೆ ನೀಡುತ್ತಿದ್ದಾರೆ. ಕಾಂಗ್ರೆಸ್ ದಿವಾಳಿಯಾಗಿದೆ ಎಂಬುದಕ್ಕೆ ಇದೇ ಸಾಕ್ಷಿ ಎಂದು ತಿರುಗೇಟು ಕೊಟ್ಟರು.

ಕಾಂಗ್ರೆಸ್ಸಿಗರು ಗೋಮುಖ ವ್ಯಾಘ್ರರು, ನಾನು ಕನ್ನಡಿಗರ ನಿಯತ್ತಿನ ನಾಯಿ: ಬೊಮ್ಮಾಯಿ

ಗೋಕಾಕ (ಬೆಳಗಾವಿ ಜಿಲ್ಲೆ): ಕಾಂಗ್ರೆಸ್ಸಿಗರು ನನ್ನನ್ನು ನಾಯಿ ಎಂದು ಮೂದಲಿಸುತ್ತಿದ್ದಾರೆ. ಹೌದು, 'ನಾನು ಕರ್ನಾಟಕದ ಏಳು ಕೋಟಿ ಜನರ ನಿಯತ್ತಿನ ನಾಯಿ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಗೋಕಾಕದಲ್ಲಿ ಮಂಗಳವಾರ ರೂ. 2,430 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ನನ್ನ ಅಭಿವೃದ್ಧಿ ಕೆಲಸ ಹಾಗೂ ಸಾಮಾಜಿಕ ನ್ಯಾಯದ ನಡೆ ಕಾಂಗ್ರೆಸ್ಸಿಗರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಹೀಗಾಗಿ ಶಕುನಿ, ನಾಯಿ ಎಂದು ನನ್ನನ್ನು ಬೈಯ್ಯುತ್ತಿದ್ದಾರೆ. ಆದರೆ ಅವರೆಲ್ಲ ಗೋಮುಖ ವ್ಯಾಘ್ರರು ಎಂಬುದು ಇಡೀ ರಾಜ್ಯಕ್ಕೆ ಗೊತ್ತಿದೆ ಎಂದರು. ರಾಜ್ಯ ರಾಜಕಾರಣದಲ್ಲಿ ಬೆಳಗಾವಿ ಜಿಲ್ಲೆ ಅತ್ಯಂತ ಪ್ರಭಾವಿ. ಈ ಜಿಲ್ಲೆಯ ನಿರ್ಧಾರವೇ ರಾಜ್ಯದ ನಿರ್ಧಾರ ಕೂಡ ಆಗುತ್ತದೆ' ಎಂದೂ ಹೇಳಿದರು. ಪರಿಶಿಷ್ಟ ಜನರೆಲ್ಲ ಒಂದಾದರೆ; ನೀವು ಹೇಳಿದವರದ್ದೇ ಆಡಳಿತ ನಡೆಯುತ್ತದೆ ಎಂದೂ ಸಿ.ಎಂ ಹೇಳಿದರು.

ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಮಾತನಾಡಿ, ಕರ್ನಾಟಕದಲ್ಲಿ ಲಿಂಗಾಯತರನ್ನು ಮುಖ್ಯಮಂತ್ರಿ ಮಾಡುವ ಏಕಮಾತ್ರ ಪಕ್ಷ ಬಿಜೆಪಿ. ಹಾಗಾಗಿ ಲಿಂಗಾಯತ ಎಲ್ಲ ಪಂಗಡದವರೂ ಒಂದಾಗಿರಿ. ರಾಜ್ಯದಲ್ಲಿ ಯಾವುದೇ ಕಾರಣಕ್ಕೂ ನಿಮ್ಮ ಮತಗಳು ಒಡೆದು ಹೋಗದಂತೆ ಎಚ್ಚರಿಕೆ ವಹಿಸಿ ಎಂದರು.

ರಾಹುಲ್ ಗಾಂಧಿ ಆದಿಯಾಗಿ ಎಲ್ಲ ಕಾಂಗ್ರೆಸ್ಸಿಗರೂ ಬೋಗಸ್ ಮಾತನಾಡುತ್ತಾರೆ. ಅವರು ನೀಡಿದ ಗ್ಯಾರಂಟಿಗಳನ್ನು ಯಾರೂ ಪೂರೈಸಲು ಸಾಧ್ಯವಿಲ್ಲ. ಈ ಬೋಗಸ್ ಭರವಸೆ ನಂಬಬೇಡಿ ಎಂದು ಶಾಸಕ ರಮೇಶ ಜಾರಕಿಹೊಳಿ ಕಿಡಿಕಾರಿದರು.

ಗುರಿ ಮುಟ್ಟುವವರೆಗೂ ವಿರಮಿಸಲಾರೆ



ಬೆಂಗಳೂರು, ಮಾ.28– ನನ್ನ ಗುರಿ ಮುಟ್ಟುವವರೆಗೂ ನಾನು ವಿರಮಿಸುವುದಿಲ್ಲ. 123 ಗುರಿ ಮುಟ್ಟುವವರೆಗೂ ಈ ಬಾರಿ ಎಚ್ಚರ ತಪ್ಪಲ್ಲ. ಕೊನೆ ದಿನದವರೆಗೂ ಪ್ರಚಾರ ಮಾಡ್ತೀನಿ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಕಾಂಗ್ರೆಸ್–ಬಿಜೆಪಿಯಿಂದ ಅನೇಕರು ಜೆಡಿಎಸ್ ಸಂಪರ್ಕ ಮಾಡಿದ್ದಾರೆ ಎಂಬ ವಿಚಾರದ ಕುರಿತು ಪ್ರತಿಕ್ರಿಯಿಸಿದರು. ಅನೇಕ ಜನ ಬಂದು ಚರ್ಚೆ ಮಾಡ್ತಾರೆ. ರಾಜ್ಯದ ನಾಯಕರು 140 ಸೀಟು ಗೆಲ್ಲೋದು ಬೇರೆ. ಆದರೆ ರಾಷ್ಟ್ರದ ನಾಯಕರ ಪರಿಸ್ಥಿತಿ ಏನು ಇದೆ ಅಂತ ನನಗೆ ಗೊತ್ತಿದೆ. ಎರಡು ಪಕ್ಷಗಳು 75 ಸ್ಥಾನ ಕ್ರಾಸ್ ಮಾಡಲ್ಲ ಅಂತ ಇವತ್ತು ಅಧಿಕಾರಿಗಳು ಚರ್ಚೆ ಮಾಡಿದ್ದಾರೆ ಎಂದರು.

ಗ್ರೌಂಡ್ ರಿಯಾಲಿಟಿ ನನಗೆ ಗೊತ್ತಿದೆ. ಜೆಡಿಎಸ್ ಮುಗಿಸಿದ್ದೇವೆ ಅಂತಾರೆ. 140–150 ಅಂತ ಇಬ್ಬರು ಹೇಳ್ತಿದ್ದಾರೆ. ಒಳಗೆ ಬೇರೆಯದ್ದೇ ಇದೆ. ನನ್ನ ಗುರಿ 123 ಅದರ ಗುರಿ ಇಟ್ಟುಕೊಂಡು ನಾವು ಹೋಗ್ತಿದ್ದೇವೆ. ಅದನ್ನ ಸಾಧಿಸುತ್ತೇವೆ. ಏಪ್ರಿಲ್ 10ರವರೆಗೆ ಪಂಚರತ್ನ ಯಾತ್ರೆ ಮುಂದುವರಿಯುತ್ತೆ. 123 ಗುರಿ ಮುಟ್ಟಿಸೋಕೆ ಜನ ತೀರ್ಮಾನ ಮಾಡಿದ್ದಾರೆ ಎಂದು ಹೇಳಿದರು. ಸ್ಥಳೀಯ ಮಟ್ಟದಲ್ಲಿ ಕಾಂಗ್ರೆಸ್–ಬಿಜೆಪಿ ಏನೇ ಮಾತಾಡಬಹುದು. ಅದರೆ ಕೇಂದ್ರದ ನಾಯಕರು ನಮ್ಮ ಬಗ್ಗೆ ಗೊತ್ತಿದೆ. ಹಾಗೆ ಸುಮ್ಮನೆ ಚರ್ಚೆ ಮಾಡಿದ್ದೇವೆ ಅಷ್ಟೆ. ಯಾರ ಜೊತೆ ಮಾಡಿದ್ದೇವೆ ಅಂತ ಬೇಕಿಲ್ಲ. ಜೆಡಿಎಸ್ ಬೆಳವಣಿಗೆ ಎರಡು ಪಕ್ಷಕ್ಕೆ ಆತಂಕ ಉಂಟು ಮಾಡಿದೆ. ತಳಮಳ ಉಂಟು ಮಾಡಿದೆ ಎಂದು ತಿಳಿಸಿದರು.

ಇದೇ ವೇಳೆ ಯಡಿಯೂರಪ್ಪ ಮನೆ ಮೇಲೆ ಕಲ್ಲು ತೂರಾಟ ವಿಚಾರದ ಕುರಿತು ಮಾತನಾಡಿ, ಈ ಬಗ್ಗೆ ಸರ್ಕಾರ ತೀರ್ಮಾನ ತೆಗೆದುಕೊಳ್ಳಬೇಕು. ಇದರಲ್ಲಿ ಯಾರ ಪಾತ್ರ ಇದೆ. ಯಾರು ಕಲ್ಲು ಹೊಡೆಸಿದರು ಇದು ನನಗೆ ಸಂಬಂಧ ಇಲ್ಲ. ಇಂತಹ ವಾತಾವರಣ ಕ್ರಿಯೇಟ್ ಮಾಡಿರೋರು ಬಿಜೆಪಿಯವರು. ಬಿಜೆಪಿಯವರು ಇದನ್ನು ಸರಿಪಡಿಸಿಕೊಳ್ಳಬೇಕು ಎಂದರು.

ಅಧಿಕಾರಕ್ಕೆ ಬಂದರೆ ಅಡುಗೆ ಅನಿಲ ಸಿಲಿಂಡರ್‌ಗೆ ಶೇ.50 ಸಬ್ಸಿಡಿ: ಎಚ್‌ಡಿಕೆ



ಬೆಂಗಳೂರು: ರಾಜ್ಯದಲ್ಲಿ ಈ ಬಾರಿ ಜೆಡಿಎಸ್ ಅಧಿಕಾರಕ್ಕೆ ಬಂದರೆ ಅಡುಗೆ ಅನಿಲದ ಸಿಲಿಂಡರ್‌ಗೆ ಶೇ. 50ರಷ್ಟು ಸಬ್ಸಿಡಿ ನೀಡುವುದಾಗಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳ ಜತೆ ಮಾತನಾಡಿರುವ ಅವರು, ಕೇಂದ್ರ ಸರ್ಕಾರ ಪುಕ್ಕಟೆ ಗ್ಯಾಸ್ ನೀಡುವುದಾಗಿ ಹೇಳಿ ಉಜ್ವಲ ಯೋಜನೆಯನ್ನು ಜಾರಿಗೆ ತಂದಿದೆ. ಇದನ್ನು ನಂಬಿದ ಮಹಿಳೆಯರಿಗೆ ಒಂದು ಸಿಲಿಂಡರ್ ಕೊಟ್ಟ ಮೇಲೆ ಬೆಲೆ ಏರಿಕೆಯ ಶಾಕ್ ನೀಡಿತು. ಈಗ ಸಿಲಿಂಡರ್ ಬೆಲೆ ಸಾವಿರ ರೂಪಾಯಿ ದಾಟಿದ್ದು, ಬಡಜನರು ಜೀವನ ಸಾಗಿಸುವುದೇ ದುಸ್ತರವಾಗಿದೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು. ನಮ್ಮಲ್ಲಿ ಅಡುಗೆ ಅನಿಲ ರಿಯಾಯಿತಿ ಒಂದೇ ಯೋಜನೆ ಅಲ್ಲ, ಇನ್ನೂ ಹಲವಾರು ಯೋಜನೆಗಳು ಇವೆ. ವರ್ಷಕ್ಕೆ ಐದು ಸಿಲಿಂಡರ್ ಉಚಿತವಾಗಿ ಸಿಗಲಿವೆ. 10 ಸಿಲಿಂಡರ್‌ಗೆ ಅರ್ಧ ಹಣ ಪಡೆಯಲಿದ್ದೇವೆ. ಇನ್ನು, ಆಟೋ ಚಾಲಕರಿಗೆ ಪ್ರತಿ ತಿಂಗಳು ಎರಡು ಸಾವಿರ ರೂಪಾಯಿ ಕೊಡಲಾಗುವುದು. ಹಾಗೆಯೇ, ಅಂಗನವಾಡಿ ಕಾರ್ಯಕರ್ತರ ಬೇಡಿಕೆಗಳನ್ನು ಈಡೇರಿಸಲಾಗುವುದು. ಈ ಬಗ್ಗೆ ಆರ್ಥಿಕ ತಜ್ಞರ ಜೊತೆ ಚರ್ಚೆ ಮಾಡಲಾಗುತ್ತದೆ ಎಂದು ಅವರು ಘೋಷಣೆ ಮಾಡಿದರು.

ಉಮೇಶ್ ಪಾಲ್ ಅಪಹರಣ ಕೇಸು: ಗ್ಯಾಂಗ್‌ಸ್ಟರ್ ಅತೀಕ್ ಅಹ್ಮದ್ ಸೇರಿ ಮೂವರಿಗೆ ಜೀವಾವಧಿ ಶಿಕ್ಷೆ



ಪ್ರಯಾಗ್‌ರಾಜ್, ಮಾ.28– 2006ರ ಉಮೇಶ್ ಪಾಲ್ ಅಪಹರಣ ಪ್ರಕರಣದಲ್ಲಿ ಗ್ಯಾಂಗ್‌ಸ್ಟರ್ ಅತೀಕ್ ಅಹ್ಮದ್, ದಿನೇಶ್ ಪಾಸಿ ಮತ್ತು ಖಾನ್ ಸೌಲತ್ ಹನೀಫ್ ಅವರನ್ನು ಅಪರಾಧಿಗಳೆಂದು ಇಲ್ಲಿನ ಶಾಸಕರು–ಸಂಸದರ ವಿರುದ್ಧದ ಕ್ರಿಮಿನಲ್ ಮೊಕದ್ದಮೆಗಳ ವಿರುದ್ಧ ವಿಚಾರಣೆ ನಡೆಸುವ ನ್ಯಾಯಾಲಯ ಮಂಗಳವಾರ ತೀರ್ಪು ನೀಡಿದೆ.

ನ್ಯಾಯಾಲಯ ಅತೀಕ್‌ಗೆ ಜೀವಾವಧಿ ಶಿಕ್ಷೆ ಮತ್ತು 5,000 ರೂಪಾಯಿ ದಂಡ ವಿಧಿಸಿದೆ. ವಿಶೇಷ ಎಂಪಿ–ಎಂಎಲ್‌ಎ ನ್ಯಾಯಾಲಯದ ನ್ಯಾಯಾಧೀಶ ದಿನೇಶ್‌ಚಂದ್ರ ಶುಕ್ಲಾ ಅವರು ಅಹ್ಮದ್, ವಕೀಲ ಸೌಲತ್ ಹನೀಫ್ ಮತ್ತು ದಿನೇಶ್ ಪಾಸಿ ಅವರನ್ನು ಪ್ರಕರಣದಲ್ಲಿ ತಪ್ಪಿತಸ್ಥರು ಎಂದು ತೀರ್ಪು ನೀಡಿದೆ ಎಂದು ಸರ್ಕಾರದ ಪರ ವಕೀಲ ಗುಲಾಬ್ ಚಂದ್ರ ಅಗ್ರಹರಿ ತಿಳಿಸಿದ್ದಾರೆ. ಉಮೇಶ್ ಪಾಲ್ ಕುಟುಂಬಕ್ಕೆ ತಲಾ 1 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ಅಪರಾಧಿಗಳಿಗೆ ನ್ಯಾಯಾಲಯ ಆದೇಶ ನೀಡಿದೆ.

ಈ ಪ್ರಕರಣದಲ್ಲಿ ಅಹ್ಮದ್ ಸಹೋದರ ಖಾಲಿದ್ ಅಜೀಂ ಅಲಿಯಾಸ್ ಅಶ್ರಫ್ ಸೇರಿದಂತೆ ಏಳು ಮಂದಿಯನ್ನು ಖುಲಾಸೆಗೊಳಿಸಲಾಗಿದೆ ಎಂದು ಅವರು ಹೇಳಿದರು.

ಜನವರಿ 25, 2005 ರಂದು ಆಗಿನ ಬಿಎಸ್ಪಿ ಶಾಸಕ ರಾಜು ಪಾಲ್ ಅವರ ಹತ್ಯೆಯ ನಂತರ, ಜಿಲ್ಲಾ ಪಂಚಾಯತ್ ಸದಸ್ಯರಾಗಿದ್ದ ಉಮೇಶ್ ಪಾಲ್ ಅವರು ಕೊಲೆಗೆ ಸಾಕ್ಷಿಯಾಗಿರುವುದಾಗಿ ಪೊಲೀಸರಿಗೆ ತಿಳಿಸಿದ್ದರು. ಉಮೇಶ್ ಪಾಲ್ ಅಹ್ಮದ್ ಅವರ ಒತ್ತಡಕ್ಕೆ ಕೇಸು ಹಿಂತೆಗೆದುಕೊಳ್ಳಲು ನಿರಾಕರಿಸಿದಾಗ ಫೆ.28, 2006 ರಂದು ಬಂದೂಕು ತೋರಿಸಿ ಅವರನ್ನು ಅಪಹರಿಸಲಾಯಿತು ಎಂದು ಆರೋಪಿಸಿದ್ದರು.

ಜುಲೈ 5, 2007ರಂದು ಅಹ್ಮದ್, ಅವರ ಸಹೋದರ ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು 11 ಜನರ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಅವರಲ್ಲಿ ಒಬ್ಬರು ನಂತರ ನಿಧನರಾದರು.

ಅಹ್ಮದ್ ಮತ್ತು ಅಶ್ರಫ್ ಇಬ್ಬರೂ ಜೈಲಿನಲ್ಲಿದ್ದಾಗ ಉಮೇಶ್ ಪಾಲ್ ಅವರನ್ನು ಕೊಲ್ಲುವ ಸಂಚಿನಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ. ಫೆಬ್ರವರಿ 24 ರಂದು ಉಮೇಶ್ ಪಾಲ್ ಅವರನ್ನು ಪ್ರಯಾಗರಾಜ್ ನಿವಾಸದ ಹೊರಗೆ ಗುಂಡಿಕ್ಕಿ ಕೊಲ್ಲಲಾಯಿತು.

ನಮ್ಮ ಸರ್ಕಾರ ಕ್ರಿಮಿನಲ್‌ಗಳನ್ನು ದಮನ ಮಾಡುತ್ತದೆ: ನಮ್ಮ ಸರ್ಕಾರವು ಕಾರ್ಯಾಚರಣೆ ಮತ್ತು ಕಠಿಣ ಕ್ರಮ ಕೈಗೊಳ್ಳುವ ಮೂಲಕ ಅಪರಾಧಿಗಳನ್ನು ನಿರ್ಮೂಲನೆ ಮಾಡುತ್ತಿದೆ. ಪ್ರತಿಯೊಬ್ಬ ಅಪರಾಧಿಗೂ ಕಠಿಣ ಶಿಕ್ಷೆಯಾಗಬೇಕೆಂದು ನ್ಯಾಯಾಲಯವನ್ನು ಕೋರಲಾಗುತ್ತಿದೆ ಎಂದು ಉತ್ತರ ಪ್ರದೇಶ ಉಪ ಮುಖ್ಯಮಂತ್ರಿ ಬ್ರಜೇಶ್ ಪಾಠಕ್ ಪ್ರತಿಕ್ರಿಯಿಸಿದ್ದಾರೆ. ನಮ್ಮ ಸರ್ಕಾರವು ಕಠಿಣ ಕ್ರಮ ತೆಗೆದುಕೊಳ್ಳುವ ಮೂಲಕ ಅಪರಾಧಿಗಳನ್ನು ನಿರ್ಮೂಲನೆ ಮಾಡುತ್ತಿದೆ. ಪ್ರತಿಯೊಬ್ಬ ಅಪರಾಧಿಗೂ ಕಠಿಣ ಶಿಕ್ಷೆಯಾಗಬೇಕೆಂದು ನ್ಯಾಯಾಲಯವನ್ನು ಕೇಳಿಕೊಳ್ಳಲಾಗಿದೆ. ರಾಜ್ಯದಲ್ಲಿ ನಿರ್ಭೀತ ವಾತಾವರಣವಿದೆ ಎಂದು ಜನರು ನಂಬಿದ್ದಾರೆ ಎಂದರು.

ಅತೀಕ್ ಅಹ್ಮದ್‌ಗೆ ಮರಣದಂಡನೆಯಾಗಬೇಕು: ನನ್ನ ಮಗನನ್ನು ಅಪಹರಿಸಿದ್ದಕ್ಕಾಗಿ ಅತೀಕ್ ಅಹ್ಮದ್‌ಗೆ ಜೀವಾವಧಿ ಶಿಕ್ಷೆ ನೀಡಲಾಗಿದೆ. ಆದರೆ ನನ್ನ ಮಗನನ್ನು ಕೊಂದಿದ್ದಕ್ಕಾಗಿ ಅವನಿಗೆ ಮರಣದಂಡನೆ ನೀಡಬೇಕು. ಯುಪಿ ಸಿಎಂ ಯೋಗಿ ಆದಿತ್ಯನಾಥ್ ಮತ್ತು ನ್ಯಾಯಾಂಗ ವ್ಯವಸ್ಥೆಯಲ್ಲಿ ನನಗೆ ನಂಬಿಕೆ ಇದೆ ಎಂದು ಶಾಂತಿ ದೇವಿ ಉಮೇಶ್‌ಪಾಲ್ ತಾಯಿ ಪ್ರತಿಕ್ರಿಯಿಸಿದ್ದಾರೆ.

ಪೇಟವಿಲ್ಲದೆ ಮಾಸ್ಕ್ ಧರಿಸಿ ದೆಹಲಿಯ ಮಾರ್ಕೆಟ್‌ನಲ್ಲಿ ಅಮೃತ್‌ಪಾಲ್ ಸಿಂಗ್ ಓಡಾಟ; ಸಿಸಿಟಿವಿಯಲ್ಲಿ ಸೆರೆ

ಚಂಡೀಗಢ, ಮಾ.28– ಪೊಲೀಸರಿಗೆ ಸಿಗದೆ ತಲೆಮರೆಸಿಕೊಂಡಿರುವ ಧಾರ್ಮಿಕ ಪ್ರವಚಕ, ಖಲಿಸ್ತಾನ್ ನಾಯಕ ಅಮೃತಪಾಲ್ ಸಿಂಗ್ ಪೇಟವಿಲ್ಲದೆ ರಾಜಧಾನಿ ನವದೆಹಲಿಯ ಮಾರ್ಕೆಟ್‌ನಲ್ಲಿ ಓಡಾಡಿರುವುದು ಸಿಸಿಟಿವಿಯಲ್ಲಿ ಸೆರೆಯಾಗಿದೆ. ಸಹಚರ ಪಾಪಲ್ ಪ್ರೀತ್ ಸಿಂಗ್ ಜೊತೆಗೆ ಅಮೃತಪಾಲ್ ಸಿಂಗ್ ಇರುವ ಹೊಸ ವಿಡಿಯೋವೊಂದು ಮಂಗಳವಾರ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಕಣ್ಣಿಗೆ ಕಪ್ಪು ಬಣ್ಣದ ಗ್ಲಾಸ್ ಧರಿಸಿ, ಮಾಸ್ಕ್ ಹಾಕಿಕೊಂಡು ಅಮೃತಪಾಲ್ ಸಿಂಗ್ ಕಾಣಿಸಿಕೊಂಡಿದ್ದರೆ, ಆತನ ಹಿಂದೆ ಬ್ಯಾಗ್‌ನೊಂದಿಗೆ ಪಾಪಲ್ ಪ್ರೀತ್ ಸಿಂಗ್ ನಡೆಯುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡಿದೆ. ಈ ವಿಡಿಯೋ ಬಗ್ಗೆ ಪಂಜಾಬ್ ಪೊಲೀಸರು ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಪಾಪಲ್ ಪ್ರೀತ್ ಸಿಂಗ್ ಅಮೃತಪಾಲ್ ಸಿಂಗ್ ಅವರ ಮಾರ್ಗದರ್ಶಕ ಎಂದು ಹೇಳಲಾಗುತ್ತದೆ.

ಅಮೃತಪಾಲ್ ಸಿಂಗ್ ಪಾಕಿಸ್ತಾನದ ಬೇಹುಗಾರಿಕಾ ಸಂಸ್ಥೆ ISIಯೊಂದಿಗೆ ಸಂಪರ್ಕದಲ್ಲಿದ್ದರು ಎಂದು ಹೇಳಲಾಗಿದೆ. ಮಾರ್ಚ್ 18 ರಂದು ಆತನ ವಿರುದ್ಧ ಪೊಲೀಸರ ಹುಡುಕಾಟ ಆರಂಭವಾದಾಗಿನಿಂದಲೂ ಆತನ ಬೋಧಕನ ಹಲವಾರು ಚಿತ್ರಗಳು ಮತ್ತು ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ಕಾಣಿಸಿಕೊಂಡಿವೆ. ಆದರೆ ಅಮೃತಪಾಲ್ ಸಿಂಗ್ ಅನೇಕ ಬಾರಿ ತನ್ನ ವೇಷ ಬದಲಾಯಿಸುವ ಮೂಲಕ ವಿವಿಧ ವಾಹನಗಳಲ್ಲಿ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಾರ್ಚ್ 19ರಂದು ಹರಿಯಾಣದ ಕುರುಕ್ಷೇತ್ರ ಜಿಲ್ಲೆಯ ಶಹಾಬಾದ್‌ನಲ್ಲಿರುವ ತನ್ನ ಮನೆಯಲ್ಲಿ ಅಮೃತಪಾಲ್ ಸಿಂಗ್ ಮತ್ತು ಪಾಪಲ್‌ಪ್ರೀತ್ ಸಿಂಗ್‌ಗೆ ಮಹಿಳೆಯೊಬ್ಬರು ಆಶ್ರಯ ನೀಡಿದ್ದರು. ಮಾರ್ಚ್ 25 ರಂದು ಅಮೃತಪಾಲ್ ಸಿಂಗ್ ಮೊಬೈಲ್ ಫೋನ್‌ನಲ್ಲಿ ಮಾತನಾಡುತ್ತಿರುವಂತೆ ಸಿಸಿಟಿವಿ ದೃಶ್ಯಾವಳಿಗಳು ಹೊರಹೊಮ್ಮಿದವು. ಬಂಧಿತ ವ್ಯಕ್ತಿಯ ಬಿಡುಗಡೆಗಾಗಿ ಅಮೃತ್‌ಪಾಲ್ ಸಿಂಗ್ ಮತ್ತು ಅವರ ಬೆಂಬಲಿಗರು ಅಮೃತಸರ ಬಳಿಯ ಅಜ್ನಾಲಾ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿದ ಮೂರು ವಾರಗಳ ನಂತರ ಪೊಲೀಸರ ಕಾರ್ಯಾಚರಣೆ ಆರಂಭವಾಗಿದೆ. ಈ ಘಟನೆಯಲ್ಲಿ ಆರು ಪೊಲೀಸರು ಗಾಯಗೊಂಡಿದ್ದರು. ಆರು ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆ. ಪಂಜಾಬ್ ಪೊಲೀಸರು ಕೊಲೆ ಮತ್ತು ದಾಳಿಯ ಯತ್ನ, ಪೊಲೀಸ್ ಸಿಬ್ಬಂದಿ ಮತ್ತು ಸಾರ್ವಜನಿಕ ಸೇವಕರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದು, ಸೇರಿದಂತೆ ಹಲವು ಅಪರಾಧ ಪ್ರಕರಣಗಳ ಅಡಿಯಲ್ಲಿ ಅಮೃತಪಾಲ್ ಸಿಂಗ್‌ನ ಹಲವಾರು ಸಹಚರರನ್ನು ಬಂಧಿಸಿದ್ದಾರೆ. ಅವರಲ್ಲಿ ಕೆಲವರ ವಿರುದ್ಧ ಅವರು ಕಠಿಣ ರಾಷ್ಟ್ರೀಯ ಭದ್ರತಾ ಕಾಯ್ದೆಯನ್ನು ಹಾಕಿದ್ದಾರೆ.

ರಾಜ್ಯದ ಅನಧಿಕೃತ ಶಾಲೆಗಳಿಗೆ ನಿಯಮ ಉಲ್ಲಂಘನೆಯನ್ನು ಸರಿಪಡಿಸಲು ಕಾಲಾವಕಾಶ: ಶಿಕ್ಷಣ ಇಲಾಖೆ

ಬೆಂಗಳೂರು, ಮಾ.28–ರಾಜ್ಯದಲ್ಲಿನ ಅನಧಿಕೃತ ಶಾಲೆಗಳಿಗೆ ಅಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗದಂತೆ ನಿಯಮಗಳ ಉಲ್ಲಂಘನೆಯನ್ನು ಸರಿಪಡಿಸಲು ಕಾಲಾವಕಾಶ ನೀಡಲಾಗುವುದು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ರಾಜ್ಯದಲ್ಲಿ 1,600 ಅನಧಿಕೃತ ಶಾಲೆಗಳನ್ನು ಗುರುತಿಸಿದೆ. ಅವುಗಳಲ್ಲಿ 937 ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಮತ್ತು ಬೆಂಗಳೂರು ಗ್ರಾಮಾಂತರ ಪ್ರದೇಶಗಳಲ್ಲಿವೆ. ಅಂತಹ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟಿದೆ ಎಂಬುದು ತಿಳಿದಿಲ್ಲ. ಇಲಾಖೆ ಮೂಲಗಳು ವಿದ್ಯಾರ್ಥಿಗಳು ಲಕ್ಷಗಳಿರಬಹುದು ಎಂದಿವೆ.

ನಾವು ಅಂತಹ ಶಾಲೆಗಳ ಸಮೀಕ್ಷೆಯನ್ನು ನಡೆಸಿದ್ದೇವೆ ಮತ್ತು ಡಿಎಸ್‌ಇಎಲ್‌ಗೆ ವರದಿಯನ್ನು ಸಲ್ಲಿಸಿದ್ದೇವೆ ಎಂದು ಸಾರ್ವಜನಿಕ ಶಿಕ್ಷಣ ಆಯುಕ್ತ ಆರ್. ವಿಶಾಲ್ ಹೇಳಿದರು.

ಶಾಲಾ ಶಿಕ್ಷಣಕ್ಕೆ ತೊಂದರೆ ಕೊಡಲು ಬಯಸುವುದಿಲ್ಲ: ಬೋರ್ಡ್ ಪರೀಕ್ಷೆಯ ನಂತರ ಅಂತಹ ಶಾಲೆಗಳ ಪಟ್ಟಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಬಿ.ಸಿ.ನಾಗೇಶ್ ಇದಕ್ಕೂ ಮೊದಲು ಹೇಳಿದ್ದರು.

ಅಂತಹ ಶಾಲೆಗಳ ವಿರುದ್ಧದ ಸಾಮಾನ್ಯ ದೂರುಗಳೆಂದರೆ, ಸರ್ಕಾರದ ಸಂಯೋಜನೆಯಿಲ್ಲದೆ ತರಗತಿಗಳನ್ನು ನಡೆಸುವುದು, ಸಂಯೋಜನೆ ಕುರಿತು ಪೋಷಕರನ್ನು ತಪ್ಪು ದಾರಿಗೆಳೆಯುವುದು, ಯಾವುದೇ ಅನುಮತಿಯಿಲ್ಲದ ಗ್ರೇಡ್‌ಗಳಿಗೆ ತರಗತಿಗಳನ್ನು ನಡೆಸುವುದು ಹಾಗೂ ಕಟ್ಟಡಗಳು ಮತ್ತು ಮಕ್ಕಳ ಸುರಕ್ಷತೆಗೆ ಸಂಬಂಧಿಸಿದ ಸಮಸ್ಯೆಗಳಾಗಿವೆ. ಇಂತಹ ಶಾಲೆಗಳು ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿವೆ. ಅವುಗಳಲ್ಲಿ ಒಂದಾದ ಪ್ರಮುಖ ಸಂಸ್ಥೆಯು ನಗರದಲ್ಲಿ ಮತ್ತು ಇತರೆಡೆ ಯಾವುದೇ ಸಂಯೋಜನೆಯಿಲ್ಲದ ಅನೇಕ ಶಾಖೆಗಳನ್ನು ಹೊಂದಿದೆ. ಆದರೂ, ಅದು ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್ (ಸಿಇಎಸ್‌ಇ) ನಿಂದ ಸಂಯೋಜಿತ ಎಂದು ಹೇಳಿಕೊಳ್ಳುತ್ತದೆ.

ಮೂಲಗಳ ಪ್ರಕಾರ, ಅನಧಿಕೃತ ಶಾಲೆಗಳನ್ನು ಸರಿಪಡಿಸಲು ಸಮಯ ನೀಡಲಾಗುತ್ತದೆ. ನಾವು ಮಕ್ಕಳ ಶಾಲಾ ಶಿಕ್ಷಣವನ್ನು ಅಡ್ಡಿಪಡಿಸಲು ಬಯಸುವುದಿಲ್ಲ. ಅಂತಹ ಶಾಲೆಗಳನ್ನು ಮುಚ್ಚುವುದು ಅಥವಾ ತರಗತಿಗಳನ್ನು ತಕ್ಷಣವೇ ನಿಲ್ಲಿಸುವುದು ಅರ್ಥವಲ್ಲ. ಏಕೆಂದರೆ, ಇದು ಲಕ್ಷಾಂತರ ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ, ಸಂಬಂಧಿತ ದಾಖಲೆಗಳನ್ನು ಸಲ್ಲಿಸಲು ನಾವು ಅವರಿಗೆ ಸಮಯವನ್ನು ನೀಡುತ್ತೇವೆ. ಇದರಿಂದ ಅವರು ತರಗತಿಗಳನ್ನು ಮುಂದುವರಿಸಲು ಅವಕಾಶ ಮಾಡಿಕೊಡಲಾಗುತ್ತದೆ ಎಂದು ಅವರು ಹೇಳಿದರು.

ಕಳಪೆ ಗುಣಮಟ್ಟ: 18 ಔಷಧ ಕಂಪನಿಗಳ ಪರವಾನಗಿ ರದ್ದು

ನವದೆಹಲಿ: ಕಳಪೆ ಗುಣಮಟ್ಟದ ಔಷಧಗಳನ್ನು ತಯಾರಿಸುವ ಕಂಪನಿಗಳ ಮೇಲೆ ಕಠಿಣ ಕ್ರಮಕ್ಕೆ ಮುಂದಾಗಿರುವ ಕೇಂದ್ರ ಹಾಗೂ ಕೆಲವು ರಾಜ್ಯ ಸರ್ಕಾರಗಳು, 76 ಕಂಪನಿಗಳಿಗೆ ಸೇರಿದ ಸ್ಥಳಗಳಲ್ಲಿ ಜಂಟಿ ತಪಾಸಣೆ ನಡೆಸಿವೆ. ನಕಲಿ ಮತ್ತು ಕಳಪೆ ಗುಣಮಟ್ಟದ ಔಷಧ ತಯಾರಿಸುತ್ತಿದ್ದ ಆರೋಪದ ಅಡಿ 18 ಕಂಪನಿಗಳ ಪರವಾನಗಿಯನ್ನು ರದ್ದುಮಾಡಿವೆ.

ಹಲವು ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಕಳೆದ 15 ದಿನಗಳಿಂದ ಈ ಕಾರ್ಯಾಚರಣೆ ನಡೆದಿದೆ ಎಂದು ಮೂಲಗಳು ತಿಳಿಸಿವೆ. ಆದರೆ ಪರವಾನಗಿ ರದ್ದು ಮಾಡಿರುವ ಕಂಪನಿಗಳ ಹೆಸರು ತಿಳಿದುಬಂದಿಲ್ಲ.

ಕಳಪೆ ಗುಣಮಟ್ಟದ ಔಷಧಗಳನ್ನು ತಯಾರಿಸುತ್ತಿದ್ದ 76 ಕಂಪನಿಗಳ ಮೇಲೆ ಮೊದಲ ಹಂತದಲ್ಲಿ ಕ್ರಮ ಜರುಗಿಸಲಾಗಿದೆ. 18 ಕಂಪನಿಗಳ ಪರವಾನಗಿ ರದ್ದು ಮಾಡಿರುವುದಲ್ಲದೆ, 26 ಕಂಪನಿಗಳಿಗೆ ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ. ಮೂರು ಕಂಪನಿಗಳ ಕೆಲವು ಉತ್ಪನ್ನಗಳಿಗೆ ನೀಡಿದ್ದ ಅನುಮತಿಯನ್ನು ರದ್ದು ಮಾಡಲಾಗಿದೆ ಎಂದು ಮೂಲಗಳು ವಿವರಿಸಿವೆ.

ಕಳಪೆ ಗುಣಮಟ್ಟದ ಔಷಧಗಳ ವಿರುದ್ಧದ ವಿಶೇಷ ಅಭಿಯಾನದ ಭಾಗವಾಗಿ ಕಾನೂನು ಜಾರಿ ಸಂಸ್ಥೆಗಳು ಒಟ್ಟು 203 ಕಂಪನಿಗಳನ್ನು ಗುರುತಿಸಿವೆ. ಈ ಪೈಕಿ ಹೆಚ್ಚಿನ ಕಂಪನಿಗಳು ಹಿಮಾಚಲ ಪ್ರದೇಶದಲ್ಲಿ (70) ಇವೆ. ಉತ್ತರಾಖಂಡ (45) ಮತ್ತು ಮಧ್ಯಪ್ರದೇಶದಲ್ಲಿಯೂ (23) ಹೆಚ್ಚಿನ ಸಂಖ್ಯೆಯಲ್ಲಿ ಕಂಪನಿಗಳನ್ನು ಗುರುತಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ತಪಾಸಣೆ ನಡೆಸಲಾಗುತ್ತದೆ ಎಂದು ಗೊತ್ತಾಗಿದೆ. ಭಾರತ ಮೂಲದ ಕಂಪನಿಗಳು ಸಿದ್ಧಪಡಿಸುವ ಔಷಧಗಳ ಗುಣಮಟ್ಟದ ಬಗ್ಗೆ ಈಚಿನ ದಿನಗಳಲ್ಲಿ ಪ್ರಶ್ನೆಗಳು ಮೂಡಿವೆ.

ಶಿಕಾರಿಪುರ ಹಿಂಸಾಚಾರ; ಮೂವರ ಬಂಧನ, ಮುಂದುವರಿದ ಪ್ರತಿಭಟನೆ



ಬೆಂಗಳೂರು: ಬಂಜಾರ ಸಮುದಾಯದವರು ಶಿವಮೊಗ್ಗದ ಶಿಕಾರಿಪುರದಲ್ಲಿ ಒಳ ಮೀಸಲಾತಿ ವಿರೋಧಿಸಿ ನಡೆಸಿದ್ದ ಪ್ರತಿಭಟನೆ ವೇಳೆ ನಡೆದಿದ್ದ ಹಿಂಸಾಚಾರಕ್ಕೆ ಸಂಬಂಧಿಸಿ ಮೂವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಬಗ್ಗೆ ಶಿವಮೊಗ್ಗ ಎಸ್‌ಪಿ ಜಿ.ಕೆ. ಮಿಥುನ್‌ಕುಮಾರ್ ಸುದ್ದಿಮಾಧ್ಯಮಗಳಿಗೆ ಮಾಹಿತಿ ಖಚಿತಪಡಿಸಿದ್ದಾರೆ. ಆರೋಪಿಗಳನ್ನು ರಾಘವೇಂದ್ರ, ಪುನೀತ್ ಹಾಗೂ ಕುಮಾರ್ ಎಂದು ಗುರುತಿಸಲಾಗಿದ್ದು ಇವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 353 (ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಲು ಕ್ರಿಮಿನಲ್ ಬಲದ ಆಕ್ರಮಣ ಅಥವಾ ಬಳಕೆ), ಹಾಗೂ ಇತರ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಹೆಚ್ಚುವರಿ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಸಿಬ್ಬಂದಿಯನ್ನೂ ಭದ್ರತೆಗೆ ನಿಯೋಜಿಸಲಾಗಿತ್ತು ಎಂದು ಎಸ್‌ಪಿ ತಿಳಿಸಿದ್ದಾರೆ. ಈ ಮಧ್ಯೆ, ಬಂಧಿತರನ್ನು ಬಿಡುಗಡೆ ಮಾಡಬೇಕೆಂದು ಬಂಜಾರ, ಕೊರಚ, ಭೋವಿ ಹಾಗೂ ಕೊರಮ ಸಮುದಾಯಗಳ ಜನರು ಶಿವಮೊಗ್ಗ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದ್ದಾರೆ. ಮಂಗಳವಾರ ಬೆಳಿಗ್ಗೆ ಗೃಹ ಸಚಿವ ಆರಗ ಜ್ಞಾನೇಂದ್ರ ಶಿವಮೊಗ್ಗಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದ್ದಾರೆ. ಯಡಿಯೂರಪ್ಪ ಅವರು ಪ್ರತಿಭಟನಾಕಾರರನ್ನು ಬಂಧಿಸದಂತೆ ಕೇಳಿಕೊಂಡಿದ್ದಾರೆ. ಆದರೆ, ಘಟನೆಯಲ್ಲಿ ಕೆಲ ಪೊಲೀಸರಿಗೂ ಗಾಯಗಳಾಗಿವೆ. ಕೆಲವರ ತಲೆಗೆ ಗಾಯಗಳಾಗಿವೆ. ಹೀಗಾಗಿ ಪೊಲೀಸರು ವಿಚಾರಣೆ ನಡೆಸಲಿದ್ದಾರೆ. ಕೆಲವು ಕ್ರಿಮಿನಲ್ ವಿಚಾರಗಳು ಘಟನೆ ಹಿಂದೆ ಶಾಮೀಲಾಗಿರುವ ಬಗ್ಗೆ ನಮಗೆ ಮಾಹಿತಿ ಇದೆ ಎಂದು ಆರಗ ಜ್ಞಾನೇಂದ್ರ ತಿಳಿಸಿದ್ದರು. ಭಾರತೀಯ ಜನತಾ ಪಕ್ಷ (ಬಿಜೆಪಿ) ನೇತೃತ್ವದ ರಾಜ್ಯ ಸರ್ಕಾರವು ಇತ್ತೀಚೆಗೆ ಪರಿಶಿಷ್ಟ ಜಾತಿಗೆ (ಎಸ್‌ಸಿ) ಒಳಮೀಸಲಾತಿ ನೀಡಿರುವುದನ್ನು ವಿರೋಧಿಸಿ ಸೋಮವಾರ ಬಂಜಾರ, ಕೊರಚ, ಭೋವಿ ಮತ್ತು ಕೊರಮ ಸಮುದಾಯಗಳ ಸದಸ್ಯರು ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿತ್ತು. ಶಿಕಾರಿಪುರದ ತಾಲೂಕು ಪಂಚಾಯಿತಿ ಕಚೇರಿ ಎದುರು ಜಮಾಯಿಸಿದ್ದ ಪ್ರತಿಭಟನಾಕಾರರು, ಯಡಿಯೂರಪ್ಪ ಅಥವಾ ಅವರ ಪುತ್ರ ಶಿವಮೊಗ್ಗ ಬಿಜೆಪಿ ಸಂಸದ ಬಿ.ವೈ.ರಾಘವೇಂದ್ರ ಅವರನ್ನು ಭೇಟಿ ಮಾಡಿ ಮಾಡಬೇಕು. ಅವರು ನಮಗೆ ಭರವಸೆ ನೀಡಬೇಕು ಎಂಬ ಆಗ್ರಹ ಮುಂದಿಟ್ಟಿದ್ದರು.

ಪ್ರತಿಭಟನೆ ಮುಂದುವರೆದಿದ್ದರಿಂದ ಪರಿಸ್ಥಿತಿ ಉದ್ವಿಗ್ನಗೊಂಡಿತ್ತು ಮತ್ತು ಜನರನ್ನು ಚದುರಿಸಲು ಪೊಲೀಸರು ಲಾಠಿ ಚಾರ್ಜ್ ಮಾಡಿದ್ದರು. ಇದರಿಂದ ಕೆರಳಿದ ಕೆಲವು ಪ್ರತಿಭಟನಾಕಾರರು ಕರ್ನಾಟಕದ ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿಯ ಪ್ರಬಲ ನಾಯಕ ಬಿಎಸ್ ಯಡಿಯೂರಪ್ಪ ಅವರ ನಿವಾಸದ ಮೇಲೆ ಕಲ್ಲು ತೂರಾಟ ನಡೆಸಿದ್ದರು ಮತ್ತು ಕೆಲವು ಕಿಟಕಿ ಗಾಜುಗಳನ್ನು ಹಾನಿಗೊಳಿಸಿದ್ದರು. ನಂತರ ನಿಷೇಧಾಜ್ಞೆ ಜಾರಿಗೊಳಿಸಲಾಗಿತ್ತು.

ವರ್ಚುವಲ್ ಮೂಲಕ ಕೊಡಗು ವಿವಿ ಉದ್ಘಾಟಿಸಿದ ಸಿಎಂ ಬೊಮ್ಮಾಯಿ



ಬೆಂಗಳೂರಿನ ಜ್ಞಾನಜ್ಯೋತಿ ವಿಶ್ವವಿದ್ಯಾನಿಲಯದ ಸಭಾಂಗಣದಿಂದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ವರ್ಚುವಲ್ ಮೂಲಕ ಕೊಡಗು ವಿವಿ ಉದ್ಘಾಟಿಸಿದರು. ಈ ವೇಳೆ ಸಚಿವರಾದ ಮುರುಗೇಶ್ ನಿರಾಣಿ, ಡಾ. ಅಶ್ವತ್ಥ್‌ನಾರಾಯಣ್ ಇನ್ನಿತರರು ಉಪಸ್ಥಿತರಿದ್ದರು.

ಕುಶಾಲನಗರ, ಮಾ.28– ಕೊಡಗಿನ ಬಹುಕಾಲದ ಕನಸಾದ ಕೊಡಗು ವಿಶ್ವವಿದ್ಯಾಲಯದ ಉದ್ಘಾಟನೆಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಂಗಳವಾರ ಬೆಂಗಳೂರಿನ ಜ್ಞಾನಜ್ಯೋತಿ ವಿಶ್ವವಿದ್ಯಾನಿಲಯದ ಸಭಾಂಗಣದಿಂದ ನೆರವೇರಿಸಿ, ಶುಭ ಹಾರೈಸಿದರು.

ಈ ವೇಳೆ ಮಾತನಾಡಿದ ಮುಖ್ಯಮಂತ್ರಿಗಳು, ಉನ್ನತ ಗುಣಮಟ್ಟದ ಶಿಕ್ಷಣವನ್ನು ರಾಜ್ಯಾದ್ಯಂತ ಪ್ರತಿಯೊಬ್ಬರಿಗೂ ನೀಡುವ ಉದ್ದೇಶದೊಂದಿಗೆ ಇಂದು 9 ಹೊಸ ವಿಶ್ವವಿದ್ಯಾಲಯಗಳನ್ನು ಲೋಕಾರ್ಪಣೆಗೊಳಿಸಿದ್ದೇವೆ. ಅಭಿವೃದ್ಧಿ ಮತ್ತು ಕೌಶಲ್ಯಾಧಾರಿತ ಹಾಗೂ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ನೂತನ ಮಾದರಿಯ ವಿಶ್ವವಿದ್ಯಾಲಯಗಳನ್ನು ಸ್ಥಾಪನೆ ಮಾಡಲಾಗಿದೆ ಎಂದು ತಿಳಿಸಿದರು. ಈ ಸಮಾರಂಭದಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ ಮಾತನಾಡಿ, ಕರ್ನಾಟಕ ರಾಜ್ಯ ಸರ್ಕಾರವು ಜಿಲ್ಲೆಗೆ ಒಂದು ವಿಶ್ವವಿದ್ಯಾಲಯ ಇರಬೇಕು, ಆ ಮೂಲಕ ಶೈಕ್ಷಣಿಕ ಅಸಮತೋಲನ ನಿರ್ಮೂಲನೆ ಆಗಬೇಕು, ಜೊತೆಗೆ ಯುವಜನರಿಗೆ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಸದಾಶಯದೊಂದಿಗೆ ನೂತನ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೊಡಗು ವಿಶ್ವವಿದ್ಯಾಲಯದ ಸಂಸ್ಥಾಪಕ ಕುಲಪತಿಗಳಾದ ಪ್ರೊ. ಅಶೋಕ ಸಂಗಪ್ಪ ಆಲೂರ ಮಾತನಾಡಿ, ಈ ನಾಡಿನ ಆಶೋತ್ತರಗಳಿಗೆ ಅನುಗುಣವಾಗಿ ಕೊಡಗು ವಿಶ್ವವಿದ್ಯಾಲಯ ಸ್ಥಾಪನೆಯಾಗಿದೆ. ಇಲ್ಲಿ ಪ್ರತಿಯೊಬ್ಬರಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು ಹಾಗೂ ಎಲ್ಲರ ಸಲಹೆ ಮತ್ತು ಸಹಕಾರದೊಂದಿಗೆ ಈ ವಿಶ್ವವಿದ್ಯಾನಿಲಯದ ಸರ್ವತೋಮುಖ ಶ್ರೇಯೋಭಿವೃದ್ಧಿಗಾಗಿ ನನ್ನ ನಾಲ್ಕು ವರ್ಷದ ಅವಧಿಯಲ್ಲಿ ಶ್ರಮಿಸಲಾಗುವುದು ಎಂದರು. ಸಂಶೋಧನಾಧಾರಿತ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ವಿವಿಧ ಧನಸಹಾಯ ಸಂಸ್ಥೆಗಳಿಂದ ಯೋಜನೆಗಳನ್ನು ಪಡೆಯಲು ಕ್ರಮ ವಹಿಸಲಾಗುವುದೆಂದರು. ಜನಪ್ರತಿನಿಧಿಗಳು ಮತ್ತು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಹಾಗೂ ಸಹಕಾರದೊಂದಿಗೆ ನೂತನ ವಿಶ್ವವಿದ್ಯಾಲಯದ ಸರ್ವತೋಮುಖ ಅಭಿವೃದ್ಧಿಗೆ ಸರ್ವ ಪ್ರಯತ್ನ ಮಾಡಲಾಗುವುದು ಎಂದರು.

ಈ ಕಾರ್ಯಕ್ರಮದಲ್ಲಿ ಮಡಿಕೇರಿಯಿಂದ ಶಾಸಕ ಅಪ್ಪಚ್ಚುರಂಜನ್, ಮೈಸೂರು–ಕೊಡಗು ಸಂಸದ ಪ್ರತಾಪ್‌ಸಿಂಹ, ವಿರಾಜಪೇಟೆ ಶಾಸಕ ಕೆ.ಜಿ. ಬೋಪಯ್ಯ, ಕೊಡಗು ಜಿಲ್ಲಾ ವ್ಯಾಪ್ತಿಗೆ ಬರುವ ವಿಧಾನಪರಿಷತ್ ಸದಸ್ಯರುಗಳು, ಕರ್ನಾಟಕ ಜೀವ ವೈವಿಧ್ಯ ಮಂಡಳಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷರು, ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು, ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳು, ಕಾಲೇಜು ಶಿಕ್ಷಣ ಇಲಾಖೆ ಆಯುಕ್ತರು, ಉನ್ನತ ಶಿಕ್ಷಣ ಇಲಾಖೆ ಉಪ ಕಾರ್ಯದರ್ಶಿ, ಕೊಡಗು ಜಿಲ್ಲಾಧಿಕಾರಿಗಳು, ಜಿಪಂ ಸಿಇಓ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕಾರ್ಯಕ್ರಮದಲ್ಲಿ ವೈಯಕ್ತಿಕವಾಗಿ ಹಾಗೂ ವರ್ಚುವಲ್ ಮೂಲಕ ಭಾಗವಹಿಸಿದ್ದರು.

ಇದಲ್ಲದೆ ತೊರೆನೂರು ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಕೊಡಗು ವಿಶ್ವವಿದ್ಯಾಲಯದ ಸಂಯೋಜಿತ ಮತ್ತು ಘಟಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಉಪನ್ಯಾಸಕರು, ಸ್ನಾತಕೋತ್ತರ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಆಡಳಿತ ವರ್ಗದವರು ಕ್ಷೇತ್ರದ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

ರಾಹುಲ್ ಗಾಂಧಿ ಸಂಸದ ಸ್ಥಾನ ಅನರ್ಹತೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ



ಕುಶಾಲನಗರ, ಮಾ.28– ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಂಸದ ಸ್ಥಾನ ಅನರ್ಹತೆಗೊಳಿಸಿದ ಕ್ರಮ ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.

ಇಲ್ಲಿನ ಬೈಚನಹಳ್ಳಿಯ ಮಾರಿಯಮ್ಮ ದೇವಾಲಯ ಬಳಿಯಿಂದ ಮರೆವಣಿಗೆ ನಡೆಸಿದ ಪ್ರತಿಭಟನಾಕಾರರು ಬಿಜೆಪಿ ಸರಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ರಾಹುಲ್ ಗಾಂಧಿ ಪರ ಜೈಕಾರ ಮೊಳಗಿಸಿದರು. ಬಿಜೆಪಿ ಸರ್ಕಾರ ದ್ವೇಷದ ರಾಜಕಾರಣದಲ್ಲಿ ತೊಡಗಿದ್ದು, ರಾಹುಲ್ ಗಾಂಧಿಯನ್ನು ಹಣಿಯಲು ಷಡ್ಯಂತ್ರ ರೂಪಿಸುತ್ತಿದೆ ಎಂದು ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಪಿ.ಶಶಿಧರ್, ಕಾಂಗ್ರೆಸ್ ದೇಶದ ಭಾವೈಕ್ಯತೆಯ ಸಂಕೇತ. ದೇಶವನ್ನು ಕಟ್ಟಿ ಬೆಳೆಸಿದ ಕೀರ್ತಿ, ಪರಂಪರೆ ಕಾಂಗ್ರೆಸ್ ಪಕ್ಷಕ್ಕಿದೆ. ಆದರೆ ಒಡೆದು ಆಳುವ ಬ್ರಿಟೀಷರ ನೀತಿಯನ್ನು ಮೈಗೂಡಿಸಿಕೊಂಡಿರುವ ಬಿಜೆಪಿ ಜಾತಿ, ಧರ್ಮ, ಭಾಷೆಯ ವಿಚಾರದಲ್ಲಿ ಸಮಾಜದಲ್ಲಿ ಒಡಕು ಮೂಡಿಸುವ ಪ್ರಯತ್ನದಲ್ಲಿದೆ.

ರಾಹುಲ್ ಗಾಂಧಿಯ ಭಾರತ್ ಜೋಡೋ ಯಾತ್ರೆಯ ಯಶಸ್ಸಿನಿಂದ ಕಂಗಾಲಾದ ಬಿಜೆಪಿ, ಹೇಗಾದರೂ ಮಾಡಿ ರಾಹುಲ್ ಗಾಂಧಿಯವರನ್ನು ಹಣಿಯಲು ತಂತ್ರ ರೂಪಿಸಿ ಪ್ರಕರಣ ದಾಖಲಿಸಿರುವುದು ಹೇಯ ಕೃತ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಪ್ರಮುಖರಾದ ಟಿ.ಪಿ. ಹಮೀದ್, ಸುಂದರೇಶ್, ಶೇಖ್ ಖಲೀಮುಲ್ಲಾ, ಶಿವಶಂಕರ್, ಬಿ.ಡಿ.ಅಣ್ಣಯ್ಯ, ಅಬ್ದುಲ್ ರಜಾಕ್, ಅಬ್ದುಲ್ ಖಾದರ್, ರಾಜೇಂದ್ರ, ಶಾಜಿ, ರಮೇಶ್, ಆದಂ, ನವೀನ್, ದೇವು ಮತ್ತಿತರರು ಇದ್ದರು.

ಕೊಡವ ಅಭಿವೃದ್ಧಿ ನಿಗಮಕ್ಕೆ 250 ಕೋಟಿ ಅನುದಾನಕ್ಕೆ ಯುಕೋ ಮನವಿ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಯುಕೋ ಅಧ್ಯಕ್ಷ ಮಂಜು ಚಿಣ್ಣಪ್ಪ.

ಮಡಿಕೇರಿ, ಮಾ.28– 'ಕೊಡವ ಅಭಿವೃದ್ಧಿ ನಿಗಮ'ಕ್ಕೆ ಕನಿಷ್ಠ 250 ಕೋಟಿ ರೂ. ಅನುದಾನ ಒದಗಿಸುವ ಮೂಲಕ ರಾಜ್ಯ ಸರ್ಕಾರ ಕೊಡವ ಸಮುದಾಯದ ಸರ್ವಾಂಗೀಣ ಪ್ರಗತಿಗೆ ಇಂಬು ನೀಡಬೇಕೆಂದು ಯುನೈಟೆಡ್ ಕೊಡವ ಆರ್ಗನೈಸೇಷನ್ (ಯುಕೋ) ಅಧ್ಯಕ್ಷ ಕೊಕ್ಕಲೆಮಾಡ ಮಂಜು ಚಿಣ್ಣಪ್ಪ ಮನವಿ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕೊಡಗು' ಕರ್ನಾಟಕದೊಂದಿಗೆ ವಿಲೀನವಾದ ಬಳಿಕ ಕರ್ನಾಟಕ ರಾಜ್ಯ ಸರ್ಕಾರ ಜಿಲ್ಲೆಯ ವಿಶಿಷ್ಟ ಸಂಸ್ಕೃತಿಯ ಕೊಡವ ಸಮುದಾಯಕ್ಕೆ ಕೊಡವ ಅಭಿವೃದ್ಧಿ ನಿಗಮ ಎಂಬ ಮಹತ್ವದ ಕೊಡುಗೆ ನೀಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ನಿಗಮ ಕೊಡವ ಸಮುದಾಯದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಪ್ರಗತಿಗೆ ಪೂರಕವಾದ ಕಾರ್ಯಕ್ರಮಗಳನ್ನು ರೂಪಿಸಲು ಹೆಚ್ಚಿನ ಸಹಕಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕೊಡವ ಅಭಿವೃದ್ಧಿ ನಿಗಮ ಸ್ಥಾಪನೆಯ ಎಲ್ಲಾ ಗೌರವವು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಸಲ್ಲುತ್ತದೆ. ಇದೀಗ ಚುನಾವಣೆ ಸಮೀಪಿಸುತ್ತಿದ್ದು, ಮುಂದಿನ ಸರ್ಕಾರವನ್ನು ಯಾರು ಬೇಕಾದರು ರಚಿಸಬಹುದು. ಆದರೆ, ಆಡಳಿತಕ್ಕೆ ಬರುವ ಸರ್ಕಾರ ಕೊಡವ ಅಭಿವೃದ್ಧಿ ನಿಗಮಕ್ಕೆ ಅಗತ್ಯ ಅನುದಾನವನ್ನು ಒದಗಿಸುವ ಮೂಲಕ ಕೊಡವ ಸಮುದಾಯದ ಸರ್ವಾಂಗೀಣ ಪ್ರಗತಿಗೆ ಒತ್ತು ನೀಡಬೇಕೆಂದರು. ನಿಗಮಕ್ಕೆ ಸಮಿತಿಯನ್ನು ರಚಿಸುವ ಹಂತದಲ್ಲಿ ರಾಜಕೀಯ ರಹಿತವಾಗಿ, ಕೊಡವ ಸಮುದಾಯದ ಅಭಿವೃದ್ಧಿಗೆ ವಿವಿಧ ಆಯಾಮಗಳಲ್ಲಿ ಶ್ರಮಿಸುತ್ತಿರುವವರನ್ನು ಮಾತ್ರ ಪರಿಗಣಿಸಬೇಕೆಂದು ಮನವಿ ಮಾಡಿದರು.

ಬಹುದೊಡ್ಡ ಗೆಲುವು: ಯುಕೋ ಸಂಘಟನೆ ಹಲವು ವರ್ಷಗಳಿಂದ ಕೊಡವ ಸಮುದಾಯದ ಅಭಿವೃದ್ಧಿಗೆ ನಿಗಮ ಸ್ಥಾಪನೆಯಾಗಬೇಕೆನ್ನುವ ಬೇಡಿಕೆಯನ್ನು ಸರ್ಕಾರದ ಮುಂದಿಡುತ್ತಾ ಬಂದಿತ್ತು. 2015ರಲ್ಲಿ ಬೇಡಿಕೆ ಈಡೇರಿಕೆಗೆ ತಲಕಾವೇರಿಯಿಂದ–ಬೆಂಗಳೂರಿಗೆ ಪಾದಯಾತ್ರೆಯನ್ನು ನಡೆಸಿತ್ತು. ಇದೀಗ ಮುಖ್ಯಮಂತ್ರಿಗಳು ಕೊಡವ ಅಭಿವೃದ್ಧಿ ನಿಗಮ ಸ್ಥಾಪನೆಗೆ ಆದೇಶ ಹೊರಡಿಸಿರುವುದು ಸಂಘಟನೆಯ ಬಹುದೊಡ್ಡ ಗೆಲುವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಯುಕೋ ಸಂಘಟನೆಯ ಸದಸ್ಯರಾದ ಚೆಪ್ಪುಡಿರ ಸುಜು ಕರುಂಬಯ್ಯ, ಅಪ್ಪಾರಂಡ ವೇಣು ಪೊನ್ನಪ್ಪ ಮತ್ತು ಮಾದೇಟಿರ ತಿಮ್ಮಯ್ಯ ಉಪಸ್ಥಿತರಿದ್ದರು.

ಹುಲಿ ದಾಳಿಗೆ ಕರು ಬಲಿ

ಗೋಣಿಕೊಪ್ಪ, ಮಾ.28– ಹಾತೂರು ಕೆ. ಬೈಗೋಡು ಗ್ರಾಮದಲ್ಲಿ ಕರುವೊಂದು ಹುಲಿಗೆ ಬಲಿಯಾಗಿರುವ ಘಟನೆ ನಡೆದಿದೆ. ಪಿ. ಎಂ. ಉತ್ತಯ್ಯ ಅವರಿಗೆ ಸೇರಿದ ಕರುವಿನ ಕಳೇಬರ ಸೋಮವಾರ ತೋಟದಲ್ಲಿ ಪತ್ತೆಯಾಗಿದೆ. ಕಳೆದ 5 ದಿನಗಳಿಂದ ಕರು ಕಾಣೆಯಾಗಿದ್ದು, ತೋಟದಲ್ಲಿ ಪತ್ತೆಯಾಗಿರುವ ಕಳೇಬರದ ಭಾಗಶಃ ಹುಲಿ ತಿಂದಿದೆ. ಈ ಬಗ್ಗೆ ಪೊನ್ನಂಪೇಟೆ ವಲಯ ಅರಣ್ಯ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದೆ.

ಗೃಹಿಣಿ ನೇಣಿಗೆ ಶರಣು

ಮಡಿಕೇರಿ, ಮಾ.28– ವಿವಾಹಿತೆಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮಡಿಕೇರಿ ನಗರದ ಹೊಸ ಬಡಾವಣೆಯಲ್ಲಿ ನಡೆದಿದೆ. ರವೀಂದ್ರ ಎಂಬವರ ಪುತ್ರಿ ಭೂಮಿಕಾ(28) ನೇಣಿಗೆ ಶರಣಾದವರಾಗಿದ್ದು, ಎರಡು ವರ್ಷಗಳ ಹಿಂದೆಯಷ್ಟೇ ವಿವಾಹವಾಗಿದ್ದ ಇವರಿಗೆ 11 ತಿಂಗಳ ಹೆಣ್ಣು ಮಗುವಿದೆ. ಮಡಿಕೇರಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ.

ಪಾಲಿಬೆಟ್ಟ ಆಸ್ಪತ್ರೆಗೆ ಹೊಸ ಆಂಬುಲೆನ್ಸ್



ಸಿದ್ದಾಪುರ, ಮಾ.28– ಶಾಸಕರ ಪ್ರಯತ್ನದಿಂದ ಸಂಸದರ ಗ್ರಾಮೀಣ ಅಭಿವೃದ್ಧಿ ನಿಧಿಯಿಂದ ಹೊಸ ಆಂಬುಲೆನ್ಸ್ ವಾಹನವು ಪಾಲಿಬೆಟ್ಟ ಸರ್ಕಾರಿ ಆಸ್ಪತ್ರೆಯ ಮೂಲಕ ಸಾರ್ವಜನಿಕ ಸೇವೆಗೆ ಲಭ್ಯವಿದ್ದು ಸುತ್ತಮುತ್ತಲ ಜನರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ ಮೂಕೊಂಡ ವಿಜು ಸುಬ್ರಮಣಿ ಮನವಿ ಮಾಡಿದ್ದಾರೆ.

ಪಾಲಿಬೆಟ್ಟ ಆಸ್ಪತ್ರೆ ಆವರಣದಲ್ಲಿ ನೂತನ ಆಂಬುಲೆನ್ಸ್ ಗೆ ಚಾಲನೆ ನೀಡಿ ಮಾತನಾಡಿದ ಅವರು, ಪಾಲಿಬೆಟ್ಟದಲ್ಲಿ ಇತ್ತೀಚೆಗೆ ಗ್ರಾಮಸ್ಥರು ಆಂಬುಲೆನ್ಸ್ ವ್ಯವಸ್ಥೆ ಬೇಕೆಂದು ಪ್ರತಿಭಟನೆ ಮಾಡಿದ್ದರು. ಗ್ರಾಮಸ್ಥರ ಬೇಡಿಕೆಗೆ ತಕ್ಷಣ ಸ್ಪಂದನೆ ಸಿಕ್ಕಿದೆ. ಇದೀಗ ಗ್ರಾಮಕ್ಕೆ ಹೊಸ ಆಂಬುಲೆನ್ಸ್ ಬಂದಿದ್ದು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದರು.

ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಅಜಿತ್ ಕರಂಬಯ್ಯ ಮಾತನಾಡಿ, ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಅರಿತು ಆಂಬುಲೆನ್ಸ್ ವ್ಯವಸ್ಥೆಯನ್ನು ಮಾಡಿಕೊಟ್ಟ ಶಾಸಕರು, ಸಂಸದರು ಹಾಗೂ ಆರೋಗ್ಯ ಇಲಾಖೆಗೆ ಅಭಿನಂದನೆ ಸಲ್ಲಿಸಿದರು.

ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ. ಲೋಹಿತ್ ಮಾತನಾಡಿ, ಆಸ್ಪತ್ರೆಯಲ್ಲಿ ಎಲ್ಲಾ ಸೌಲಭ್ಯಗಳೊಂದಿಗೆ ಹೆಚ್ಚು ವೈದರಿದ್ದು, ಸಾರ್ವಜನಿಕರಿಗೆ ಆರೋಗ್ಯ ಸೇವೆ ನೀಡಲು ಮುಂದಾಗಿದ್ದೇವೆ. ಇದರೊಂದಿಗೆ ಆಂಬುಲೆನ್ಸ್ ಸೇವೆಯು ಇದ್ದು, ಸದುಪಯೋಗಪಡಿಸಿಕೊಂಡು ಆಸ್ಪತ್ರೆ ಆಡಳಿತದೊಂದಿಗೆ ಕೈಜೋಡಿಸಬೇಕೆಂದರು.

ಈ ಸಂದರ್ಭ ವೈದ್ಯರುಗಳಾದ ಡಾ.ಜಗದೀಶ್, ಡಾ.ಸುನೀಲ್, ಡಾ.ಬಸವಪ್ಪ, ಪ್ರಮುಖರಾದ ಶಶಿ, ಅಯ್ಯಪ್ಪ, ಮನು, ರಮೇಶ್, ಸಿಬ್ಬಂದಿಗಳಾದ ಮಾಲ, ಲಲಿತ, ಮಂಜು, ರವಿ ಸೇರಿದಂತೆ ಮತ್ತಿತರರು ಹಾಜರಿದ್ದರು.

ಎಲ್ಲಾ ಜಾತಿ, ವರ್ಗಗಳಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿದ ರಾಜ್ಯ ಸರ್ಕಾರ

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮಂಗಲ ಶಿವಕುಮಾರ್

ಚಾಮರಾಜನಗರ, ಮಾ.28– ರಾಜ್ಯ ಬಿಜೆಪಿ ಸರ್ಕಾರ ವಿವಿಧ ಜಾತಿಗಳಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿಕೊಡುವ ಮೂಲಕ ಬಾಬಾ ಸಾಹೇಬ್ ಡಾ.ಬಿ.ಆರ್.



ಅಂಬೇಡ್ಕರ್‌ರವರ ಆಶಯಗಳನ್ನು ಈಡೇರಿಸಿ ಸಮ ಸಮಾಜ ನಿರ್ಮಾಣ ಮಾಡಲು ಮುಂದಾಗಿದೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಗಲ ಶಿವಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇದುವರೆಗೆ ಆಡಳಿತ ನಡೆಸಿದ್ದ ಜೆಡಿಎಸ್ ಹಾಗೂ ಕಾಂಗ್ರೆಸ್, ಮೀಸಲಾತಿ ವರ್ಗೀಕರಣ ಮಾಡಲು ವಿಫಲವಾಗಿದ್ದವು. ಆದರೆ, ಸಿಎಂ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಬಿಜೆಪಿ ಸರ್ಕಾರ ಎಲ್ಲಾ ವರ್ಗದವರಿಗೂ ಸಮಾನವಾದ ಅವಕಾಶ ಮಾಡಿಕೊಟ್ಟಿದೆ. ಇದೊಂದು ಐತಿಹಾಸಿಕ ನಿರ್ಧಾರವಾಗಿದೆ.

ಪರಿಶಿಷ್ಟ ಜಾತಿಗೆ ಶೇ.17 ಹಾಗೂ ಪರಿಶಿಷ್ಟ ವರ್ಗಕ್ಕೆ ಶೇ.7 ಹಾಗೂ ವೀರಶೈವ ಲಿಂಗಾಯತ ಸಮಾಜವನ್ನು 2ಡಿ ಗೆ ಸೇರ್ಪಡೆ ಮಾಡಿ ಶೇ.7, ಒಕ್ಕಲಿಗರಿಗೆ ಶೇ.7 ರಷ್ಟು ಏರಿಕೆ ಮಾಡಿದೆ. ಆದೇ ರೀತಿ ಪರಿಶಿಷ್ಟ ಜಾತಿಗಳಲ್ಲಿರುವ ಸಣ್ಣಪುಟ್ಟ ಸಮುದಾಯಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿಯನ್ನು ನೀಡುವ ಮೂಲಕ ಆ ಎಲ್ಲಾ ವರ್ಗಗಳಿಗೆ ಸಾಮಾಜಿಕ ನ್ಯಾಯವನ್ನು ಒದಗಿಸಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆರೆಹಳ್ಳಿ ಮಹದೇವಸ್ವಾಮಿ, ಬಿಜೆಪಿ ಉಪಾಧ್ಯಕ್ಷ ಪಿ.ವೃಷಬೇಂದ್ರಪ್ಪ, ಬಿಜೆಪಿ ಕೋರ್ ಕಮಿಟಿ ಸದಸ್ಯ ಡಾ.ಎ.ಆರ್.ಬಾಬು, ನಗರಮಂಡಲ ಅಧ್ಯಕ್ಷ ರಾಜು, ಗ್ರಾಮಾಂತರ ಮಂಡಲ ಅಧ್ಯಕ್ಷ ಬಸವಣ್ಣ, ಮಾಧ್ಯಮ ಪ್ರಮುಖ್ ಎನ್.ಮಂಜುನಾಥ್ ಹಾಜರಿದ್ದರು.

ಚಾಮರಾಜನಗರ ವಿವಿಗೆ ಸಿಎಂ ಚಾಲನೆ

ಬೆಂಗಳೂರಿನಿಂದ ವರ್ಚುವಲ್ ಮೂಲಕ ಉದ್ಘಾಟನೆ



ಬೆಂಗಳೂರಿನ ಜ್ಞಾನಜ್ಯೋತಿ ವಿಶ್ವವಿದ್ಯಾನಿಲಯದ ಸಭಾಂಗಣದಿಂದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ವರ್ಚುವಲ್ ಮೂಲಕ ಚಾಮರಾಜನಗರ ವಿವಿ ಉದ್ಘಾಟಿಸಿ, ಮಾತನಾಡಿದರು. ಈ ವೇಳೆ ಸಚಿವರಾದ ಮುರುಗೇಶ್ ನಿರಾಣಿ, ಡಾ. ಅಶ್ವತ್ಥ್‌ನಾರಾಯಣ್ ಇನ್ನಿತರರು ಉಪಸ್ಥಿತರಿದ್ದರು.

ಚಾಮರಾಜನಗರ, ಮಾ.28– ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾಗಿರುವ ವಿನೂತನ ಮಾದರಿಯ ಚಾಮರಾಜನಗರ ವಿಶ್ವವಿದ್ಯಾನಿಲಯ ಉದ್ಘಾಟನೆ ಇಂದು ನೆರವೇರಿತು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಬೆಂಗಳೂರಿನಿಂದ ವರ್ಚುವಲ್ ಮೂಲಕ ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಚಾಲನೆ ನೀಡಿದರು. ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವಥ್ ನಾರಾಯಣ ಸೇರಿದಂತೆ ಇತರೆ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

ಚಾಮರಾಜನಗರದ ಸುವರ್ಣ ಗಂಗೋತ್ರಿಯ ನಿಜಗುಣ ಸಭಾಂಗಣದಲ್ಲಿ ಸ್ಥಳೀಯವಾಗಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಉದ್ಘಾಟನೆ ನೆರವೇರಿಸಿದರು.

ಇದೇ ವೇಳೆ ಮಾತನಾಡಿದ ಶಾಸಕ ಇಲ್ಲಿದ್ದ ಸ್ನಾತಕೋತ್ತರ ಕೇಂದ್ರ ಆರಂಭಕ್ಕೆ ಹಲವರ ಕೊಡುಗೆ ಇದೆ. ಇಂದು ವಿಶ್ವವಿದ್ಯಾನಿಲಯ ಕೂಡ ಆರಂಭವಾಗಿದೆ. ಶೈಕ್ಷಣಿಕ ಸೌಲಭ್ಯಗಳು ಜಿಲ್ಲೆಗೆ ಬಂದಿವೆ. ಪ್ರತ್ಯೇಕ ಮಹಿಳಾ ಕಾಲೇಜು ಇದ್ದು ಇದಕ್ಕಾಗಿ ಸ್ವಂತ ಕಟ್ಟಡ ಬರಲಿದೆ. ಅಲ್ಲದೇ ಈ ಹಿಂದೆಯೇ ಆರಂಭಗೊಂಡಿರುವ ಕೃಷಿ ವಿಜ್ಞಾನ ಕಾಲೇಜಿಗೆ ಯಡಬೆಟ್ಟದ ಬಳಿ ಸ್ವಂತ ಕಟ್ಟಡ ನಿರ್ಮಾಣವಾಗಲಿದೆ ಎಂದರು.

ಜಿಲ್ಲೆಯು ಅಭಿವೃದ್ಧಿಯತ್ತ ಸಾಗುತ್ತಿದೆ. ಕೆರೆಗಳಿಗೆ ನೀರು, ಮೂಲ ಸೌಕರ್ಯಗಳು ಲಭಿಸಿವೆ. ಪ್ರಸ್ತುತ ಪ್ರಾರಂಭವಾಗಿರುವ ನೂತನ ವಿಶ್ವವಿದ್ಯಾನಿಲಯಕ್ಕೆ ಹೆಚ್ಚಿನ ಭೂಮಿಯ ಅವಶ್ಯಕತೆ ಇದೆ ಎಂದು ತಿಳಿಸಿದರು. ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಿ.ಎಸ್. ರಮೇಶ್, ಪ್ರಾಥಮಿಕ ಶಿಕ್ಷಣದಿಂದ ವಿವಿಧ ಹಂತದ ವ್ಯಾಸಂಗ ಮಾಡಿ ವಿಶ್ವವಿದ್ಯಾನಿಲಯಕ್ಕೂ ಹೆಜ್ಜೆಯಿಟ್ಟು ಸ್ನಾತಕೋತ್ತರ ಪದವೀಧರರಾಗಿ ಹೊರಬರುವ ವಿದ್ಯಾರ್ಥಿಗಳು ತಮ್ಮ ಗ್ರಾಮಗಳಿಗೆ ತೆರಳಿದಾಗ ಅಲ್ಲಿ ಇಡೀ ವಿಶ್ವವನ್ನೇ ಸೃಷ್ಟಿಸುವಂತಾಗಬೇಕು.

ನೂತನ ವಿಶ್ವವಿದ್ಯಾನಿಲಯ ಇಡೀ ರಾಷ್ಟ್ರದಲ್ಲೇ ಹೆಸರು ಗಳಿಸುವಂತಾಗಲಿ. ಉನ್ನತ ಮಟ್ಟಕ್ಕೆ ಏರಿ ಜಿಲ್ಲೆಯ ಸಾಧನೆ ಬೆಳಗಲಿ. ಇಲ್ಲಿನ ವೈಶಿಷ್ಟ್ಯಪೂರ್ಣತೆಯನ್ನು ಪಸರಿಸಲಿ ಎಂದು ಹಾರೈಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಚಾಮರಾಜನಗರ ವಿವಿ ಕುಲಪತಿಯವರಾದ ಪ್ರೊ. ಎಂ.ಆರ್. ಗಂಗಾಧರ್ ಅವರು, ಇಂದು ಸುವರ್ಣ ದಿನ. ಚಾಲನೆಗೊಂಡಿರುವ ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಹಲವಾರು ಗಣ್ಯರು ಶ್ರಮಿಸಿದ್ದಾರೆ. ಇಲ್ಲಿನ ವಿದ್ಯಾರ್ಥಿಗಳು ಶ್ರಮವಹಿಸಿ ಅಧ್ಯಯನ ಮಾಡುವ ಗುಣವುಳ್ಳವರಾಗಿದ್ದಾರೆ. ಮೈಸೂರು ವಿವಿ ಘಟಿಕೋತ್ಸವದಲ್ಲಿ ಅತೀ ಹೆಚ್ಚು ಸಾಧನೆ ಮಾಡಿದವರು ಚಾಮರಾಜನಗರ ಜಿಲ್ಲೆಯ ವಿದ್ಯಾರ್ಥಿಗಳು ಎಂಬುದು ಹಿರಿಮೆಯಾಗಿದೆ ಎಂದರು.

ಚಾಮರಾಜನಗರ ವಿಶ್ವವಿದ್ಯಾನಿಲಯವನ್ನು ಉನ್ನತ ಮಟ್ಟಕ್ಕೆ ಬೆಳೆಸುವ ಗುರಿ ನಮ್ಮದಾಗಿದೆ. ಮುಂದಿನ ದಿನಗಳಲ್ಲಿ ಪದವಿಗಷ್ಟೇ ಗಮನ ಹರಿಸುವುದಿಲ್ಲ. ಸ್ಪರ್ಧಾತ್ಮಕ ಪ್ರಪಂಚವಾಗಿರುವ ಪ್ರಸ್ತುತ ಸಂದರ್ಭದಲ್ಲಿ ವೃತ್ತಿಪರ ಕೋರ್ಸು ತರಬೇತಿಯನ್ನು ವಿಶ್ವವಿದ್ಯಾನಿಲಯದಲ್ಲಿ ಆರಂಭಿಸುವ ಚಿಂತನೆ ಇದ್ದು ಇದರ ಸಾಕಾರಕ್ಕೆ ಎಲ್ಲರ ಸಹಕಾರದೊಂದಿಗೆ ಮುಂದಾಗುವುದಾಗಿ ಪ್ರೊ.ಎಂ.ಆರ್. ಗಂಗಾಧರ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಬಸವಣ್ಣ ಮೂಕಳ್ಳಿ ಉಪಸ್ಥಿತರಿದ್ದರು.

ಚಾಮರಾಜನಗರ ತಾಲೂಕು ಕುರುಬರ ಸಂಘದ ಅಧ್ಯಕ್ಷರಾಗಿ ಆರ್. ಉಮೇಶ್ ಅವಿರೋಧ ಆಯ್ಕೆ



ಚಾಮರಾಜನಗರ, ಮಾ.28– ತಾಲೂಕು ಕುರುಬರ ಸಂಘದ ಅಧ್ಯಕ್ಷರಾಗಿ ಆರ್.ಉಮೇಶ್ ಎಸ್‌ಪಿಕೆ ಹಾಗೂ ಉಪಾಧ್ಯಕ್ಷರಾಗಿ ಮಹದೇವಸ್ವಾಮಿ ಅವಿರೋಧವಾಗಿ ಆಯ್ಕೆಯಾದರು.

ತಾಲೂಕು ಸಂಘದ ಅಧ್ಯಕ್ಷರಾಗಿದ್ದ ಸಿ.ಎನ್. ಬಾಲರಾಜು ಹಾಗೂ ಉಪಾಧ್ಯಕ್ಷರಾಗಿದ್ದ ಆರ್. ಉಮೇಶ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಗಳಿಗೆ ಇಂದು ನಗರದ ಜೋಡಿರಸ್ತೆಯಲ್ಲಿರುವ ತಾಲೂಕು ಕುರುಬರ ಸಂಘದ ಕಚೇರಿಯಲ್ಲಿ ನಡೆಯಿತು. ಅಧ್ಯಕ್ಷ ಸ್ಥಾನಕ್ಕೆ ಅತ್ಯಂತ ಕಿರಿಯ ನಿರ್ದೇಶಕ ಆರ್. ಉಮೇಶ್ ಎಸ್‌ಪಿಕೆ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಹದೇವಸ್ವಾಮಿ ಇವರಿಬ್ಬರೇ ನಾಮಪತ್ರ ಸಲ್ಲಿಸಿದ್ದರು. ಚುನಾವಣಾಧಿಕಾರಿ ವಕೀಲ ಶಿವರಾಂ ಇವರಿಬ್ಬರೂ ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಅಧಿಕೃತವಾಗಿ ಘೋಷಣೆ ಮಾಡಿದರು.

ಕನಕ ಭವನ ಪೂರ್ಣ : ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಆರ್. ಉಮೇಶ್ ಮಾತನಾಡಿ, ಮುಂದಿನ ದಿನಗಳಲ್ಲಿ ನಿಮ್ಮೆಲ್ಲರ ಸಹಕಾರದಿಂದ ಅಪೂರ್ಣಗೊಂಡಿರುವ ಕನಕ ಭವನ ಪೂರ್ಣ ಮಾಡುವುದು, ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಮಳಿಗೆಗಳ ಕಾಮಗಾರಿಯನ್ನು ಪೂರ್ಣ ಮಾಡಿ, ಹೆಚ್ಚಿನ ಆದಾಯ ಬರುವಂತೆ ಮಾಡುತ್ತೇನೆ. ಜೊತೆಗೆ ಸಂಘದ ಆಸ್ತಿಗಳನ್ನು ಸಂರಕ್ಷಣೆ ಮಾಡಿ, ಮಾದರಿ ಸಂಘವನ್ನಾಗಿ ಬೆಳೆಸಲು ಸಂಕಲ್ಪ ಮಾಡಿದ್ದೇನೆ ಎಂದರು.

ತಾಲೂಕು ಕುರುಬರ ಸಂಘವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಜೊತೆಗೆ ಸಮುದಾಯದ ಅಭಿವೃದ್ಧಿಗೆ ನಿರಂತರವಾಗಿ ದುಡಿಯುತ್ತೇನೆ. ಎಲ್ಲರೂ ಸಲಹೆ, ಸಹಕಾರ, ಮಾರ್ಗದರ್ಶನ ನೀಡಬೇಕು ಎಂದು ಉಮೇಶ್ ಮನವಿ ಮಾಡಿದರು.

ವಿಜಯೋತ್ಸವ: ಉಮೇಶ್ ಹಾಗೂ ಮಹದೇವಸ್ವಾಮಿ ಅವರು ಅಧ್ಯಕ್ಷ–ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗುತ್ತಿದ್ದಂತೆ ಅಭಿಮಾನಿಗಳು ಹಾಗೂ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಸಂಗೊಳ್ಳಿರಾಯಣ್ಣ ಯುವ ವೇದಿಕೆ ಅಧ್ಯಕ್ಷ ಹಾಗೂ ಸಂಘದ ಮಾಜಿ ಅಧ್ಯಕ್ಷ ರಾಜಶೇಖರ್, ಸಂಘಟನಾ ಕಾರ್ಯದರ್ಶಿಗಳಾದ ನಾಗರಾಜು, ಎಸ. ಮಹದೇವ್, ರೇವಣ್ಣ, ಮಹೇಶ್‌ಕುಮಾರ್, ಶಂಕರ್, ನಿರ್ದೇಶಕರಾದ ಬಿ. ಮಹದೇವಸ್ವಾಮಿ, ಚಂದ್ರಶೇಖರ್, ಜಯರಾಮು, ಕೆಂಗೇಗೌಡ, ಶಾರದಮ್ಮ, ಎಂ. ಸೋಮಣ್ಣ, ಎಂ. ಆಶೋಕ್, ಪುಟ್ಟಸ್ವಾಮಿ, ವೀರಭದ್ರ,, ಎನ್. ಶ್ರೀಕಂಠಸ್ವಾಮಿ, ಅನಂದ, ಪಿ. ಮಾದಪ್ಪ, ಬಸವರಾಜು, ಗುರುರಾಜು, ನಾಗರಾಜು, ವೆಂಕಟೇಗೌಡ, ಚಿಕ್ಕಮಾದೇಗೌಡ ಮುಖಂಡರಾದ ಸ್ವಾಮಿ, ಮಹೇಶ್, ನಗರಸಭಾ ಮಾಜಿ ಸದಸ್ಯ ಗೋವಿಂದ ಇತರರು ಹಾಜರಿದ್ದರು.

ಕೃಷಿ ಹೊಂಡಕ್ಕೆ ಬಿದ್ದು ವಿಶೇಷಚೇತನ ವ್ಯಕ್ತಿ ಆತ್ಮಹತ್ಯೆ

ದಂಪತಿ ವಿರುದ್ಧ ಕೇಸ್

ಬೇಗೂರು, ಮಾ.28– ಕ್ಷುಲ್ಲಕ ಕಾರಣಕ್ಕಾಗಿ ದಂಪತಿ ತನ್ನ ಮೇಲೆ ಬಿಸಿನೀರು ಎರಚಿ, ಅವಾಚ್ಯ ಶಬ್ದಗಳಿಂದ ನಿಂದಿಸಿ, ಅವಮಾನ ಮಾಡಿದ್ದರಿಂದ ಮನನೊಂದು ವಿಶೇಷಚೇತನ ವ್ಯಕ್ತಿ ಕೃಷಿ ಹೊಂಡಕ್ಕೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಇಲ್ಲಿಗೆ ಸಮೀಪದ ಕಲ್ಲಹಳ್ಳಿ ಗ್ರಾಮದಿಂದ ವರದಿಯಾಗಿದೆ.

ಗ್ರಾಮದ ವಿಶೇಷಚೇತನ ವ್ಯಕ್ತಿ ಮಹದೇವಸ್ವಾಮಿ (40) ಆತ್ಮಹತ್ಯೆಗೆ ಶರಣಾದವನಾಗಿದ್ದು, ಇದೇ ಗ್ರಾಮದ ಮಹೇಶ್ ಮತ್ತು ಗೀತಾಮಣಿ ದಂಪತಿ ಕ್ಷುಲ್ಲಕ ಕಾರಣಕ್ಕಾಗಿ ಈತನ ಕೈಗೆ ಬಿಸಿನೀರು ಎರಚಿದ್ದಲ್ಲದೆ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು ಎಂದು ಹೇಳಲಾಗಿದ್ದು, ಈ ಕಾರಣದಿಂದ ಮನನೊಂದು ಆತ ಕೃಷಿ ಹೊಂಡಕ್ಕೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಆತನ ಸಹೋದರಿ ಮಹದೇವಮ್ಮ ನೀಡಿದ ದೂರನ್ನು ದಾಖಲಿಸಿಕೊಂಡಿರುವ ಬೇಗೂರು ಠಾಣೆ ಪೊಲೀಸರು ತಲೆಮರೆಸಿಕೊಂಡಿರುವ ದಂಪತಿಗಾಗಿ ಹುಡುಕಾಟ ನಡೆಸಿದ್ದಾರೆ.

ಪುರಾತನ ಶ್ರೀ ರಾಮೇಶ್ವರ ದೇವಸ್ಥಾನದ ಆಸ್ತಿ ಒತ್ತುವರಿ ತೆರವು

ಸಾರ್ವಜನಿಕರ ಅಭಿಪ್ರಾಯದಂತೆ ಸ್ವಯಂ ತೆರವುಗೊಳಿಸಿದ ಒತ್ತುವರಿದಾರರು



ಗುಂಡ್ಲುಪೇಟೆ ಪಟ್ಟಣದ ಶ್ರೀರಾಮೇಶ್ವರ ದೇವಾಲಯಕ್ಕೆ ಹೊಂದಿಕೊಂಡಿದ್ದ ಅಂಗಡಿಮನೆಯನ್ನು ಸಾರ್ವಜನಿಕರು ತೆರವುಗೊಳಿಸಿದರು.

ಗುಂಡ್ಲುಪೇಟೆ, ಮಾ.28– ಪಟ್ಟಣದ ಪುರಾತನ ಶ್ರೀರಾಮೇಶ್ವರ ದೇವಸ್ಥಾನದ ಆಸ್ತಿಯ ಒತ್ತುವರಿ ತೆರವು ಕಾರ್ಯ ಮಂಗಳವಾರ ನಡೆಸಲಾಯಿತು.

ಮುಜರಾಯಿ ಇಲಾಖೆಗೆ ಸೇರಿದ ಈ ದೇವಾಲಯ ಸಂಪೂರ್ಣ ಶಿಥಿಲವಾಗಿದ್ದರಿಂದ ಅದನ್ನು ಜೀರ್ಣೋದ್ಧಾರಗೊಳಿಸುವ ಸಲುವಾಗಿ ಸಮಿತಿಯ ಅಧ್ಯಕ್ಷ ಗೋವಿಂದರಾಜು ನೇತೃತ್ವದಲ್ಲಿ ಮಂಗಳವಾರ ಸಭೆ ನಡೆಸಿ ಸಭಿಕರ ಅಭಿಪ್ರಾಯ ಸಂಗ್ರಹಿಸಿತು. ಶತಮಾನಗಳಿಂದ ಒತ್ತುವರಿ ಮಾಡಿಕೊಂಡಿದ್ದ ಕುಟುಂಬಗಳೇ ಸ್ವಯಂ ತೆರವಿಗೆ ಮುಂದಾಗಿದ್ದರಿಂದ ತೆರವು ಕಾರ್ಯಾಚರಣೆ ಆರಂಭಿಸಲಾಯಿತು.

ದೇವಾಲಯದ ಸ್ಥಳದಲ್ಲಿ ನಾನಾ ಧಾರ್ಮಿಕ ಚಟುವಟಿಕೆಗಳನ್ನು ಮಾತ್ರ ನಡೆಸಬೇಕು, ಯಾವುದೇ ಕಾರಣಕ್ಕೂ ವಾಣಿಜ್ಯ ಮಳಿಗೆ ನಿರ್ಮಿಸಬಾರದು ಎಂದು ಸಭಿಕರು ಒಕ್ಕೊರಲಿನಿಂದ ಅಭಿಪ್ರಾಯಪಟ್ಟರು. ದೇವಾಲಯ ಪಕ್ಕದಲ್ಲಿ ಒತ್ತುವರಿ ಮಾಡಿಕೊಂಡಿದ್ದ ಕುಟುಂಬಸ್ಥರು ಮಾತನಾಡಿ, ತಮ್ಮ ಪೂರ್ವಜರು ಈ ಸ್ಥಳವು ದೇವಾಲಯಕ್ಕೆ ಸೇರಿದ್ದಾಗಿ ಹೇಳಿದ್ದರು. ಸಣ್ಣ ಪ್ರಮಾಣದ ಹಣವನ್ನು ಬಾಡಿಗೆ ರೂಪದಲ್ಲಿ ಸ್ವಲ್ಪ ದಿನಗಳ ಕಾಲ ನೀಡುತ್ತಿದ್ದರು. ಆದರೆ ದೇವಾಲಯ ಜೀರ್ಣೋದ್ಧಾರ ಮಾಡಲು ಮುಂದಾಗಿರುವುದರಿಂದ ಮನೆಯನ್ನು ಸಂತೋಷವಾಗಿ ತೆರವುಗೊಳಿಸುವುದಾಗಿ ಪ್ರಕಟಿಸಿದರು.

ಸಾರ್ವಜನಿಕರು, ಪಟ್ಟಣದ ಎಲ್ಲಾ ಜನಾಂಗಗಳ ಮುಖಂಡರು ಹಾಗೂ ವರ್ತಕರ ಸಲಹೆ ಮೇರೆಗೆ ದೇವಾಲಯಕ್ಕೆ ಹೊಂದಿಕೊಂಡಿದ್ದ ವಾರಸುದಾರರಿಲ್ಲದ ಒಂದು ಮನೆಯನ್ನು ತೆರವುಗೊಳಿಸಿ, ಇನ್ನು ಎರಡು ಮನೆಗಳವರು ತೆರವುಗೊಳಿಸಲು ಮೂರು ದಿನಗಳ ಕಾಲಾವಕಾಶ ನೀಡಿದರು.

ಕಳೆದ ಒಂದು ಶತಮಾನದಿಂದ ದೇವಾಲಯದ ರಥ ಶಿಥಿಲವಾಗಿ ರಥೋತ್ಸವ ನಿಂತು ಹೋದ ನಂತರ ಖಾಲಿ ಇದ್ದ ಈ ಪ್ರದೇಶವನ್ನು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡಿದ್ದರು. ಕೆಲವರು ಬರುಬರುತ್ತಾ ದೇವಾಲಯವನ್ನು ಸೇರಿಸಿ ಮನೆಗಳನ್ನು ನಿರ್ಮಿಸಿಕೊಂಡು ಕೆಲವು ವರ್ಷಗಳವರೆಗೆ ಸ್ವಲ್ಪ ಹಣವನ್ನು ಬಾಡಿಗೆ ರೂಪದಲ್ಲಿ ಕೊಡುತ್ತಿದ್ದರು. ಇದರಿಂದ ದೇವಾಲಯದ ರಥೋತ್ಸವ ಹಾಗೂ ನಾನಾ ಕಾರ್ಯಗಳಿಗೆ ಸ್ಥಳದ ಕೊರತೆಯುಂಟಾಗಿತ್ತು. ದೇವಸ್ಥಾನದ ಸಮಿತಿಯವರು ಒತ್ತುವರಿ ತೆರವಿಗೆ ಮುಂದಾಗಿದ್ದರೂ ಸಾಧ್ಯವಾಗಿರಲಿಲ್ಲ.

ಸಭೆಯಲ್ಲಿ ಪುರಸಭೆ ಅಧ್ಯಕ್ಷ ಪಿ.ಗಿರೀಶ್, ನಾಗೇಶ್, ಶಂಕರನಾರಾಯಣ ಜೋಯಿಸ್, ಕರವೇ ಮೋಹನ್ ಇತರರು ಸೇರಿದಂತೆ ಹಲವರು ಇದ್ದರು.

ವಯೋವೃದ್ಧರು, ವಿಶೇಷಚೇತನರು ಮನೆಯಿಂದಲೇ ಮತದಾನ ಮಾಡಲು ಅವಕಾಶ

ಮೈಸೂರು, ಮಾ.28– ತಾಲೂಕಿನ ಎಲ್ಲಾ ಮತಗಟ್ಟೆಗಳಲ್ಲೂ ಮೂಲ ಸೌಲಭ್ಯ ವ್ಯವಸ್ಥೆ ಮಾಡಲಾಗಿದೆ. ಚುನಾವಣಾ ಆಯೋಗದ ನಿರ್ದೇಶನದಂತೆ 80 ವರ್ಷ ಮೀರಿದ ವಯೋವೃದ್ಧರು, ವಿಶೇಷ ಚೇತನರಿಗೆ ಮನೆಯಿಂದಲೇ ಮತ ಹಾಕಿಸಲು ಎಲ್ಲಾ ವ್ಯವಸ್ಥೆ ಮಾಡಲಾಗಿದೆ. ಪ್ರಥಮವಾಗಿ ಮತಹಾಕುವ ಯುವಕರು ತಪ್ಪದೇ ತಮ್ಮ ಮತಹಾಕುವಂತೆ ಕಾಲೇಜು ಹಂತದಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ನಂಜನಗೂಡು ಚುನಾವಣಾ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಿವಾಸ್ ತಿಳಿಸಿದರು.

2023ರ ಸಾರ್ವತ್ರಿಕ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆ ಸ್ವೀಪ್ ಕಾರ್ಯಕ್ರಮದಡಿ ನಂಜನಗೂಡು ತಾಲೂಕು ಪಂಚಾಯಿತಿ ವತಿಯಿಂದ ಸಾಂಸ್ಕೃತಿಕ ಉಡುಗೆತೊಟ್ಟು ಬೈಕ್ ಜಾಥಾ ನಡೆಸುವ ಮೂಲಕ ಮತದಾನ ಕುರಿತು ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಬಾರಿ ನಮ್ಮ ತಾಲೂಕಿನಲ್ಲಿ ಶೇ. 95ಕ್ಕಿಂತ ಹೆಚ್ಚು ಮತದಾನವಾಗಲು ಸ್ವೀಪ್ ಕಾರ್ಯಕ್ರಮದ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮವನ್ನು ವಿಶೇಷ ರೀತಿಯಲ್ಲಿ ಮಾಡಲಾಗುತ್ತಿದೆ. ಪ್ರತಿಯೊಬ್ಬರು ಮತದಾನವನ್ನು ಹಬ್ಬದಂತೆ ಆಚರಿಸಬೇಕು. ಯಾವುದೇ ಆಸೆ, ಆಕಾಂಕ್ಷೆಗಳಿಗೆ ಮಾರುಹೋಗದೆ ಅಮೂಲ್ಯವಾದ ಮತದಾನ ಮಾಡಬೇಕೆಂದು ತಿಳಿಸಿದರು.

ಕಾರ್ಯಕ್ರಮಕ್ಕೆ ವರುಣಾ ಕ್ಷೇತ್ರದ ಚುನಾವಣಾಧಿಕಾರಿ ಗೌರವ್ ಕುಮಾರ್ ಶೆಟ್ಟಿ ಅವರು ಚಾಲನೆ ನೀಡಿದರು. ತಾಲೂಕು ಪಂಚಾಯಿತಿ ಸಿಬ್ಬಂದಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಕಂಪ್ಯೂಟರ್ ಆಪರೇಟರ್ಸ್, ಸಂಜೀವಿನಿ ಸಂಘದ ಸಿಬ್ಬಂದಿ, ವಿವಿಧುದ್ದೇಶ ಪುನರ್ವಸತಿ ಕಾರ್ಯಕರ್ತರು, ವಿಶೇಷ ಚೇತನರು, ಸಾಂಸ್ಕೃತಿ ಉಡುಗೆಗಳಾದ ಸೀರೆ, ಪಂಚೆ–ಶಲ್ಯ ತೊಟ್ಟು ಚಾಮಲಾಪುರ ವೃತ್ತದಿಂದ ದೇವಿರಮ್ಮನಹಳ್ಳಿ ಗೇಟ್ ಸರ್ಕಲ್, ಶ್ರೀಕಂಠೇಶ್ವರ ದೇವಸ್ಥಾನ, ಅಂಬೇಡ್ಕರ್ ವೃತ್ತ ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಬೈಕ್ ಜಾಥಾ ನಡೆಸಿ ಮತದಾನದ ಮಹತ್ವ ಸಾರಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಶಿವಕುಮಾರ್ ಕಾಕನೂರ, ತಾಲ್ಲೂಕು ಪಂಚಾಯಿತಿ ಲೆಕ್ಕಾಧಿಕಾರಿ ಶ್ರೀಕಂಠನಾಯಕರು, ಸೇರಿದಂತೆ ಎಲ್ಲಾ ಗ್ರಾಮ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಸಿಬ್ಬಂದಿಗಳು ಭಾಗವಹಿಸಿದ್ದರು.

ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಲು ಕಡ್ಡಾಯ ಮತದಾನ

ಮೈಸೂರು, ಮಾ.28– ಕೆ.ಆರ್ ನಗರ ತಾಲೂಕಿನ ಮಿರ್ಲೆ ಗ್ರಾಮದಲ್ಲಿ ತಾಲೂಕು ಸ್ವೀಪ್ ಸಮಿತಿ ಮತ್ತು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ವತಿಯಿಂದ ವಿಧಾನಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಸಾರ್ವಜನಿಕರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ರಾಜ್ಯ ವಿಧಾನಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತ ಹಾಕುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಂತೆ ಹಾಗೂ ಯುವಜನತೆ ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ಸ್ವಇಚ್ಛೆಯಿಂದ ಮತ ಚಲಾಯಿಸಲು ಮಿರ್ಲೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಂದೀಪ್ ಕರೆ ನೀಡಿದರು. ನಗರದ ಪ್ರಮುಖ ಬೀದಿಗಳಲ್ಲಿ ಸಾಗಿದ ಜಾಥ, ಮತದಾನ ಹಾಗೂ ಪ್ಲಾಸ್ಟಿಕ್ ನಿಷೇಧ ಕುರಿತು ವಿದ್ಯಾರ್ಥಿಗಳು ಬೀದಿ ನಾಟಕ ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಕವಿತಾ, ಐಇಸಿ ಸಂಯೋಜಕ ಸಂಜಯ್ ಬಿ.ಸಿ, ದ್ವಿತೀಯ ದರ್ಜೆ ಸಹಾಯಕರು ಶ್ರೀಧರ್ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಉಪನ್ಯಾಸಕರಾದ ಪುನೀತ್, ರಶ್ಮಿ, ವಸಂತ್, ಕೌಶಿಕ್, ಬಿ.ಎಫ್.ಟಿ ಉಮೇಶ್ ಹಾಗೂ ಗ್ರಾಮಸ್ಥರು ಹಾಜರಿದ್ದರು.

ಒಂದನೇ ಪುಟದಿಂದ

ಇಂದು ಮುಹೂರ್ತ ಫಿಕ್ಸ್?

ಮತದಾನ ನಡೆದರೆ ಅಧಿಸೂಚನೆಯು ಎರಡು ಹಂತದಲ್ಲಿ ಪ್ರಕಟಗೊಳ್ಳಲಿದೆ. ಆದರೆ, ಮೇ ಮಧ್ಯಭಾಗದಲ್ಲಿ ಎಲ್ಲಾ ಕ್ಷೇತ್ರಗಳ ಮತ ಎಣಿಕೆಯು ಪೂರ್ವ ನಿಗದಿತ ಮತ ಎಣಿಕೆ ಕೇಂದ್ರಗಳಲ್ಲಿ ನಡೆಸಲಾಗುತ್ತದೆ. ಅಸ್ಸಾಂ ಪ್ರವಾಸದಲ್ಲಿದ್ದ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಆಯುಕ್ತರು ಇಂದು ರಾತ್ರಿ ದೆಹಲಿಗೆ ಮರಳಿದ್ದು, ನಾಳೆ ಮಧ್ಯಾಹ್ನ ವೇಳಾಪಟ್ಟಿ ಪ್ರಕಟಿಸುವುದೇ ಆದರೆ, ಬೆಳಗ್ಗೆ ಆಯೋಗದ ಇತರೆ ಆಯುಕ್ತರೊಂದಿಗೆ ಸಭೆ ನಡೆಸಲಿದ್ದಾರೆ. ಬಳಿಕ ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ವಿಧಾನಸಭೆ ವೇಳಾಪಟ್ಟಿ ಪ್ರಕಟಿಸಲಿದ್ದಾರೆ. ಇತ್ತೀಚೆಗೆ ಆಯೋಗದ ಅಧಿಕಾರಿಗಳ ನಿಯೋಗ ರಾಜ್ಯದಲ್ಲಿ ಮೂರು ದಿನ ಬೀಡು ಬಿಟ್ಟು ಚುನಾವಣಾ ಸಿದ್ಧತೆ ಪರಿಶೀಲಿಸಿ ಅಗತ್ಯ ಸಲಹೆ ನಿರ್ದೇಶನಗಳನ್ನು ನೀಡಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಲು ಸಜ್ಜಾಗುವಂತೆ ಸೂಚಿಸಿತ್ತು. ಈಗಾಗಲೇ ರಾಜ್ಯದ ಮುಖ್ಯ ಚುನಾವಣಾ ಅಧಿಕಾರಿಗಳು, ಜಿಲ್ಲಾ ಚುನಾವಣಾ ಅಧಿಕಾರಿಗಳೂ ಆದ ಜಿಲ್ಲಾಧಿಕಾರಿಗಳ ಸಭೆ ನಡೆಸಿ, ಮಾ.30ರೊಳಗಾಗಿ ಅಭಿವೃದ್ಧಿ ಕೆಲಸಗಳ ವಿಲೇವಾರಿ ಮಾಡಿ ಚುನಾವಣಾ ಪ್ರಕ್ರಿಯೆಗೆ ಸಿದ್ಧರಾಗಿ ಎಂದು ನಿರ್ದೇಶನ ನೀಡಿದ್ದರು. ಈ ಆದೇಶ ಹೊರಬೀಳುತ್ತಿದ್ದಂತೆ ಮುಖ್ಯಮಂತ್ರಿ ಹಾಗೂ ಅವರ ಸಂಪುಟದ ಸಹೋದ್ಯೋಗಿಗಳು ತ್ವರಿತ ಕಡತ ವಿಲೇವಾರಿಗೆ ಚಾಲನೆ ನೀಡಿದರು. ಎಂದಿನಂತೆ ಈ ಭಾರಿಯೂ ವಿದ್ಯುನ್ಮಾನ ಮತಯಂತ್ರ ಬಳಕೆ ಮಾಡಲಾಗುತ್ತದೆ. ಈಗಾಗಲೇ ಮತದಾರರ ಪಟ್ಟಿ ಪರಿಷ್ಕರಣೆ ಮಾಡಿ ಅಂತಿಮ ಮತದಾರರ ಪಟ್ಟಿ ಪ್ರಕಟಿಸಿ ಮತಗಟ್ಟೆಗಳನ್ನು ನಿಗದಿಪಡಿಸಲಾಗಿದೆ. ಚುನಾವಣಾ ಸಿಬ್ಬಂದಿಗೆ ಅಗತ್ಯ ತರಬೇತಿ ನೀಡಿದ್ದು, ಮತದಾನದ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ. ಭದ್ರತೆಗೆ ರಾಜ್ಯದ ಪೊಲೀಸರಲ್ಲದೆ, ನೆರೆಯ ರಾಜ್ಯಗಳ ಪೊಲೀಸ್ ಜತೆಗೆ ಕೆಲವು ಸೂಕ್ಷ್ಮ ಪ್ರದೇಶಗಳಲ್ಲಿ ಕೇಂದ್ರ ಪಡೆಯನ್ನು ಬಳಸಲಾಗುತ್ತದೆ. ಕಳೆದ 2018ರಲ್ಲಿ ಮಾರ್ಚ್ 27 ರಂದು ವೇಳಾಪಟ್ಟಿ ಪ್ರಕಟಿಸಲಾಗಿತ್ತು. ಒಂದೇ ಹಂತದಲ್ಲಿ 222 ಕ್ಷೇತ್ರಗಳಿಗೆ ಮೇ 12ರಂದು ಮತದಾನ ನಡೆದಿತ್ತು. ಮೇ.15ರಂದು ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಿ ಅತಂತ್ರ ವಿಧಾನಸಭೆ ನಿರ್ಮಾಣವಾಗಿತ್ತು.

ಜೂ.30ರವರೆಗೆ ವಿಸ್ತರಣೆ

ಆಗದೇ ವ್ಯವಸ್ಥೆ ವಿರುದ್ಧ ಹಿಡಿಶಾಪ ಹಾಕಿ ಗೊಣಗುತ್ತಾ ಹಿಂದಿರುಗುತ್ತಿದ್ದ ದೃಶ್ಯವೂ ಸಾಮಾನ್ಯವಾಗಿತ್ತು. 1,000 ರೂ. ಶುಲ್ಕ ಪಾವತಿಸಿ ರಶೀದಿ ಪಡೆಯುತ್ತಿದ್ದ ನಾಗರಿಕರಿಗೆ ಆಧಾರ್–ಪಾನ್ ಕಾರ್ಡ್ ಲಿಂಕ್ ಮಾಡಿಕೊಡಲು 150 ರಿಂದ 200 ರೂ.ವರೆಗೆ ಸೇವಾ ಶುಲ್ಕ ವಸೂಲಿ ಮಾಡಲಾಗುತ್ತಿತ್ತು. ಆದರೆ ಮಧ್ಯಾಹ್ನದ ವೇಳೆಗೆ ಕೇಂದ್ರ ಸರ್ಕಾರ ಅಧಿಕೃತ ಪ್ರಕಟಣೆ ಹೊರಡಿಸಿ ಆಧಾರ್–ಪಾನ್ ಲಿಂಕ್ ಮಾಡಲು ನಿಗದಿಪಡಿಸಿದ್ದ ಗಡುವನ್ನು ಜೂನ್ 30ರವರೆಗೆ ವಿಸ್ತರಿಸಿರುವುದಾಗಿ ಮಾಹಿತಿ ನೀಡಿತು. ವಿಷಯ ತಿಳಿಯುತ್ತಿದ್ದಂತೆಯೇ ಸೈಬರ್ ಕೆಫೆ, ಬ್ರೌಸಿಂಗ್ ಸೆಂಟರ್‌ಗಳಲ್ಲಿ ಕಾದು ನಿಂತಿದ್ದ ಜನರು ವಾಪಸ್ ತೆರಳಿದರು. 1,000 ರೂ. ದಂಡ ಶುಲ್ಕ, ಆಧಾರ್‌ನೊಂದಿಗೆ ಪಾನ್ ಕಾರ್ಡ್ ಸಂಖ್ಯೆಯನ್ನು ಜೋಡಣೆ ಮಾಡಿಕೊಳ್ಳಲು 2023ರ ಜೂನ್ 30ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಆದಾಯ ತೆರಿಗೆ ವೆಬ್‌ಸೈಟ್ http:||eportal.incometax.gov.in/icc/foservises/# pre-login/bl-link-aadhar ಮೂಲಕ ಲಿಂಕ್ ಮಾಡಿಸಿಕೊಳ್ಳುವಂತೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಇಂಟರ್‌ನೆಟ್ ಸೌಲಭ್ಯ ಹೊಂದಿರುವವರು ಮನೆಯಲ್ಲೇ ಕುಳಿತು ಆಧಾರ್–ಪಾನ್ ಲಿಂಕ್ ಮಾಡಿಕೊಳ್ಳಬಹುದು. ಅಥವಾ ಮೊಬೈಲ್ ಫೋನ್‌ನಲ್ಲೂ ಇಂಟರ್‌ನೆಟ್ ಬಳಸಿ, ಸೂಚಿಸಿರುವ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಪಾವತಿ ಮಾಡಿ, ಲಿಂಕ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇಂದು ಮಧ್ಯಾಹ್ನದ ನಂತರ ಸರ್ವರ್ ಸರಿ ಹೋದರೂ ಸಮಯ ವಿಸ್ತರಿಸಿದ್ದರಿಂದ ಜನರು ಲಿಂಕ್ ಮಾಡಿಸಲು ಆಸಕ್ತಿ ತೋರಲಿಲ್ಲ. ಕೆಲವೆಡೆ 1,000 ರೂ. ಅಧಿಕೃತ ಶುಲ್ಕದ ಜೊತೆಗೆ ಅಧಿಕ ಮೊತ್ತದ ಸೇವಾ ಶುಲ್ಕಕ್ಕೆ ಒತ್ತಾಯಿಸುತ್ತಿದ್ದಾರೆ ಎಂಬ ದೂರುಗಳೂ ಕೇಳಿ ಬಂದವು. ಪಾನ್–ಆಧಾರ್ ಲಿಂಕ್ ಮಾಡಿಸಲು 1,000 ರೂ. ಅನ್ನು ಏಕೆ ಪಾವತಿಸಬೇಕು. ಸರ್ಕಾರ ಉಚಿತವಾಗಿ ಈ ಪ್ರಕ್ರಿಯೆ ನಡೆಸಬೇಕೆಂದು ಆಗ್ರಹಿಸಿದ್ದಾರೆ.

ವರುಣಾದಲ್ಲೇ ನಿಲ್ತೇನೆ..

ಅಂತಿಮವಾಗುತ್ತದೆ ಎಂದರು. ನನ್ನ ಹುಟ್ಟೂರು ಸಿದ್ದರಾಮನಹುಂಡಿ ವರುಣಾ ಹೋಬಳಿಯಲ್ಲಿದೆ. ಅದು ವರುಣಾ ಕ್ಷೇತ್ರಕ್ಕೆ ಒಳಪಡುತ್ತದೆ. ಅದೇ ಕಾರಣಕ್ಕಾಗಿಯೇ ನಾನು 2008 ಮತ್ತು 2013ರಲ್ಲಿ ವರುಣಾದಿಂದ ಸ್ಪರ್ಧಿಸಿದ್ದೆ. ಆ ಕ್ಷೇತ್ರದಲ್ಲಿ ಗೆದ್ದು ನಾನು ಮುಖ್ಯಮಂತ್ರಿಯಾದೆ. ಅದಕ್ಕಾಗಿ ವರುಣಾ ನನ್ನ ಲಕ್ಕಿ ಕ್ಷೇತ್ರ ಹೌದೋ ಅಲ್ಲವೋ ಎಂದು ಹೇಳಲು ಆಗಲ್ಲ. ಅದರ ಮೇಲೆ ನನಗೆ ನಂಬಿಕೆಯೂ ಇಲ್ಲ. ನಾನು ರಾಜಕಾರಣ ಆರಂಭಿಸಿದ್ದು ವರುಣಾ ಹೋಬಳಿಯಿಂದ. ಅಲ್ಲಿಂದಲೇ ಚುನಾವಣಾ ರಾಜಕೀಯ ಕೊನೆಗೊಳಿಸೋಣ ಎಂಬುದು ನನ್ನ ಆಸೆ ಎಂದ ಅವರು, ಮೊಟ್ಟ ಮೊದಲು ತಾಲೂಕು ಬೋರ್ಡ್ ಚುನಾವಣೆಗೆ ಸ್ಪರ್ಧಿಸಿದ್ದು ವರುಣಾದಿಂದಲೇ. ಆಗ ಅದು ಚಾಮುಂಡೇಶ್ವರಿ ಕ್ಷೇತ್ರದಲ್ಲಿತ್ತು. ಆದರೆ ಈಗ ವರುಣಾ ಹೋಬಳಿ ಚಾಮುಂಡೇಶ್ವರಿಯಲಿಲ್ಲ. ತಾಲೂಕು ಬೋರ್ಡ್ ಚುನಾವಣೆಯಲ್ಲಿ ಗೆಲ್ಲಿಸುವ ಮೂಲಕ ನನ್ನ ರಾಜಕೀಯ ಪ್ರವೇಶಕ್ಕೆ ಶುಭ ಕೋರಿದ ವರುಣಾ ಜನರು, ಕೊನೇ ಚುನಾವಣೆಯಲ್ಲಿ ಕೂಡ ಆಶೀರ್ವಾದ ಮಾಡುತ್ತಾರೆ ಎಂಬ ನಂಬಿಕೆ ನನಗಿದೆ ಎಂದರು. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ನನ್ನ ಮಗ ಡಾ. ಯತೀಂದ್ರ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ. ನನ್ನ ಕ್ಷೇತ್ರವನ್ನು ಅವನೇ ನೋಡಿಕೊಳ್ಳುತ್ತಾನೆ ಎಂದು ಹೇಳಿದರು.

ಕಾಂಗ್ರೆಸ್ ಹೈಕಮಾಂಡ್ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿದೆ ಎಂಬುದನ್ನು ನಿರಾಕರಿಸಿದ ಸಿದ್ದರಾಮಯ್ಯ, ಕಳೆದ ಚುನಾವಣೆಯಲ್ಲಿ ಕುಮಾರಸ್ವಾಮಿಯವರು ಬಿಜೆಪಿ ಜೊತೆ ಮ್ಯಾಚ್ ಫಿಕ್ಸಿಂಗ್ ಮಾಡಿಕೊಂಡಿದ್ದರು. ಈ ಬಾರಿಯೂ ಹಾಗೇ ನಡೆಯಲೂಬಹುದು ಎಂದರು.

ಮಕ್ಕಳ ಸಂರಕ್ಷಣೆಯಲ್ಲಿ ಕರ್ನಾಟಕ ಮೇಲ್ಪಂಕ್ತಿಯಲ್ಲಿದೆ

ಪರಿಶೀಲನೆ ಸಭೆ ನಂತರ ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಡಾ|| ಆರ್.ಜಿ. ಆನಂದ್ ಪ್ರಶಂಸೆ

ಮೈಸೂರು,ಮಾ.28(ಎಂಟಿವೈ)– ಮಕ್ಕಳ ಹಕ್ಕುಗಳ ಸಂರಕ್ಷಣೆಯಲ್ಲಿ ದಕ್ಷಿಣ ಭಾರತದಲ್ಲೇ ಕರ್ನಾಟಕ ಅಗ್ರಗಣ್ಯ ಸ್ಥಾನ ಹೊಂದಿದೆ ಎಂದು ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಡಾ.ಆರ್.ಜಿ.ಆನಂದ್ ತಿಳಿಸಿದ್ದಾರೆ.

ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಮಕ್ಕಳ ಕಲ್ಯಾಣ ಸಮಿತಿಯ ಸಭೆಗೆ ಮುನ್ನ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ದಕ್ಷಿಣ ಭಾರತದ ಕೇರಳ, ಆಂಧ್ರ, ತಮಿಳುನಾಡು, ಪುದುಚೇರಿ, ತೆಲಂಗಾಣ, ಕರ್ನಾಟಕದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಕುರಿತಂತೆ ಕಳೆದ 5 ವರ್ಷದಿಂದ ನಿಗಾ ವಹಿಸಲಾಗಿದೆ. ಕರ್ನಾಟಕದಲ್ಲಿ ಮಕ್ಕಳ ರಕ್ಷಣೆಗೆ ಉತ್ತಮ ರೀತಿ ಕಾರ್ಯಕ್ರಮ ರೂಪಿಸಲಾಗಿದೆ. ತಾಲೂಕು, ಜಿಲ್ಲಾ, ರಾಜ್ಯಮಟ್ಟದ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಣೆ ಮಾಡುತ್ತಿವೆ. ಹಾಗಾಗಿ ಮಕ್ಕಳ ಹಕ್ಕುಗಳ ರಕ್ಷಣೆಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ ಎಂದರು.

ಮಕ್ಕಳ ಪ್ರಕರಣಗಳ ಮೇಲೆ ನಿಗಾ ವಹಿಸಲು ಮಾಸಿ(ಎಂಎಎಸ್‌ಐ) ಆ್ಯಪ್ ರಚಿಸಲಾಗಿದೆ. ಆ ಮೂಲಕ ಮಕ್ಕಳ ಕಲ್ಯಾಣ ಸಮಿತಿ, ಜಿಲ್ಲಾ, ರಾಜ್ಯ ಮಟ್ಟದ ಸಮಿತಿ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಲ್ಲಿ ದಾಖಲಾಗಿರುವ ಪ್ರಕರಣಗಳ ಮೇಲೆ ಕಣ್ಗಾವಲು ಇಡಲಾಗಿದೆ. ವಿವಿಧ ರಾಜ್ಯ, ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ದಾಖಲಾಗುವ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳ ಮಾಹಿತಿಯನ್ನು ಆ್ಯಪ್‌ನಲ್ಲಿ ನಮೂದಿಸಲಾಗುತ್ತದೆ. ಅಲ್ಲದೆ, ಪ್ರಕರಣ ವಿಚಾರಣೆ, ಇತ್ಯರ್ಥ, ಪರಿಹಾರ ಇನ್ನಿತರ ಪ್ರಕ್ರಿಯೆಗಳನ್ನು ಆನ್‌ಲೈನ್ ಮೂಲಕ ಗಮನಿಸಿ, ನ್ಯೂನತೆ ಕಂಡುಬಂದರೆ ಆಯಾ ಸಮಿತಿಗಳಿಗೆ ಸೂಚನೆ ನೀಡಿ, ಸರಿಪಡಿಸಲಾಗುತ್ತಿದೆ ಎಂದು ತಿಳಿಸಿದರು.



❝ಪ್ರಸ್ತುತ ಮೈಸೂರು ಜಿಲ್ಲೆಯ ಮಕ್ಕಳ ರಕ್ಷಣಾ ಕೇಂದ್ರದಲ್ಲಿ 7 ಬಾಲಕರು, 56 ಹೆಣ್ಣು ಮಕ್ಕಳಿಗೆ ಆಶ್ರಯ ನೀಡಲಾಗಿದೆ. 56 ಹೆಣ್ಣು ಮಕ್ಕಳಲ್ಲಿ ವಿವಿಧ ಪ್ರಕರಣಗಳ ಸಂತ್ರಸ್ತರು ಮತ್ತು ಕಾನೂನು ಸಂಘರ್ಷಕ್ಕೆ ಒಳಪಟ್ಟ ಮಕ್ಕಳು ಸೇರಿದ್ದಾರೆ. ಕಳೆದ ಏಪ್ರಿಲ್‌ನಿಂದ ಈವರೆಗೆ 201 ಬಾಲ್ಯವಿವಾಹಗಳು ಜಿಲ್ಲೆಯಲ್ಲಿ ವರದಿಯಾಗಿವೆ. 164 ಪ್ರಕರಣಗಳನ್ನು ತಡೆಯಲಾಗಿದೆ. 38 ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ವಹಿಸಿ ಎಫ್‌ಐಆರ್ ದಾಖಲಿಸಲಾಗಿದೆ. 700 ಮಕ್ಕಳು ಶಾಲೆಯಿಂದ ಹೊರಗೆ ಉಳಿದಿದ್ದಾರೆ. ಇವರನ್ನು ಮತ್ತೆ ಶಾಲೆಗೆ ದಾಖಲಿಸಿ ಶಿಕ್ಷಣ ಕೊಡಿಸುವ ಕೆಲಸ ನಡೆದಿದೆ ಎಂದರು.

–ನಾಗಣ್ಣಗೌಡ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ನಾಗಣ್ಣಗೌಡ ಮಾತನಾಡಿ, ಮಕ್ಕಳ ಹಕ್ಕುಗಳ ಸಂರಕ್ಷಣೆಯಲ್ಲಿ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆ ಕಾಣುತ್ತಿದೆ. ಆದರೂ ಸಂಬಂಧಿಗಳಿಂದ, ಶಿಕ್ಷಕರಿಂದ, ಮನೆ ಪಾಠ ಹೇಳಿಕೊಡುವವರಿಂದ ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಘಟನೆಗಳು ತಲೆತಗ್ಗಿಸುವಂತೆ ಮಾಡಿವೆ. ಮಕ್ಕಳ ಹಕ್ಕು, ಅವರ ಮೇಲಿನ ಶೋಷಣೆ ತಡೆಗಟ್ಟಲು ಗ್ರಾಮ ಮಟ್ಟದಿಂದಲೇ ಸಮಿತಿ ರಚನೆ ಮಾಡಲಾಗುತ್ತಿದೆ. ಈ ಸಮಿತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಶಿಕ್ಷಕರು, ಮಕ್ಕಳ ಪರ ಕೆಲಸ ಮಾಡುವ ಎನ್‌ಜಿಒ ಸೇರಿದಂತೆ 8ರಿಂದ 10 ಜನ ಸದಸ್ಯರು ಇರಲಿದ್ದು, ಪಿಡಿಒ, ಗ್ರಾಮ ಪಂಚಾಯಿತಿ ಅಧ್ಯಕ್ಷರ ನೇತೃತ್ವದಲ್ಲಿ ಸಮಿತಿ ಕಾರ್ಯನಿರ್ವಹಿಸಲಿದೆ. ಗ್ರಾಮ ಮಟ್ಟದಿಂದ ರಾಜ್ಯಮಟ್ಟದವರೆಗೆ 7 ಹಂತದಲ್ಲಿರುವ ಸಮಿತಿಗಳು ಮಕ್ಕಳ ಹಕ್ಕು ರಕ್ಷಣೆಗೆ ಶ್ರಮಿಸುತ್ತಿವೆ. ಮಕ್ಕಳು ಹಕ್ಕು ಉಲ್ಲಂಘನೆ ತಡೆದು, ಅವುಗಳ ಸಂರಕ್ಷಣೆ ಮತ್ತು ಜಾಗೃತಿ ಕುರಿತು ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಆಯೋಗದ ರಾಜ್ಯ ಮಟ್ಟದ ಸಮಿತಿ ರಚನೆಯಾಗಿದೆ. ಆದರೆ, ಕಳೆದ ಎರಡು ವರ್ಷದಿಂದ ಜಿಲ್ಲಾ ಮಟ್ಟ ಸಮಿತಿ ರಚನೆ ಪೂರ್ಣಗೊಂಡಿಲ್ಲ. ಎಲ್ಲ ಜಿಲ್ಲಾ ಸಮಿತಿಗಳ ಸದಸ್ಯತ್ವ ಸ್ಥಾನಕ್ಕೆ ಅರ್ಜಿಗಳು ಬಂದಿವೆ. ಇವುಗಳನ್ನು ಪರಿಶೀಲಿಸಿ ಸದಸ್ಯರನ್ನು ನೇಮಕ ಮಾಡಲಾಗುವುದು ಎಂದರು.

ಬಾಲ್ಯವಿವಾಹ, ಶಿಕ್ಷಣ ಹಕ್ಕು ಕಾಯ್ದೆ (ಆರ್‌ಟಿಇ) ಮತ್ತು ಪೋಕ್ಸೋ ಕಾಯ್ದೆಯಡಿ ಹೆಚ್ಚು ಪ್ರಕರಣಗಳು ವರದಿಯಾಗುತ್ತಿವೆ. ತಳಮಟ್ಟದಲ್ಲೇ ಇವುಗಳ ಪರಿಹಾರಕ್ಕೆ ಕ್ರಮ ವಹಿಸಲಾಗಿದೆ. ಅರಿವಿನ ಕೊರತೆಯಿಂದಾಗಿ ಆತುರದಲ್ಲಿ ಬಾಲ್ಯವಿವಾಹವಾಗುತ್ತಿವೆ. ಇದು ಬಾಲ್ಯವಿವಾಹವಲ್ಲ. ಅದು ಜೈಲು ವಿವಾಹ. ಮದುವೆಯಾದ ಬಳಿಕ ಕಾರಾಗೃಹ ಸೇರುವಂತಾಗಿದೆ. ಅಪ್ರಾಪ್ತರು ಕದ್ದು ಮದುವೆಯಾಗಿ ಗರ್ಭಿಣಿಯಾದ ಸಂದರ್ಭದಲ್ಲಿ ರಕ್ತ ಮಾದರಿಯಲ್ಲಿ ವಯಸ್ಸಿನ ನಿಖರ ಮಾಹಿತಿ ಗೊತ್ತಾಗಲಿದೆ. ಆಗಲೂ ಸಿಕ್ಕಿ ಬಿದ್ದು ಶಿಕ್ಷೆಗೆ ಗುರಿಯಾಗುವ ಸಾಧ್ಯತೆ ಹೆಚ್ಚಾಗಿದೆ ಎಂದು ಎಚ್ಚರಿಸಿದರು.

ಮಕ್ಕಳ ನಿಗಾ ಕೇಂದ್ರ ನಿರ್ಮಾಣಕ್ಕೆ ಕ್ರಮ: ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಮಾತನಾಡಿ, ಮೈಸೂರಿನ ಸಾತಗಳ್ಳಿ ಬಳಿ 2 ಎಕರೆ ಪ್ರದೇಶದಲ್ಲಿ ಮಕ್ಕಳ ನಿಗಾ ಕೇಂದ್ರ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ. ಹೊಸ ಕೇಂದ್ರದಲ್ಲಿ 20ಕ್ಕೂ ಹೆಚ್ಚು ಮಕ್ಕಳು ಆಶ್ರಯ ಪಡೆಯಲು ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡಿಸಿಪಿ ಮುತ್ತುರಾಜು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಸವರಾಜ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್, ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಮಹಿಳೆಯರ ಪಿಂಕ್ ಶೌಚಗೃಹ ಉದ್ಘಾಟನೆ



ಮೈಸೂರು,ಮಾ.28(ಪಿಎಂ)– ಮೈಸೂರಿನ ದಿವಾನ್ಸ್ ರಸ್ತೆಯ ಚಾಮುಂಡಿ ಅತಿಥಿಗೃಹದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಮಹಿಳೆಯರಿಗೆ ವಿಶೇಷ ಸೌಲಭ್ಯವುಳ್ಳ ಶೌಚಗೃಹವನ್ನು ಶಾಸಕ ಎಲ್.ನಾಗೇಂದ್ರ ಇತ್ತೀಚೆಗೆ ಉದ್ಘಾಟಿಸಿದರು.

ಮೈಸೂರು ಮಹಾನಗರ ಪಾಲಿಕೆ ವಾರ್ಡ್ 23ರಲ್ಲಿ ಈ ವಿಶೇಷ ಸೌಲಭ್ಯವುಳ್ಳ ಶೌಚಗೃಹ ನಿರ್ಮಿಸಲಾಗಿದೆ. ಮಹಿಳೆಯರ ಈ ವಿಶೇಷ ಪಿಂಕ್ ಶೌಚಗೃಹ ಉದ್ಘಾಟನೆಯಾಗಿದ್ದರೂ ಅದರ ನಿರ್ವಹಣೆಗಾಗಿ ಟೆಂಡರ್ ಪ್ರಕ್ರಿಯೆ ಬಾಕಿ ಇರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಬಳಕೆಗೆ ಸದ್ಯ ಮುಕ್ತವಾಗಿಲ್ಲ.

ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಎಲ್.ನಾಗೇಂದ್ರ, ಮಹಿಳೆಯರಿಗಾಗಿಯೇ ವಿಶೇಷ ಸೌಲಭ್ಯಗಳೊಂದಿಗೆ ನಿರ್ಮಾಣಗೊಂಡಿರುವ ಈ ಪಿಂಕ್ ಟಾಯ್ಲೆಟ್ ನಗರದ ಹೃದಯ ಭಾಗದಲ್ಲಿ ಇರುವುದರಿಂದ ಮಹಿಳೆಯರಿಗೆ ಅನುಕೂಲವಾಗಲಿದೆ. ಅದರಲ್ಲೂ ಉದ್ಯೋಗಸ್ಥ ಮಹಿಳೆಯರಿಗೆ ಇದು ಹೆಚ್ಚು ಪ್ರಯೋಜನಕಾರಿ ಆಗಲಿದೆ ಎಂದು ತಿಳಿಸಿದರು.

ಮೈಸೂರು ಮಹಾನಗರ ಪಾಲಿಕೆಯ 14ನೇ ಹಣಕಾಸು ಯೋಜನೆಯಡಿ 37 ಲಕ್ಷ ರೂ. ವೆಚ್ಚದಲ್ಲಿ ಈ ಶೌಚಗೃಹ ನಿರ್ಮಿಸಲಾಗಿದೆ. ಅಲ್ಲದೆ, ಕ್ಷೇತ್ರದಲ್ಲಿ ರಸ್ತೆ ಅಭಿವೃದ್ಧಿ, ಒಳಚರಂಡಿ ಅಭಿವೃದ್ಧಿ ಕಾಮಗಾರಿಗಳು ಸೇರಿದಂತೆ ಸಾರ್ವಜನಿಕರಿಗೆ ಮೂಲ ಸೌಕರ್ಯ ಒದಗಿಸುವ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ ಎಂದರು.

'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ವಾರ್ಡ್ 23ರ ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಚಾಮುಂಡಿ ಅತಿಥಿಗೃಹ ಆವರಣದಲ್ಲಿ 20x20 ಅಡಿ ವಿಸ್ತೀರ್ಣದಲ್ಲಿ ಈ ಪಿಂಕ್ ಟಾಯ್ಲೆಟ್ ನಿರ್ಮಿಸಲಾಗಿದೆ. ಸದರಿ ಶೌಚಾಗೃಹದಲ್ಲಿ ಎರಡು ವೆಸ್ಟರ್ನ್, ಎರಡು ಇಂಡಿಯನ್ ಶೈಲಿಯ ಶೌಚಾಲಯಗಳಿದ್ದು, ಅಂಗವಿಕಲರಿಗಾಗಿ ಪ್ರತ್ಯೇಕವಾಗಿ ಒಂದು ಶೌಚಾಲಯವಿದೆ. ಅಲ್ಲದೆ, ಒಂದು ವಿಶ್ರಾಂತಿ ಕೊಠಡಿ, ಒಂದು ಹಾಲುಣಿಸುವ ಕೊಠಡಿ, ಒಂದು ಡ್ರೆಸ್ಸಿಂಗ್ ಕೊಠಡಿ ಇದ್ದು, ಬಿಸಿ ನೀರಿಗಾಗಿ ಗೀಸರ್ ಅಳವಡಿಸಿರುವ ಎರಡು ಸ್ನಾನದ ಗೃಹಗಳಿವೆ ಎಂದು ತಿಳಿಸಿದರು.

ಸ್ಯಾನಿಟರಿ ಪ್ಯಾಡ್ ನೀಡುವ ಯಂತ್ರವಿದ್ದು, ಇದಕ್ಕೆ 5 ರೂ. ನಾಣ್ಯ ಹಾಕಿದರೆ ಒಂದು ಸ್ಯಾನಿಟರಿ ಪ್ಯಾಡ್ ದೊರೆಯಲಿದೆ. ಜೊತೆಗೆ ಬಳಕೆಯಾದ ಸ್ಯಾನಿಟರಿ ಪ್ಯಾಡ್ ಅನ್ನು ವಿಲೇವಾರಿ ಮಾಡಲು ಬರ್ನಿಂಗ್ ಯಂತ್ರದ ವ್ಯವಸ್ಥೆಯೂ ಇದೆ. ಭದ್ರತೆ ದೃಷ್ಟಿಯಿಂದ ಟಾಯ್ಲೆಟ್ ಹೊರಭಾಗದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿದೆ ಎಂದರು.

ಉಚಿತ ಬಳಕೆಗೆ ಅವಕಾಶ ಕಲ್ಪಿಸಿದರೆ ಸಮರ್ಪಕ ನಿರ್ವಹಣೆ ಕಷ್ಟವಾಗಲಿದೆ. ಈ ಹಿನ್ನೆಲೆಯಲ್ಲಿ ತಲಾ 5 ರೂ. ಶುಲ್ಕ ವಿಧಿಸುವ ಉದ್ದೇಶವಿದೆ. ನಿರ್ವಹಣೆಗೆ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಸಾರ್ವಜನಿಕ ಬಳಕೆಗೆ ಮುಕ್ತವಾಗಲಿದೆ. ಸದರಿ ಟಾಯ್ಲೆಟ್ ಪಕ್ಕದಲ್ಲಿ ಉದ್ಯಾನವು ನಿರ್ಮಿಸುವ ಉದ್ದೇಶಿತ ಯೋಜನೆ ಇದೆ ಎಂದು ತಿಳಿಸಿದರು.

ಮೇಯರ್ ಶಿವಕುಮಾರ್, ಉಪ ಮೇಯರ್ ಡಾ.ಜಿ.ರೂಪಾ, ಪಾಲಿಕೆ ಸದಸ್ಯೆ ಪ್ರಮೀಳಾ ಭರತ್, ಬಿಜೆಪಿ ಮಹಿಳಾ ಮೋರ್ಚಾ ನಗರಾಧ್ಯಕ್ಷೆ ಹೇಮಾ ನಂದೀಶ್, ಪಕ್ಷದ ಮುಖಂಡರಾದ ತನುಜಾ ಮಹೇಶ್, ವಿಶ್ವೇಶ್ವರ ಭಟ್, ರಾಜೇಂದ್ರ, ಸುರೇಂದ್ರ, ಲಕ್ಷ್ಮೀ, ಮಹೇಶ್, ಗೋಪಾಲಕೃಷ್ಣ, ಪ್ರಮೋದ್ ಗೌಡ ಮತ್ತಿತರರು ಹಾಜರಿದ್ದರು.



ಪಿ.ಆರ್.ತಿಪ್ಪೇಸ್ವಾಮಿ ಪ್ರತಿಷ್ಠಾನ, ಕಲಾನಿಕೇತನ,ಕದಂಬ ರಂಗವೇದಿಕೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾರತೀಯ ಪತ್ರಿಕಾ ಮಂಡಳಿಯ ರಾಷ್ಟ್ರೀಯ ಪತ್ರಿಕೋದ್ಯಮ ಪ್ರಶಸ್ತಿ ಪುರಸ್ಕೃತರಾದ ರುದ್ರಣ್ಣ ಹರ್ತಿಕೋಟೆ ಅವರನ್ನು ಅಭಿನಂದಿಸಿ, ಗೌರವಿಸಲಾಯಿತು. ಡಾ.ವಾಣಿಶ್ರೀ ಅರುಣ್, ಎಸ್.ಟಿ.ರವಿಕುಮಾರ್, ರಾಜಶೇಖರ ಕದಂಬ, ಅಂಶಿ ಪ್ರಸನ್ನ ಕುಮಾರ್, ಸಿಪಿಕೆ, ಹೆಚ್.ಎಂ. ಪರಮೇಶ್, ಮಹದೇವಶೆಟ್ಟಿ ಇದ್ದಾರೆ.

ಏ.1, 2ರಂದು ಸಮ್ಮರ್ ಕಾರ್ನಿವಲ್ ವಸ್ತು ಪ್ರದರ್ಶನ




ಮೈಸೂರು,ಮಾ.28(ಪಿಎಂ)– ಮೈಸೂರು ಸಂತೆ ತಂಡದ ವತಿಯಿಂದ ಏ.1 ಮತ್ತು 2ರಂದು ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಸಮ್ಮರ್ ಕಾರ್ನಿವಲ್ (ಬೇಸಿಗೆ ಹಬ್ಬ) ಶೀರ್ಷಿಕೆಯಡಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ ಆಯೋಜಿಸಲಾಗಿದೆ ಎಂದು ತಂಡದ ಸದಸ್ಯ ಕಾರ್ತಿಕ್ ಮಹೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೇಳದಲ್ಲಿ ಬಟ್ಟೆ ಪಾದರಕ್ಷೆ ಆಭರಣ, ಕಲಾಕೃತಿ, ಪೀಠೋಪಕರಣಗಳು ಮೊದಲಾದ ಸಾಮಗ್ರಿಗಳು ದೊರೆಯಲಿವೆ. ಜೊತೆಗೆ ಮನರಂಜನಾ ಕಾರ್ಯಕ್ರಮಗಳು ನಡೆಯಲಿವೆ. ಬೆಳಗ್ಗೆ 11ರಿಂದ ರಾತ್ರಿ 10.30ರವರೆಗೆ ಸಾರ್ವಜನಿಕರು ಮೇಳಕ್ಕೆ ಭೇಟಿ ನೀಡಬಹುದು. 50 ರೂ. ಪ್ರವೇಶ ಶುಲ್ಕ ನಿಗದಿ ಮಾಡಲಾಗಿದೆ ಎಂದರು.

ಮೇಳದಲ್ಲಿ ಮಳಿಗೆ ತೆರೆಯಲು ತಲಾ 6ರಿಂದ 7 ಸಾವಿರ ರೂ.ವರೆಗೆ ಶುಲ್ಕ ನಿಗದಿ ಮಾಡಲಾಗಿತ್ತು. ರೈತರ ಕೆಲ ಉತ್ಪನ್ನಗಳ ಮಳಿಗೆಗಳನ್ನು ತೆರೆಯಲು ಉಚಿತ ಅವಕಾಶ ನೀಡಲಾಗಿದೆ. ಮೇಳದ ಆದಾಯದಲ್ಲಿ ಒಂದು ಭಾಗವನ್ನು ಸೇವಾ ಚಟುವಟಿಕೆಗಾಗಿ ಕಲಿಸು ಫೌಂಡೇಷನ್‌ಗೆ ದೇಣಿಗೆ ನೀಡಲಾಗುವುದು ಎಂದು ತಿಳಿಸಿದರು. ತಂಡದ ಸದಸ್ಯರಾದ ಭರತ್‌ಗೌಡ, ಪೂಜಾ ಜೋಶಿ, ಸ್ಮಿತಾಬಾಲು, ರಮ್ಯಾಗೌಡ ಗೋಷ್ಠಿಯಲ್ಲಿದ್ದರು.

ಹೊಸ ವಿಶ್ವವಿದ್ಯಾಲಯಗಳು ಭವಿಷ್ಯ ಬರೆಯುವ ಕೇಂದ್ರಗಳು

ಬೆಂಗಳೂರು, ಮಾ. 28 (ಕೆಎಂಶಿ)–ರಾಜ್ಯದಲ್ಲಿ ಹೊಸದಾಗಿ ಆರಂಭಿಸಿರುವ ಎಲ್ಲ ವಿಶ್ವವಿದ್ಯಾಲಯಗಳು ಮುಂದಿನ ಭವಿಷ್ಯ ಬರೆಯುವ ಕೇಂದ್ರಗಳು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇಂದಿಲ್ಲಿ ಬಣ್ಣಿಸಿದ್ದಾರೆ.



ಅವರು ಇಂದು ಜ್ಞಾನಜ್ಯೋತಿ ಸಭಾಂಗಣದಲ್ಲಿ ಒಂಭತ್ತು ನೂತನ ವಿಶ್ವವಿದ್ಯಾಲಯಗಳನ್ನು ಉದ್ಘಾಟಿಸಿ ಮಾತನಾಡಿದರು. ನಮ್ಮ ಸರ್ಕಾರ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚು ಒತ್ತು ನೀಡಿದೆ. ಶಿಕ್ಷಣ ಬೆಳವಣಿಗೆ ಆಗಬೇಕು. ಈ ರೀತಿಯ ವಿಶ್ವವಿದ್ಯಾಲಯಗಳು ದೇಶದಲ್ಲಿಯೇ ಪ್ರಥಮವಾಗಿ ಪ್ರಾರಂಭವಾಗಿವೆ. ಮುಂದಿನ ದಿನಗಳಲ್ಲಿ ಎಲ್ಲರೂ ಕರ್ನಾಟಕದ ಮಾದರಿ ಅಳವಡಿಸಿಕೊಳ್ಳುವಂತಾಗಬೇಕು ಎಂದರು.

ದೇಶದಲ್ಲಿ ಉನ್ನತ ಶಿಕ್ಷಣ ಅಂದರೆ ಐಐಟಿ, ಅದಕ್ಕೆ ಸಿಇಟಿ ಮೂಲಕ ಆಯ್ಕೆ ಆಗಬೇಕು. ನಮ್ಮ ಮಕ್ಕಳೂ ಐಐಟಿ ಮಾದರಿಯಲ್ಲಿ ಶಿಕ್ಷಣ ಪಡೆಯಬೇಕು ಎಂದು ಕೆಐಟಿ ಸ್ಥಾಪನೆ ಮಾಡಲಾಗಿದೆ. ಮುಂದಿನ ಐದು ವರ್ಷಗಳಲ್ಲಿ ಎಲ್ಲಾ ಸಂಸ್ಥೆಗಳು ಐಐಟಿ ಮಾದರಿಯಲ್ಲಿ ಇರಲಿವೆ. ಐಐಟಿ ಹುಡುಕಿಕೊಂಡು ಹೋಗುವ ಬದಲು ಇಲ್ಲಿಯೇ ಐಐಟಿ ಸೃಷ್ಟಿಸುತ್ತಿದ್ದೇವೆ. ಜಗತ್ತಿನ ಉನ್ನತ ವಿವಿಗಳ ಜೊತೆಗೆ ಒಪ್ಪಂದ ಮಾಡಿಕೊಳ್ಳಲಾಗುತ್ತಿದೆ ಎಂದರು.


ವಿದ್ಯಾರ್ಥಿಗಳು ನಾಡಿನ ಭವಿಷ್ಯ. ಈ 21ನೇ ಶತಮಾನ ಜ್ಞಾನದ ಶತಮಾನ. ಮುಂದಿನ ದಿನಗಳಲ್ಲಿ ಭಾರತ ವಿಶ್ವಗುರುವಾಗಲಿದೆ. ನಮ್ಮ ಪ್ರಧಾನಿ ನರೇಂದ್ರ ಮೋದಿ ವಿಶ್ವ ನಾಯಕರಾಗಿ ಹೊರ ಹೊಮ್ಮಿದ್ದಾರೆ ಎಂದರು.

ಮೈಸೂರು ನಗರ ಕಾಂಗ್ರೆಸ್ ಹಿಂದುಳಿದ ವರ್ಗಗಳ ಘಟಕದ ಎನ್.ಆರ್. ನಾಗೇಶ್ ನೇತೃತ್ವದ ತಂಡ ಪದಗ್ರಹಣ

ಕಾಂಗ್ರೆಸ್ ಗೆದ್ದರೆ ನೀಡಿದ ಭರವಸೆಗಳ ಈಡೇರಿಕೆ: ಎಂಕೆಎಸ್

ಮೈಸೂರು,ಮಾ.28(ಎಂಟಿವೈ)– ಮೈಸೂರು ನಗರ ಕಾಂಗ್ರೆಸ್ ಹಿಂದುಳಿದ ವರ್ಗಗಳ ಘಟಕದ ಅಧ್ಯಕ್ಷರಾಗಿ ಎನ್.ಆರ್.ನಾಗೇಶ್ ನೇತೃತ್ವದ ಪದಾಧಿಕಾರಿಗಳ ತಂಡ ಇಂದು ಕಾಂಗ್ರೆಸ್ ಭವನದಲ್ಲಿ ಪದಗ್ರಹಣ ಮಾಡಿತು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ರಾಜ್ಯದಲ್ಲಿ ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ಖಚಿತ. ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆ ಮೂಲಕ ಗೃಹಿಣಿಯರಿಗೆ ಮಾಸಿಕ 2 ಸಾವಿರ ರೂ. ನೀಡುವ ಮೂಲಕ ಎಲ್ಲರ ಹಿತಕಾಯುವ ಯೋಜನೆ ಜಾರಿಗೊಳಿಸಲು ಕಾಂಗ್ರೆಸ್ ಪಕ್ಷ ಬದ್ಧವಾಗಿದೆ ಎಂದರು.



ನುಡಿದಂತೆ ನಡೆಯುವ ಏಕೈಕ ಪಕ್ಷವಾಗಿರುವ ಕಾಂಗ್ರೆಸ್ ಜನರ ಹಿತ ಬಯಸುವ ಯೋಜನೆಯನ್ನು ಜಾರಿಗೊಳಿಸಲಿದೆ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಅನ್ನಭಾಗ್ಯ, ಕ್ಷೀರಭಾಗ್ಯ, ಮನಸ್ವಿನಿ ಸೇರಿದಂತೆ ಹಲವು ಜನಪ್ರಿಯ ಯೋಜನೆಗಳನ್ನು ಜಾರಿಗೆ ತಂದು ಚುನಾವಣೆ ಸಂದರ್ಭದಲ್ಲಿ ಕೊಟ್ಟಿದ್ದ ಮಾತನ್ನು ಉಳಿಸಿಕೊಂಡಿದ್ದರು. ಇದೀಗ ಮುಂಬರುವ ಚುನಾವಣೆಗಾಗಿ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ ಮನೆಯ ಯಜಮಾನಿಗೆ ಮಾಸಿಕ 2 ಸಾವಿರ ರೂ. ನೀಡುವ ಗೃಹಲಕ್ಷ್ಮಿ ಯೋಜನೆ, ಪ್ರತಿ ಮನೆಗೆ 200 ಯೂನಿಟ್ ಉಚಿತ ವಿದ್ಯುತ್, 10 ಕೆಜಿ ಅಕ್ಕಿ ನೀಡುವ ಕಾರ್ಯಕ್ರಮವನ್ನು ಆರಂಭಿಸಿ, ಸಮಾಜದ ಎಲ್ಲಾ ವರ್ಗದ ಜನರ ಹಿತ ಕಾಯಲು ಕಾಂಗ್ರೆಸ್ ಪಣತೊಟ್ಟಿದೆ ಎಂದರು.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್. ಶಿವರಾಮ್ ಮಾತನಾಡಿ, ಇವತ್ತಿನ ಪರಿಸ್ಥಿತಿಯಲ್ಲಿ ಹಿಂದುಳಿದ ವರ್ಗಗಳ ಜನರು ಸಂಘಟಿತರಾಗಬೇಕು. ಹಿಂದುಳಿದ ವರ್ಗಗಳ ವಿರೋಧಿ ಧೋರಣೆ ಅನುಸರಿಸುತ್ತಿರುವ ಬಿಜೆಪಿ ಪಕ್ಷಕ್ಕೆ ಪಾಠ ಕಲಿಸಬೇಕು. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹತ್ತಾರು ಯೋಜನೆಗಳು, ಕಾರ್ಯಕ್ರಮಗಳನ್ನು ಜಾರಿಗೊಳಿಸಿದರು. ಬಿಜೆಪಿ ಸರ್ಕಾರ ಬಹುತೇಕ ಕಾರ್ಯಕ್ರಮಗಳನ್ನು ರದ್ದು ಮಾಡಿದೆ. ಉಳಿದ ಕಾರ್ಯಕ್ರಮಗಳನ್ನು ನಿಲ್ಲಿಸಿದೆ. ಹಾಗಾಗಿ ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದು ಸಿದ್ದರಾಮಯ್ಯ ಕೈ ಬಲಪಡಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ವಹಿಸಿದ್ದರು. ಪ್ರಧಾನ ಕಾರ್ಯದರ್ಶಿ ಶಿವಣ್ಣ ಮುಖಂಡರಾದ ಕೆ.ಹರೀಶ್ ಗೌಡ, ನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಲತಾ ಚಿಕ್ಕಣ್ಣ, ಮುಖಂಡರಾದ ಪ್ರದೀಪ್ ಕುಮಾರ್, ಮಾಜಿ ಮೇಯರ್ ಚಿಕ್ಕಣ್ಣ, ಚಂದ್ರು, ಶ್ರೀಕಾಂತ್, ಎಂ.ಎನ್.ಮಹದೇವ, ಕೆ.ಎಸ್. ಮಲ್ಲೇಗೌಡ, ಗಿರೀಶ್, ನಾಗಭೂಷಣ್ ತಿವಾರಿ, ರಘು, ಎಂ.ಕೆ.ಅಶೋಕ್, ರೋಹಿತ್, ಎಸ್.ಟಿ.ಗಿರೀಶ್, ಸೋಮಶೇಖರ್, ಬಸವಣ್ಣ, ಹರೀಶ್, ಸೆನೆಟ್ ಮಾಜಿ ಸದಸ್ಯ ಗೋಪಿನಾಥ್, ಯೋಗೇಶ್ ಉಪ್ಪಾರ, ಈಶ್ವರ್ ಚಕ್ಕಡಿ, ರಾಜ್ಯ ಕಾರ್ಯದರ್ಶಿ ಮೊಗಣ್ಣಾಚಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಪ್ರದೀಪ್, ನವೀನ್, ರಾಜೇಶ್ವರಿ, ನಾಗರತ್ನ, ಮಂಜುನಾಥ್, ಮಹದೇವ್, ಬಸವಣ್ಣ, ಕುಮಾರ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಪಿಎಂ ಸ್ವ-ನಿಧಿ ಯೋಜನೆಯಡಿ ಮೈಸೂರು ನಗರದಲ್ಲಿ

ಈವರೆಗೆ ಒಟ್ಟು 19.84 ಕೋಟಿ ರೂ. ಸಾಲಸೌಲಭ್ಯ ಮಂಜೂರು

ಸ್ವ-ನಿಧಿ ಮಹೋತ್ಸವ ಉದ್ಘಾಟಿಸಿ ಶಾಸಕ ಎಸ್.ಎ.ರಾಮದಾಸ್ ಮಾಹಿತಿ



ಮೈಸೂರಿನ ದಸರಾ ವಸ್ತು ಪ್ರದರ್ಶನ ಮೈದಾನದ ಕಾಳಿಂಗರಾವ್ ಸಭಾ ವೇದಿಕೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ಸ್ವ-ನಿಧಿ ಮಹೋತ್ಸವ'ದಲ್ಲಿ ಬೀದಿಬದಿ ವ್ಯಾಪಾರಿಯೊಬ್ಬರಿಗೆ ಸ್ವ-ನಿಧಿ ಯೋಜನೆಯಡಿ ಸಾಲಸೌಲಭ್ಯದ ಚೆಕ್ ವಿತರಣೆ ಮಾಡಲಾಯಿತು.

ಮೈಸೂರು,ಮಾ.28(ಪಿಎಂ)– ಪ್ರಧಾನಮಂತ್ರಿ ಸ್ವ-ನಿಧಿ ಯೋಜನೆಯಡಿ ಮೈಸೂರು ನಗರದಲ್ಲಿ 17,778 ಬೀದಿಬದಿ ವ್ಯಾಪಾರಿಗಳಿಗೆ ಈವರೆಗೆ ಒಟ್ಟು 19.84 ಕೋಟಿ ರೂ. ಸಾಲಸೌಲಭ್ಯ ಮಂಜೂರಾಗಿದೆ ಎಂದು ಶಾಸಕ ಎಸ್.ಎ.ರಾಮದಾಸ್ ತಿಳಿಸಿದರು.

ಮೈಸೂರಿನ ದಸರಾ ವಸ್ತು ಪ್ರದರ್ಶನ ಮೈದಾನದ ಕಾಳಿಂಗರಾವ್ ಸಭಾ ವೇದಿಕೆಯಲ್ಲಿ ಮೈಸೂರು ಮಹಾನಗರ ಪಾಲಿಕೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಪಟ್ಟಣ ವ್ಯಾಪಾರ ಸಮಿತಿ ಸಂಯುಕ್ತಾಶ್ರಯದಲ್ಲಿ 'ಸ್ವ-ನಿಧಿ ಮಹೋತ್ಸವ' ಶೀರ್ಷಿಕೆಯಡಿ ಮಂಗಳವಾರ ಹಮ್ಮಿಕೊಂಡಿದ್ದ ಬೀದಿಬದಿ ವ್ಯಾಪಾರಿಗಳ ಸಂಭ್ರಮಾಚರಣೆ ಸಮಾರಂಭ (ಮೈಸೂರು ನಗರ ಬೀದಿಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದ ಸದಸ್ಯರನ್ನು ಪ್ರೋತ್ಸಾಹಿಸುವ ಕಾರ್ಯಕ್ರಮ) ಉದ್ಘಾಟಿಸಿ ಅವರು ಮಾತನಾಡಿದರು.

2019ರಲ್ಲಿ ಕೋವಿಡ್ ಲಾಕ್‌ಡೌನ್ ವೇಳೆಯಲ್ಲಿ ಇಡೀ ದೇಶದಲ್ಲಿ ಅಂಗಡಿ, ಕೈಗಾರಿಕೆ, ವ್ಯಾಪಾರ ಎಲ್ಲದಕ್ಕೂ ಹೊಡೆತ ಬಿದ್ದಿತು. ಪ್ರಧಾನಿ ಮೋದಿಯವರೂ ಗುಜರಾತ್‌ನ ಅಹಮದಾಬಾದಿನ ರೈಲು ನಿಲ್ದಾಣದಲ್ಲಿ ಟೀ ಮಾರುತ್ತಿದ್ದರು. ಅವರಿಗೆ ಬೀದಿಬದಿ ವ್ಯಾಪಾರಿಗಳ ಕಷ್ಟ ಗೊತ್ತಿತ್ತು. ಆ ದೃಷ್ಟಿಯಿಂದಲೇ ಬೀದಿಬದಿ ವ್ಯಾಪಾರಿಗಳಿಗೆ ಸ್ವ-ನಿಧಿ ಯೋಜನೆ ಜಾರಿಗೊಳಿಸಿದರು. 2020ರಲ್ಲಿ ಈ ಯೋಜನೆಯಡಿ ಬೀದಿಬದಿ ವ್ಯಾಪಾರಿಗಳ ನೋಂದಣಿ ಆರಂಭಿಸಲಾಯಿತು. ಈ ವೇಳೆ ಕೆಲವರು ಇದೆಲ್ಲಾ ಪ್ರಯೋಜನವಿಲ್ಲ ಎಂದೂ ಹೇಳಿದರು. ನೋಂದಣಿ ಮಾಡಿದವರಿಗೆ ಅವರ ಖಾತೆಗೆ 10 ಸಾವಿರ ರೂ. ಜಮೆಯಾಗುವ ಮೂಲಕ ಅವರು ಆರ್ಥಿಕವಾಗಿ ಸದೃಢಗೊಳ್ಳಲು ಸಾಧ್ಯವಾಯಿತು ಎಂದು ತಿಳಿಸಿದರು.

ಶೇ.95ರಷ್ಟು ಫಲಾನುಭವಿಗಳಿಂದ ಮರುಪಾವತಿ: ಈ ಯೋಜನೆಯಡಿ ಮೂರು ಹಂತದಲ್ಲಿ ಸಾಲಸೌಲಭ್ಯ ಪಡೆಯಬಹುದಾಗಿದ್ದು, ಮೊದಲ ಹಂತದಲ್ಲಿ 10 ಸಾವಿರ ಕಿರು ಸಾಲ ಸೌಲಭ್ಯವನ್ನು ಪಡೆದು ಕ್ರಮಬದ್ಧವಾಗಿ ಮರುಪಾವತಿ ಮಾಡಿದವರಿಗೆ ಎರಡನೇ ಹಂತದಲ್ಲಿ 20 ಸಾವಿರ ರೂ. ಸಾಲಸೌಲಭ್ಯ ದೊರೆಯಲಿದೆ. ಅದೇ ರೀತಿ 20 ಸಾವಿರ ರೂ. ಮರುಪಾವತಿ ಮಾಡಿದರೆ ಮೂರನೇ ಹಂತದ ಸಾಲಸೌಲಭ್ಯವಾಗಿ 50 ಸಾವಿರ ರೂ. ದೊರೆಯಲಿದೆ. ಸಾಮಾನ್ಯವಾಗಿ ಸರ್ಕಾರದಿಂದ ಸಾಲ ಸೌಲಭ್ಯ ನೀಡಿದರೆ ಮರುಪಾವತಿಗೆ ನಿರ್ಲಕ್ಷ್ಯ ವಹಿಸುವುದೇ ಹೆಚ್ಚು. ಆದರೆ ಸ್ವ-ನಿಧಿ ಯೋಜನೆಯಡಿ ಮೈಸೂರು ನಗರದಲ್ಲಿ ಶೇ.95ರಷ್ಟು ಬೀದಿಬದಿ ವ್ಯಾಪಾರಿಗಳು ಸಾಲ ಮರುಪಾವತಿ ಮಾಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿಯವರು ಮಾತೃ ವಂದನಾ ಯೋಜನೆ ಜಾರಿಗೊಳಿಸಿದ ಕೂಡಲೇ ನಮ್ಮ ಕ್ಷೇತ್ರದಲ್ಲಿ ಗರ್ಭಿಣಿಯರಿಗೆ ಸೀಮಂತ ಮಾಡುವ ಕಾರ್ಯಕ್ರಮ ಮಾಡಲಾಯಿತು. ಈವರೆಗೆ 9,200 ಗರ್ಭಿಣಿಯರಿಗೆ ಮಾತೃ ವಂದನಾ ಯೋಜನೆಯಡಿ ಸೌಲಭ್ಯ ಕಲ್ಪಿಸಿ ಅವರಿಗೆ ಸೀಮಂತ ಮಾಡಲಾಗಿದೆ. ಅಲ್ಲದೆ, ಅವರ ಖಾತೆಗೆ ಐದು ಸಾವಿರ ರೂ. ಹಾಕಲಾಗಿದೆ. ಇದು ಹಿಂದೂ ಸಂಪ್ರದಾಯ ಎಂಬ ಭಾವನೆ ಹಲವರಲ್ಲಿತ್ತು ನಮ್ಮ ಕ್ಷೇತ್ರದಲ್ಲಿ ಮಾಡಿದ ಮೊದಲನೇ ಕಾರ್ಯಕ್ರಮದಲ್ಲೇ ಎಲ್ಲಾ ಧರ್ಮದ ಗರ್ಭಿಣಿಯರು ಭಾಗವಹಿಸಿದ್ದರು. ಆ ಮೂಲಕ ಮಡಿಲು ತುಂಬಿಸಿಕೊಂಡು ನನಗೆ ಅಣ್ಣನ ಸ್ಥಾನ ಕೊಟ್ಟರು ಎಂದು ಭಾವುಕರಾದರು.

> **ಸ್ವ-ನಿಧಿ ಸಾಲ ಮಂಜೂರಾತಿ ; ಪಾಲಿಕೆಗೆ ರಾಜ್ಯದಲ್ಲಿ 2ನೇ ಸ್ಥಾನ**
>
> ಕೋವಿಡ್ ಆಕ್ರಮಿಸಿಕೊಂಡಾಗ ಪ್ರಧಾನಮಂತ್ರಿಯವರು ಸ್ವ-ನಿಧಿ ಯೋಜನೆ ಜಾರಿಗೊಳಿಸಿದರು. ಈ ಯೋಜನೆಯು ಬೀದಿಬದಿ ವ್ಯಾಪಾರಿಗಳಲ್ಲಿ ಆರ್ಥಿಕ ಸಬಲತೆ ಉಂಟು ಮಾಡುವಲ್ಲಿ ಅತ್ಯಂತ ಪರಿಣಾಮಕಾರಿಯಾಗಿ ಹೊರಹೊಮ್ಮಿದೆ. ಈ ಯೋಜನೆಯಡಿ ಇಡೀ ರಾಜ್ಯದಲ್ಲಿ 2ನೇ ಅತಿಹೆಚ್ಚು ಸಾಲ ಮಂಜೂರಾತಿ ಮಾಡಿದ ಸ್ಥಳೀಯ ಸಂಸ್ಥೆ ಎಂಬ ಪ್ರಶಂಸೆಗೆ ಮೈಸೂರು ಮಹಾನಗರ ಪಾಲಿಕೆಯು ಭಾಜನವಾಗಿದೆ.
>
> -ಎಂ.ಜೆ.ರೂಪ, ಹೆಚ್ಚುವರಿ ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ

ಇದೇ ವೇಳೆ ಸ್ವ-ನಿಧಿ ಯೋಜನೆಯಡಿ ಸಾಂಕೇತಿಕವಾಗಿ ಹಲವರಿಗೆ ಸಾಲಸೌಲಭ್ಯದ ಚೆಕ್‌ಗಳನ್ನು ವಿತರಣೆ ಮಾಡಲಾಯಿತು. ಅಲ್ಲದೆ, ಈಗಾಗಲೇ ನಡೆಸಿದ್ದ ಸಾಂಸ್ಕೃತಿಕ, ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ಬೀದಿಬದಿ ವ್ಯಾಪಾರಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಜೊತೆಗೆ ವಲಯವಾರು ತಲಾ ಮೂವರಿಗೆ 'ಬೆಸ್ಟ್ ಫುಡ್ ವೆಂಡರ್ಸ್' ಪ್ರಶಸ್ತಿ ಪ್ರದಾನ ಮಾಡಲಾಯಿತು. ಬೀದಿಬದಿ ವ್ಯಾಪಾರಸ್ಥರ 29 ಮಂದಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಪ್ರದರ್ಶನ 5 ಬೀದಿಬದಿ ವ್ಯಾಪಾರಿಗಳ ಮಳಿಗೆಗಳು, 5 ಸ್ವ-ಸಹಾಯ ಸಂಘಗಳ ಮಳಿಗೆಗಳಲ್ಲಿ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ನಡೆಯಿತು. ಅಲ್ಲದೆ, ಬೀದಿಬದಿ ವ್ಯಾಪಾರಿಗಳು ಮತ್ತು ಅವರ ಕುಟುಂಬದವರಿಗೆ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿತ್ತು ಬೀದಿಬದಿ ವ್ಯಾಪಾರಿಗಳು ಹಾಗೂ ಅವರ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳೂ ನಡೆದವು. ಇದಕ್ಕೂ ಮುನ್ನ ಅರಮನೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಜಯಚಾಮರಾಜ ಒಡೆಯರ್ ವೃತ್ತ ಮಾರ್ಗವಾಗಿ ದಸರಾ ವಸ್ತು ಪ್ರದರ್ಶನ ಮೈದಾನದವರೆಗೆ ಜಾನಪದ ಕಲಾತಂಡಗಳ ಮೆರವಣಿಗೆ ನಡೆಸಲಾಯಿತು.

ಪಾಲಿಕೆ ಸದಸ್ಯೆ ಛಾಯಾದೇವಿ, ಮಾಜಿ ಸದಸ್ಯೆ ವಿದ್ಯಾಅರಸ್, ಪಾಲಿಕೆ ಹೆಚ್ಚುವರಿ ಆಯುಕ್ತರಾದ ಎಂ.ಜೆ.ರೂಪಾ, ಪಟ್ಟಣ ವ್ಯಾಪಾರ ಸಮಿತಿ ಸದಸ್ಯರಾದ ಭಾಸ್ಕರ್ ಶ್ರೀನಿವಾಸ್ ರಾಜೇ ಅರಸ್, ಆರ್.ಗುರುಸ್ವಾಮಿ, ಬಿ.ಎಸ್.ರವಿ, ಅನಿತಾ ಕುಮಾರಿ, ಬಿ.ಬಸಪ್ಪ, ಭಾರತಿ, ನಾಗರತ್ನಮ್ಮ, ಹೇಮಾವತಿ, ವಿ.ನಳಿನ ಮತ್ತಿತರರು ಹಾಜರಿದ್ದರು.

ಸೈಕಲ್ ಪ್ಯೂರ್ ಅಗರಬತ್ತಿ ಐಟಿಎಫ್ ಮೈಸೂರು ಓಪನ್-2023;

ಮುಖ್ಯ ಪಂದ್ಯಗಳಿಗೆ ಆರು ಮಂದಿ ಭಾರತೀಯ ಆಟಗಾರರು ಅರ್ಹರು



'ಸೈಕಲ್‌ಪ್ಯೂರ್ ಅಗರಬತ್ತಿ ಐಟಿಎಫ್ ಮೈಸೂರು ಓಪನ್-2023' ಪಂದ್ಯಾವಳಿಗೆ ಚಾಲನೆ ದೊರೆತ ವೇಳೆ (ಎಡದಿಂದ) ಪಂದ್ಯಾವಳಿ ನಿರ್ದೇಶಕ ಪೀಟರ್ ವಿಜಯ ಕುಮಾರ, ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ, ಸೈಕಲ್‌ಪ್ಯೂರ್ ಅಗರಬತ್ತಿ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ, ಮೈಸೂರು ಟೆನ್ನಿಸ್ ಕ್ಲಬ್ ಅಧ್ಯಕ್ಷ ಎ.ಆರ್.ಆಲಾಪ್ಪನ್ ಉಪಸ್ಥಿತರಿದ್ದರು.

ಮೈಸೂರು, ಮಾ.28(ಆರ್‌ಕೆ)– ಮೈಸೂರಿನ ಚಾಮರಾಜಪುರಂ ನಲ್ಲಿರುವ ಮೈಸೂರು ಟೆನ್ನಿಸ್ ಕ್ಲಬ್‌ನಲ್ಲಿ 'ಸೈಕಲ್‌ಪ್ಯೂರ್ ಅಗರಬತ್ತಿ ಐಟಿಎಫ್ ಮೈಸೂರು ಓಪನ್-2023' ಪಂದ್ಯಾವಳಿಯ ಮುಖ್ಯ ಪಂದ್ಯಗಳು ಆರಂಭಗೊಂಡಿದ್ದು, 6 ಮಂದಿ ಭಾರತೀಯ ಟೆನ್ನಿಸ್ ಆಟಗಾರರು ಅರ್ಹರಾಗಿದ್ದಾರೆ. 8 ವರ್ಷದ ಬಳಿಕ ಮೈಸೂರಿನಲ್ಲಿ ನಡೆಯುತ್ತಿರುವ ಅಂತರರಾಷ್ಟ್ರೀಯ ಮಟ್ಟದ ಟೆನ್ನಿಸ್ ಪಂದ್ಯಾವಳಿಯ ಮೊದಲ (ಮಾ.27) ದಿನದಾಟದಲ್ಲಿ ಅಗ್ರ ಶ್ರೇಯಾಂಕದ ಆಟಗಾರ ಸಿದ್ಧಾರ್ಥ ವಿಶ್ವಕರ್ಮ, ದೀಪಕ್ ಅನಂತರಾಮು ವಿರುದ್ಧ 6–1, 6–2 ಸೆಟ್‌ಗಳಿಂದ ಜಯ ಗಳಿಸಿದರೆ, ಯಶ್ ಚೌರಾಸಿಯ ವಿರುದ್ಧ ವಿಷ್ಣುವರ್ಧನ್ 6–1, 6–1 ರ ಸೆಟ್‌ಗಳಿಂದ ಸುಲಭ ಜಯ ದಾಖಲಿಸಿದರು.

ಮುಖ್ಯ ಪಂದ್ಯಗಳಲ್ಲಿ ಭಾಗವಹಿಸುವುದಕ್ಕಾಗಿ ಸೆಣಸಾಡಿದ ಫೈಸಲ್ ಕ್ವಾಮರ್ ಹಾಗೂ ಫರ್ದೀನ್ ಕ್ವಾಮರ್ ಕಠಿಣ ಸವಾಲು ಎದುರಿಸಬೇಕಾಯಿತು. ಫೈಸಲ್ ಕ್ವಾಮರ್ 7–6(3), 7–6(1) ಸೆಟ್‌ಗಳಿಂದ ಲಕ್ಷಿತ್ ಸೂದ್ ಸೋಲಿಸಿದರೆ, ಫರ್ದೀನ್ ಕ್ವಾಮರ್ ಥೈಲ್ಯಾಂಡಿನ ಪ್ರುಚ್ಯಾ ಇಸಾರೊ ವಿರುದ್ಧ 3–6, 7–6(3), 10–5 ಟೈ-ಬ್ರೇಕರ್ ಮೂಲಕ ಜಯ ಗಳಿಸಿದರು.

ಎರಡನೇ ದಿನದಾಟದ ಪಂದ್ಯಗಳಲ್ಲಿ ಇಸಾಕ್ ಇಕ್ಬಾಲ್ 7–6, 6–0 ನೇರ ಸೆಟ್‌ಗಳಿಂದ ಸೂರಜ್ ಪ್ರಮೋದ್ ವಿರುದ್ಧ ಜಯಗಳಿಸಿದರೆ, ಡಾಲಿ ಬ್ಲಾಂಚ್ ವಿರುದ್ಧ ಸಿದ್ಧಾರ್ಥ ರಾವತ್ 3–6, 2–6 ಸೆಟ್‌ಗಳಿಂದ ಗೆಲುವು ಸಾಧಿಸಿದರು. ಫೈಸಲ್ ಕ್ವಾಮರ್ ಹಾಗೂ ರಿಷಿ ರೆಡ್ಡಿ ನಡುವಿನ ಪಂದ್ಯದಲ್ಲಿ 6–1, 6–1 ರ ನೇರ ಸೆಟ್‌ಗಳಿಂದ ಫೈಸಲ್ ಕ್ವಾಮರ್ ಸುಲಭ ಜಯ ಸಾಧಿಸಿದರೆ, ಕರಣ್ ಸಿಂಗ್ 3–6. 6–3, 6–7 ಸೆಟ್ ಮೂಲಕ ಗ್ರಿಗೋರಿ ಲೋಮಕಿನ್ ವಿರುದ್ಧ ರೋಚಕ ಜಯಗಳಿಸಿದರು. ಹಾಗೆಯೇ ವೂಬಿನ್ ಶಿನ್ ಹಾಗೂ ಮಧ್ವಿನ್ ಕಾಮತ್ ನಡುವೆ ನಡೆದ ಪಂದ್ಯದಲ್ಲಿ 6–1, 1–0 ಸೆಟ್‌ಗಳಿಂದ ವೂಬಿನ್ ಶಿನ್ ಜಯ ಪಡೆದರು.



ಬಾಲ್ ಪಾಸ್ ಮಾಡಿ ಪಂದ್ಯಾವಳಿ ಉದ್ಘಾಟಿಸಿದ ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಈ ವೇಳೆ ಸೈಕಲ್ ಪ್ಯೂರ್ ಅಗರ್‌ಬತ್ತಿ ವ್ಯವಸ್ಥಾಪಕ ನಿರ್ದೇಶಕ ಅರ್ಜುನ್ ರಂಗ ಇದ್ದಾರೆ.



ಪಂದ್ಯಾವಳಿಯಲ್ಲಿ ಟೆನ್ನಿಸ್ ಪಟು ಫೈಸಲ್ ಕ್ವಾಮರ್ ಆಕರ್ಷಕ ಹೊಡೆತದ ಭಂಗಿ

ಜೆಡಿಎಸ್ ಅಧಿಕಾರಕ್ಕೆ ಬಂದರೆ ಕೆಪಿಎಸ್‌ಸಿಗೆ ಮೇಜರ್ ಸರ್ಜರಿ

● ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ದೃಢ ನಿಶ್ಚಯ ● ಲಕ್ಷ, ಕೋಟಿಗೆ ಹುದ್ದೆ ಮಾರಾಟಕ್ಕೆ ಕಡಿವಾಣ ● ಅವೈಜ್ಞಾನಿಕ, ತಾರತಮ್ಯ ಮೀಸಲಾತಿ ರದ್ದು



ಬೆಂಗಳೂರು, ಮಾ. 28 (ಕೆಎಂಶಿ)– ರಾಜ್ಯದಲ್ಲಿ ಜೆಡಿಎಸ್ ಸರಕಾರ ಅಧಿಕಾರಕ್ಕೆ ಬಂದರೆ, ಸರಕಾರಿ ನೇಮಕಾತಿ ವ್ಯವಸ್ಥೆಯನ್ನು ಆಮೂಲಾಗ್ರವಾಗಿ ಬದಲಾಯಿಸುತ್ತವೆ ಹಾಗೂ ಕರ್ನಾಟಕ ಲೋಕಸೇವಾ ಆಯೋಗಕ್ಕೆ (ಕೆಪಿಎಸ್‌ಸಿ) ಸರಿಯಾದ ಚಿಕಿತ್ಸೆ ನೀಡುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ಪಕ್ಷದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀಸಲಾತಿ ಎಂದು ಬಿಜೆಪಿ ಸರಕಾರ ಜನರನ್ನು ಯಾಮಾರಿಸುತ್ತಿದೆ. ಆದರೆ, ಸರಕಾರಿ ಹುದ್ದೆಗಳನ್ನು ಲಕ್ಷ, ಕೋಟಿ ಲೆಕ್ಕದಲ್ಲಿ ಮಾರಿಕೊಳ್ಳುತ್ತಿದೆ ಎಂದು ಕಿಡಿಕಾರಿದರು. ರಾಜ್ಯದಲ್ಲಿ ಈ ಬಾರಿ ಜೆಡಿಎಸ್ ಸರಕಾರ ಅಧಿಕಾರಕ್ಕೆ ಬಂದರೆ, ಈ ನೇಮಕಾತಿ ವ್ಯವಸ್ಥೆಯನ್ನು ಸರಿ ಮಾಡುತ್ತೇನೆ. ನೇಮಕಾತಿ ಮಾಡುವ ಸಂಸ್ಥೆಗಳಿಗೆ ತಕ್ಕ ಶಾಸ್ತಿ ಮಾಡಿ ವ್ಯವಸ್ಥೆಯನ್ನು ಸುಧಾರಿಸುತ್ತೇನೆ ಎಂದು ಕುಮಾರಸ್ವಾಮಿ ಅವರು ಹೇಳಿದರು. ಬಿಜೆಪಿ ಸರಕಾರವು ಸರಕಾರಿ ನೌಕರಿ ಯನ್ನು ಯಾವ ರೀತಿ ಕೊಡ್ತಾ ಇದೆ ಎನ್ನುವುದು ಜಗಜ್ಜಾಹೀರು. ಹಣ ಪಡೆದು ನೌಕರಿ ಕೊಡ್ತಾ ಇದ್ದಾರೆ. ಮೀಸಲಾತಿ ಮೇಲೆ ನೌಕರಿ ಕೊಡ್ತಾ ಇಲ್ಲ. ಹಾಗಾದರೆ, ಮೀಸಲಾತಿ ತಗೊಂಡು ಏನ್ ಮಾಡೋದು. ಹಣ ಕೊಟ್ಟವರಿಗೆ ಸರಕಾರಿ ನೌಕರಿ ಮಾರಾಟ ಆಗುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಈ ಬಾರಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ಇಂಥ ಅವೈಜ್ಞಾನಿಕ, ತಾರತಮ್ಯದ ಮೀಸಲಾತಿ ವ್ಯವಸ್ಥೆಯನ್ನು ತೆಗೆದು ಹಾಕುತ್ತೇವೆ. ಅಷ್ಟೆ ಅಲ್ಲ, ಈ ಹಣ ಫಿಕ್ಸ್ ಮಾಡಿ ನೌಕರಿ ಕೊಡ್ತೀರಲ್ಲಾ, ಅದನ್ನು ನಿರ್ನಾಮ ಮಾಡುತ್ತೇವೆ. ಈ ವ್ಯವಸ್ಥೆಯಲ್ಲಿ ಸ್ವಚ್ಛ ಮಾಡಬೇಕು ಅಂದರೆ ಕೆಪಿಎಸ್‌ಸಿಯನ್ನು ಸ್ವಚ್ಛ ಮಾಡಬೇಕು. ಅದನ್ನು ನಾವು ಮಾಡುತ್ತೇವೆ ಎಂದು ಮಾಜಿ ಮುಖ್ಯಮಂತ್ರಿಗಳು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಮನೆ ಮೇಲೆ ಕಲ್ಲು ತೂರಾಟ ನಡೆದ ಘಟನೆಯನ್ನು ಗಮನಿಸಿದ್ದೇನೆ. ಸರಕಾರ ಲಘುವಾಗಿ ಪರಿಗಣಿಸದೆ ಗಂಭೀರವಾಗಿ ಪರಿಶೀಲನೆ ಮಾಡಿಕೊಳ್ಳಬೇಕು. ಗಲಭೆಗೆ ಸರಕಾರವೇ ಕಾರಣ ಎಂದರು.

ಮೀಸಲಾತಿ ಸಂವಿಧಾನದ ಮಾರ್ಗ ಸೂಚಿಯಂತಿರಬೇಕು: ಮೀಸಲು ವಿಷಯದಲ್ಲಿ ಜೆಡಿಎಸ್ ನಿಲುವು ಸಂವಿಧಾನದ ಪರ. ಸಂವಿಧಾನದಲ್ಲಿರುವ ಮಾರ್ಗ ಸೂಚಿಯಂತೆ ಮೀಸಲಾತಿ ಇರಬೇಕು. ಸಮಾಜ ಹಾಳು ಮಾಡುವ, ಜಾತಿಗಳ ಮಧ್ಯೆ ತಂದಿಡುವ ಕೆಲಸ ಆಗಬಾರದು. ಹತ್ತು ಜಿಲ್ಲೆಯಲ್ಲಿ ಬಡತನ ರೇಖೆ ಗಿಂತಲೂ ಕೆಳಗಿರುವವರು ಇದ್ದಾರೆ. ಹೀಗಿದ್ದರೂ ಯಾವುದೇ ಮುಂದಾಲೋಚನೆ ಇಲ್ಲದೆ, ಬೇಜವಾಬ್ದಾರಿಯಿಂದ ಆದೇಶ ಹೊರಡಿಸಿದ್ದು ಯಾಕೆ? ಕೇವಲ ಮತಕ್ಕಾಗಿ, ಚುನಾವಣೆಗಾಗಿ ಹೀಗೆ ಮಾಡಿದೆ ಬಿಜೆಪಿ ಸರಕಾರ ಎಂದು ಅವರು ಕಿಡಿಕಾರಿದರು.

ಸಮಾಜ ಒಡೆಯುವ ಕೆಲಸ: ಸಮಾಜವನ್ನು ಒಡೆಯಬೇಕು ಎಂಬ ದುರುದ್ದೇಶದಿಂದಲೇ ಬಿಜೆಪಿ ಸರಕಾರ ಮೀಸಲು ನಾಟಕ ಆಡಿದೆ. ಮುಸ್ಲಿಮರು ಗಲಾಟೆಗೆ ಮುಂದಾಗಲಿ, ಆ ಮೂಲಕ ತನ್ನ ಬೇಳೆ ಬೇಯಿಸಿಕೊಳ್ಳುವುದು ಈ ಸರಕಾರದ ದುರುದ್ದೇಶವಾಗಿತ್ತು. ಒಂದು ವೇಳೆ ಮುಸ್ಲಿಮರು ಬೀದಿಗಿಳಿದಿದ್ದರೆ ಪರಿಸ್ಥಿತಿ ಏನಾಗಿರುತ್ತಿತ್ತು ಅಮಾಯಕ ಜನ ಬಲಿಯಾಗಿದ್ದರೆ ಯಾರು ಹೊಣೆ ಆಗುತ್ತಿದ್ದರು, ರಕ್ತಪಾತ ಮಾಡಲು ಬಿಜೆಪಿಯವರು ಕುತಂತ್ರ ಹೂಡಿದ್ದಾರೆ. ಸಂಘರ್ಷ ಆಗಬೇಕು ಅಷ್ಟೆ ಅವರಿಗೆ. ಆದರೆ, ಮುಸ್ಲಿಮರು ತಾಳ್ಮೆ ಇರಲಿ. ಹುಡುಗಾಟಿಕೆಯಿಂದ ಮಾಡಿರುವ ಈ ಮೀಸಲಾತಿಗೆ ಬೆಂಬಲ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಅವರು ಹೇಳಿದರು.

ಮಾಡಾಳ್ ಯಾವಾಗಲೋ ಬಂಧಿಸಬೇಕಿತ್ತು: ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಅವರ ಬಂಧನ ವಿಚಾರಕ್ಕೆ ಸಂಬಂಧಿಸಿ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ಯಾವಾಗಲೋ ಅವರ ಬಂಧನ ಆಗಬೇಕಿತ್ತು. ಸತ್ಯಾಂಶ ಏನಿದೆ ನೋಡಬೇಕಲ್ಲವೇ. ತಾವು ಅಡಿಕೆ ಬೆಳೆಗಾರ ಅಂತ ಹೇಳ್ತಾ ಇದ್ದಾರೆ. ಪ್ರತಿ ವರ್ಷ ನೂರಾರು ಕೋಟಿ ವ್ಯವಹಾರ ಮಾಡ್ತೀವಿ ಅಂತಾರೆ. ಅಷ್ಟು ವ್ಯವಹಾರ ಮಾಡಿದರೂ ಅಷ್ಟು ದೊಡ್ಡ ಮೊತ್ತದ ನಗದು ಇಟ್ಟುಕೊಳ್ಳುವ ಹಾಗಿಲ್ಲವಲ್ಲ. ಆದಾಯ ತೆರಿಗೆ ಇಲಾಖೆ ಹಾಗೂ ಜಾರಿ ನಿರ್ದೇಶನಾಲಯ ಈ ಬಗ್ಗೆ ಗಮನ ಕೊಡಬೇಕಲ್ವೇ. ಇನ್ನೇನು ನಾಟಕ ನಡೆಯುತ್ತೆ ನೋಡೋಣ ಎಂದು ಮಾರ್ಮಿಕವಾಗಿ ಹೇಳಿದರು ಮಾಜಿ ಮುಖ್ಯಮಂತ್ರಿಗಳು.

ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ಕೇವಲ ಅಬ್ಬರ ಮಾಡುತ್ತಿವೆ ಅಷ್ಟೇ, ಆದರೆ ಈ ಎರಡೂ ಪಕ್ಷಗಳು 80 ಕ್ಷೇತ್ರ ದಾಟಲ್ಲ. ಈ ಬಗ್ಗೆ ಅಧಿಕಾರಿಗಳೇ ಚರ್ಚೆ ಮಾಡ್ತಾ ಇದ್ದಾರೆ. ಪಕ್ಷಗಳ ಒಳಗೆ ನಡೆಯುತ್ತಿರುವುದು ಬೇರೆ, ಹೊರಗೆ ನಡೆಯುತ್ತಿರುವುದು ಬೇರೆ ಎಂದು ಹೇಳಿದರು ಕುಮಾರಸ್ವಾಮಿ ಅವರು.

ನಂಜನಗೂಡು ಶ್ರೀಕಂಠೇಶ್ವರ ಜಾತ್ರಾ ಮಹೋತ್ಸವ



ಮೈಸೂರು, ಮಾ.28– ಕರ್ನಾಟಕ ಸರ್ಕಾರ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ಮೈಸೂರು ಜಿಲ್ಲೆ ನಂಜನಗೂಡು ಶ್ರೀಕಂಠೇಶ್ವರಸ್ವಾಮಿ ದೇವಾಲಯದಲ್ಲಿ ಶ್ರೀ ಕಂಠೇಶ್ವರ ಜಾತ್ರಾ ಮಹೋತ್ಸವವು ಮಾ. 26ರಿಂದ ಏಪ್ರಿಲ್ 6 ರವರೆಗೆ ಜರುಗಲಿದ್ದು ದೊಡ್ಡ ಜಾತ್ರೆಯ ಪ್ರಯುಕ್ತ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಶ್ರೀಕಂಠೇಶ್ವರ ಜಾತ್ರಾ ಮಹೋತ್ಸವದ ಪ್ರಮುಖ ಕಾರ್ಯಕ್ರಮಗಳಾದ ಗೌತಮ ಪಂಚಮಹಾರಥೋತ್ಸವವು ಏಪ್ರಿಲ್ 02 ರಂದು ಬೆಳಿಗ್ಗೆ 6 ರಿಂದ 6.40ರ ಒಳಗೆ ಜರುಗಲಿದ್ದು, ಏಪ್ರಿಲ್ 04 ರಂದು ಸಂಜೆ 7 ಗಂಟೆಗೆ ಕಪಿಲಾ ನದಿಯಲ್ಲಿ ತೆಪ್ಪೋತ್ಸವ ಜರುಗಲಿದೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಶ್ರೀಕಂಠೇಶ್ವರ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ನಗರದೆಲ್ಲೆಡೆ ಡ್ರಂಕ್ ಅಂಡ್ ಡ್ರೈವ್ ಕಾರ್ಯಾಚರಣೆ



ಮೈಸೂರು, ಮಾ.28(ಎಂಕೆ)– ರಾಜ್ಯ ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆ ಮೈಸೂರು ನಗರದೆಲ್ಲೆಡೆ ಅಲರ್ಟ್ ಆಗಿರುವ ಪೊಲೀಸರು, ಡ್ರಂಕ್ ಅಂಡ್ ಡ್ರೈವ್ ಕಾರ್ಯಾಚರಣೆ ತೀವ್ರಗೊಳಿಸಿದ್ದಾರೆ.


ನಗರದ ಪ್ರಮುಖ ಜಂಕ್ಷನ್‌ಗಳು, ರಸ್ತೆಗಳು, ಬಾರ್‌ಗಳ ಸಮೀಪದಲ್ಲಿ ತಡರಾತ್ರಿಯವರೆಗೂ ಡ್ರಂಕ್ ಅಂಡ್ ಡ್ರೈವ್ ಕಾರ್ಯಾಚರಣೆ ನಡೆಸುತ್ತಿದ್ದು, ಸ್ಕೂಟರ್, ಬೈಕ್, ಕಾರು ಸೇರಿದಂತೆ ಎಲ್ಲಾ ಬಗೆಯ ವಾಹನ ಸವಾರರನ್ನು ತಪಾಸಣೆಗೊಳಪಡಿಸುತ್ತಿದ್ದಾರೆ. ಅಲ್ಲದೆ ಸಂಚಾರ ನಿಯಮ ಉಲ್ಲಂಘಿಸಿದವರ ವಿರುದ್ಧವೂ ಕ್ರಮ ಕೈಗೊಳ್ಳಲಾಗುತ್ತಿದ್ದು, ಸ್ಥಳದಲ್ಲೇ ದಂಡ ವಸೂಲಿ ಮಾಡುತ್ತಿದ್ದಾರೆ. ಕುಡಿದು ವಾಹನ ಚಾಲನೆ ಮಾಡಿರುವುದು ಖಾತರಿಯಾದಲ್ಲಿ ವಾಹನ ವಶಕ್ಕೆ ಪಡೆದು, ಚಾಲಕನಿಗೆ ದಂಡ ವಿಧಿಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪರಿಚಿತ ವ್ಯಕ್ತಿ ಸಾವು

ಮೈಸೂರು, ಮಾ.28–ಮೈಸೂರಿನ ಕೃಷ್ಣರಾಜ ಠಾಣೆ ವ್ಯಾಪ್ತಿಯಲ್ಲಿರುವ ಖಾದಿ ಭಂಡಾರ್ ಮುಂಭಾಗ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದೆ. ಸುಮಾರು 55 ರಿಂದ 60 ವರ್ಷ ವಯಸ್ಸಿನ ವ್ಯಕ್ತಿ ಯಾವುದೋ ಖಾಯಿಲೆಯಿಂದ ಬಳಲಿ ಮಲಗಿದ್ದಲ್ಲೇ ಮೃತಪಟ್ಟಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಮೃತನ ಎಡಗೈಯ್ಯಲ್ಲಿ 'ಶಿವರಾಜ್ ಕುಮಾರ್' ಮತ್ತು ಬಲಗೈಯ್ಯಲ್ಲಿ 'ಮೋಹನ ಲಕ್ಷ್ಮಿ' ಎಂಬ ಹಚ್ಚೆ ಗುರುತುಗಳಿದ್ದು, ಈತನ ವಾರಸುದಾರರು ಕೆ.ಆರ್.ಠಾಣೆ ದೂರವಾಣಿ ಸಂಖ್ಯೆ 0821–2418319 ಅಥವಾ ನಗರ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 2418339 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ನಿಯಮಬಾಹಿರವಾಗಿ ಮುಸ್ಲಿಂರಿಗೆ ನೀಡಿದ್ದ ಮೀಸಲಾತಿ ವಾಪಸ್ ಪಡೆದು ಒಕ್ಕಲಿಗರು, ವೀರಶೈವ ಲಿಂಗಾಯತರಿಗೆ ನೀಡಿದ್ದೇವೆ

ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಎಂ.ಜಿ. ಮಹೇಶ್ ಸಮರ್ಥನೆ



ಮೈಸೂರು, ಮಾ.28(ಎಂಟಿವೈ)– ಕಾನೂನುಬಾಹಿರವಾಗಿ ಮುಸ್ಲಿಮರಿಗೆ ಕಾಂಗ್ರೆಸ್ ನೀಡಿದ್ದ ಮೀಸಲಾತಿಯನ್ನು ಹಿಂಪಡೆದು ಒಕ್ಕಲಿಗರು ಹಾಗೂ ವೀರಶೈವ ಲಿಂಗಾಯತರಿಗೆ ಹಂಚಿಕೆ ಮಾಡಲಾಗಿದೆ. ಆ ಮೂಲಕ ಬಿಜೆಪಿ ಹಿಂದುಗಳ ಹಿತ ಕಾಯುವ ಕೆಲಸ ಮಾಡಿದೆ ಎಂದು ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಎಂ.ಜಿ. ಮಹೇಶ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು – ಹೆಚ್.ಡಿ.ಕೋಟೆ ರಸ್ತೆಯಲ್ಲಿರುವ ವೆಂಕಟೇಶ್ವರ ಕಲ್ಯಾಣಮಂಟಪದಲ್ಲಿ ಮಂಗಳವಾರ ಆಯೋಜಿಸಿದ್ದ ಬಿಜೆಪಿ ಎಸ್‌ಟಿ ಮೋರ್ಚಾ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಮುಸ್ಲಿಮರ ಮತಕ್ಕಾಗಿ ಕಾಂಗ್ರೆಸ್ ಓಲೈಕೆ ರಾಜಕಾರಣ ಮಾಡುತ್ತಾ ಬಂದಿದೆ ಮೀಸಲಾತಿಯ ಮೂಲಕ ಹಲವು ಸವಲತ್ತುಗಳನ್ನು ನಿಯಮಬಾಹಿರವಾಗಿ ನೀಡಲಾಗುತ್ತಿತ್ತು. ಇದನ್ನು ಬಿಜೆಪಿ ಸರ್ಕಾರ ಹಿಂಪಡೆದಿದೆ. ಆ ಮೀಸಲಾತಿಯನ್ನು ವೀರಶೈವ ಲಿಂಗಾಯತ ಹಾಗೂ ಒಕ್ಕಲಿಗರಿಗೆ ಹಂಚಿಕೆ ಮಾಡಲಾಗಿದೆ. ಕಾಂಗ್ರೆಸ್ ಸರ್ಕಾರ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರನ್ನು ಮತ ಬ್ಯಾಂಕ್‌ಗೋಸ್ಕರ ಬಳಕೆ ಮಾಡಿಕೊಂಡಿದೆಯೇ ಹೊರತು ಅವರ ಶ್ರೇಯೋಭಿವೃದ್ಧಿಗೆ ಶ್ರಮಿಸಲಿಲ್ಲ. ಕೇಂದ್ರ ಹಾಗೂ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ಈ ಎಲ್ಲ ಸಮುದಾಯಗಳಿಗೆ ನ್ಯಾಯ ಒದಗಿಸುವ ಕಾರ್ಯವನ್ನು ಮಾಡಿದೆ ಎಂದು ಹೇಳಿದರು.

ಶಾಸಕ ಎಲ್. ನಾಗೇಂದ್ರ ಮಾತನಾಡಿ, ರಾಜ್ಯ ಬಿಜೆಪಿ ಸರ್ಕಾರ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಹೆಚ್ಚಿಸುವ ಮೂಲಕ ಆ ವರ್ಗಗಳಿಗೆ ನ್ಯಾಯ ಒದಗಿಸುವ ಕಾರ್ಯ ಮಾಡಿದೆ. ಹೀಗಾಗಿ ಮುಂದಿನ ಬಾರಿಯೂ ರಾಜ್ಯದಲ್ಲಿ ಬಿಜೆಪಿಗೆ ಜನರು ಆಶೀರ್ವಾದ ಮಾಡಬೇಕು. ಪರಿಶಿಷ್ಟ ಪಂಗಡದವರು ಶ್ರಮಿಕರು. ಇವರ ಅಭಿವೃದ್ಧಿಗಾಗಿ ಬಿಜೆಪಿ ಸರ್ಕಾರ ವಿಶೇಷ ಆದ್ಯತೆ ನೀಡಿದೆ. ಅವರಿಗೆ ಮೀಸಲಾತಿಯನ್ನು ಶೇ.2ರಿಂದ ಶೇ.7ಕ್ಕೆ ಹೆಚ್ಚಿಸಿದೆ. ನಾಯಕರು ಹುಟ್ಟಿನಿಂದಲೇ ನಾಯಕತ್ವ ಗುಣ ಹೊಂದಿದವರು. ನಾವೆಲ್ಲ ನಾಯಕರಾಗಲು ಕಾಯಬೇಕು. ಈ ಸಮುದಾಯದವರು ಸ್ವತಃ ನಾಯಕರೇ ಆಗಿದ್ದಾರೆ ಎಂದು ಶ್ಲಾಘಿಸಿದರು.

ಜೆಎಲ್‌ಆರ್ ಮಾಜಿ ಅಧ್ಯಕ್ಷ ಎಂ.ಅಪ್ಪಣ್ಣ ಮಾತನಾಡಿ, ವಾಲ್ಮೀಕಿ ಜಯಂತಿ ಸರ್ಕಾರಿ ಆಚರಣೆ ಮಾಡಿದ್ದು ಯಡಿಯೂರಪ್ಪ ಸರ್ಕಾರ. ದಶಕಗಳಿಂದ ಪರಿವಾರ, ತಳವಾರ ಸಮಸ್ಯೆ ಪರಿಹರಿಸಿದೆ. ಮೀಸಲಾತಿ ಹೆಚ್ಚಳ ಮಾಡಲಾಗಿದೆ. ಬಿಜೆಪಿ ಸರ್ಕಾರದಲ್ಲಿ ಸಮುದಾಯದ ಅತೀ ಹೆಚ್ಚು ಶಾಸಕರಿದ್ದಾರೆ. ನಿಗಮ-ಮಂಡಳಿಗಳಲ್ಲೂ ಅತೀ ಹೆಚ್ಚು ಮಂದಿಗೆ ಅವಕಾಶ ಮಾಡಿಕೊಟ್ಟಿದೆ ಹೆಚ್ಚು ಅನುದಾನ ನೀಡುವ ಮೂಲಕ ಮೂಲಭೂತ ಸೌಕರ್ಯ ಕಲ್ಪಿಸಿಕೊಟ್ಟಿದ್ದಾರೆ. ಇವೆಲ್ಲವನ್ನೂ ಸಮುದಾಯ ಮನವರಿಕೆ ಮಾಡಿಕೊಂಡು ಮುಂದಿನ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಚಾಮುಂಡೇಶ್ವರಿ ಕ್ಷೇತ್ರದ ಕಾಟೂರು ಲಿಂಗಪ್ಪನಾಯಕ ನೇತೃತ್ವದಲ್ಲಿ ಹಲವು ಮಂದಿ ಜೆಡಿಎಸ್ ಹಾಗೂ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಗೊಂಡರು.

ಸಮಾವೇಶದಲ್ಲಿ ಮೇಯರ್ ಶಿವಕುಮಾರ್, ಬಿಜೆಪಿ ನಗರಾಧ್ಯಕ್ಷ ಟಿ.ಎಸ್. ಶ್ರೀವತ್ಸ, ಎಸ್ಟಿ ಮೋರ್ಚಾ ನಗರ ಅಧ್ಯಕ್ಷ ಲಕ್ಷ್ಮಣ್, ಎಸ್ಟಿ ಮೋರ್ಚಾ ಮಹಿಳಾ ಘಟಕ ಪ್ರಧಾನ ಕಾರ್ಯದರ್ಶಿ ಮಂಜುಳಾ, ಚಾಮುಂಡೇಶ್ವರಿ ಕ್ಷೇತ್ರದ ಉಸ್ತುವಾರಿ ಸೋಮಸುಂದರ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಚಾಮುಂಡೇಶ್ವರಿ ಕ್ಷೇತ್ರ ಬಿಜೆಪಿ ಅಧ್ಯಕ್ಷ ಗೆಜ್ಜಗಳ್ಳಿ ಮಹೇಶ್, ಮುಖಂಡರಾದ ಕವೀಶ್‌ಗೌಡ, ಅರುಣ್ ಕುಮಾರ್ ಗೌಡ, ಎನ್.ಮಹೇಶ್, ಜಗದೀಶ್ ಗೌಡ, ಹೇಮಂತ ಕುಮಾರ್ ಗೌಡ, ಆಶ್ರಯ ಸಮಿತಿ ಸದಸ್ಯ ಮಹೇಶ್, ಲಕ್ಷ್ಮಣ್ ಉತ್ತನಹಳ್ಳಿ, ಕೃಷ್ಣ ನಾಯಕ, ಉಮೇಶ್ ಇತರರು ಪಾಲ್ಗೊಂಡಿದ್ದರು.

ಧ್ರುವನಾರಾಯಣ್ ಆತ್ಮಕ್ಕೆ ಶಾಂತಿ ಸಿಗಲು ದರ್ಶನ್ ಗೆಲ್ಲಿಸಿ

ವಿಪಕ್ಷ ನಾಯಕ ಸಿದ್ದರಾಮಯ್ಯ ಮನವಿ



ನಂಜನಗೂಡು, ಮಾ.28– ರಾಜಕಾರಣದಲ್ಲಿ ಬಹಳ ಎತ್ತರಕ್ಕೆ ಬೆಳೆಯಲು ಅವಕಾಶವಿದ್ದ ನಾಯಕ ಆರ್.ಧ್ರುವನಾರಾಯಣ್ ಅವರ ಆತ್ಮಕ್ಕೆ ಶಾಂತಿ ಸಿಗಬೇಕಾದರೆ ಅವರ ಪುತ್ರ ದರ್ಶನ್ ಅವರನ್ನು ಗೆಲ್ಲಿಸಿ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಮನವಿ ಮಾಡಿದರು.

ನಗರದ ವಿದ್ಯಾವರ್ಧಕ ಶಾಲಾ ಮೈದಾನದಲ್ಲಿ ನಡೆದ ಆರ್.ಧ್ರುವನಾರಾಯಣ್ ಅವರ ಶ್ರದ್ಧಾಂಜಲಿ ಸಭೆ ಮತ್ತು ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಧ್ರುವನಾರಾಯಣ್ ತಮ್ಮ ಬದುಕನ್ನು ವೈಯಕ್ತಿಕ, ವೈಭವ ಜೀವನಕ್ಕೆ ಮುಡಿಪಾಗಿಸಿಕೊಳ್ಳಲಿಲ್ಲ. ನೋವಿದ್ದರೂ ಸಹ ಸಾರ್ವಜನಿಕವಾಗಿ ತೋರ್ಪಡಿಸಿಕೊಳ್ಳಲಿಲ್ಲ. ಜನಸೇವೆಗಾಗಿ ತಮ್ಮ ಬದುಕು ಅರ್ಪಿಸಿಕೊಂಡ ಅಪರೂಪದ ರಾಜಕಾರಣಿ. ಜೀವನದಲ್ಲಿ ಬದ್ಧತೆ, ಬಡವರ ಬಗ್ಗೆ ಸಾಮಾಜಿಕ ಕಳಕಳಿ ಹೊಂದಿದ್ದ ಅಪರೂಪದ ಲೋಕಸಭಾ ಸದಸ್ಯ. ಚಾಮರಾಜ ನಗರ ಜಿಲ್ಲೆ ಅಭಿವೃದ್ಧಿ ಕಂಡಿದ್ದರೆ ಅದು ಧ್ರುವನಾರಾಯಣ್‌ರಿಂದ ಮಾತ್ರ. ಇಂದಿನ ರಾಜಕಾರಣದಲ್ಲಿ ಕೆಲಸ ಮಾಡಿದವರು ಸೋಲುತ್ತಾರೆ. ಮಾಡದವರು ಗೆಲ್ಲುತ್ತಾರೆ. ಅವರ ಸೋಲಿನಿಂದ ಅವರಿಗೆ ನಷ್ಟವಾಗಲಿಲ್ಲ. ಚಾಮರಾಜನಗರ ಜಿಲ್ಲೆಗೆ ನಷ್ಟವಾಗಿದೆ. ಅವರು ನಮ್ಮ ನಡುವೆ ವೈಯಕ್ತಿಕವಾಗಿ ಇಲ್ಲದಿದ್ದರೂ ಸಹ ಅವರ ಧ್ಯೇಯ, ಆದರ್ಶಗಳನ್ನು ಈಡೇರಿಸುವುದೇ ಅವರ ಆತ್ಮಕ್ಕೆ ಸಲ್ಲಿಸುವ ಗೌರವ. ಅವರ ದಾರಿಯಲ್ಲೇ ದರ್ಶನ್ ನಡೆಯುತ್ತಾರೆಂಬ ನಂಬಿಕೆ ಇದೆ. ಧ್ರುವ ಅವರ ಸಾವಿನಿಂದ ಕ್ಷೇತ್ರದ ಜನತೆ ವಿಚಲಿತರಾಗಿ ಅವರ ಮಗನಿಗೆ ಟಿಕೆಟ್ ನೀಡುವಂತೆ ಒತ್ತಾಯಿಸಿದ್ದೀರಿ. ಅವರ ಸೋಲು ಗೆಲುವು ನಿಮ್ಮ ಕೈಯಲ್ಲಿದೆ. ಅದಕ್ಕೆ ಉತ್ತರವಾಗಿ ದರ್ಶನ್ ಅವರನ್ನು ಗೆಲ್ಲಿಸಿ ಅವರನ್ನು ಗೆಲ್ಲಿಸುತ್ತೀರೆಂಬ ನಂಬಿಕೆ ವಿಶ್ವಾಸ ನನ್ನಲ್ಲಿದೆ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಡಿ.ಕೆ.ಶಿವಕುಮಾರ್ ಮಾತನಾಡಿ, ಧ್ರುವನಾರಾಯಣ್ ಕಾಂಗ್ರೆಸ್ ಪಕ್ಷ, ಜನರ ಆಸ್ತಿಯಾಗಿದ್ದರು. ನನ್ನ ನಂತರ ಕೆಪಿಸಿಸಿ ಅಧ್ಯಕ್ಷರಾಗುವ ಅರ್ಹತೆ ಅವರಲ್ಲಿತ್ತು. ಅವರ ಸ್ಥಾನ ತುಂಬುವಂತಹ ಶಕ್ತಿ ನಮಗೆ ಶೋಧನೆ ಮಾಡಿದರೂ ಸಿಗುತ್ತಿಲ್ಲ. ಧ್ರುವನಾರಾಯಣ್ ಅವರ ರಾಜಕೀಯ ಇತಿಹಾಸದ ಪುಸ್ತಕದಲ್ಲಿ ನಾನು ಮುನ್ನುಡಿ ಬರೆದಿರುವ ಆತ್ಮತೃಪ್ತಿಯಿದೆ. ಅವರಿಗೆ ಕ್ಷೇತ್ರದಿಂದ ಆಯ್ಕೆಯಾಗಿ ಜನಸೇವೆ ಮಾಡಬೇಕೆಂಬುದು ಭಾವನಾತ್ಮಕವಾಗಿ ಇಷ್ಟವಿತ್ತು. ನೀವು ಒತ್ತಾಯಿಸಿ ಅವರ ಮಗನಿಗೆ ಟಿಕೆಟ್ ತೆಗೆದುಕೊಂಡು ಬಂದಿದ್ದೀರಿ. ದರ್ಶನ್ ಅವರನ್ನು ಗೆಲ್ಲಿಸುವ ಮೂಲಕ ಅವರ ಸಾವಿನ ನೋವಿಗೆ ಉತ್ತರಕೊಡಿ. ನಾನು ಇಲ್ಲಿಗೆ ಅವರ ಸಾವಿಗೆ ನುಡಿನಮನ ಸಲ್ಲಿಸಲು ಬಂದಿಲ್ಲ. ಮೇ 15ಕ್ಕೆ ನಿಮಗೆ ನಮನ ಸಲ್ಲಿಸಲು ಬರುತ್ತೇನೆ ಎಂದರು.

ಸತೀಶ್ ಜಾರಕಿಹೊಳಿ ಮಾತನಾಡಿ, ಒಬ್ಬ ರಾಜಕಾರಣಿ ಎತ್ತರಕ್ಕೆ ಬೆಳೆದರೂ ಹೇಗೆ ಜನರಿಗೆ ಸೇವೆ ಮಾಡಬೇಕು ಎಂಬುದನ್ನು ಧ್ರುವನಾರಾಯಣ್ ನೋಡಿ ಕಲಿಯಬೇಕು. ಅವರು ರಾಜಕಾರಣವನ್ನು ಸೇವೆ ಎಂದು ಭಾವಿಸಿದ್ದರು. ಅವರ ಸಾವಿಗೆ ನ್ಯಾಯ ಒದಗಿಸಲು ದರ್ಶನ್ ಗೆಲ್ಲಿಸಿ ಎಂದರು.

ಸಂಸದ ಡಿ.ಕೆ.ಸುರೇಶ್ ಮಾತನಾಡಿ, ದರ್ಶನ್ ತಂದೆ ಸಾವು, ತಾಯಿ ಅನಾರೋಗ್ಯದ ಮಧ್ಯೆ, ರಾಜಕೀಯ ಅನಿವಾರ್ಯವಾಗಿರಲಿಲ್ಲ ಜನರ ಒತ್ತಾಯಕ್ಕೆ ಮಣಿದು ಸ್ಪರ್ಧಿಸಲು ಒಪ್ಪಿದ್ದಾರೆ. ಅವರು ನಿಮ್ಮ ಮಡಿಲಿಗೆ ಬಂದಿದ್ದಾರೆ. ತಂದೆ ತಾಯಿ ಸ್ಥಾನದಲ್ಲಿ ನಿಂತು ನಿಮ್ಮ ಮಗನನ್ನು ಬೆಂಬಲಿಸಿ ಧ್ರುವನಾರಾಯಣ್ ಆತ್ಮಕ್ಕೆ ಶಾಂತಿ ನೀಡಿ ಎಂದರು.

ಮಾಜಿ ಸಚಿವರಾದ ಪುಟ್ಟರಂಗಶೆಟ್ಟಿ, ಯು.ಟಿಖಾದರ್ ಕೆಪಿಸಿಸಿ ಕಾರ್ಯಾಧ್ಯಕ್ಷ ಸಲಿಂ ಅಹಮದ್ ಮಾತನಾಡಿದರು. ಮಾತನಾಡಿ ದರು. ಸಮಾರಂಭದಲ್ಲಿ ಮಾಜಿ ಸಚಿವರಾದ ಚೆಲುವರಾಯಸ್ವಾಮಿ, ನರೇಂದ್ರ, ಶಾಸಕ ರಾದ ಯತೀಂದ್ರ ಅನಿಲ್ ಚಿಕ್ಕಮಾದು, ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ, ಜಯಣ್ಣ, ಬಾಲರಾಜು, ನಂಜುಂಡಸ್ವಾಮಿ, ಸೋಮ ಶೇಖರ್, ಎ.ಆರ್.ಕೃಷ್ಣಮೂರ್ತಿ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ ರೋಜಿಜಾನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಸಿ.ಎಂ.ಶಂಕರ್, ವಿಧಾನಸಭಾ ಉಸ್ತುವಾರಿಗಳಾದ ಶ್ರೀಕಂಠು, ಸೋಮೇಶ್, ಮುಖಂಡರಾದ ಗಣೇಶ್‌ಪ್ರಸಾದ್, ಎಸ್.ಸಿ.ಬಸವರಾಜು, ಕೆ.ಮಾರುತಿ, ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಿ.ಜೆ.ವಿಜಯಕುಮಾರ್ ಸೇರಿದಂತೆ ಇತರರಿದ್ದರು.

> ನನ್ನ ತಂದೆ ದೈಹಿಕವಾಗಿ ಬಿಟ್ಟು ಹೋಗಿದ್ದರೂ ಅವರು ಇಲ್ಲ ಎಂದುಕೊಂಡಿಲ್ಲ. ಇದ್ದಾರೆ ಎಂದುಕೊಂಡು ದಿನ ಆರಂಭಿಸುತ್ತೇನೆ. ಅವರಿಗೆ ಈ ಕ್ಷೇತ್ರದಿಂದ ಚುನಾವಣೆಗೆ ನಿಲ್ಲ ಬೇಕು, ಗೆಲ್ಲಬೇಕೆಂಬ ಆಸೆಯಿತ್ತು. ನನ್ನ ತಂದೆ ಅಭಿಮಾನಿಗಳಿಗೆ ಚಿರಋಣಿಯಾಗಿರುತ್ತೇನೆ. ನನಗೆ ಯಾವತ್ತೂ ಸಹ ರಾಜಕೀಯ ಪಾಠ ಅವರು ಹೇಳಿಕೊಟ್ಟಿಲ್ಲ. ಅವರು ಜನಸೇವೆ ಮಾಡುತ್ತಿದ್ದ ರೀತಿ ನೋಡಿ ನಾನು ಸಹ ಸೇವೆ ಮಾಡಬೇಕೆಂದು ಬಯಸಿದ್ದೇನೆ. ಪಕ್ಷದ ವರಿಷ್ಠರು ನನ್ನ ತಂದೆಗೆ ಮಾರ್ಗದರ್ಶನ ಮಾಡಿದಂತೆ ನನಗೂ ಮಾರ್ಗದರ್ಶನ ನೀಡಬೇಕು. ನಾನು ನನ್ನ ತಂದೆಯನ್ನು ಪ್ರತಿಯೊಬ್ಬರಲ್ಲೂ ಕಾಣುತ್ತೇನೆ. ನನಗೆ ಜನಸೇವೆ ಮಾಡಲು ಆಶೀರ್ವಾದ ನೀಡಿ ಅವಕಾಶ ಕಲ್ಪಿಸಿಕೊಡಿ.
>
> 
>
> - ದರ್ಶನ್ ಧ್ರುವನಾರಾಯಣ್
> ನಂಜನಗೂಡು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ

ಸಹಕಾರ ಸಂಘದ ಸಾಲವನ್ನು ಮಕ್ಕಳ ವಿದ್ಯಾಭ್ಯಾಸಕ್ಕೆ ಬಳಸಿ

ಮಹಿಳೆಯರಿಗೆ ಲಲಿತಾ ಜಿ.ಟಿ.ದೇವೇಗೌಡ ಸಲಹೆ



ಹಿರೀಕ್ಯಾತನಹಳ್ಳಿ, ಮಾ.28– ಸಹಕಾರ ಸಂಘಗಳಲ್ಲಿ ಪಡೆದ ಸಾಲವನ್ನು ಮಹಿಳೆಯರು ಮಕ್ಕಳ ವಿದ್ಯಾಭ್ಯಾಸಕ್ಕೆ ಬಳಸುವ ಮೂಲಕ ಮಕ್ಕಳ ಭವಿಷ್ಯ ರೂಪಿಸಬೇಕೆಂದು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷೆ ಲಲಿತಾ ಜಿ.ಟಿ.ದೇವೇಗೌಡ ತಿಳಿಸಿದರು.

ಹುಣಸೂರು ತಾಲೂಕಿನ ಹಿರೀಕ್ಯಾತನಹಳ್ಳಿ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಿಂದ ಸ್ವಸಹಾಯ ಸಂಘಗಳಿಗೆ ಸಾಲದ ಮಂಜೂರಾತಿ ಪತ್ರ ವಿತರಿಸಿ ಮಾತನಾಡಿದ ಅವರು, ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಿಂದ ಸ್ವಸಹಾಯ ಸಂಘಗಳಿಗೆ 1 ಕೋಟಿ 51 ಲಕ್ಷ ಸಾಲ, ರೈತರಿಗೆ ಶೂನ್ಯ ಬಡ್ಡಿಯಲ್ಲಿ 3 ಕೋಟಿ ಬೆಳೆ ಸಾಲ ಹಾಗೂ ತಂಬಾಕು ಹದಗೊಳಿಸಲು ಸೌದೆ ಸಾಲವಾಗಿ 35 ಲಕ್ಷವನ್ನು ನೀಡಲಾಗಿದೆ. ಮಹಿಳೆಯರು ಮೈಕ್ರೋ ಫೈನಾನ್ಸ್‌ಗಳಲ್ಲಿ ಸಾಲ ಪಡೆದು ದುಪ್ಪಟ್ಟು ಬಡ್ಡಿ ಕಟ್ಟುತ್ತಿರುವುದನ್ನು ಮನಗಂಡ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡರು ಮಹಿಳೆಯರಿಗೆ ಸಾಲ ನೀಡುವ ಆಲೋಚನೆ ಮಾಡಿ ಸಾಲ ಮಂಜೂರಾತಿ ಮಾಡಿದ್ದಾರೆ. ಇದನ್ನು ಮಹಿಳೆಯರು ಸರಿಯಾದ ರೀತಿ ಸದ್ಬಳಕೆ ಮಾಡಿಕೊಂಡು ಸಮಾಜದಲ್ಲಿ ಆರ್ಥಿಕವಾಗಿ ಮುಂದೆ ಬಂದು ಜೀವನ ನಡೆಸುವ ಜೊತೆಗೆ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸುವ ಸಂಕಲ್ಪ ಮಾಡಬೇಕು ಎಂದರು.

ಇದಕ್ಕೂ ಮೊದಲು ಮಹಿಳೆಯರು ಕಳಸ ಹೊತ್ತು ಮೆರವಣಿಗೆ ಮೂಲಕ ಲಲಿತಾ ಜಿ.ಟಿ.ದೇವೇಗೌಡರನ್ನು ವೇದಿಕೆಗೆ ಕರೆತಂದರು. ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಸದಸ್ಯ ಸಿ.ಟಿ.ರಾಜಣ್ಣ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮಂಜುನಾಥ್, ಉಪಾಧ್ಯಕ್ಷೆ ಚಿಕ್ಕಸುಂದ್ರಮ್ಮ, ನಿರ್ದೇಶಕರಾದ ನಾಗೇಶ್, ಮಾಯಪ್ಪ ಮಹದೇವ, ಅಶೋಕ, ವಸಂತಮ್ಮ, ಜ್ಯೋತಿ, ಬಸಮ್ಮ, ಗೌರಮ್ಮ, ಕೃಷ್ಣೇಗೌಡ, ಗ್ರಾಪಂ ಸದಸ್ಯ ಶ್ರೀಧರ್, ಕೃಷಿ ಪತ್ತಿನ ಸಹಕಾರ ಸಂಘದ ಕಾನೂನು ಸಲಹೆಗಾರರ ಹರೀಶ್ ಕುಮಾರ್, ಸಂಘದ ಹಿರಿಯ ಮೇಲ್ವಿಚಾರಕ ಶ್ರೀನಿವಾಸ್ ಸಹಾಯಕ ಸುನಿಲ್, ಮುಖಂಡರಾದ ರಮೇಶ್ ಹಾಗೂ ಹಲವರಿದ್ದರು.



ಸರಗೂರು ತಾಲೂಕಿನ ಹುಚೀಪುರದಲ್ಲಿ ಶ್ರೀಮಹದೇಶ್ವರಸ್ವಾಮಿ ಕೊಂಡೋತ್ಸವ ವಿಜೃಂಭಣೆಯಿಂದ ನಡೆಯಿತು. ಹುಚೀಪುರ ಮಠದ ಚನ್ನಬಸವಸ್ವಾಮಿ, ತೋಂಟದಾರ್ಯ ಸ್ವಾಮೀಜಿ ದೇವರಿಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಕೊಂಡೋತ್ಸವಕ್ಕೆ ಚಾಲನೆ ನೀಡಿದರು.

ಯುವಜನತೆ ಹೈನುಗಾರಿಕೆಗೆ ಹೆಚ್ಚಿನ ಒತ್ತು ನೀಡಿ

ಮೇಗಳಕೊಪ್ಪಲಲ್ಲಿ ಡೈರಿ ಮೇಲಂತಸ್ತಿನ ಕಟ್ಟಡ ಉದ್ಘಾಟಿಸಿದ ಶಾಸಕ ಎಂ.ಅಶ್ವಿನ್ ಕುಮಾರ್



ತಿ.ನರಸೀಪುರ, ಮಾ.28– ಗ್ರಾಮೀಣ ಭಾಗದಲ್ಲಿ ಹೈನುಗಾರಿಕೆ ಆದಾಯದ ಮೂಲವಾಗಿದ್ದು, ಯುವಜನತೆ ಹೈನುಗಾರಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಶಾಸಕ ಎಂ.ಅಶ್ವಿನ್ ಕುಮಾರ್ ತಿಳಿಸಿದರು.

ತಾಲೂಕಿನ ಮೇಗಳಕೊಪ್ಪಲು ಗ್ರಾಮದಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಹಾಲು ಉತ್ಪಾದಕರ ಸಹಕಾರ ಸಂಘದ ಮೇಲಂತಸ್ತಿನ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ಹೈನುಗಾರಿಕೆ ಪ್ರಸ್ತುತ ಲಾಭದಾಯಕ ಉದ್ಯಮವಾಗಿ ಬೆಳೆಯುತ್ತಿದ್ದು, ಯುವಜನತೆ ತಮ್ಮ ಆದಾಯ ಮೂಲವನ್ನು ಉತ್ತಮ ಪಡಿಸಿಕೊಳ್ಳಲು ಹೆಚ್ಚಾಗಿ ಹೈನುಗಾರಿಕೆಯಲ್ಲಿ ತೊಡಗಿಕೊಳ್ಳಬೇಕು ಎಂದರು.

ಮೈಮುಲ್ ನಿರ್ದೇಶಕ ಆರ್.ಚೆಲುವರಾಜು ಮಾತನಾಡಿ, ಗ್ರಾಮಸ್ಥರು ಮೇಲಂತಸ್ತಿನ ಸಭಾಂಗಣದ ಕಟ್ಟಡ ನಿರ್ಮಿಸಲು ಅನುದಾನ ಕೋರಿದ್ದರು. ಹಾಗಾಗಿ ನಾನು ಮೈಮುಲ್‌ನಿಂದ 5 ಲಕ್ಷ ಅನುದಾನ ನೀಡಿದ್ದೇನೆ. ಸಹಕಾರ ಸಂಘದವರು ಉತ್ತಮ ಸಭಾಂಗಣ ನಿರ್ಮಿಸಿದ್ದಾರೆ. ತಾಪಂ ಸದಸ್ಯನಾಗಿದ್ದ ವೇಳೆಯಿಂದಲೂ ಗ್ರಾಮಸ್ಥರು ಪಕ್ಷಾತೀತವಾಗಿ ಸಹಕಾರ ನೀಡುತ್ತಾ ಬಂದಿದ್ದೀರಿ. ನಿಮ್ಮ ಸಹಕಾರ ನನ್ನನ್ನು ಮೈಮುಲ್ ನಿರ್ದೇಶಕ ಸ್ಥಾನಕ್ಕೆ ಕೊಂಡೊಯ್ದಿದೆ. ಗ್ರಾಮಸ್ಥರು ನೀಡಿದ ಸಹಕಾರಕ್ಕೆ ಕೃತಜ್ಞನಾಗಿದ್ದೇನೆ ಎಂದರು.

ಮೈಮುಲ್ ಮಾಜಿ ಅಧ್ಯಕ್ಷ ಓಂಪ್ರಕಾಶ್ ಮಾತನಾಡಿ, ಸಮುದಾಯ ಭವನಗಳಿಗೆ ನೀಡುವ ಅನುದಾನವನ್ನು ದಿನನಿತ್ಯದ ಚಟುವಟಿಕೆ ಕೇಂದ್ರಗಳಾಗಿರುವ ಹಾಲು ಸಹಕಾರ ಸಂಘಕ್ಕೆ ನೀಡುವಂತೆ ಶಾಸಕರಲ್ಲಿ ಮನವಿ ಮಾಡಿದ್ದೆ. ಇದೇ ಮೊದಲ ಬಾರಿಗೆ ಶಾಸಕರು 5 ಲಕ್ಷ ರೂ. ಅನುದಾನ ನೀಡಿ ಸಹಕಾರ ನೀಡಿದ್ದಾರೆ ಎಂದರು.

ಇದೇ ವೇಳೆ 2021–22ನೇ ಸಾಲಿನಲ್ಲಿ ಹೆಚ್ಚು ಹಾಲು ಉತ್ಪಾದಿಸಿದ ಉತ್ಪಾದಕರಿಗೆ ಬಹುಮಾನ ವಿತರಿಸಲಾಯಿತು. ಜಿಲ್ಲಾ ವ್ಯವಸ್ಥಾಪಕ ದಿವಾಕರ್, ಡೈರಿ ಅಧ್ಯಕ್ಷ ಪುರುಷೋತ್ತಮ, ಉಪಾಧ್ಯಕ್ಷೆ ಜ್ಯೋತಿ, ಮಾರ್ಗ ವಿಸ್ತರಣಾಧಿಕಾರಿ ಪ್ರಮೋದ್, ತಾಪಂ ಮಾಜಿ ಅಧ್ಯಕ್ಷ ಕುಮಾರ್, ಗ್ರಾಪಂ ಸದಸ್ಯ ಸಿದ್ದೇಗೌಡ, ಸಂಘದ ನಿರ್ದೇಶಕರಾದ ಯತಿರಾಜ್, ಜಯರಾಮೇಗೌಡ, ಸಿದ್ದೇಗೌಡ, ಮಂಜುನಾಥಸ್ವಾಮಿ, ಚಿಕ್ಕರಾಚೇಗೌಡ, ಸಿದ್ದೇಗೌಡ, ಕೃಷ್ಣೇಗೌಡ, ರಾಜೇಶ್ವರಿ, ಪುಷ್ಪ, ಯಜಮಾನರಾದ ರಂಗಸ್ವಾಮಿ, ಬಸವಣ್ಣ, ನಾಗೇಗೌಡ, ರಾಮಕೃಷ್ಣೇಗೌಡ, ಮುಖಂಡರಾದ ದಿನೇಶ್, ಮಹದೇವಸ್ವಾಮಿ, ಸಂಘದ ಕಾರ್ಯದರ್ಶಿ ಕೆ.ಮಧು ಇತರರಿದ್ದರು.

ಕೂಡ್ಲೂರು ಹೊಸೂರಲ್ಲಿ ಜೆಡಿಎಸ್ ಕಾರ್ಯಕರ್ತರ ಸಭೆ



ಹುಣಸೂರು, ಮಾ.28– ಹುಣಸೂರು ವಿಧಾನಸಭಾ ಕ್ಷೇತ್ರದ ಹೆಗ್ಗಂದೂರು ಹಾಗೂ ತಟ್ಟೆಕೆರೆ ಗ್ರಾಪಂ ವ್ಯಾಪ್ತಿಯ ಬೂತ್ ಮಟ್ಟದ ಜೆಡಿಎಸ್ ಕಾರ್ಯಕರ್ತರ ಸಭೆ ಕೂಡ್ಲೂರು ಹೊಸೂರಲ್ಲಿ ನಡೆಯಿತು.

ಜೆಡಿಎಸ್ ಅಭ್ಯರ್ಥಿ ಜಿ.ಡಿ.ಹರೀಶ್ ಗೌಡ ಮಾತನಾಡಿ, ಮುಂಬರುವ ಚುನಾವಣೆಯಲ್ಲಿ ಸ್ಪಷ್ಟ ಬಹುಮತದೊಂದಿಗೆ ರಾಜ್ಯದಲ್ಲಿ ಜೆಡಿಎಸ್ ಅಧಿಕಾರಕ್ಕೆ ಬಂದು ಹೆಚ್.ಡಿ.ಕುಮಾರಸ್ವಾಮಿ ಮತ್ತೊಮ್ಮೆ ಮುಖ್ಯಮಂತ್ರಿಯಾಗಲಿದ್ದಾರೆ. ಈ ಬಾರಿ ಜೆಡಿಎಸ್ ಅಧಿಕಾರಕ್ಕೆ ಬಂದರೆ ಗ್ರಾಪಂಗೊಂದು ಹೈಟೆಕ್ ಆಸ್ಪತ್ರೆ, ರೈತರ, ಮಹಿಳೆಯರ ಸಾಲ ಮನ್ನಾ, ವೃದ್ಧಾಪ್ಯ ವೇತನ ಹೆಚ್ಚಳ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೊಳಿಸಲಿದ್ದಾರೆ. ಅಲ್ಲದೆ, ಯುವಕರಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದ ಅವರು ತಾಲೂಕಿನ ಹಿಂದುಳಿದ ಬಡವರ ಕೆಲಸ ಮಾಡಲು ಸಿದ್ಧ ಎಂದರು.

ನನ್ನ ತಂದೆ ಜಿ.ಟಿ.ದೇವೇಗೌಡರು ಶಾಸಕರಾಗಿ, ಸಚಿವರಾಗಿ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅವರ ಅಭಿವೃದ್ಧಿ ಕಾರ್ಯಗಳೇ ನನಗೆ ಮುಂಬರುವ ಚುನಾವಣೆಗೆ ಶ್ರೀರಕ್ಷೆಯಾಗಲಿದೆ ಎಂದರು.

ತಾಲೂಕು ಅಧ್ಯಕ್ಷ ದೇವರಾಜ ಒಡೆಯರ್ ಮಾತನಾಡಿದರು. ಈ ವೇಳೆ ಜಿಪಂ ಮಾಜಿ ಸದಸ್ಯ ಸಿ.ಟಿ.ರಾಜಣ್ಣ ಜೆಡಿಎಸ್ ಮುಖಂಡರಾದ ರಂಜಿತಾ ಚಿಕ್ಕಮಾದು, ಎಂ.ಪಿ.ಸ್ವಾಮಿ, ಮಂಜುಳಾ, ಟಿ.ಆರ್.ಶ್ರೀನಿವಾಸ್, ಮಂಜುಳ, ಶ್ರೀನಿವಾಸಗೌಡ, ಗ್ರಾಪಂ ಸದಸ್ಯರಾದ ಮೈಕಲ್ ರಕ್ಷಿತ್ ಜಾನ್ಸನ್, ದಲಿತ ಮುಖಂಡರಾದ ಸೋಮಯ್ಯ, ನಟರಾಜ್, ಭಾಸ್ಕರ್, ರಾಮಕೃಷ್ಣ, ಶಿವಕುಮಾರ್, ಜಯಮ್ಮ, ಜಾರ್ಜ್ ಸೇರಿದಂತೆ ಇನ್ನಿತರರಿದ್ದರು.

ಬಿಜೆಪಿ ಸರ್ಕಾರದಿಂದ ಮೀಸಲಾತಿ ಹೆಚ್ಚಳಕ್ಕೆ ಹರ್ಷ



ತಿ.ನರಸೀಪುರ, ಮಾ.28– ಪರಿಶಿಷ್ಟ ಜಾತಿ, ಪಂಗಡ, ಒಕ್ಕಲಿಗ, ಲಿಂಗಾಯತ ಸೇರಿದಂತೆ ಇತರೆ ಸಮುದಾಯಗಳಿಗೆ ಮೀಸಲಾತಿ ಹೆಚ್ಚಿಸಿ ಆದೇಶಿಸಿರುವ ಬಿಜೆಪಿ ಸರ್ಕಾರದ ಕ್ರಮಕ್ಕೆ ಬಿಜೆಪಿ ಕ್ಷೇತ್ರಾಧ್ಯಕ್ಷ ಕೆ.ಸಿ.ಲೋಕೇಶ್ ನಾಯಕ್ ಹರ್ಷ ವ್ಯಕ್ತಪಡಿಸಿದರು.


ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಸರ್ಕಾರ ಸಾಮಾಜಿಕ ನ್ಯಾಯ ಸಂಕಲ್ಪ ಹೊಂದಿದೆ. ಹಾಗಾಗಿ ಪರಿಶಿಷ್ಟ ಜಾತಿ ಮೀಸಲಾತಿಯನ್ನು ಶೇ.15 ರಿಂದ ಶೇ.17, ಪರಿಶಿಷ್ಟ ಪಂಗಡಕ್ಕೆ ಶೇ.4ರಿಂದ ಶೇ.7, ಒಕ್ಕಲಿಗ ಸಮುದಾಯಕ್ಕೆ ಶೇ.4 ರಿಂದ ಶೇ.6 ಮತ್ತು ಲಿಂಗಾಯತ ಸಮುದಾಯಕ್ಕೆ ಶೇ.5 ರಿಂದ ಶೇ.7 ರವರೆಗೆ ಹೆಚ್ಚಳ ಮಾಡಿ 9ನೇ ಶೆಡ್ಯೂಲ್‌ನಲ್ಲಿ ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಅಲ್ಲದೇ ಪರಿಶಿಷ್ಟ ಜಾತಿ ಮೀಸಲಾತಿ ವರ್ಗೀಕರಣಕ್ಕಾಗಿ ಹಲವು ವರ್ಷಗಳಿಂದ ಬೇಡಿಕೆ ಇತ್ತು. ಬಿಜೆಪಿ ಸರ್ಕಾರ ಅದನ್ನು ಕೂಡ ಮಾನ್ಯ ಮಾಡಿ ದಲಿತ ಎಡಗೈ ಸಮುದಾಯಕ್ಕೆ ಶೇ.6 ಬಲಗೈ ಸಮುದಾಯಕ್ಕೆ ಶೇ.5.5, ಬೋವಿ, ಲಂಬಾಣಿ, ಬಂಜಾರ ಸಮಾಜಕ್ಕೆ ಶೇ.4.5 ಮತ್ತು ಅಲೆಮಾರಿ ಜನಾಂಗಕ್ಕೆ ಶೇ.1ರ ಮೀಸಲಾತಿ ವರ್ಗೀಕರಣ ಮಾಡಿ ಕೇಂದ್ರಕ್ಕೆ ಶಿಫಾರಸ್ಸು ಮಾಡಿದೆ. ಕಾಂಗ್ರೆಸ್, ಜೆಡಿಎಸ್ ಪಕ್ಷಗಳು ಮೀಸಲಾತಿ ಹೆಸರಲ್ಲಿ ಮತ ಪಡೆದು ತಳ ಸಮುದಾಯಗಳನ್ನು ವಂಚಿಸಿವೆ. ಈ 2 ಪಕ್ಷಗಳು ಜನಸಂಖ್ಯೆಗನುಗುಣವಾಗಿ ಮೀಸಲಾತಿ ಪರಿಷ್ಕರಣೆಗೆ ಮುಂದಾಗಿರಲಿಲ್ಲ. ಆದರೆ, ಬಿಜೆಪಿ ಪಕ್ಷ ಸಾಮಾಜಿಕ ನ್ಯಾಯದಡಿ ಎಲ್ಲಾ ಸಮುದಾಯಗಳ ಶ್ರೇಯೋಭಿವೃದ್ಧಿಗಾಗಿ ಮೀಸಲಾತಿ ಹೆಚ್ಚಳ ಮಾಡಿ ಆದೇಶ ಹೊರಡಿಸಿರುವುದು ಸಂತಸ ತಂದಿದೆ. ಹಾಗಾಗಿ ಮುಂದಿನ ಚುನಾವಣೆಯಲ್ಲಿ ಪಕ್ಷದ ಗೆಲುವು ನಿಶ್ಚಿತ ಎಂದರು.

ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ಯಶೋಧ ಮಾತನಾಡಿದರು. ಈ ವೇಳೆ ತಾಲೂಕು ಬಿಜೆಪಿ ಉಪಾಧ್ಯಕ್ಷ ಓಂಕಾರಸ್ವಾಮಿ, ಬಿಜೆಪಿ ತಾಲೂಕು ಕಾರ್ಯದರ್ಶಿ ಕೆಂಡನಕೊಪ್ಪಲು ಕುಮಾರ್, ಮಾಜಿ ಗ್ರಾಪಂ ಅಧ್ಯಕ್ಷ ಮರಿಸ್ವಾಮಿ, ಜಿಲ್ಲಾ ಬಿಜೆಪಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಬಿ.ಎಂ.ವಿಜಯಕುಮಾರ್, ಜಿಲ್ಲಾ ಅಸಂಘಟಿತ ಕಾರ್ಮಿಕ ಜಿಲ್ಲಾ ಸಂಚಾಲಕ ಎಂ.ಟಿ.ಬಸವಣ್ಣ, ತುರಗನೂರು ಮಹಾಶಕ್ತಿ ಕೇಂದ್ರದ ಅಧ್ಯಕ್ಷ ಕುಮಾರ್ ಇತರರಿದ್ದರು.

ಕೋಟೆಯಲ್ಲಿ ಮಾಜಿ ಸಂಸದ ಆರ್.ಧ್ರುವನಾರಾಯಣ್‌ಗೆ ನುಡಿನಮನ

ಕಾಂಗ್ರೆಸ್‌ನ ಒಬ್ಬ ನಿಷ್ಠಾವಂತ ಸೇನಾನಿ ಕಳೆದುಕೊಂಡಿದ್ದೇವೆ

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಷಾದ



ಹೆಚ್.ಡಿ.ಕೋಟೆ, ಮಾ.28– ಕಾಂಗ್ರೆಸ್ ಪಕ್ಷದ ಒಬ್ಬ ನಿಷ್ಠಾವಂತ ಸೇನಾನಿಯನ್ನು ನಾವು ಕಳೆದುಕೊಂಡಿದ್ದೇವೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ನುಡಿನಮನ ಹಾಗೂ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮಾಜಿ ಸಂಸದ ದಿವಂಗತ ಆರ್.ಧ್ರುವನಾರಾಯಣ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ದೊಡ್ಡ ಶಕ್ತಿಯಾಗಿದ್ದ ಧ್ರುವನಾರಾಯಣ್ ಅವರು ಯಾವುದೇ ಜಾತಿ, ಪಕ್ಷ ಬೇಧ ಮಾಡದೇ ರಾಜ್ಯಾದ್ಯಂತ ಪಕ್ಷ ಸಂಘಟಿಸಿದರು. ಅಲ್ಲದೇ ಪಕ್ಷದ ಸಿದ್ಧಾಂತದೊಂದಿಗೆ ಪಕ್ಷದ ಏಳಿಗೆಗಾಗಿ ದುಡಿದ ವ್ಯಕ್ತಿ ಎಂದರು.

ಧ್ರುವ ಅವರಿಗೂ ಹೆಚ್.ಡಿ.ಕೋಟೆಗೂ ಅಪಾರ ನಂಟಿತ್ತು. ತಾಲೂಕಿನ ಅಭಿವೃದ್ಧಿ ಬಗ್ಗೆ ದೂರದೃಷ್ಟಿ ಹೊಂದಿದ್ದ ಅವರು ಇಲ್ಲಿನ ಜನತೆ ಬಗ್ಗೆ ಅಪಾರ ಪ್ರೀತಿ, ವಿಶ್ವಾಸ ಹಾಗೂ ಅಭಿಮಾನ ಇಟ್ಟುಕೊಂಡಿದ್ದರು. ಅದರಲ್ಲೂ ಶಾಸಕ ಅನಿಲ್ ಚಿಕ್ಕಮಾದು ಅವರ ಜೊತೆ ಉತ್ತಮ ಒಡನಾಟ ಇಟ್ಟುಕೊಂಡು ತಾಲೂಕಿನಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದರು. ಅಂತಹ ದೊಡ್ಡ ಶಕ್ತಿಯನ್ನು ನಾವು ಇಂದು ಕಳೆದುಕೊಂಡಿದ್ದೇವೆ. ಅವರ ಜಾಗ ತುಂಬಲು ಅವರ ಪುತ್ರ ದರ್ಶನ್ ಅವರಿಗೆ ಎಲ್ಲರೂ ಸಂಪೂರ್ಣ ಸಹಕಾರ ನೀಡುವ ಮೂಲಕ ಅವರಿಗೆ ಬೆನ್ನೆಲುಬಾಗಿ ನಿಲ್ಲೋಣ ಎಂದರು.

ದಿ.ಆರ್.ಧ್ರುವನಾರಾಯಣ್ ಪುತ್ರ ದರ್ಶನ್ ಮಾತನಾಡಿ, ನನ್ನ ತಂದೆ ಧ್ರುವನಾರಾಯಣ್ ಅವರನ್ನು ಕಳೆದುಕೊಂಡು ನನಗೆ ದಿಕ್ಕು ತೋಚದಂತಾಗಿದೆ. ನನ್ನ ತಂದೆ ನನಗೆ ಯಾವುದೇ ರಾಜಕೀಯ ವಿಚಾರಗಳನ್ನು ಹೇಳಿಕೊಟ್ಟಿಲ್ಲ. ಆದರೂ ನಾನು ಪ್ರತಿನಿತ್ಯ ಅವರ ಕಾರ್ಯ ವೈಖರಿ ಗಮನಿಸುತ್ತಿದ್ದೆ. ಈ ವೇಳೆ ಅಭಿವೃದ್ಧಿ ಕಾರ್ಯಗಳ ಬಗ್ಗೆ ಅವರು ತೆಗೆದುಕೊಳ್ಳುತ್ತಿದ್ದ ನಿರ್ಧಾರಗಳನ್ನು ತಿಳಿದುಕೊಳ್ಳುತ್ತಿದ್ದೆ ಎಂದ ಅವರು ನಮ್ಮ ತಂದೆ ನಿಧನರಾದಾಗ ನಮ್ಮ ಕುಟುಂಬಕ್ಕೆ ರಾಜ್ಯದ ಜನತೆ ಬಂದು ಸಾಂತ್ವನ ಹೇಳಿದ್ದಾರೆ. ಅದೇ ರೀತಿ ವಿಪಕ್ಷ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಸತೀಶ್ ಜಾರಕಿಹೊಳಿ ಸೇರಿದಂತೆ ವಿವಿಧ ಪಕ್ಷಗಳ ನಾಯಕರು ನಮ್ಮ ಕುಟುಂಬಕ್ಕೆ ಸಾಂತ್ವನ ಹೇಳಿ ಧೈರ್ಯ ತುಂಬಿದ್ದಾರೆ ಎಂದರು.

ಮುಂಬರುವ ಚುನಾವಣೆಯಲ್ಲಿ ನನಗೆ ಮಾರ್ಗದರ್ಶಕರಾಗಿ ಮಾಜಿ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ಶಾಸಕ ಅನಿಲ್ ಚಿಕ್ಕಮಾದು ಅವರು ರಾಜಕೀಯವಾಗಿ ನನ್ನ ಕೈ ಹಿಡಿದು ಬೆಳೆಸಬೇಕು ಎಂದು ಮನವಿ ಮಾಡಿದರು.

ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ನನಗೆ ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ಕೊಡಿಸುವುದರಿಂದ ಹಿಡಿದು ಶಾಸಕನನ್ನಾಗಿ ಮಾಡುವವರೆಗೆ ನನ್ನ ಬೆನ್ನೆಲುಬಾಗಿ ನಿಂತಿದ್ದ ದೊಡ್ಡ ಶಕ್ತಿ ಎಂದರೆ ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್. ಕೋಟೆ ಕ್ಷೇತ್ರದಲ್ಲಿ ಕಳೆದ 14 ವರ್ಷಗಳ ಕಾಲ ಸೇವೆ ಸಲ್ಲಿಸಿ ಪ್ರತಿ ಹಳ್ಳಿಗಳಿಗೆ ಭೇಟಿ ನೀಡುವ ಮೂಲಕ ಅಲ್ಲಿನ ಸಮಸ್ಯೆಗಳನ್ನು ಬಗೆಹರಿಸುತ್ತಿದ್ದರು. ಅಲ್ಲದೇ ಡಾ.ಬಿ.ಆರ್. ಅಂಬೇಡ್ಕರ್ ಭವನ, ವಾಲ್ಮೀಕಿ ಭವನ, ಬಸವ ಭವನ, ತಂಬಾಕು ಹರಾಜು ಮಾರುಕಟ್ಟೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಏಕಲವ್ಯ, ಆದರ್ಶ, ಮೊರಾರ್ಜಿ ವಸತಿ ಶಾಲೆ, ಪ್ರತಿ ಗ್ರಾಮಗಳಿಗೆ ಕಾಂಕ್ರೀಟ್ ರಸ್ತೆ ಸೇರಿದಂತೆ ತಾಲೂಕಿನಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ ಅವರ ಹೆಸರನ್ನು ಉಳಿಸುವ ಕೆಲಸವನ್ನು ಮಾಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಸಕ ಸತೀಶ್ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಮಾಜಿ ಶಾಸಕ ಅಶೋಕ ಪಟ್ಟಣಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಕೋಟೆ, ಸರಗೂರು ತಾಲೂಕು ಉಸ್ತುವಾರಿ ಕಾವೇರಪ್ಪ ಮಾಜಿ ಸಂಸದ ಕಾಗಲವಾಡಿ ಶಿವಣ್ಣ ಕೆಪಿಸಿಸಿ ವಕ್ತಾರ ಜಿ.ವಿ.ಸೀತಾರಾಮ್, ರಾಜ್ಯ ಮಹಿಳಾ ಅಧ್ಯಕ್ಷೆ ಪುಷ್ಪ ಅಮರನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಏಜಾಜ್ ಪಾಷಾ, ಮಾದಪ್ಪ ಯೂತ್ ಕಾಂಗ್ರೆಸ್ ಅಧ್ಯಕ್ಷ ಹೊಂಡಾ ನಯಾಜ್, ಜಿಪಂ ಮಾಜಿ ಸದಸ್ಯರಾದ ನಂದಿನಿ, ಭಾಗ್ಯಲಕ್ಷ್ಮಿ, ಎಚ್.ಸಿ.ಮಂಜುನಾಥ್, ಸತೀಶ್‌ಗೌಡ, ಎಚ್.ಸಿ.ನರಸಿಂಹಮೂರ್ತಿ, ಮೈಮುಲ್ ನಿರ್ದೇಶಕ ಈರೇಗೌಡ, ಕುರುಬ ಸಮಾಜದ ಮೈಸೂರು ಜಿಲ್ಲಾ ಅಧ್ಯಕ್ಷ ಶಿವಪ್ಪ ಕೋಟೆ, ತಾಲೂಕು ಅಧ್ಯಕ್ಷ ಆನಂದ್, ಮುಖಂಡರಾದ ಪ್ರದೀಪ್, ರವಿ, ಶ್ರೀನಿವಾಸ್, ಕ್ಯಾತನಹಳ್ಳಿ ನಾಗರಾಜ್, ಪರಶಿವಮೂರ್ತಿ, ಮಧು, ಗಣೇಶ್ ಆಚಾರ್, ರಾಜು, ಕಾರ್ಯಕರ್ತರು, ಮುಖಂಡರು ಸಾವಿರಾರು ಅಭಿಮಾನಿಗಳು ಭಾಗವಹಿಸಿದ್ದರು.

ಸಾಲಬಾಧೆ: ರೈತ ಆತ್ಮಹತ್ಯೆ




ಬೆಟ್ಟದಪುರ, ಮಾ.28– ಸಾಲಬಾಧೆ ತಾಳಲಾರದೇ ರೈತರೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಪಿರಿಯಾಪಟ್ಟಣ ತಾಲೂಕಿನ ಕೂರಗಲ್ಲು ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ ಕೃಷ್ಣಮೂರ್ತಿ (43) ಆತ್ಮಹತ್ಯೆ ಮಾಡಿಕೊಂಡವರು. ಮೃತರು ತಮ್ಮ 5 ಎಕರೆ ಜಮೀನಿನಲ್ಲಿ ತಂಬಾಕು, ಜೋಳ, ರಾಗಿ ಬೆಳೆದಿದ್ದರು. ಇದಕ್ಕಾಗಿ ತಮ್ಮ ತಂದೆ, ತಾಯಿ ಹೆಸರಲ್ಲಿ ಸೀಗೂರು ಎಸ್‌ಬಿಐನಲ್ಲಿ 5.5 ಲಕ್ಷ, ವಿವಿಧ ಫೈನಾನ್ಸ್ ನಿಂದ 4 ಲಕ್ಷ ಹಾಗೂ ಖಾಸಗಿಯಾಗಿ 2 ಲಕ್ಷ ರೂ. ಸಾಲ ಪಡೆದಿದ್ದರು. ಅತಿವೃಷ್ಟಿಯಿಂದ ಬೆಳೆ ನಾಶವಾಗಿ ಸಾಲ ತೀರಿಸಲು ಸಾಧ್ಯವಾಗದೇ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮೃತರ ಪತ್ನಿ ಮಂಜುಳಾ ಬೆಟ್ಟದಪುರ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ.

ಡಿ.ನಾಗರಾಜು ನಿಧನ



ತಿ.ನರಸೀಪುರ, ಮಾ.28– ತಾಲೂಕಿನ ಬಿಳಿಗೆರೆಹುಂಡಿ ಗ್ರಾಮದ ದಿ.ದುಂಡೇಗೌಡರ ಪುತ್ರ ಪ್ರಥಮ ದರ್ಜೆ ಗುತ್ತಿಗೆದಾರ, ಕಾಂಗ್ರೆಸ್‌ನ ಹಿರಿಯ ಮುಖಂಡ ಡಿ.ನಾಗರಾಜು(60) ಮಂಗಳವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಆಗಲಿದ್ದು, ಅಂತ್ಯಕ್ರಿಯೆ ಸ್ವಗ್ರಾಮ ಬಿಳಿಗೆರೆಹುಂಡಿಯಲ್ಲಿ ಸಂಜೆ ನೆರವೇರಿತು. ಮೃತರ ನಿಧನಕ್ಕೆ ಪುರಸಭಾ ಸದಸ್ಯ ಬಾದಾಮಿ ಮಂಜು, ಆಲಗೂಡು ಗ್ರಾಪಂ ಮಾಜಿ ಅಧ್ಯಕ್ಷ ರಾಜೇಶ್ವರಿ ಗುರುಸ್ವಾಮಿ ಸಂತಾಪ ಸೂಚಿದ್ದಾರೆ.


ಶ್ರೀ ಚಾಮುಂಡೇಶ್ವರಿ ಕೃಪೆ
ಹೋಟೆಲ್ ಮಹಾರಾಜ ಗ್ರ್ಯಾಂಡ್ ಹಾಗೂ
ದೇವಿಶ್ರೀ ಹೋಟೆಲ್‌ನ ಮಾಲೀಕರಾದ
ಆರ್. ಅಶ್ವಥ್‌ನಾರಾಯಣ್
ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಮೊ: 9036709090